23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 349 | ನವದೆಹಲಿ | ಬೆಲೆ ₹ 10 | ಜೂನ್ 24, 2026, ಬುಧವಾರ

## ಒಳಪುಟಗಳಲ್ಲಿ

ಸುಂಕ ಅನಿಶ್ಚಿತತೆಯ ನಡುವೆ 'ಏಕಪಕ್ಷೀಯ' ಭಾರತ-ಅಮೆರಿಕ ವ್ಯಾಪಾರ ಒಪ್ಪಂದ ತಿರಸ್ಕರಿಸಲು ಕೇಂದ್ರಕ್ಕೆ ಕಾಂಗ್ರೆಸ್ ಒತ್ತಾಯ- ಪು.4

# ಮತ್ತೊಂದು ಅವಾಂತರ ಮಾಡಬೇಡಿ: ಆಣೆ–ಪ್ರಮಾಣಕ್ಕೆ ಹೈಕಮಾಂಡ್ ಗರಂ

**ನವದೆಹಲಿ, ಜೂ.23:** ರಾಜ್ಯ ಬಿಜೆಪಿಯ ಒಳಗಿನ ಅಡ್ಡಮತದಾನದ ರಾಜಕೀಯಕ್ಕೆ ಪವಿತ್ರ ಕ್ಷೇತ್ರ ಧರ್ಮಸ್ಥಳವನ್ನು ಎಳೆದು ತರಲು ಹೊರಟಿದ್ದ ರಾಜ್ಯ ನಾಯಕರ ನಡೆಗೆ ಬಿಜೆಪಿ ಹೈಕಮಾಂಡ್ ಅಸಮಾಧಾನ ವ್ಯಕ್ತಪಡಿಸಿ ರೆಡ್ ಸಿಗ್ನಲ್ ನೀಡಿದೆ. ಅಡ್ಡಮತದಾನ ನಡೆದಿರುವುದಕ್ಕೆ ರಾಜ್ಯ ನಾಯಕರ ನಿರ್ಲಕ್ಷ್ಯವೇ ಕಾರಣ ಎಂದು ಹೈಕಮಾಂಡ್ ನೇರವಾಗಿಯೇ ತರಾಟೆಗೆ ತೆಗೆದುಕೊಂಡಿದೆ ಎಂದು ಮೂಲಗಳು ತಿಳಿಸಿದೆ.

**ಪರಿಷತ್ ಚುನಾವಣೆಯಲ್ಲಿ ನಿರ್ಲಕ್ಷ್ಯ ವಹಿಸಿದೆ ಎಂದು ಅಸಮಾಧಾನ**

ಅಡ್ಡ ಮತದಾನಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರನ್ನು ವಿರೋಧ ಪಕ್ಷದ ನಾಯಕ ಆರ್.ಅಶೋಕ್, ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಚುನಾವಣೆ ಉಸ್ತುವಾರಿ ಹೊತ್ತಿದ್ದ ರವಿಕುಮಾರ್, ನವೀನ್‌ಕುಮಾರ್ ಭೇಟಿಯಾದರು.

ಭೇಟಿ ಸಮಯದಲ್ಲಿ ರಾಜ್ಯ ನಾಯಕರ ಕಾರ್ಯವೈಖರಿಗೆ ನಿತಿನ್ ನಬೀನ್ ಅಸಮಾಧಾನ ವ್ಯಕ್ತಪಡಿಸಿದರು ಎನ್ನಲಾಗಿದೆ. ನಿಮ್ಮ ತಪ್ಪು ಮತ್ತು ವೈಫಲ್ಯದಿಂದಲೇ ರಾಜ್ಯದಲ್ಲಿ ಅಡ್ಡಮತದಾನ ಚಲಾವಣೆ ಆಯಿತು. ನಿಮಗೆ ಶಾಸಕರ ಮೇಲೆ ಯಾವುದೇ ಹಿಡಿತ ಇರಲಿಲ್ಲ, ಅವರ ಮೇಲೆ ಸರಿಯಾದ ನಿಗಾ ಇಡುವಲ್ಲಿಯೂ ನೀವು ಸಂಪೂರ್ಣವಾಗಿ ವಿಫಲರಾಗಿದ್ದೀರಿ. ಕಾಂಗ್ರೆಸ್ ನಾಯಕರು ಆಮಿಷ ಒಡ್ಡಿ ನಿಮ್ಮದೇ ಶಾಸಕರನ್ನು ಸೆಳೆಯಲು ಅವಕಾಶ ಮಾಡಿಕೊಟ್ಟಿದ್ದೇ ನಿಮ್ಮ ಬೇಜವಾಬ್ದಾರಿತನ ಎಂದು ವರಿಷ್ಠರು ರಾಜ್ಯ ನಾಯಕರ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ.

ಪರಿಷತ್ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿಲ್ಲ, ಕಾಂಗ್ರೆಸ್ ಐದನೇ ಅಭ್ಯರ್ಥಿ ಹಾಕಿದ ಬಳಿಕವೂ ನಿರ್ಲಕ್ಷ್ಯ ತೋರಿದ್ದೀರಿ ಮೈತ್ರಿ ಅಭ್ಯರ್ಥಿ ಸೋತರೇನಂತೆ ಎಂಬಂತೆ ವರ್ತಿಸಿದ್ದೀರಿ ರಾಷ್ಟ್ರಮಟ್ಟದಲ್ಲಿ ನಾವು ಎಲ್ಲ ಕಡೆಗೂ ಗೆಲ್ಲುತ್ತಿದ್ದೇವೆ. ಕರ್ನಾಟಕದ ಈ ಸೋಲು ತೀವ್ರ ಮುಜುಗರ ತಂದಿದೆ. ಮೈತ್ರಿಯಲ್ಲೂ ಸಮನ್ವಯತೆ ಕಾಣಿಸುತ್ತಿಲ್ಲ. ಮುಂದೆ ಇಂತಹ ಪ್ರಮಾದವಾಗದಂತೆ ಎಚ್ಚರಿಕೆ ವಹಿಸಿ ಎಂದು ನಿರ್ದೇಶನ ನೀಡಿದ್ದಾರೆ.

ಧರ್ಮಸ್ಥಳಕ್ಕೆ ರಾಜಕೀಯವನ್ನು ಎಳೆದು ತಂದು ಪಕ್ಷಕ್ಕೆ ಮತ್ತಷ್ಟು ಮುಜುಗರ ತರಬೇಡಿ ಎಂದು ಎಚ್ಚರಿಸಿರುವ ಹೈಕಮಾಂಡ್, ಈಗಾಗಲೇ ಆಗಿರುವ ಎಡವಟ್ಟನ್ನು ಮೊದಲು ಸರಿಪಡಿಸುವುದು ಹೇಗೆ ಎಂಬುದರ ಕಡೆ ಗಮನಹರಿಸಿ. ಅದನ್ನು ಬಿಟ್ಟು ಧರ್ಮಸ್ಥಳದಲ್ಲಿ ಆಣೆ–ಪ್ರಮಾಣದ ನಾಟಕವಾಡಿ ಮತ್ತೊಂದು ಹೊಸ ವಿವಾದ ಸೃಷ್ಟಿ ಮಾಡಬೇಡಿ ಎಂದು ರಾಜ್ಯ ನಾಯಕರಿಗೆ ಅತ್ಯಂತ ಕಠಿಣ ಪದಗಳಲ್ಲಿ ಸಂದೇಶ ರವಾನಿಸಿದೆ.

ವರಿಷ್ಠರ ಈ ತೀವ್ರ ಆಕ್ರೋಶ ಹಾಗೂ ಖಡಕ್ ಸೂಚನೆಯ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವ ರಾಜ್ಯ ಬಿಜೆಪಿ ನಾಯಕರು, ಧರ್ಮಸ್ಥಳದಲ್ಲಿ ನಡೆಸಲುದ್ದೇಶಿಸಿದ್ದ ಆಣೆ–ಪ್ರಮಾಣದ ರಾಜಕೀಯ ಮತ್ತು ಶಾಸಕಾಂಗ ಪಕ್ಷದ ಸಭೆಯಿಂದ ಅಧಿಕೃತವಾಗಿ ಹಿಂದೆ ಸರಿದಿದ್ದಾರೆ.

### ಪಕ್ಷದ್ರೋಹ ಮಾಡಿದವರನ್ನು ಕ್ಷಮಿಸುವ ಪ್ರಶ್ನೆಯೇ ಇಲ್ಲ



■ ಸತ್ಯಶೋಧನಾ ಸಮಿತಿ ವರದಿ ಆಧರಿಸಿ ಅಡ್ಡಮತದಾನ ಮಾಡಿದವರ ವಿರುದ್ಧ ಕ್ರಮ

ವಿಧಾನ ಪರಿಷತ್ ಚುನಾವಣೆಯಲ್ಲಿ ಪಕ್ಷದ ವಿಪ್ ಉಲ್ಲಂಘಿಸಿ ಅಡ್ಡ ಮತದಾನ ಮಾಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಹೇಳಿದ್ದಾರೆ. ವಿಧಾನ ಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನ ಮಾಡಿದ ಶಾಸಕರ ಬಗ್ಗೆ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರಿಂದ ಮಾಹಿತಿ ಸಂಗ್ರಹಿಸಿ ಮಾತನಾಡಿದ ಅವರು, ಸತ್ಯಶೋಧನಾ ಸಮಿತಿ ವರದಿ ಆಧರಿಸಿ ಅಡ್ಡ ಮತದಾನ ಮಾಡಿದ ಶಾಸಕರ ವಿರುದ್ಧ ಕ್ರಮ ಕೈಗೊಳ್ಳೋಣ. ಪಕ್ಷದಲ್ಲಿ ಶಿಸ್ತು ಮುಖ್ಯ, ಪಕ್ಷಕ್ಕೆ ದ್ರೋಹ ಮಾಡಿದವರನ್ನು ಕ್ಷಮಿಸುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು ಎನ್ನಲಾಗಿದೆ. ಸಭೆಗೆ ತೆರಳಿದ್ದ ರಾಜ್ಯ ಬಿಜೆಪಿ ನಾಯಕರನ್ನು ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಎರಡು ಗಂಟೆಗಳ ಕಾಯಿಸಿದ್ದಾರೆ. ಮಧ್ಯಾಹ್ನ 12 ಗಂಟೆಗೆ ಭೇಟಿಗೆ ಸಮಯ ನೀಡಲಾಗಿತ್ತು ಆದರೆ ಮಧ್ಯಾಹ್ನ 2 ಗಂಟೆಗೆ ಭೇಟಿ ಮಾಡಲಾಯಿತು ಅರ್ಧ ಗಂಟೆಗೆ ಮಾತ್ರ ಸಭೆ ಸೀಮಿತವಾಗಿತ್ತು.



ರಾಷ್ಟ್ರೀಯ ಅಧ್ಯಕ್ಷರ ಜೊತೆಗೆ ಕೂಲಂಕಷವಾಗಿ ಮಾತನಾಡಿದ್ದೇವೆ ಅವರು ಮಾಹಿತಿ ಪಡೆದಿದ್ದಾರೆ ಅವರ ಹತ್ತರ ಅಂಕಿಅಂಶಗಳು ಕೂಡಾ ಇದೆ ಅಡ್ಡ ಮತದಾನ ಮಾಡಿದವರ ವಿರುದ್ಧ ಕ್ರಮ ತೆಗೆದುಕೊಳ್ಳುವ ಭರವಸೆ ನೀಡಿದ್ದಾರೆ ಮುಂದಿನ ಚುನಾವಣೆಗೆ ಒಗ್ಗಟ್ಟಾಗಿ ಕೆಲಸ ಮಾಡಲು ಸೂಚನೆ ನೀಡಿದ್ದಾರೆ. ಧರ್ಮಸ್ಥಳದಲ್ಲಿ ಶಾಸಕಾಂಗ ಪಕ್ಷದ ಸಭೆ ನಡೆಸುವ ನಿರ್ಧಾರ ಕೈಬಿಟ್ಟಿದೆ.

–ಆರ್.ಅಶೋಕ್, ವಿಧಾನಸಭೆ ವಿರೋಧ ಪಕ್ಷದ ನಾಯಕ



ರಾಜ್ಯದ ಎಲ್ಲ ವಿದ್ಯಮಾನಗಳನ್ನು ರಾಷ್ಟ್ರೀಯ ಅಧ್ಯಕ್ಷರ ಗಮನಕ್ಕೆ ತಂದಿದ್ದೇವೆ, ದ್ರೋಹ ಮಾಡಿದ ನಾಯಕರಿಗೆ ಕಠಿಣ ನಿರ್ಣಯ ತೆಗೆದುಕೊಳ್ಳುತ್ತೇವೆ ಹೆಚ್ಚಿನ ಮಾಹಿತಿ ಇದ್ದರೆ ತಿಳಿಸಲು ಹೇಳಿದ್ದಾರೆ ಕೇಂದ್ರಕ್ಕೆ ತನ್ನದೇ ಮೂಲದಿಂದ ಮಾಹಿತಿ ಸಿಗಲಿದೆ ಅದನ್ನು ಆಧರಿಸಿ ಕ್ರಮ ತೆಗೆದುಕೊಳ್ಳಲಿದ್ದಾರೆ.

– ಬಿ.ವೈ ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

### ಶಾಸಕರಿಗೆ ನೋಟಿಸ್, ಅಮಾನತು ಸಾಧ್ಯತೆ?

ವಿಧಾನ ಪರಿಷತ್ ಚುನಾವಣೆಯಲ್ಲಿ ಅಡ್ಡಮತದಾನ ಮಾಡಿರುವ ಶಾಸಕರಿಗೆ ನೋಟಿಸ್ ಜಾರಿ ಮಾಡಿ ವಿವರಣೆ ಕೇಳಿ ಅವರನ್ನು ಅಮಾನತು ಮಾಡುವ ಸಾಧ್ಯತೆ ಇದೆ. ಸತ್ಯಶೋಧನಾ ಸಮಿತಿ ವರದಿ ಆಧರಿಸಿ ಕ್ರಮ ಕೈಗೊಳ್ಳಲು ನಿರ್ಧರಿಸಿದ್ದಾರೆ ಎನ್ನಲಾಗಿದೆ.

## ಎಚ್.ಆಂಜನೇಯ ನವದೆಹಲಿಯಲ್ಲಿ ಸಿಎಂ ವಿಶೇಷ ಕರ್ತವ್ಯಾಧಿಕಾರಿ

**ನವದೆಹಲಿ,ಜೂ.23:** ಉಪಸಮನ್ವಯಾಧಿಕಾರಿ ಹಾಗೂ ಲೆಕ್ಕಾಧಿಕಾರಿ ಎಚ್. ಆಂಜನೇಯ ಅವರನ್ನು ನವದೆಹಲಿಯಲ್ಲಿ ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿಯಾಗಿ ರಾಜ್ಯ ಸರ್ಕಾರ ಮಂಗಳವಾರ ನೇಮಕ ಮಾಡಿದೆ. ಈ ನೇಮಕ ತಕ್ಷಣದಿಂದಲೇ ಜಾರಿಗೆ ಬಂದಿದೆ.



## ಆರ್‌ಎಸ್‌ಎಸ್ ನೋಂದಣಿ ಮಾಹಿತಿ ಖರ್ಗೆ ಪಟ್ಟು

**ಬೆಂಗಳೂರು, ಜೂ.23:** ಆರ್‌ಎಸ್‌ಎಸ್ ನೋಂದಣಿ ಬಗ್ಗೆ ಮಾಹಿತಿ ನೀಡುವಂತೆ ಪಟ್ಟು ಹಿಡಿದಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಸಂಬಂಧಿಸಿದ ದಾಖಲೆಗಳನ್ನು ಸಲ್ಲಿಸದಿದ್ದರೆ ಸಂಘದ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಮಂಗಳವಾರ ಸುಳಿವು ನೀಡಿದ್ದಾರೆ. ನನ್ನ ಪತ್ರಕ್ಕೆ ಆರ್‌ಎಸ್‌ಎಸ್‌ನಿಂದ ಯಾವುದೇ ತೃಪ್ತಿದಾಯಕ ಉತ್ತರ ಸಿಗದಿದ್ದರೆ ಕಾನೂನು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಂಗಳ ವಾರ ಮಾತನಾಡಿದ ಅವರು, ಶತಮಾನಗಳಷ್ಟು ಹಳೆಯದಾದ ಆರ್‌ಎಸ್‌ಎಸ್ ವಿರುದ್ಧ ತಮ್ಮ ವಾಗ್ದಾಳಿಯನ್ನು ಮುಂದುವರಿಸಿರುವ ಪ್ರಿಯಾಂಕ್ ಖರ್ಗೆ, ಆರ್‌ಎಸ್‌ಎಸ್ ನೋಂದಣಿ ಬಗ್ಗೆ ಪತ್ರ ಬರೆದು ಸ್ಪಷ್ಟನೆ ಕೇಳಿದ್ದೇನೆ. ಇದೇ ಅಂತಿಮ ಅಲ್ಲ. ನಾನು ಅವರ ಬಳಿ ವಿವರಗಳನ್ನು ಕೇಳಿ ಕೇವಲ ಒಂದು ವಾರವಾಗಿದೆ. ಅವರು 100 ವರ್ಷಗಳ ಇತಿಹಾಸ ಹೊಂದಿರುವ ದೇಶಭಕ್ತರು. ಅವರು ಎಲ್ಲೋ ದಾಖಲೆಗಳನ್ನು ಇಟ್ಟಿರಬೇಕು. ಅದು ನಾಗಪುರದಲ್ಲಿ, ಬೆಂಗಳೂರಿನ ಕೇಶವಶಿಲ್ಪದಲ್ಲಿ ಅಥವಾ ಸರಸಂಘಚಾಲಕ್ ಅವರ ನಿವಾಸದಲ್ಲಿ" ಇರಬಹುದು. ಅದನ್ನು ಹುಡುಕಲು ಅವರಿಗೆ ಸಮಯ ಬೇಕು. ಹಾಗಾಗಿ ಅವರು ಉತ್ತರ ಕೊಡಲಿ. ತಾಳ್ಮೆಯಿಂದ ಕಾಯೋಣ ಎಂದಿದ್ದಾರೆ. ಆರ್‌ಎಸ್‌ಎಸ್‌ನವರು ದಾಖಲೆ ಕೊಡದೆ ಕಾನೂನು ಮೀರುವಂತಿಲ್ಲ. ದಾಖಲೆಗಳನ್ನು ನೀಡದಿದ್ದರೆ ಕಾನೂನಿನ ಪ್ರಕಾರ ಎಲ್ಲವೂ ನಡೆಯಲಿದೆ ಎಂದಿದ್ದಾರೆ



## ಜೂ.30ರಿಂದ ಜುಲೈ 29ರವರೆಗೆ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ

**ಬೆಂಗಳೂರು, ಜೂ.23:** ರಾಜ್ಯದಲ್ಲಿ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ ಇದೇ ತಿಂಗಳ 30ರಿಂದ ಜುಲೈ 29ರವರೆಗೆ ನಡೆಯಲಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತದಾರ ಪಟ್ಟಿಯ ತೀವ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಜೂನ್ 30ರಿಂದ ಮತಗಟ್ಟೆ ಅಧಿಕಾರಿಗಳು ಮತದಾರ ಮನೆಗಳ ಬಳಿಗೆ ಆಗಮಿಸಲಿದ್ದು, ಅವರು ನೀಡುವ ಅರ್ಜಿಯನ್ನು ಪಡೆದು, ಅದನ್ನು ಭರ್ತಿ ಮಾಡಿ, ಭಾವಚಿತ್ರದೊಂದಿಗೆ ಸಹಿ ಹಾಕಿ ಹಿಂತಿರುಗಿಸುವಂತೆ ಮತದಾರರಲ್ಲಿ ಮನವಿ ಮಾಡಿದರು.


# ಹಾರ್ಮುಜ್ ದಾಟಿದ 11 ಭಾರತೀಯ ಹಡಗುಗಳು



**ನವದೆಹಲಿ, ಜೂ.23:** ಕಳೆದ ವಾರ ಅಮೆರಿಕ ಮತ್ತು ಇರಾನ್ ನಡುವಿನ ಯುದ್ಧವನ್ನು ನಿಲ್ಲಿಸಲು ಮಾಡಿಕೊಂಡ ಒಪ್ಪಂದದ ನಂತರ ಭಾರತ ಧ್ವಜ ಹೊತ್ತ 10 ಹಡಗುಗಳು ಇನ್ನೂ ಪರ್ಷಿಯನ್ ಕೊಲ್ಲಿ ಪ್ರದೇಶದಲ್ಲಿವೆ, ಆದರೆ ಭಾರತಕ್ಕೆ ಹೋಗುವ 11 ಹಡಗುಗಳು ಹಾರ್ಮುಜ್ ಜಲಸಂಧಿಯನ್ನು ದಾಟಿವೆ ಎಂದು ವಿದೇಶಾಂಗ ಸಚಿವಾಲಯ ಇಂದು ತಿಳಿಸಿದೆ. ಇಲ್ಲಿ ಮಾಧ್ಯಮಗೋಷ್ಠಿ ಯನ್ನುದ್ದೇಶಿಸಿ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, "ಇಂದಿನವರೆಗೆ, ನಮ್ಮಲ್ಲಿ 10 ಭಾರತೀಯ ಧ್ವಜ ಹೊತ್ತ ಹಡಗುಗಳು ಇನ್ನೂ ಪರ್ಷಿಯನ್ ಕೊಲ್ಲಿ ಪ್ರದೇಶದಲ್ಲಿವೆ. ಈ 10 ಹಡಗುಗಳ ಜೊತೆಗೆ, ನಮ್ಮಲ್ಲಿ ಎರಡು ಭಾರತೀಯ ಹಡಗುಗಳು ಈ ಕಡೆಯಿಂದ ಪರ್ಷಿಯನ್ ಕೊಲ್ಲಿಗೆ ದಾಟಿವೆ, ಅಂದರೆ ಸಂಚಾರ ಹಿಂದಕ್ಕೆ ಮತ್ತು ಮುಂದಕ್ಕೆ ಹೋಗುತ್ತಿದೆ."

ಅಮೆರಿಕ ಮತ್ತು ಇರಾನ್ ನಡುವೆ ಯುದ್ಧವನ್ನು ನಿಲ್ಲಿಸಲು ತಿಳುವಳಿಕೆ ಒಪ್ಪಂದ (ಎಂಒಯು)ಕ್ಕೆ ಸಹಿ ಹಾಕಿದ ನಂತರ ಭಾರತಕ್ಕೆ ಹೋಗುವ 11 ಹಡಗುಗಳು ಹಾರ್ಮುಜ್ ಜಲಸಂಧಿಯನ್ನು ದಾಟಿವೆ ಎಂದು ಅವರು ಮಾಹಿತಿ ನೀಡಿದರು. "ಜೂನ್ 17 ರಂದು ಒಪ್ಪಂದಕ್ಕೆ ಸಹಿ ಹಾಕಿದ ನಂತರ, ಭಾರತಕ್ಕೆ ತೆರಳುವ 11 ಹಡಗುಗಳು ಹಾರ್ಮುಜ್ ಜಲಸಂಧಿಯ ಮೂಲಕ ಸಾಗಿವೆ. ಈ ಹಡಗುಗಳಲ್ಲಿ ಮೂರು ಭಾರತೀಯ ಧ್ವಜ ಹೊಂದಿರುವ ಕಚ್ಚಾ ತೈಲ ಟ್ಯಾಂಕರ್‌ಗಳು ಸೇರಿವೆ, ಪ್ರತಿಯೊಂದೂ 2,85,000 ಮೆಟ್ರಿಕ್ ಟನ್ ಕಚ್ಚಾ ತೈಲವನ್ನು ಸಾಗಿಸುತ್ತದೆ, ಒಂದು ವಿದೇಶಿ ಧ್ವಜ LPG ವಾಹಕ, ಒಂದು ವಿದೇಶಿ ಧ್ವಜ ಕಚ್ಚಾತೈಲ ಟ್ಯಾಂಕರ್ ಮತ್ತು ರಸಗೊಬ್ಬರವನ್ನು ಸಾಗಿಸುವ ಆರು ವಿದೇಶಿ ಧ್ವಜ ಬೃಹತ್ ವಾಹಕಗಳು ಸೇರಿವೆ" ಎಂದು ಜೈಸ್ವಾಲ್ ಹೇಳಿದರು. ಉಳಿದ ಭಾರತ ಧ್ವಜ ಹೊಂದಿರುವ ಹಡಗುಗಳು ಸಹ ಶೀಘ್ರದಲ್ಲೇ ಹಾರ್ಮುಜ್ ಜಲಸಂಧಿಯನ್ನು ದಾಟಲು ಸಾಧ್ಯವಾಗುತ್ತದೆ ಎಂದು ವಿದೇಶಾಂಗ ಇಲಾಖೆ ವಕ್ತಾರರು ಆಶಿಸಿದ್ದಾರೆ.

# ಡಾ.ಪ್ರಭಾಕರ್ ಕೋರೆ ಸೇರಿ ರಾಜ್ಯದ ಐವರಿಗೆ ಪದ್ಮ ಪ್ರಶಸ್ತಿ ಪ್ರದಾನ




**ನವದೆಹಲಿ, ಜೂ.23:** ಶಿಕ್ಷಣ ತಜ್ಞ ಹಾಗೂ ಮಾಜಿ ರಾಜ್ಯಸಭಾ ಸದಸ್ಯ ಡಾ. ಪ್ರಭಾಕರ್ ಕೋರೆ ಸೇರಿ ಕರ್ನಾಟಕದ ಐವರು ಸಾಧಕರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮಂಗಳವಾರ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಒಂದಾದ ಪದ್ಮಶ್ರೀ ಪ್ರಶಸ್ತಿ ಪ್ರದಾನ ಮಾಡಿದರು.

...3ನೇ ಪುಟಕ್ಕೆ

# ರಾಜ್ಯಸಭೆಗೆ ಮರುನಾಮಕರಣ ವಂಚಿತ ಕೇಂದ್ರ ಸಚಿವ ಕುರಿಯನ್ ರಾಜೀನಾಮೆ



**ನವದೆಹಲಿ, ಜೂ. 23:** ಬಿಜೆಪಿಯಿಂದ ರಾಜ್ಯಸಭೆಗೆ ಮರುನಾಮಕರಣಗೊಳ್ಳಲು ವಿಫಲರಾದ ಬೆನ್ನಲ್ಲೇ, ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಖಾತೆ ರಾಜ್ಯ ಸಚಿವ ಜಾರ್ಜ್ ಕುರಿಯನ್ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಸಲಹೆಯ ಮೇರೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕುರಿಯನ್ ಅವರ ರಾಜೀನಾಮೆಯನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ಅಂಗೀಕರಿಸಿದ್ದಾರೆ.

ರಾಷ್ಟ್ರಪತಿ ಭವನ ಹೊರಡಿಸಿರುವ ಅಧಿಕೃತ ಪ್ರಕಟಣೆಯ ಪ್ರಕಾರ, ಸಂವಿಧಾನದ ವಿಧಿ 75(2)ರ ಅಡಿಯಲ್ಲಿ ಈ ರಾಜೀನಾಮೆ ಅಂಗೀಕರಿಸಲಾಗಿದೆ. ಜಾರ್ಜ್ ಕುರಿಯನ್ ಅವರು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯದ ಜೊತೆಗೆ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವಾಲಯದ ರಾಜ್ಯ ಸಚಿವರಾಗಿಯೂ ಜವಾಬ್ದಾರಿ ನಿರ್ವಹಿಸುತ್ತಿದ್ದರು.

ಕೇರಳ ಮೂಲದ ಹಿರಿಯ ಬಿಜೆಪಿ ನಾಯಕರಾದ 65 ವರ್ಷದ ಕುರಿಯನ್ ಅವರ ರಾಜ್ಯಸಭಾ ಸದಸ್ಯತ್ವದ ಅವಧಿಯು ಜೂನ್ 21ರಂದು ಮುಕ್ತಾಯಗೊಂಡಿತ್ತು. ಜೂನ್ 18ರಂದು ನಡೆದ ರಾಜ್ಯಸಭೆ ಚುನಾವಣೆಯಲ್ಲಿ ಅವರಿಗೆ ಮತ್ತೊಮ್ಮೆ ಸ್ಪರ್ಧಿಸಲು ಪಕ್ಷವು ಟಿಕೆಟ್ ನೀಡಿರಲಿಲ್ಲ. ನಿಯಮಗಳ ಪ್ರಕಾರ ಸಂಸತ್ತಿನ ಯಾವುದೇ ಸದನದ ಸದಸ್ಯರಲ್ಲದ ವ್ಯಕ್ತಿಯು ಸಚಿವರಾಗಿ ಮುಂದುವರಿಯಲು ಸಾಧ್ಯವಿಲ್ಲದ ಕಾರಣ, ಸದಸ್ಯತ್ವದ ಅವಧಿ ಮುಗಿದ ಬೆನ್ನಲ್ಲೇ ಅವರು ಈ ನಿರ್ಧಾರ ಕೈಗೊಂಡಿದ್ದಾರೆ. ಜೂನ್ 22ರಂದು ಪ್ರಧಾನಿ ನರೇಂದ್ರ ಮೋದಿ ಅವರನ್ನು ಖುದ್ದಾಗಿ ಭೇಟಿಯಾಗಿದ್ದ ಕುರಿಯನ್, ತಮಗೆ ದೇಶಸೇವೆ ಮಾಡಲು ಅವಕಾಶ ನೀಡಿದ್ದಕ್ಕಾಗಿ ಧನ್ಯವಾದ ಸಮರ್ಪಿಸಿ ರಾಜೀನಾಮೆ ಪತ್ರ ಸಲ್ಲಿಸಿದ್ದರು.

ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರು ಲೋಕಸಭೆಗೆ ಆಯ್ಕೆಯಾದ ನಂತರ ತೆರವಾಗಿದ್ದ ಮಧ್ಯಪ್ರದೇಶದ ರಾಜ್ಯಸಭಾ ಸ್ಥಾನಕ್ಕೆ 2024ರ ಆಗಸ್ಟ್‌ನಲ್ಲಿ ಜಾರ್ಜ್ ಕುರಿಯನ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದರು. ಸಿಂಧಿಯಾ ಅವರ ಬಾಕಿ ಉಳಿದಿದ್ದ ಅವಧಿಗೆ ಮಾತ್ರ ಅವರು ಸಂಸತ್ ಸದಸ್ಯರಾಗಿದ್ದರಿಂದ, ಅವರ ಅವಧಿಯು ಪ್ರಸ್ತುತ ಜೂನ್ ತಿಂಗಳಲ್ಲಿ ಕೊನೆಗೊಂಡಿದೆ. ಮೋದಿ ನೇತೃತ್ವದ ಸಚಿವ ಸಂಪುಟದಲ್ಲಿದ್ದ ಏಕೈಕ ಕ್ರಿಶ್ಚಿಯನ್ ಸಮುದಾಯದ ಮುಖ ಇದೀಗ ಸಚಿವ ಸ್ಥಾನದಿಂದ ನಿರ್ಗಮಿಸಿದಂತಾಗಿದೆ.

ಇತ್ತೀಚಿನ ಚುನಾವಣೆಯಲ್ಲಿ ಪಂಜಾಬ್ನ ರವನೀತ್ ಸಿಂಗ್ ಬಿಟ್ಟು ಮತ್ತು ಕೇರಳದ ಜಾರ್ಜ್ ಕುರಿಯನ್ ಇಬ್ಬರಿಗೂ ಬಿಜೆಪಿ ಮರುನಾಮಕರಣ ಮಾಡದಿರುವುದು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

### ತರುಣ್ ಚುಗ್ ಬದಲಾವಣೆ ಸಾಧ್ಯತೆ

ರೈಲ್ವೆ ಮತ್ತು ಆಹಾರ ಸಂಸ್ಕರಣಾ ಖಾತೆ ರಾಜ್ಯ ಸಚಿವ, ಹಾಲಿ ಸಂಸದ ರವನೀತ್ ಬಿಟ್ಟು ಕೂಡ ರಾಜೀನಾಮೆ ನೀಡಬಹುದು, ಅವರು ಚುನಾವಣೆ ನಡೆಯಲಿರುವ ಪಂಜಾಬ್‌ಗೆ ಹೋಗಿ ಅಲ್ಲಿ ಪಕ್ಷಕ್ಕಾಗಿ ಕೆಲಸ ಮಾಡಬಹುದು. ಹೊಸದಾಗಿ ಆಯ್ಕೆಯಾದ ರಾಜ್ಯಸಭಾ ಸಂಸದ ತರುಣ್ ಚುಗ್ ಅವರನ್ನು ಬದಲಾಯಿಸುವ ಸಾಧ್ಯತೆಯಿದೆ. ಆದಾಗ್ಯೂ, ಅವರ ರಾಜ್ಯಸಭಾ ಅವಧಿ ಅದೇ ದಿನ ಕೊನೆಗೊಂಡಿದ್ದರೂ ಅವರು ಇನ್ನೂ ರಾಜೀನಾಮೆ ನೀಡಿಲ್ಲ. ಬಿಟ್ಟು ಮುಂದಿನ ವರ್ಷ ಚುನಾವಣೆ ನಡೆಯಲಿರುವ ಪಂಜಾಬ್‌ನ ಹಿರಿಯ ಜಾಟ್ ಸಿಖ್ ನಾಯಕರಾಗಿದ್ದು, ಪಂಜಾಬ್ ಚುನಾವಣೆಗೆ ಮುನ್ನ ಅವರನ್ನು ಸಚಿವ ಸಂಪುಟದಿಂದ ತೆಗೆದುಹಾಕುವುದು ಸರಿಯಾದ ಸಂಕೇತವನ್ನು ನೀಡದಿರಬಹುದು ಎಂದು ಮೂಲಗಳು ಹೇಳುತ್ತವೆ. ಏತನ್ಮಧ್ಯೆ, ಬಿಟ್ಟು ಆರು ತಿಂಗಳ ಕಾಲ ಸಂಸದರಾಗದೆ ಸಚಿವರಾಗಿ ಉಳಿಯಬಹುದು.

# ತಾವೇ ಕಟ್ಟಿದ ಪಕ್ಷದಿಂದ ಮಮತಾ ಉಚ್ಚಾಟನೆ: ನಮ್ಮದೇ ನಿಜವಾದ ಟಿಎಂಸಿ ಎಂದ ರಿತಬ್ರತಾ ಬ್ಯಾನರ್ಜಿ

**ಕೋಲ್ಕತ್ತಾ, ಜೂ.23:** ಇತ್ತೀಚಿಗೆ ನಡೆದ ವಿಧಾನಸಭೆ ಚುನಾವಣೆಯಲ್ಲಿ ಹೀನಾಯ ಸೋಲಿನಿಂದ ಕಂಗೆಟ್ಟಿರುವ ತೃಣಮೂಲ ಕಾಂಗ್ರೆಸ್ ಈಗ ಇಬ್ಭಾಗವಾಗುತ್ತಿದ್ದು, ಪಕ್ಷದ ವರಿಷ್ಠೆ ಮಮತಾ ಬ್ಯಾನರ್ಜಿ ಅವರನ್ನೇ ಪಕ್ಷದಿಂದ ಹೊರ ಹಾಕಲಾಗಿದೆ.

ಬಂಗಾಳ ರಾಜಕೀಯವು ಮತ್ತೊಂದು ತಿರುವು ಪಡೆದುಕೊಂಡಿದ್ದು, ಉಲುಬೇರಿಯಾ ಪುರ್ಬಾ ಶಾಸಕ ರಿತಬ್ರತ ಬ್ಯಾನರ್ಜಿ ಅವರು ತಮ್ಮದೇ "ನಿಜವಾದ ತೃಣಮೂಲ ಕಾಂಗ್ರೆಸ್" ಎಂದು ಹೇಳಿದ್ದು, ಪಕ್ಷದ ಸಂಸ್ಥಾಪಕಿ ಮಮತಾ ಅವರನ್ನು ಅಧ್ಯಕ್ಷ ಸ್ಥಾನದಿಂದಲೇ ವಜಾಗೊಳಿಸಿದ್ದಾರೆ. ಮಮತಾ ಬ್ಯಾನರ್ಜಿ ಅವರು ಪಕ್ಷ ವಿರೋಧಿ ಚಟುವಟಿಕೆಗಳ ಆರೋಪದ ಮೇಲೆ ರಿತಬ್ರತ ಬ್ಯಾನರ್ಜಿ ಅವರನ್ನು ಪಕ್ಷದಿಂದ ಹೊರಹಾಕಿದ ಕೆಲವು ದಿನಗಳ ನಂತರ ಈಗ ದೀದಿಯನ್ನೇ ಉಚ್ಚಾಟಿಸಲಾಗಿದೆ.

ಇಂದು ನಡೆದ ಬೆಳವಣಿಗೆಯಲ್ಲಿ "ನಿಜವಾದ ತೃಣಮೂಲ ಕಾಂಗ್ರೆಸ್" ಪಕ್ಷ ಹೊಸ ಸಮಿತಿಯನ್ನು ರಚಿಸಿದ್ದು, ಅಭಿಷೇಕ್ ಬ್ಯಾನರ್ಜಿ ಅವರನ್ನು ಪಕ್ಷದಿಂದ ಅಮಾನತುಗೊಳಿಸುವ ಮೂಲಕ ಶಿಸ್ತುಕ್ರಮ ಕೈಗೊಳ್ಳಲಾಗಿದೆ. ಶಾಸಕರಾದ ಸಂದೀಪನ್ ಸಹಾ, ಜಾವೇದ್ ಖಾನ್ ಮತ್ತು ರಿತಬ್ರತಾ ಅವರನ್ನು ಪ್ರಧಾನ ಕಾರ್ಯದರ್ಶಿಗಳೆಂದು ಘೋಷಿಸಲಾಯಿತು.

### ಅಭಿಷೇಕ್ ಬ್ಯಾನರ್ಜಿ ಅಮಾನತು





ಕೋಲ್ಕತ್ತಾದ ಮಾಜಿ ಮೇಯರ್ ಫಿರ್ಹಾದ್ ಹಕೀಮ್, ಮಾಜಿ ಸಚಿವ ಅರೂಪ್ ಬಿಸ್ವಾಸ್ ಮತ್ತು ರಥಿನ್ ಘೋಷ್ ಅವರನ್ನು ಬಂಡಾಯ ಬಣದ ಉಪಾಧ್ಯಕ್ಷರನ್ನಾಗಿ ಹೆಸರಿಸಲಾಗಿದ್ದರೆ, ರಘುನಾಥ್‌ಗಂಜ್ ಶಾಸಕ ಅಖ್ರುಜ್ಜಮಾನ್ ಹೊಸ ಕೋಶಾಧಿಕಾರಿಯಾಗಲಿದ್ದಾರೆ.

ಸಭೆ ನಂತರ ಮಾತನಾಡಿದ ವಿಧಾನಸಭೆ ವಿರೋಧ ಪಕ್ಷದ ನಾಯಕ ರಿತಬ್ರತಾ ಬ್ಯಾನರ್ಜಿ, ಪಕ್ಷದ ಸಂವಿಧಾನದ ಪ್ರಕಾರ ಪ್ರತಿ ಮೂರು ವರ್ಷಕ್ಕೊಮ್ಮೆ ರಾಷ್ಟ್ರೀಯ ಕಾರ್ಯಕಾರಿಣಿ ಸಮಿತಿಯನ್ನು ಪುನರ್ ರಚಿಸಬೇಕು. ಆದರೆ, 2022ರ ಫೆಬ್ರವರಿ ಬಳಿಕ ಯಾವುದೇ ಹೊಸ ಸಮಿತಿ ರಚನೆಯಾಗಿಲ್ಲ. ಹಳೆಯ ಸಮಿತಿಯ ಅವಧಿ ಮುಗಿದಿದ್ದರಿಂದ ಪಕ್ಷದಲ್ಲಿ ಸಾಂವಿಧಾನಿಕ ಬಿಕ್ಕಟ್ಟು ಸೃಷ್ಟಿಯಾಗಿತ್ತು. ಹೀಗಾಗಿ ನಾವು ನೂತನ ನಾಯಕತ್ವವನ್ನು ಆಯ್ಕೆ ಮಾಡಿದ್ದೇವೆ ಎಂದು ಘೋಷಿಸಿದ್ದಾರೆ.

ನಾವು ಚುನಾವಣಾ ಆಯೋಗದ ಎಲ್ಲಾ ನಿಯಮಗಳನ್ನು ಪಾಲಿಸಿದ್ದೇವೆ. ಈ ಬೆಳವಣಿಗೆಯ ಕುರಿತು ಚುನಾವಣಾ ಆಯೋಗಕ್ಕೂ ತಿಳಿಸುತ್ತೇವೆ. ಎಲ್ಲವನ್ನೂ ಕಾನೂನುಬದ್ಧವಾಗಿ ಮಾಡಲಾಗಿದೆ ಎಂದರು. ಕಾಳೀಘಾಟ್‌ನ ತೃಣಮೂಲ ಗುಂಪಿನಲ್ಲಿ ಮಮತಾ ಬ್ಯಾನರ್ಜಿ ಅಧ್ಯಕ್ಷರಾಗಿ ಮತ್ತು ಅಭಿಷೇಕ್ ಬ್ಯಾನರ್ಜಿ ಪ್ರಧಾನ ಕಾರ್ಯದರ್ಶಿಯಾಗಿ ಮುಂದುವರಿದಿದ್ದಾರೆ ಎಂದು ತಿಳಿಸಿದಾಗ, ಕಾಳೀಘಾಟ್‌ನ ಬೆಳವಣಿಗೆಗಳ ಬಗ್ಗೆ ತಮಗೆ ಕಾಳಜಿಯಿಲ್ಲ ಮತ್ತು ತಮ್ಮ ಬಣವೇ ನಿಜವಾದ ತೃಣಮೂಲ ಎಂದು ರಿತಬ್ರತಾ ಪ್ರತಿಪಾದಿಸಿದ್ದಾರೆ. ಕಾಳೀಘಾಟ್‌ನಿಂದ ಏನು ಘೋಷಣೆಯಾಗಿದೆ ಎಂಬುದು ನಮಗೆ ತಿಳಿಯದು. ಅಲ್ಲಿ ಜನರನ್ನು ನೇಮಿಸಲಾಗುತ್ತಿದೆ ಆದರೆ ಅವರು ಮರುದಿನವೇ ರಾಜೀನಾಮೆ ನೀಡುತ್ತಿರುವಂತೆ ತೋರುತ್ತಿದೆ. ಅವರ ಬಗ್ಗೆ ಚರ್ಚಿಸುವುದರಲ್ಲಿ ಯಾವುದೇ ಅರ್ಥವಿಲ್ಲ ಎಂದು ರಿತಬ್ರತಾ ಹೇಳಿದರು.

### ಟಿಎಂಸಿ ಎಂದರೆ ಮಮತಾ, ಉಳಿದೆಲ್ಲವೂ ಸರ್ಕಸ್ ಅಷ್ಟೇ


ಈ ಬೆಳವಣಿಗೆಗಳ ಕುರಿತು ಪ್ರತಿಕ್ರಿಯಿಸಿದ ಮಮತಾ ಬ್ಯಾನರ್ಜಿ ಅವರ ನಿಷ್ಠಾವಂತ ಶಾಸಕ ಕುನಾಲ್ ಘೋಷ್, ಈ ಬೆಳವಣಿಗೆಗಳು ಹಾಸ್ಯಾಸ್ಪದವಾಗಿವೆ ಮತ್ತು "ಮಮತಾ ಬ್ಯಾನರ್ಜಿ ಇಲ್ಲದೆ ತೃಣಮೂಲ ಇರಲು ಸಾಧ್ಯವಿಲ್ಲ" ಎಂದಿದ್ದಾರೆ. ಇದೊಂದು ಕಾಮಿಡಿ ಶೋ. ತೃಣಮೂಲದಿಂದ ಉಚ್ಚಾಟಿಸಲ್ಪಟ್ಟ ವ್ಯಕ್ತಿಯೊಬ್ಬರು ವಿಶೇಷ ಅಧಿವೇಶನ ನಡೆಸುತ್ತಿದ್ದಾರೆ. ವಿಷಯ ನ್ಯಾಯಾಲಯದಲ್ಲಿದೆ ಮತ್ತು ನಮಗೆ ನ್ಯಾಯ ಸಿಗುತ್ತದೆ ಎಂಬ ನಂಬಿಕೆಯಿದೆ. ಇಂತಹ ಹಾಸ್ಯಾಸ್ಪದ ನಡವಳಿಕೆಗೆ ಯಾವುದೇ ಮಹತ್ವ ನೀಡುವುದಿಲ್ಲ. ತೃಣಮೂಲ ಎಂದರೆ ಮಮತಾ ಬ್ಯಾನರ್ಜಿ. ಉಳುವುದೆಲ್ಲವೂ ಸರ್ಕಸ್ ಅಷ್ಟೆ, ಎಂದು ಘೋಷ್ ಹೇಳಿದರು.

### ಅರೂಪ್ ರಾಯ್ ಟಿಎಂಸಿ ನೂತನ ಅಧ್ಯಕ್ಷ



ಕೋಲ್ಕತಾದ ನ್ಯೂ ಟೌನ್‌ನ ಖಾಸಗಿ ಹೋಟೆಲ್ ಒಂದರಲ್ಲಿ ರಿತಬ್ರತಾ ಬ್ಯಾನರ್ಜಿ ನೇತೃತ್ವದಲ್ಲಿ ಸಭೆ ನಡೆಯಿತು. ಸಭೆಯಲ್ಲಿ ಟಿಎಂಸಿಯ 60 ಶಾಸಕರು ಹಾಗೂ ಕೋಲ್ಕತ್ತಾ ಮಹಾನಗರ ಪಾಲಿಕೆಯ 70 ಸದಸ್ಯರು ಭಾಗವಹಿಸಿ ರಿತಬ್ರತಾ ಬಣಕ್ಕೆ ಜೈ ಎಂದಿದ್ದಾರೆ. ಸಭೆಯಲ್ಲಿ ಮಮತಾ ಅವರನ್ನು ಉಚ್ಚಾಟಿಸಿ, ಅವರ ಜಾಗಕ್ಕೆ ಹೌರಾ ಮಧ್ಯಮ ಕ್ಷೇತ್ರದ ಶಾಸಕ ಅರೂಪ್ ರಾಯ್ ಅವರನ್ನು ತೃಣಮೂಲ ಕಾಂಗ್ರೆಸ್‌ನ ನೂತನ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಲಾಯಿತು.

## ನಿತ್ಯ ಪಂಚಾಂಗ 24.06.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ

ಕದಳೀಗೌರೀ ವ್ರತ, ರಂಭಾ ತೃತೀಯಾ, ಕೈವಾರಮಹರಾಜ ಆರಾಧನೆ, ಮೊಹರಂ ತಿಂಗಳ ಆರಂಭ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ವಿಧಿವಿಜ್ಞಾನ ಪ್ರಯೋಗಾಲಯ ಬಲವರ್ಧನೆಗೆ ಸರ್ಕಾರ ಬದ್ಧ: ಸಚಿವ ಖರ್ಗೆ

**ಬೆಂಗಳೂರು, ಜೂ.23:** ದೇಶದಲ್ಲಿಯೇ ಅತ್ಯಾಧುನಿಕ ಹಾಗೂ ಅತ್ಯಂತ ಪರಿಣಾಮಕಾರಿ ವಿಧಿ ವಿಜ್ಞಾನ ತನಿಖಾ ವ್ಯವಸ್ಥೆ ಹೊಂದಿರುವ ರಾಜ್ಯಗಳಲ್ಲಿ ಕರ್ನಾಟಕ ಮುಂಚೂಣಿಯಲ್ಲಿದ್ದು, ರಾಜ್ಯದ ವಿಧಿವಿಜ್ಞಾನ ಪ್ರಯೋಗಾಲಯ ನಿರ್ದೇಶನಾಲಯವು ರಾಷ್ಟ್ರವೇ ಹೆಮ್ಮೆಪಡುವಂತಹ ಸಾಧನೆ ಮಾಡಿದೆ ಎಂದು ಗೃಹ, ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಮಡಿವಾಳದಲ್ಲಿರುವ ಎಫ್‌ಎಸ್‌ಎಲ್ ಕಚೇರಿಗೆ ಭೇಟಿ ನೀಡಿ ಪರಿಶೀಲನಾ ಸಭೆ ನಡೆಸಿದ ಸಚಿವರು, ಕರ್ನಾಟಕದ ಫೊರೆನ್ಸಿಕ್ ವಿಜ್ಞಾನ ಪ್ರಯೋಗಾಲಯವು ಅಪರಾಧ ತನಿಖೆಯಲ್ಲಿ ವೈಜ್ಞಾನಿಕ ನಿಖರತೆ, ತಾಂತ್ರಿಕ ಸಾಮರ್ಥ್ಯ ಮತ್ತು ವೇಗದ ವರದಿ ವ್ಯವಸ್ಥೆಯಲ್ಲಿ ದೇಶದ ಅತ್ಯುತ್ತಮ ಸಂಸ್ಥೆಗಳಲ್ಲಿ ಒಂದಾಗಿ ಬೆಳೆದಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ನಾಟಕ ಎಫ್‌ಎಸ್‌ಎಲ್‌ಗೆ ರಾಷ್ಟ್ರೀಯ ಮಾನ್ಯತಾ ಮಂಡಳಿ ಮಾನ್ಯತೆ ದೊರೆತಿದ್ದು, ಅಂತರರಾಷ್ಟ್ರೀಯ ಗುಣಮಟ್ಟದ ಮಾನದಂಡಗಳಡಿ ಕಾರ್ಯನಿರ್ವಹಿಸುತ್ತಿದೆ. ರಾಜ್ಯದ ಡಿಜಿಟಲ್ ಮತ್ತು ಮೊಬೈಲ್ ಫೊರೆನ್ಸಿಕ್ ವಿಭಾಗಗಳಿಗೆ ಮಾಹಿತಿ ತಂತ್ರಜ್ಞಾನ ಕಾಯ್ದೆಯಡಿ ಎಲೆಕ್ಟ್ರಾನಿಕ್ಸ್ ಎವಿಡೆನ್ಸ್ ಎಕ್ಸಾಮಿನರ್ ಸ್ಥಾನಮಾನ ದೊರೆತಿರುವುದು ದೇಶದಲ್ಲೇ ಗಮನಾರ್ಹ ಸಾಧನೆ ಎಂದು ಸಚಿವರು ತಿಳಿಸಿದರು. ಇತ್ತೀಚೆಗೆ ಸರ್ಕಾರದ ಸಂಸ್ಥೆಗಳಿಗೆ ನೀಡಲಾಗುವ ಪ್ರತಿಷ್ಠಿತ ಡಿ.ಎಸ್.ಸಿ.ಐ ಪ್ರಶಸ್ತಿಯನ್ನು ಕರ್ನಾಟಕ ಎಫ್‌ಎಸ್‌ಎಲ್ ತನ್ನ ಅತ್ಯುತ್ತಮ ಡಿಜಿಟಲ್ ಫೊರೆನ್ಸಿಕ್ ಸಾಮರ್ಥ್ಯಕ್ಕಾಗಿ ಪಡೆದಿದೆ. ಇದು ರಾಜ್ಯದ ತನಿಖಾ ವ್ಯವಸ್ಥೆಯ ಗುಣಮಟ್ಟಕ್ಕೆ ಸಾಕ್ಷಿಯಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಸಭೆಯಲ್ಲಿ ಡಿಜಿಪಿ ಡಾ.ಎಂ.ಎ.ಸಲೀಂ, ಎಡಿಜಿಪಿ ಪಿ.ಹರಿಶೇಖರ್, ಸಂಸ್ಥೆಯ ನಿರ್ದೇಶಕಿ ದಿವ್ಯಾ ಗೋಪಿನಾಥ್ ಹಾಗೂ ಅಧಿಕಾರಿಗಳು ಪಾಲ್ಗೊಂಡಿದ್ದರು.



### ವೈಲ್ಡ್ ಲೈಫ್ ಫೊರೆನ್ಸಿಕ್ ಘಟಕ ಆರಂಭಿಸಲು ಸಿದ್ಧತೆ

ಗೌರಿ ಲಂಕೇಶ್, ಎಂ.ಎಂ. ಕಲಬುರ್ಗಿ, ನರೇಂದ್ರ ದಭೋಲ್ಕರ್ ಹಾಗೂ ಗೋವಿಂದ ಪನ್ಸಾರೆ ಹತ್ಯೆ ಪ್ರಕರಣಗಳ ನಡುವಿನ ವೈಜ್ಞಾನಿಕ ಸಂಪರ್ಕವನ್ನು ಫೊರೆನ್ಸಿಕ್ ವಿಶ್ಲೇಷಣೆಯ ಮೂಲಕ ಪತ್ತೆಹಚ್ಚಿದ ಕರ್ನಾಟಕ ಎಫ್‌ಎಸ್‌ಎಲ್ ಕಾರ್ಯ ರಾಷ್ಟ್ರಮಟ್ಟದಲ್ಲಿ ದೊಡ್ಡ ಮೆಚ್ಚುಗೆ ಪಡೆದಿದೆ ಎಂದು ಸಚಿವರು ಹೇಳಿದರು. ರಾಜ್ಯದಲ್ಲಿ ಮೊದಲ ಬಾರಿಗೆ ವೈಲ್ಡ್ ಲೈಫ್ ಫೊರೆನ್ಸಿಕ್ ಘಟಕ ಆರಂಭಿಸಲು ಎಲ್ಲಾ ಸಿದ್ಧತೆಗಳು ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಕಾರ್ಯಾರಂಭ ಮಾಡಲಿದೆ ಎಂದು ಘೋಷಿಸಿದರು. ವನ್ಯಜೀವಿ ಅಪರಾಧಗಳು ಹಾಗೂ ಅಕ್ರಮ ಸಾಗಾಟ ಪ್ರಕರಣಗಳ ತನಿಖೆಗೆ ಇದು ನೆರವಾಗಲಿದೆ ಎಂದು ಸಚಿವರು ಮಾಹಿತಿ ನೀಡಿದರು. ಎಫ್‌ಎಸ್‌ಎಲ್‌ನಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರ ಆದ್ಯತೆ ನೀಡಲಿದ್ದು, ವೈಜ್ಞಾನಿಕ ಅಧಿಕಾರಿಗಳು ಸೇರಿದಂತೆ ಅಗತ್ಯ ಸಿಬ್ಬಂದಿ ನೇಮಕಾತಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು. ಕಳೆದ ಕೆಲವು ವರ್ಷಗಳಲ್ಲಿ ಪ್ರಕರಣಗಳ ಸಂಖ್ಯೆ ಹೆಚ್ಚಾದರೂ, ತಂತ್ರಜ್ಞಾನ ಬಳಕೆ ಹಾಗೂ ಕಾರ್ಯಕ್ಷಮತೆಯಿಂದ ಹಲವು ವಿಭಾಗಗಳಲ್ಲಿ ವರದಿ ನೀಡುವ ಅವಧಿಯನ್ನು 40 ತಿಂಗಳಿಂದ ಕೇವಲ 1ರಿಂದ 4 ತಿಂಗಳಿಗೆ ಇಳಿಸಿರುವುದು ಇಲಾಖೆಯ ಮತ್ತೊಂದು ಗಮನಾರ್ಹ ಸಾಧನೆಯಾಗಿದೆ ಎಂದೂ ಸಚಿವ ಪ್ರಿಯಾಂಕ್ ಖರ್ಗೆ ಶ್ಲಾಘನೆ ವ್ಯಕ್ತಪಡಿಸಿದರು.

ಅಪರಾಧ ತನಿಖೆಯಲ್ಲಿ ನಿಖರತೆ, ವೇಗ ಮತ್ತು ಪಾರದರ್ಶಕತೆ ತರಲು ಕರ್ನಾಟಕ ಸರ್ಕಾರ ಫೊರೆನ್ಸಿಕ್ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಿ, ದೇಶದಲ್ಲೇ ಮಾದರಿಯಾಗುವಟತಢ ರೀತಿಯಲ್ಲಿ ಅಭಿವೃದ್ಧಿಪಡಿಸಲು ಬದ್ಧವಾಗಿದೆ ಎಂದು ಸಚಿವರು ಈ ಸಂರ್ಭದಲ್ಲಿ ತಿಳಿಸಿದರು.

# 200 ಪೊಲೀಸ್ ಸಿಬ್ಬಂದಿಗೆ ಡಿಜಿ–ಐಜಿಪಿ ಪ್ರಶಂಸನಾ ಪದಕ

**ಬೆಂಗಳೂರು, ಜೂ.23:** ಅತ್ಯುತ್ತಮವಾಗಿ ಕರ್ತವ್ಯ ನಿರ್ವಹಿಸಿದ 200 ಪೊಲೀಸ್ ಅಧಿಕಾರಿ/ಸಿಬ್ಬಂದಿಗೆ 2025–26ನೇ ಸಾಲಿನ ಡಿಜಿ–ಐಜಿಪಿ ಪ್ರಶಂಸನಾ ಪದಕ ಘೋಷಿಸಿ ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ.ಎಂ.ಎ ಸಲೀಂ ಸೋಮವಾರ ಆದೇಶ ಹೊರಡಿಸಿದ್ದಾರೆ. ಐಜಿಪಿ ಎನ್.ಸತೀಶ್ ಕುಮಾರ್, ಹುಬ್ಬಳ್ಳಿ–ಧಾರವಾಡ ಪೊಲೀಸ್ ಆಯುಕ್ತ ಎನ್.ಶಶಿಕುಮಾರ್, ಸಿಐಡಿ ಡಿಐಜಿ ಡಾ.ಭೀಮಾಶಂಕರ್ ಗುಳೇದ್, ಡಿಐಜಿ ಶಾಂತನು ಸಿನ್ಹಾ ಸೇರಿದಂತೆ 17 ಮಂದಿ ಐಪಿಎಸ್ ಅಧಿಕಾರಿಗಳಿಗೂ ಪದಕ ಗೌರವ ಲಭಿಸಿದೆ. ರಾಜ್ಯದ ವಿವಿಧೆಡೆ ಕಾರ್ಯನಿರ್ವಹಿಸುತ್ತಿರುವ ಎಸ್ಪಿ, ಎಸಿಪಿ/ ಡಿವೈಎಸ್ಪಿಗಳು, ಕೆಎಸ್‌ಆರ್ ಪಿ ಕಮಾಂಡೆಂಟ್ ಗಳು, ಇನ್‌ಸ್ಪೆಕ್ಟರ್‌ಗಳು, ಪಿಎಸ್‌ಐ, ಎಎಸ್‌ಐ ಹಾಗೂ ಕಾನ್‌ಸ್ಟೇಬಲ್ ಹಂತದವರೆಗೆ 200 ಮಂದಿಗೆ ಪದಕ ಘೋಷಿಸಲಾಗಿದೆ.

# ವರಿಷ್ಠರ ಸೂಚನೆ ಮೇರೆಗೆ ಅಧಿಕಾರ ಹಂಚಿಕೆ ಸಿದ್ದರಾಮಯ್ಯ ಜತೆಗಿನ ಒಪ್ಪಂದ ತೆರೆದಿಟ್ಟ ಸಿಎಂ ಡಿಕೆಶಿ

**ಬೆಂಗಳೂರು, ಜೂ.23:** ತಮ್ಮ ಮತ್ತು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ನಡುವೆ ನಡೆದ ಅಧಿಕಾರ ಹಂಚಿಕೆ ಒಪ್ಪಂದ ಬಗ್ಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮೊದಲ ಬಾರಿಗೆ ಬಹಿರಂಗವಾಗಿ ಮಾತನಾಡಿದ್ದಾರೆ.

ಪಕ್ಷ ಅಧಿಕಾರಕ್ಕೆ ಬಂದಾಗ ವರಿಷ್ಠರು ನನ್ನನ್ನೇ ಮುಖ್ಯಮಂತ್ರಿ ಮಾಡುತ್ತಾರೆ ಎಂದುಕೊಂಡಿದ್ದೆ. ಆದರೆ ಸಿದ್ದರಾಮಯ್ಯ ಹಾಗೂ ನೀವು ಅಧಿಕಾರ ಹಂಚಿಕೆ ಮಾಡಿಕೊಳ್ಳಿ ಎಂದು ಹೈಕಮಾಂಡ್ ಸೂಚಿಸಿತು ಎಂದು ಡಿ ಕೆ ಶಿವಕುಮಾರ್ ಹೇಳಿದ್ದಾರೆ.

ಉತ್ತರ ಕರ್ನಾಟಕ ಭಾಗದ 14 ಜಿಲ್ಲೆಗಳ ವಿವಿಧ ದರ್ಗಾಗಳ ಮುಖಸ್ಥರು ಸೋಮವಾರ ಸಿಎಂ ಡಿ.ಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ, ಎಂಎಲ್ ಸಿ ಸಲೀಂ ಅಹ್ಮದ್ ಅವರನ್ನು ಸಚಿವ ಸಂಪುಟದಲ್ಲಿ ಸೇರ್ಪಡೆ ಮಾಡಿಕೊಳ್ಳಬೇಕು ಎಂದು ಮನವಿ ಮಾಡಿದರು. ಮನವಿ ಸ್ವೀಕರಿಸಿ ಸಿಎಂ ಮಾತನಾಡಿದರು. ಈ ವೇಳೆ ಮೊದಲ ಬಾರಿಗೆ ಅಧಿಕಾರ ಹಂಚಿಕೆ ಗುಟ್ಟು ಬಿಚ್ಚಿಟ್ಟಿದ್ದಾರೆ.



ಪಕ್ಷ ಈಗ ಸಿಎಂ ಸ್ಥಾನದಲ್ಲಿ ನನ್ನನ್ನು ಕೂರಿಸಿದೆ. ಸಲೀಂ ಅಹ್ಮದ್ ಅವರಿಗೆ ಒಳ್ಳೆಯದಾಗಲಿ ಎಂದು ಬೆಂಬಲಿಸಲು ನೀವು ಬಂದಿದ್ದೀರಿ. ನಾನು ಸಲೀಂ, ವಿನಯ್ ಕುಮಾರ್ ಸೊರಕೆ ಎಲ್ಲರೂ ವಿದ್ಯಾರ್ಥಿ ನಾಯಕರಾಗಿದ್ದವರು. ನಾವು ಒಟ್ಟಿಗೆ ರಾಜಕಾರಣ ಮಾಡಿದ್ದೇವೆ. ಅವರಿಗೆ ಎಂಎಲ್ ಸಿ ಮಾಡಬಾರದು ಎಂದು ವಿರೋಧವಿತ್ತು. ನಾನೇ ಕರೆದುಕೊಂಡು ಹೋಗಿ ಸ್ಪರ್ಧಿಸುವಂತೆ ಮಾಡಿದೆ. ಅವರು ಬೆಂಗಳೂರಿನಲ್ಲಿ ನಿಂತಿದ್ದರೆ ಯಾವತ್ತೋ ಲೋಕಸಭೆಗೆ ಆಯ್ಕೆಯಾಗಿರುತ್ತಿದ್ದರು. ಕಾರಣಾಂತರದಿಂದ ಅದು ಸಾಧ್ಯವಾಗಲಿಲ್ಲ. ಅವರಿಗೆ ರಾಷ್ಟ್ರ ಮಟ್ಟದಲ್ಲೂ ಅವಕಾಶವಿತ್ತು ಎಂದರು.

# ಹಳ್ಳಿಗಳಲ್ಲಿ ನೀರಿನ ಅಭಾವ ಉಂಟಾದರೆ ತಾತ್ಕಾಲಿಕ ವ್ಯವಸ್ಥೆ

**ಬೆಳಗಾವಿ, ಜೂ.23:** ಈ ಬಾರಿ ಮಹಾರಾಷ್ಟ್ರದಲ್ಲಿಯೂ ಮಳೆ ಕೊರತೆ ಕಂಡಿದ್ದು, ನೀರಿನ ಅಭಾವ ಉಂಟಾಗಿದೆ. ಕೊಯ್ನಾ ಜಲಾಶಯದಿಂದ ರಾಜ್ಯಕ್ಕೆ ನೀರು ಬಿಡುವುದಿಲ್ಲ ಎಂದು ಸ್ಪಷ್ಟವಾಗಿ ಹೇಳಿದ್ದಾರೆ. ಕಾರಣ, ಗಡಿ ಜಿಲ್ಲೆಗಳಲ್ಲಿ ಸದ್ಯ ಲಭ್ಯವಿರುವ ನೀರನ್ನೇ ಸರಿಯಾಗಿ ನಿರ್ವಹಣೆ ಮಾಡಿಕೊಳ್ಳಬೇಕಿದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು. ನಗರದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸದ್ಯಕ್ಕೆ ಹಿಡಕಲ್ ಜಲಾಶಯದಲ್ಲಿ ಎರಡು ತಿಂಗಳಿಗೆ ಸಾಲುವಷ್ಟು ನೀರಿದೆ. ಕುಡಿಯುವ ಉದ್ದೇಶಕ್ಕೆ ಮಾತ್ರ ಬಳಸಲಾಗುವುದು. ನಗರ ಹಾಗೂ ಹಳ್ಳಿಗಳಲ್ಲಿ ನೀರಿನ ಅಭಾವ ಉಂಟಾದರೆ; ತಾತ್ಕಾಲಿಕ ವ್ಯವಸ್ಥೆ ಮಾಡಲಾಗುವುದು ಎಂದರು.

ನೀರು ಬಿಡಿಸುವ ಸಂಬಂಧ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಹಾರಾಷ್ಟ್ರದೊಂದಿಗೆ ಮಾತುಕತೆ ನಡೆಸಿದ್ದಾರೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಹೇಳಿದ ಮಾತಿಗೆ ಪ್ರತಿಕ್ರಿಯಿಸಿದ ಸಚಿವ, ಈ ರೀತಿ ಯಾವುದೇ ಮಾತುಕತೆ ಅಥವಾ ಒಪ್ಪಂದ ಆಗಿಲ್ಲ. ಅದು ಸುಳ್ಳು. ಮಹಾರಾಷ್ಟ್ರದಿಂದ ನೀರು ಸಿಗುವ ನಿರೀಕ್ಷೆ ಕೈಬಿಡಬೇಕು ಎಂದರು.

# ಸಂವಿಧಾನದ ಬಗ್ಗೆ ಮೋದಿಯಿಂದ ಕಲಿಯಬೇಕಾದ ಅಗತ್ಯವಿಲ್ಲ

**ಬೆಂಗಳೂರು, ಜೂ.23:** ಸಂವಿಧಾನದ ಬಗ್ಗೆ ಮೋದಿಯವರಿಂದ ಕಲಿಯಬೇಕಾದ್ದೇನೂ ಇಲ್ಲ: ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 1950ರಲ್ಲಿ ಭಾರತೀಯ ಸಂವಿಧಾನ ಅಂಗೀಕರಿಸಲ್ಪಟ್ಟಾಗ ಆರ್‌ಎಸ್‌ಎಸ್ ಅದನ್ನು ವಿರೋಧಿಸಿತ್ತು. ಸಂವಿಧಾನದ ಬಗ್ಗೆ ನಮಗೆ ಮೋದಿ ಅವರಿಂದ ಕಲಿಯಬೇಕಾದ ಅಗತ್ಯವಿಲ್ಲ. ಅವರು ಸಂವಿಧಾನವನ್ನು ನಿರ್ಲಕ್ಷಿಸಿದ್ದ ಚಿಂತನಾ ಪರಂಪರೆಯಿಂದ ಬಂದವರು. ಆರ್‌ಎಸ್‌ಎಸ್ ತಮ್ಮ ಸಂಪಾದಕೀಯದಲ್ಲಿ ಸ್ಪಷ್ಟವಾಗಿ ಸಂವಿಧಾನವನ್ನು ತಿರಸ್ಕರಿಸುತ್ತೇವೆ ಎಂದು ಬರೆದಿತ್ತು ಎಂದರು. ದೆಹಲಿಯ ರಾಮಲೀಲಾ ಮೈದಾನದಲ್ಲಿ 150ಕ್ಕೂ ಹೆಚ್ಚು ಪ್ರತಿಭಟನೆಗಳನ್ನು ನಡೆಸಿ, ಮಹರ್ಷಿ ನೆಹರು ಮತ್ತು ಋಷಿ ಅಂಬೇಡ್ಕರ್ ವೇದಗಳನ್ನು ಮುಗಿಸಿ ಸಂವಿಧಾನ ಎಂಬುದನ್ನು ತರುತ್ತಿದ್ದಾರೆ. ನಾವು ಅದನ್ನು ಸಂಪೂರ್ಣವಾಗಿ ತಿರಸ್ಕರಿಸುತ್ತೇವೆ; ದೇಶದ ಸಂವಿಧಾನವಾಗಿ ಮನುಸ್ಮೃತಿಯೇ ಬೇಕು ಎಂದು ಹೇಳಿದ್ದರು. ಅಂತಹ ಹಿನ್ನೆಲೆಯವರಿಂದ ನಮಗೆ ಸಂವಿಧಾನದ ಪಾಠ ಬೇಕೇ ಸಂಸತ್ತು ಹೇಗೆ ಕಾರ್ಯನಿರ್ವಹಿಸುತ್ತಿದೆ ಎಂಬುದನ್ನು ನೀವು ನೋಡುತ್ತಿಲ್ಲವೇ ಎಂದು ಕೇಳಿದರು.

ಖರ್ಗೆ ಅವರ ಈ ಹೇಳಿಕೆ, ಸಂವಿಧಾನ ಮತ್ತು ನಕ್ಸಲ್ ವಾದ ವಿಷಯದಲ್ಲಿ ಪ್ರಧಾನಿ ಮೋದಿ ಕಾಂಗ್ರೆಸ್ ವಿರುದ್ಧ ಟೀಕೆ ಮಾಡಿದ ಬೆನ್ನಲ್ಲೇ ಬಂದಿದೆ. ರಿಪಬ್ಲಿಕ್ ಟಿವಿ ಸಮ್ಮಿಟ್ ನಲ್ಲಿ ಮಾತನಾಡಿದ್ದ ಪ್ರಧಾನಿ ಮೋದಿ, ನಕ್ಸಲರ ಹಿಂಸಾಚಾರದ ಬಗ್ಗೆ ಕಾಂಗ್ರೆಸ್ ನಿರ್ಲಕ್ಷ್ಯ ತೋರಿದೆ ಎಂದು ಆರೋಪಿಸಿದ್ದರು. ಇತ್ತೀಚೆಗೆ ಸದಾ ಸಂವಿಧಾನವನ್ನು ಕೈಯಲ್ಲಿ ಹಿಡಿದುಕೊಂಡು ತಿರುಗುವವರು, ಅಧಿಕಾರದಲ್ಲಿದ್ದಾಗ ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ಸಂವಿಧಾನದ ಬಗ್ಗೆ ಮಾತನಾಡಿದ ಕಾರಣಕ್ಕೆ ಜನರನ್ನು ಗುಂಡಿಕ್ಕಿ ಕೊಲ್ಲಲಾಗುತ್ತಿತ್ತು. ಆಗ ಅವರ ಕೈಯಲ್ಲಿ ಸಂವಿಧಾನ ಕಾಣಿಸಲಿಲ್ಲ; ಅವರ ಕೈಗಳು ನಡುಗುತ್ತಿದ್ದವು. ಆ ಭೀಕರ ಪರಿಸ್ಥಿತಿಯ ಬಗ್ಗೆ ಕಾಂಗ್ರೆಸ್ ಬಹುತೇಕ ನಿರ್ಲಕ್ಷ್ಯ ತೋರಿತು. 2014ರ ನಂತರ ನಾವು ರಾಷ್ಟ್ರ ಮೊದಲಿಗೆ ಎಂಬ ಮನೋಭಾವದೊಂದಿಗೆ ಪರಿಸ್ಥಿತಿಯನ್ನು ಬದಲಾಯಿಸುವ ಕಾರ್ಯ ಆರಂಭಿಸಿದೆವು ಎಂದು ಪ್ರಧಾನಿ ಮೋದಿ ಹೇಳಿದ್ದರು.ಸಂವಿಧಾನದ ಕುರಿತ ಟೀಕೆಗಳ ಜೊತೆಗೆ, ಪ್ರಿಯಾಂಕ್ ಖರ್ಗೆ ಅವರು ಆರ್‌ಎಸ್‌ಎಸ್ ವಿರುದ್ಧದ ತಮ್ಮ ಟೀಕೆಯನ್ನು ಮುಂದುವರಿಸಿ, ಸಂಘವು ಅಧಿಕೃತವಾಗಿ ನೋಂದಣಿ ಮಾಡಿಕೊಂಡು ತನ್ನ ದಾಖಲೆಗಳನ್ನು ಸಾರ್ವಜನಿಕವಾಗಿ ಮಂಡಿಸಬೇಕು ಎಂದು ಆಗ್ರಹಿಸಿದರು.

# ಶಿವಮೊಗ್ಗದಲ್ಲಿ ಹೈಕೋರ್ಟ್ ಸರ್ಕ್ಯೂಟ್ ಪೀಠ ಸ್ಥಾಪನೆ ರಾಜ್ಯಪಾಲರಿಗೆ ಸಂಸದ ಬಿ.ವೈ.ರಾಘವೇಂದ್ರ ಮನವಿ

**ಬೆಂಗಳೂರು, ಜೂ.23:** ಶಿವಮೊಗ್ಗದಲ್ಲಿ ಹೈಕೋರ್ಟ್ ಸರ್ಕ್ಯೂಟ್ ಪೀಠ ಸ್ಥಾಪನೆಗೆ ನಡೆಯುತ್ತಿರುವ ಹೋರಾಟಕ್ಕೆ ಮತ್ತಷ್ಟು ಶಕ್ತಿ ತುಂಬುವ ನಿಟ್ಟಿನಲ್ಲಿ, ವಿಶೇಷವಾಗಿ ಮಲೆನಾಡು ಮತ್ತು ಮಧ್ಯ ಕರ್ನಾಟಕದ ಜನರ ಪ್ರಯೋಜನಕ್ಕಾಗಿ ಶಿವಮೊಗ್ಗದಲ್ಲಿ ಪೀಠ ಸ್ಥಾಪನೆ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕಾರ್ಯಪ್ರವೃತ್ತವಾಗುವಂತೆ ತುರ್ತು ಸಲಹೆ ನೀಡುವಂತೆ ಕೋರಿ ಕರ್ನಾಟಕದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ.

ಸಂಸದ ರಾಘವೇಂದ್ರ ಅವರು ಇಂದು ಲೋಕ ಭವನದಲ್ಲಿ ಕರ್ನಾಟಕದ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ, ಶಿವಮೊಗ್ಗದಲ್ಲಿ ಹೈಕೋರ್ಟ್ ಸರ್ಕ್ಯೂಟ್ ಪೀಠ ಸ್ಥಾಪನೆಗೆ ಕೋರಿ ವಿವರವಾದ ಪ್ರಾತಿನಿಧ್ಯವನ್ನು ಸಲ್ಲಿಸಿದರು. ಭೇಟಿಯ ಸಂದರ್ಭದಲ್ಲಿ ಸಂಸದರು, ಶಿವಮೊಗ್ಗದ ಭೌಗೋಳಿಕ ಅನುಕೂಲ ಮತ್ತು ಮಧ್ಯ ಕರ್ನಾಟಕದ ಪ್ರಮುಖ ಆಡಳಿತ, ಶೈಕ್ಷಣಿಕ, ವಾಣಿಜ್ಯ ಮತ್ತು ಸಾರಿಗೆ ಕೇಂದ್ರವಾಗಿ ಜಿಲ್ಲೆ ಹೊರಹೊಮ್ಮಿರುವುದರ ಕಡೆಗೆ ರಾಜ್ಯಪಾಲರ ಗಮನ ಸೆಳೆದಿದ್ದಾರೆ.

ಶಿವಮೊಗ್ಗದಲ್ಲಿ ಸರ್ಕ್ಯೂಟ್ ಪೀಠ ಸ್ಥಾಪನೆಯಿಂದ ಶಿವಮೊಗ್ಗ ಜಿಲ್ಲೆಯ ಜನರಿಗೆ ಮಾತ್ರವಲ್ಲದೆ ಚಿಕ್ಕಮಗಳೂರು, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳು ಸೇರಿದಂತೆ ಮಲೆನಾಡು ಮತ್ತು ಮಧ್ಯ ಕರ್ನಾಟಕ ಪ್ರದೇಶದ ಜನರಿಗೆ ಹಾಗೂ ನ್ಯಾಯಿಕ ವಲಯಕ್ಕೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಅವರು ಒತ್ತಿ ತಿಳಿಸಿದ್ದಾರೆ, ಇದರಿಂದಾಗಿ ನ್ಯಾಯ ಪ್ರಾಪ್ತಿಯ ಜನರ ಹಕ್ಕು ಹೆಚ್ಚು ಸುಲಭವಾಗಿ, ಅನುಕೂಲಕರವಾಗಿ ಮತ್ತು ಪರಿಣಾಮಕಾರಿಯಾಗಿ ಸಾಧ್ಯವಾಗಲಿದೆ ಎಂದಿದ್ದಾರೆ. ಭೇಟಿಯ ಸಂದರ್ಭದಲ್ಲಿ ಬೆಂಗಳೂರಿನ ವಕೀಲರ ಸಂಘದ ಅಧ್ಯಕ್ಷರಾದ ವಿವೇಕ್ ಸುಬ್ಬಾರೆಡ್ಡಿ ಅವರು ಉಪಸ್ಥಿತರಿದ್ದರು ಮತ್ತು ಸಂಸದರ ಬೇಡಿಕೆಗೆ ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದರು.

ಶಿವಮೊಗ್ಗದಲ್ಲಿ ಹೈಕೋರ್ಟ್ ಸರ್ಕ್ಯೂಟ್ ಪೀಠ ಸ್ಥಾಪನೆಗೆ ನಡೆಯುತ್ತಿರುವ ಮಲೆನಾಡು ಮತ್ತು ಮಧ್ಯ ಕರ್ನಾಟಕದ ಜನರ ಹಕ್ಕೊತ್ತಾಯ, ಹೋರಾಟಗಳ ನಡುವೆ, ಸಂಸದ ರಾಘವೇಂದ್ರ ಅವರ ಈ ಭೇಟಿಯು ಪ್ರಾಮುಖ್ಯತೆ ಪಡೆದಿದೆ. ಜೊತೆಗೆ ಶಿವಮೊಗ್ಗದಲ್ಲಿ ಹೈಕೋರ್ಟ್ ಸರ್ಕ್ಯೂಟ್ ಪೀಠವನ್ನು ಸ್ಥಾಪಿಸಬೇಕೆಂದು ನಿರಂತರವಾಗಿ ಪ್ರತಿಪಾದಿಸುತ್ತಿರುವ ಕಾನೂನು ವಲಯ, ವಕೀಲರ ಸಂಘಗಳು ಮತ್ತು ವಿವಿಧ ನಾಗರಿಕ ಸಮಾಜ ಸಂಸ್ಥೆಗಳ ಸದಸ್ಯರ ಬೇಡಿಕೆಗೆ ಹೆಚ್ಚಿನ ಬಲ ಸಿಕ್ಕಂತಾಗಿದೆ.

ಪ್ರಸ್ತಾಪಿತ ಮಂಗಳೂರು ಪೀಠದೊಂದಿಗೆ ಶಿವಮೊಗ್ಗವನ್ನು ಜೋಡಿಸುವುದರಿಂದ ಮಲೆನಾಡು ಮತ್ತು ಮಧ್ಯ ಕರ್ನಾಟಕದ ದಾವೆದಾರರ ಹಿತಾಸಕ್ತಿ ಮತ್ತು ಅನುಕೂಲವನ್ನು ಸಮರ್ಪಕವಾಗಿ ಪೂರೈಸುವುದು ಸಾಧ್ಯವಿಲ್ಲ ಎಂದು ರಾಘವೇಂದ್ರ ಹೇಳಿದ್ದಾರೆ. ಶಿವಮೊಗ್ಗದಲ್ಲಿ ಹೈಕೋರ್ಟ್ ಸರ್ಕ್ಯೂಟ್ ಪೀಠದ ಸ್ಥಾಪನೆಯು ಆ ಭಾಗದ ಜನರ ನ್ಯಾಯಪ್ರಾಪ್ತಿಯ ಹಕ್ಕಿಗೆ ಗಮನಾರ್ಹ ಬಲ ನೀಡುತ್ತದೆ, ದಾವೆದಾರರ ವೆಚ್ಚದ ಹೊರೆಯನ್ನು ಕಡಿಮೆ ಮಾಡುತ್ತದೆ ಮತ್ತು ಮಲೆನಾಡು ಮತ್ತು ಮಧ್ಯ ಕರ್ನಾಟಕದ ಜನರ ದೀರ್ಘಕಾಲದ ಆಕಾಂಕ್ಷೆಯನ್ನು ಈಡೇರಿಸುತ್ತದೆ ಎಂದು ಸಂಸದ ಬಿ.ವೈ.ರಾಘವೇಂದ್ರ ಹೇಳಿದ್ದಾರೆ.



ಲಿಂಗೈಕ್ಯರಾಗಿರುವ ಕನಕಪುರದ ದೇಗುಲ ಮಠದ ಮಠಾಧೀಶರು, ಪರಮಪೂಜ್ಯ ಮುಮ್ಮಡಿ ನಿರ್ವಾಣ ಮಹಾಸ್ವಾಮೀಜಿ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ.ಸೋಮಣ್ಣ ಪೂಜ್ಯರ ಆತ್ಮಕ್ಕೆ ಭಗವಂತ ಸದ್ಗತಿ ಕರುಣಿಸಲಿ ಎಂದು ಪ್ರಾರ್ಥಿಸಿದರು.

# ಸುರೇಶ್‌ಕುಮಾರ್, ಸದಾನಂದಗೌಡ ವಿರುದ್ಧವೂ ಹೈಕಮಾಂಡ್ ಗರಂ

**ನವದೆಹಲಿ, ಜೂ. 23:** ಅಡ್ಡ ಮತದಾನ ಮಾಡಿದ ಶಾಸಕರನ್ನು ಪತ್ತೆಹಚ್ಚಲು ಧರ್ಮಸ್ಥಳದಲ್ಲಿ ಆಣೆ ಪ್ರಮಾಣ ಮಾಡಿಸಲು ನಿರ್ಧರಿಸಿದ್ದ ಪಕ್ಷದ ರಾಜ್ಯಾಧ್ಯಕ್ಷರ ತೀರ್ಮಾನದ ಬಗ್ಗೆ ಬಹಿರಂಗವಾಗಿಯೇ ಸಾಮಾಜಿಕ ಜಾಲತಾಣದಲ್ಲಿ ಅಸಮಾಧಾನ ಹೊರಹಾಕಿದ್ದ ಶಾಸಕ ಸುರೇಶ್‌ಕುಮಾರ್ ವಿರುದ್ಧ ವರಿಷ್ಠರು ಸಿಟ್ಟಾಗಿದ್ದಾರೆ ಎನ್ನಲಾಗಿದೆ. ಪಕ್ಷದ ಆಂತರಿಕ ವಿಚಾರವನ್ನು ಸಾಮಾಜಿಕ ಜಾಲತಾಣದಲ್ಲಿ ಬಹಿರಂಗವಾಗಿ ಹೇಳುವ ಬದಲು ಪಕ್ಷದ ಅಧ್ಯಕ್ಷರನ್ನು ಭೇಟಿಮಾಡಿ, ಇಲ್ಲವೇ ದೂರವಾಣಿಯಲ್ಲಿ ಮಾತನಾಡಿ ಧರ್ಮಸ್ಥಳದಲ್ಲಿ ಸಭೆ ಬೇಡ ಎಂದು ಹೇಳಬಹುದಿತ್ತು. ಅದು ಬಿಟ್ಟು ಫೇಸ್‌ಬುಕ್‌ನಲ್ಲಿ ಈ ಬಗ್ಗೆ ಅಸಮಾಧಾನ ಹೊರಹಾಕಿದ್ದು ಸರಿಯಲ್ಲ ಎಂದು ವರಿಷ್ಠರು ಶಾಸಕ ಸುರೇಶ್‌ಕುಮಾರ್ ವಿರುದ್ಧ ಗರಂ ಆಗಿದ್ದಾರೆ ಎನ್ನಲಾಗಿದೆ.

ಪರಿಷತ್ ಚುನಾವಣೆಯಲ್ಲಿ ಶಾಸಕರು ಅಡ್ಡ ಮತದಾನ ಮಾಡುವುದು ಮೊದಲೇ ಗೊತ್ತಿತ್ತು. ಕಾಂಗ್ರೆಸ್ ಮತ್ತು ಬಿಜೆಪಿಯ ಕೆಲ ನಾಯಕರು ಚುನಾವಣೆಗೂ ಮುನ್ನ ರಹಸ್ಯ ಸಭೆ ನಡೆಸಿದ್ದರು ಎಂದು ಹೇಳಿರುವ ಮಾಜಿ ಮುಖ್ಯಮಂತ್ರಿ ಸದಾನಂದಗೌಡ ವಿರುದ್ಧವೂ ವರಿಷ್ಠರು ಸಿಟ್ಟಾಗಿದ್ದಾರೆ. ಒಬ್ಬ ಮಾಜಿ ಮುಖ್ಯಮಂತ್ರಿಯಾಗಿ, ಕೋರ್ ಕಮಿಟಿ ಸದಸ್ಯರಾಗಿರುವ ಸದಾನಂದಗೌಡ ಅವರು ಅಡ್ಡ ಮತದಾನ ಆಗುವ ಮಾಹಿತಿ ಗೊತ್ತಿದ್ದರೂ ಅದನ್ನು ಪಕ್ಷದ ಗಮನಕ್ಕೆ ತರದೆ ಅಡ್ಡ ಮತದಾನವಾದ ಮೇಲೆ ತಮಗೆ ಮೊದಲೇ ಗೊತ್ತಿತ್ತು ಎಂದು ಹೇಳಿರುವುದು ವರಿಷ್ಠರ ಸಿಟ್ಟಿಗೆ ಕಾರಣವಾಗಿದೆ. ವಿಚಾರ ಗೊತ್ತಿದ್ದರೂ ಪಕ್ಷದ ನಾಯಕರ ಗಮನಕ್ಕೆ ತರದ ಸದಾನಂದಗೌಡರ ನಡವಳಿಕೆ ಬಗ್ಗೆಯೂ ವರಿಷ್ಠರು ಅಸಮಾಧಾನಗೊಂಡಿದ್ದಾರೆ ಎಂದು ಹೇಳಲಾಗಿದ್ದು, ಮುಂದೆ ಯಾರೇ ಪಕ್ಷದ ಆಂತರಿಕ ವಿಚಾರಗಳ ಬಗ್ಗೆ ಬಹಿರಂಗವಾಗಿ ಮಾತನಾಡಿದರೆ ಅವರ ವಿರುದ್ಧವೂ ಕ್ರಮ ಕೈಗೊಳ್ಳುವ ಎಚ್ಚರಿಕೆಯನ್ನು ವರಿಷ್ಠರು ನೀಡಲಿದ್ದಾರೆ ಎನ್ನಲಾಗಿದೆ.

# ಮಕ್ಕಳನ್ನೇ ಆಸ್ತಿಯನ್ನಾಗಿ ಬೆಳೆಸಿ: ಸಂಸದ ಡಾ.ಮಂಜುನಾಥ್ ಕರೆ

**ಚನ್ನಪಟ್ಟಣ,ಜೂ.23:** ಪಟ್ಟಣದ ಸರ್ಕಾರಿ ಬಾಲಕರ ಪದವಿಪೂರ್ವ ಕಾಲೇಜು ಮೈದಾನದಲ್ಲಿ ಶಿಕ್ಷಣ ಸಂಜೀವಿನಿ ಮರೀಗೌಡ ಚಾರಿಟಬಲ್ ಟ್ರಸ್ಟ್ ವತಿಯಿಂದ ಆಯೋಜಿಸಲಾದ ಬೃಹತ್ ಶೈಕ್ಷಣಿಕ ಪರಿಕರಗಳ ವಿತರಣಾ ಸಮಾರಂಭವು ಅತ್ಯಂತ ವಿಜೃಂಭಣೆಯಿಂದ ನಡೆಯಿತು. ಚನ್ನಪಟ್ಟಣ ತಾಲ್ಲೂಕಿನ ಒಂದನೇ ತರಗತಿಯಿಂದ ದ್ವಿತೀಯ ಪಿ.ಯು.ಸಿ.ವರೆಗಿನ ಸುಮಾರು 18 ಸಾವಿರ ಸರ್ಕಾರಿ ಶಾಲಾ ಮಕ್ಕಳಿಗೆ ಶಾಲಾ ಬ್ಯಾಗ್, ಪುಸ್ತಕಗಳು ಹಾಗೂ ಇತರೆ ಶೈಕ್ಷಣಿಕ ಪರಿಕರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜನಪ್ರಿಯ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಪದ್ಮಶ್ರೀ ಡಾ. ಸಿ. ಎನ್. ಮಂಜುನಾಥ್ ರವರು ಭಾಗವಹಿಸಿ, ಎಸ್‌ಎಸ್‌ಎಲ್ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪರಿಕರಗಳನ್ನು ವಿತರಿಸಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಕ್ಕಳನ್ನೇ ಆಸ್ತಿಯನ್ನಾಗಿ ಬೆಳೆಸಿ, ಶಿಕ್ಷಣ ಮತ್ತು ಸಂಸ್ಕೃತಿಯೇ ಬದುಕಿನ ರಕ್ಷಾಕವಚ ಎಂಬ ಅಮೂಲ್ಯ ಸಂದೇಶವನ್ನು ನೀಡುತ್ತಾ, ಶಿಕ್ಷಣವೇ ಸಮಾಜದ ಪರಿವರ್ತನೆಗೆ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಅತ್ಯಂತ ಪರಿಣಾಮಕಾರಿ ಸಾಧನವಾಗಿದೆ ಎಂದು ತಿಳಿಸಿದರು.


ಕಾರ್ಯಕ್ರಮಕ್ಕೆ ಪರಮಪೂಜ್ಯ ಜಗದ್ಗುರು ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಯವರು, ಪೀಠಾಧ್ಯಕ್ಷರು, ಆದಿಚುಂಚನಗಿರಿ ಮಹಾಸಂಸ್ಥಾನ ಮಠ, ಪರಮಪೂಜ್ಯ ಜಗದ್ಗುರು ಡಾ. ನಂಜಾವಧೂತ ಮಹಾಸ್ವಾಮೀಜಿಯವರು, ಪೀಠಾಧ್ಯಕ್ಷರು, ಸ್ಪಟಿಕಪುರಿ ಮಹಾಸಂಸ್ಥಾನ, ಕ್ಷೇತ್ರ ಪಟನಾಯಕನಹಳ್ಳಿ, ಶಿರಾ ತಾಲ್ಲೂಕು, ಅನ್ನದಾನೇಶ್ವರನಾಥ ಸ್ವಾಮೀಜಿಯವರು, ಆದಿಚುಂಚನಗಿರಿ ಶಾಖಾ ಮಠ, ರಾಮನಗರ ಹಾಗೂ ಡಾ. ಮಲ್ಲೇಶ್ ಗುರೂಜಿಯವರು, ಚಾಮುಂಡೇಶ್ವರಿ ದೇವಸ್ಥಾನ, ಗೌಡಗೆರೆ, ಚನ್ನಪಟ್ಟಣ ತಾಲ್ಲೂಕು ಅವರುಗಳ ದಿವ್ಯ ಸಾನಿಧ್ಯ ವಹಿಸಿದ್ದರು.




ಈ ಸಂದರ್ಭದಲ್ಲಿ ಮರೀಗೌಡ ಚಾರಿಟಬಲ್ ಟ್ರಸ್ಟ್ ಸಂಸ್ಥಾಪಕರಾದ ಹಾಗೂ ಖ್ಯಾತ ಸಮಾಜಸೇವಕರಾದ ಎಚ್. ಎಂ.ನಾಗೇಶ್ ರವರ ಶಿಕ್ಷಣ ಸೇವೆಯನ್ನು ಸಂಸದರು ಮುಕ್ತಕಂಠದಿಂದ ಪ್ರಶಂಸಿಸಿದರು.

ಗ್ರಾಮೀಣ ಭಾಗದ ಸಾವಿರಾರು ಮಕ್ಕಳ ಶೈಕ್ಷಣಿಕ ಉನ್ನತಿಗಾಗಿ ಅವರು ಕೈಗೊಂಡಿರುವ ಕಾರ್ಯಗಳು ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಕಾರಕ ಬದಲಾವಣೆಗೆ ಕಾರಣವಾಗಿದ್ದು, ಸಮಾಜಕ್ಕೆ ಮಾದರಿಯಾಗಿದೆ ಎಂದು ಶ್ಲಾಘಿಸಿದರು. ಶಿಕ್ಷಣದ ಮೂಲಕ ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಕೈಜೋಡಿಸುವ ಉದ್ದೇಶದಿಂದ ನಡೆದ ಈ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಹೊಸ ಆತ್ಮವಿಶ್ವಾಸ ಮತ್ತು ಉತ್ಸಾಹವನ್ನು ಮೂಡಿಸುವ ಮೂಲಕ ಯಶಸ್ವಿಯಾಗಿ ನೆರವೇರಿತು.

ಕಾರ್ಯಕ್ರಮದಲ್ಲಿ ಬೆಂಗಳೂರು ದಕ್ಷಿಣ ಜೆಡಿಎಸ್ ಜಿಲ್ಲಾಧ್ಯಕ್ಷ ಜಯಮುತ್ತು ರವರು, ಬಿಜೆಪಿ ಜಿಲ್ಲಾಧ್ಯಕ್ಷರಾದ ಆನಂದ್ ಸ್ವಾಮಿ ರವರು, ಚನ್ನಪಟ್ಟಣ ತಾಲ್ಲೂಕು ಜೆಡಿಎಸ್ ಅಧ್ಯಕ್ಷನಾಗರಾಜು, ಬಿಜೆಪಿ ತಾಲ್ಲೂಕು ಅಧ್ಯಕ್ಷ ರವೀಶ್, ಚೇತನ್ ರವರು ಸೇರಿದಂತೆ ಹಲವು ಗಣ್ಯರು, ಜನಪ್ರತಿನಿಧಿಗಳು, ಮುಖಂಡರು, ಶಿಕ್ಷಣ ಪ್ರೇಮಿಗಳು ಹಾಗೂ ಸಾವಿರಾರು ವಿದ್ಯಾರ್ಥಿಗಳು ಮತ್ತು ಪೋಷಕರು ಉಪಸ್ಥಿತರಿದ್ದರು.



ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ.ಸಿ.ಎನ್. ಮಂಜುನಾಥ್ ಕನಕಪುರದ ದೇಗುಲ ಮಠಕ್ಕೆ ಭೇಟಿನೀಡಿ ಪೂಜ್ಯ ಶ್ರೀಗಳ ಅಂತಿಮ ದರ್ಶನ ಪಡೆದು ಭಾವಪೂರ್ಣ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಶ್ರೀಗಳ ಆಧ್ಯಾತ್ಮಿಕ ಸೇವೆ, ಸಮಾಜಮುಖಿ ಕಾರ್ಯಗಳು ಹಾಗೂ ಜನಮಾನಸದಲ್ಲಿ ಅವರು ಮೂಡಿಸಿರುವ ಅಚಲ ಪ್ರಭಾವವನ್ನು ಸ್ಮರಿಸಿ ಗೌರವ ನಮನ ಅರ್ಪಿಸಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಮುಮ್ಮಡಿ ನಿರ್ವಾಣ ಸ್ವಾಮೀಜಿಗೆ ಸಿಎಂ ಶಿವಕುಮಾರ್ ಅಂತಿಮ ನಮನ



### ನಮ್ಮ ಕುಟುಂಬಕ್ಕೂ ಶ್ರೀಮಠಕ್ಕೂ ನೂರಾರು ವರ್ಷಗಳ ಒಡನಾಟ

:ಶ್ರೀಮಠ ಹಾಗೂ ನಮ್ಮ ಕುಟುಂಬಕ್ಕೆ ನೂರಾರು ವರ್ಷಗಳ ಭವ್ಯ ಅವಿನಾಭಾವ ಒಡನಾಡವಿದೆ. ನಮ್ಮ ಅಜ್ಜನ ಕಾಲದಿಂದಲೂ ಮನೆಯಲ್ಲಿ ಯಾವುದೇ ಕಾರ್ಯ ನಡೆದರೂ ಇವರಿಗಿಂತ ಮೊದಲು ಇದ್ದಂತಹ ಹಿರಿಯ ಸ್ವಾಮೀಜಿಯವರು ಬಂದು ಆಶೀರ್ವಾದ ಮಾಡುತ್ತಿದ್ದರು. ಯಾವುದೇ ಶುಭಕಾರ್ಯಗಳಿದ್ದರೂ ನಮಗೆ ಅವರ ಅಭಯ ಹಸ್ತ ಇದ್ದೇ ಇರುತ್ತಿತ್ತು. ಪ್ರತಿಯೊಂದು ಸಂದರ್ಭದಲ್ಲಿಯೂ ಅವರು ನಮಗೆ ಮಾರ್ಗದರ್ಶನ ಮಾಡುತ್ತಿದ್ದರು. ಅವರ ಚಿಂತನೆಗಳು ನಮಗೆ ದಾರಿದೀಪವಾಗಿದ್ದವು ಎಂದರು.

**ಕನಕಪುರ, ಜೂ.23:** ಸೋಮವಾರ ಲಿಂಗೈಕ್ಯರಾದ ಕನಕಪುರ ದೇಗುಲ ಮಠದ ಶ್ರೀಮುಮ್ಮಡಿ ನಿರ್ವಾಣ ಸ್ವಾಮೀಜಿಗಳ ಪಾರ್ಥಿವ ಶರೀರಕ್ಕೆ ಸಿಎಂ ಡಿ.ಕೆ. ಶಿವಕುಮಾರ್ ಅವರು ದೇಗುಲ ಮಠದ ಆವರಣದಲ್ಲಿ ಮಂಗಳವಾರ ಅಂತಿಮ ನಮನ ಸಲ್ಲಿಸಿದರು.

ಮುಮ್ಮಡಿ ನಿರ್ವಾಣ ಸ್ವಾಮೀಜಿಗಳ ಪಾರ್ಥಿವ ಶರೀರಕ್ಕೆ ಪುಷ್ಪನಮನ ಸಲ್ಲಿಸಿದ ಮುಖ್ಯಮಂತ್ರಿಯವರು ನಂತರ ಪಾದುಕೆಗಳಿಗೆ ನಮಸ್ಕರಿಸಿದರು. ತದನಂತರ ಪೊಲೀಸರು ಗಾಳಿಯಲ್ಲಿ ಮೂರು ಸುತ್ತು ಗುಂಡು ಹಾರಿಸಿ, ಗೌರವ ಸಲ್ಲಿಸಿದರು. ಬಳಿಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ರಾಷ್ಟ್ರಧ್ವಜವನ್ನು ದೇಗುಲಮಠದ ಕಿರಿಯ ಸ್ವಾಮೀಜಿಗಳಿಗೆ ಹಸ್ತಾಂತರಿಸಿದರು.

**ಚುನಾವಣಾ ಖರ್ಚಿಗೆ ಆಶೀರ್ವಾದ ರೂಪದಲ್ಲಿ ಹಣ ನೀಡಿದ್ದರು:** ಮಠದ ಆವರಣದಲ್ಲಿ ನೆರೆದಿದ್ದ ಮಠದ ಭಕ್ತರನ್ನು ಉದ್ದೇಶಿಸಿ ಮಾತನಾಡಿದ ಹಾಗೂ ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಸಿಎಂ ಡಿ.ಕೆ.ಶಿವಕುಮಾರ್ ಅವರು, ಶ್ರೀಗಳು ಅತ್ಯಂತ ಕಡಿಮೆ ಮಾತನಾಡುತ್ತಿದ್ದರು. ಆದರೆ ಮೌನವಾಗಿಯೇ ಅಚ್ಚುಕಟ್ಟಾಗಿ ಕೆಲಸಗಳನ್ನು ನೆರವೇರಿಸುತ್ತಿದ್ದರು. ಚುನಾವಣೆ ಮುಂಚಿತವಾಗಿ ಅವರ ಆಶೀರ್ವಾದ ಪಡೆಯಲು ಹೋದ ಸಂದರ್ಭದಲ್ಲಿ ಅನಾರೋಗ್ಯದಿಂದ ಹಾಸಿಗೆಯಲ್ಲಿ ಮಲಗಿದ್ದರೂ ಸಹ ಹಣದ ಕಟ್ಟನ್ನು ನೀಡಿ ಇದು ಚುನಾವಣಾ ಖರ್ಚಿಗೆ ಸಣ್ಣ ಕೊಡುಗೆ ಎಂದು ಹೇಳಿ ಆಶೀರ್ವಾದ ಮಾಡಿದ್ದರು. ಅವರಿಗೆ ಭವಿಷ್ಯದಲ್ಲಿ ಏನಾಗುತ್ತದೆ ಎಂದು ತಿಳಿದಿತ್ತು ಎಂದರು.

### ಒಡೆದ ದುಃಖದ ಕಟ್ಟೆ; ಬಿಕ್ಕಿದ ಮುಖ್ಯಮಂತ್ರಿ

ಕಿರಿಯ ಸ್ವಾಮೀಜಿಗಳಿಗೆ ಧ್ವಜ ಹಸ್ತಾಂತರ ಮಾಡುವ ವೇಳೆ ಭಾವುಕರಾದ ಸಿಎಂ ಶಿವಕುಮಾರ್ ಅವರು ಬಿಕ್ಕಿ, ಬಿಕ್ಕಿ ಅಳುತ್ತಲೇ ರಾಷ್ಟ್ರಧ್ವಜವನ್ನು ನೀಡಿದರು. ನಂತರ ಲಿಂಗೈಕ್ಯ ಮಹಾಸ್ವಾಮಿಗಳ ಪಾದುಕೆಗಳಿಗೆ ನಮಸ್ಕರಿಸಿ ಕಿರಿಯ ಶ್ರೀಗಳಿಗೆ ನಮಿಸಿದರು. ಇದು ಶ್ರೀಗಳ ಅಂತಿಮ ದರ್ಶನಕ್ಕೆ ನೆರೆದಿದ್ದ ಮಠದ ಭಕ್ತಾಧಿಗಳ ಕಣ್ಣುಗಳನ್ನು ತೇವಗೊಳಿಸಿತು. ನಂತರ ಶ್ರೀಗಳ ಗದ್ದುಗೆ ಸ್ಥಳಕ್ಕೆ ತೆರಳಿ ವಿಭೂತಿ ಗಟ್ಟಿಗಳನ್ನು ಅರ್ಪಿಸಿ ಪೂಜೆ ಸಲ್ಲಿಸಿದರು. ಭಾವುಕರಾದ ಬಗ್ಗೆ ಮಾಧ್ಯಮಗಳು ಕೇಳಿದಾಗ, ಭಕ್ತನಿಗೂ ಹಾಗೂ ಭಗವಂತನಿಗೂ ಇರುವ ಸಂಬಂಧ ಇದು" ಎಂದರು.

ನನಗೆ ಕೆಂಪೇಗೌಡ ಎಂದು ನಾಮಕರಣ ಮಾಡಿದ್ದರೂ ಶಿವಗಿರಿ ಕ್ಷೇತ್ರದ ಅನುಗ್ರಹ ಇದ್ದ ಕಾರಣಕ್ಕೆ ಶಿವಕುಮಾರ್ ಎಂದು ನಾಮಕರಣ ಮಾಡಲಾಯಿತು ಎಂದು ನಮ್ಮ ತಾಯಿ ಹೇಳುತ್ತಿರುತ್ತಾರೆ. ನನಗೂ ಮಠ-ಮಾನ್ಯಗಳಿಗೂ ಅವಿನಾಭಾವ ಸಂಬಂಧವಿದೆ. ಮನೆ ಹುಷಾರು, ಮಠ ಹುಷಾರು ಎಂದು ಹಿರಿಯರು ಹೇಳಿದ್ದಾರೆ. ಅದರಂತೆ ನಮ್ಮ ಮಠಗಳನ್ನೂ ನಾವು ಉಳಿಸಿ ಬೆಳೆಸಬೇಕು. ಸಾವಿಗೆ ಗಳಿಗೆಯಿಲ್ಲ, ಸಾವು ಯಾರನ್ನೂ ಕೇಳಿ ಬರುವುದಿಲ್ಲ, ಅತಿಥಿಗಳಿಗೆ ನಾಳೆ ಬನ್ನಿ ಎನ್ನಬಹುದು. ಆದರೆ ಸಾವಿಗೆ ನಾಳೆ ಬಾ ಎನ್ನಲು ಸಾಧ್ಯವಿಲ್ಲ. ಆದರೆ ನಿರ್ವಾಣ ಸ್ವಾಮಿಗಳ ಆದರ್ಶ ಸದಾ ಶಾಶ್ವತ ಎಂದರು.

ನಮ್ಮ ಜಿಲ್ಲೆಗೆ ಆಧ್ಯಾತ್ಮಿಕವಾದ ದೀಪ. ಅನ್ನ, ಅಕ್ಷರ, ಆಶ್ರಯವನ್ನು ಸರ್ಕಾರ ನೀಡುವುದಕ್ಕಿಂತ ಮೊದಲು ಇವರು ಹಾಗೂ ಸಿದ್ದಗಂಗಾ ಮಠ ನೀಡಿದ್ದವು. 86 ವರ್ಷ ಬಾಳಿ ಬದುಕಿ ಮಾರ್ಗದರ್ಶನ ನೀಡಿದವರು. 700 ವರ್ಷಗಳಿಂದ ಜಾತಿ, ಧರ್ಮ ಮಾಡದೇ ಮೈಸೂರು ಮಹಾರಾಜರ ಕಾಲದಿಂದಲೂ ಈ ಮಠ ಅಚಲವಾಗಿ ನಿಂತಿದೆ. ಕರಿಯಪ್ಪನವರ ವಿದ್ಯಾಸಂಸ್ಥೆಗೂ ಮೊದಲು ಅಕ್ಷರ ದಾನ ಮಾಡಿದವರು. ದೊಡ್ಡ ಅಧಿಕಾರಿಗಳು, ಜನಪ್ರತಿನಿಧಿಗಳು, ಉದ್ಯಮಿಗಳು ಈ ಮಠದಲ್ಲಿ ಕಲಿತಿದ್ದಾರೆ. ಈ ಮಠದಲ್ಲಿ ಕಲಿತವರು ಪ್ರಪಂಚದಾದ್ಯಂತ ಹರಡಿಕೊಂಡಿದ್ದಾರೆ ಎಂದರು.

ಈ ಮಠದ ಆಶೀರ್ವಾದಿಂದ ಬೆಳೆದವರು ಎಲ್ಲರೂ ಒಟ್ಟಾಗಿ ಇನ್ನೊಮ್ಮೆ ಸೇರಿ ಸಮಾಜಮುಖಿ ಕೆಲಸಗಳನ್ನು ಮುಂದುವರೆಸಿಕೊಂಡು ಹೋಗಲು ಚಿಂತನೆ ನಡೆಸಲಾಗುವುದು. ಹೊರ ಜಿಲ್ಲೆಗಳು, ತಮಿಳುನಾಡಿನಿಂದಲೂ ಭಕ್ತಾಧಿಗಳು ಬಂದಿದ್ದಾರೆ ಎಂದರು.

ಸುತ್ತೂರು ಶ್ರೀಗಳು ಈ ಮಠಕ್ಕೆ ಯಾವಾಗಲೂ ಆಧಾರಸ್ತಂಭವಾಗಿದ್ದರು. ಸಿದ್ದಗಂಗಾ ಮಠಕ್ಕೆ ಎಷ್ಟು ಹಿರಿತನ ಇದೆಯೋ ಅಷ್ಟೇ ಹಿರಿತನ ಹಳೇ ಮೈಸೂರು ಭಾಗದ ಈ ಮಠಕ್ಕೂ ಇದೆ. ಮರಣ ದೇಹಕ್ಕೆ ಹೊರತು ಜಂಗಮಕ್ಕಲ್ಲ. ಬಸವಣ್ಣವರ ತತ್ವ, ಚಿಂತನೆ ಆದರ್ಶಗಳನ್ನು ಮುನ್ನಡೆಸುತ್ತಿದ್ದರು. ಅಕ್ಷರ, ಅನ್ನ ದಾಸೋಹ ನಡೆಸುತ್ತಿದ್ದರು. ಕಿರಿಯ ಶ್ರೀಗಳ ಮಾರ್ಗದರ್ಶನದಂತೆ ಈ ಮಠದ ಸೇವೆಯನ್ನು ನಾವು ಮುಂದುವರಿಸುತ್ತೇವೆ. ಕನಕಪುರದ ಕಣ ಕಣದಲ್ಲೂ ದೇಗುಲ ಮಠವಿದೆ ಎಂದರು.

ನಿರ್ವಾಣ ಮಹಾಸ್ವಾಮಿಯವರಿಗೆ ಸರ್ಕಾರಿ ಗೌರವ ಸಲ್ಲಿಸುವ ಗೌರವ ಸಿಕ್ಕಿದ್ದು ನನ್ನ ಭಾಗ್ಯ. ಇದು ಭಾಗ್ಯ, ಇದು ಭಾಗ್ಯ ಇದು ಭಾಗ್ಯವಯ್ಯಾ ಪದುಮನಾಭನ ಪಾದಭಜನೆ ಪರಮ ಸುಖವಯ್ಯಾ. ನಾವೆಲ್ಲರೂ ಹಾಗೂ ಕಿರಿಯ ಶ್ರೀಗಳು ಸೇರಿ ಮಠದ ತತ್ವ, ಪರಂಪರೆಯನ್ನು ಉಳಿಸಿಕೊಂಡು ಹೋಗುತ್ತೇವೆ. ಇದು ನಮ್ಮ ಮಠ ಎಂದು ಹೇಳಿದರು.

# ಟೌನ್‌ಶಿಪ್ ಸಂತ್ರಸ್ತರನ್ನು ಹೊರಗಿಟ್ಟು ಸಭೆ ನಡೆಸುವುದರಿಂದ ಉಪಯೋಗವಿಲ್ಲ:ಎಚ್‌ಡಿಕೆ

- ರೈತರು, ಗ್ರಾಮಸ್ಥರು ಮತ್ತು ಪಾಲುದಾರರ ಸಮ್ಮುಖದಲ್ಲೇ ಚರ್ಚಿಸೋಣ
- ಸಿಎಂ ಪತ್ರಾಹ್ವಾನಕ್ಕೆ ಪತ್ರದ ಮೂಲಕವೇ ಎಚ್‌ಡಿಕೆ ಪ್ರತ್ಯುತ್ತರ



**ಬೆಂಗಳೂರು, ಜೂ.23:** ಬಿಡದಿ ಟೌನ್‌ಶಿಪ್ ಯೋಜನೆ ಸಂಬಂಧ ಚರ್ಚಿಸಲು ವೇದಿಕೆ ಸಿದ್ಧಗೊಳಿಸಲು ಸಿಎಂ ಡಿ.ಕೆ.ಶಿವಕುಮಾರ್ ಮುಂದಾಗಿದ್ದಾರೆ. ವಿಧಾನಸೌಧದ ತಮ್ಮ ಕಚೇರಿಗೆ ನಿಮ್ಮವರನ್ನು ಕರೆದುಕೊಂಡು ಬನ್ನಿ ಎಂದು ಆಹ್ವಾನ ನೀಡಿ ಸಿಎಂ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಪತ್ರ ಬರೆದಿದ್ದರು. ಇದಕ್ಕೆ ಪತ್ರದ ಮೂಲಕವೇ ಪ್ರತಿಕ್ರಿಯೆ ನೀಡಿರುವ ಹೆಚ್.ಡಿ.ಕುಮಾರಸ್ವಾಮಿ, ಈ ಯೋಜನೆ ಬಗ್ಗೆ ವಿಧಾನಸೌಧದಲ್ಲಿ ಚರ್ಚೆ ಉಪಯೋಗವಿಲ್ಲ. ಬಾಧಿತ ರೈತರ ಭಾಗದಲ್ಲಿಯೇ ರೈತರ ಜೊತೆಯಲ್ಲಿಯೇ ಚರ್ಚೆ ನಡೆಸೋಣ, ಇದಕ್ಕೆ ನಾನು ಸಿದ್ಧ ಎಂದು ಪ್ರತಿ ಸವಾಲು ಹಾಕಿದ್ದಾರೆ.

ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದಂತೆ ಚರ್ಚಿಸಲು ಜೂ.26ರಂದು ಬೆಳಗ್ಗೆ 11 ಗಂಟೆಗೆ ವಿಧಾನಸೌಧಕ್ಕೆ ಬರುವಂತೆ ಕೋರುತ್ತೇನೆ ಎಂದು ಎಚ್‌ಡಿಕೆಗೆ ಪತ್ರ ಬರೆದಿದ್ದಾರೆ. ಈ ಸಂಬಂಧ ಸಿಎಂಗೆ ಮರುಪತ್ರ ಬರೆದಿರುವ ಎಚ್‌ಡಿಕೆ, ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದ ಚರ್ಚೆಗೆ ಆಹ್ವಾನಿಸಿದ್ದಕ್ಕೆ ಧನ್ಯವಾದಗಳು. ಆದರೆ, ಬಿಡದಿ ಸಮಗ್ರ ಉಪನಗರ ಯೋಜನೆ ಅನುಷ್ಠಾನದಿಂದ ರಾಮನಗರ ತಾಲೂಕಿನ ಬಿಡದಿ ಹೋಬಳಿಯ ಎಂಟು ಗ್ರಾಮಗಳು ಮತ್ತು ಹಾರೋಹಳ್ಳಿ ತಾಲೂಕಿನ ಒಂದು ಗ್ರಾಮದ ರೈತರು, ಗ್ರಾಮಸ್ಥರು ಮತ್ತು ಪಾಲುದಾರರು ಹಲವಾರು ಸಮಸ್ಯೆ ಮತ್ತು ಸಂಕಷ್ಟಗಳನ್ನು ಎದುರಿಸುತ್ತಿದ್ದಾರೆ. ಅಲ್ಲದೇ, ಈ ಭಾಗದಲ್ಲಿರುವ ಅಪಾರ ಪರಿಸರ ಸಂಪತ್ತಿಗೆ ಹಾನಿಯಾಗುತ್ತದೆ. ಈ ಹಿನ್ನೆಲೆಯಲ್ಲಿ ತಾವು ಪ್ರಸ್ತಾಪಿಸಿರುವ ಸಭೆಯನ್ನು ರಾಮನಗರ ಜಿಲ್ಲೆಯ ಬಿಡದಿ ಅಥವಾ ಬಾಧಿತ ಪ್ರದೇಶವಾದ ಭೈರಮಂಗಲದ ಯಾವುದಾದರೂ ಸೂಕ್ತ ಸಾರ್ವಜನಿಕ ಸ್ಥಳದಲ್ಲಿ ಸಭೆ ಕರೆಯುವುದು ಸಮಂಜಸ ಎನಿಸುತ್ತದೆ. ಈ ಮೇಲೆ ಸೂಚಿಸಿದ ಸ್ಥಳಗಳಲ್ಲಿ ಬಿಡದಿ ಸಮಗ್ರ ಉಪನಗರ ಯೋಜನೆಯಿಂದ ಸಂತ್ರಸ್ತರಾಗಿರುವ ರೈತರು, ಗ್ರಾಮಸ್ಥರು, ಕೃಷಿ ಕಾರ್ಮಿಕರು, ಹೈನುಗಾರಿಕೆ ಉದ್ಯಮದಲ್ಲಿರುವ ರೈತ ಮಹಿಳೆಯರು, ಸಣ್ಣ ವ್ಯಾಪಾರಸ್ಥರು, ಉದ್ಯಮಿಗಳು ಹಾಗೂ ಸಂತ್ರಸ್ತ ಇತರ ಪಾಲುದಾರರನ್ನು ಭಾಗವಹಿಸಲು ಅವಕಾಶ ನೀಡಿದಲ್ಲಿ ಈ ಸಭೆಯಲ್ಲಿ ಮುಕ್ತ ಮನಸ್ಸಿನ ಚರ್ಚೆ ನಡೆಸಿ, ಬಾಧಿತ ವರ್ಗದ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಅವಕಾಶವಾಗುತ್ತದೆ ಎನ್ನುವುದು ನನ್ನ ಸ್ಪಷ್ಟ ಅಭಿಪ್ರಾಯ ಮತ್ತು ನಿಲುವುವಾಗಿದೆ ಎಂದು ಪತ್ರದಲ್ಲಿ ಕುಮಾರಸ್ವಾಮಿ ಉಲ್ಲೇಖಿಸಿದ್ದಾರೆ.

ಈ ಯೋಜನೆಯ ರಚನೆ ಮತ್ತು ಅನುಷ್ಠಾನದಲ್ಲಿ ವೈಯಕ್ತಿಕ ಹಿತಾಸಕ್ತಿ ಇಲ್ಲ ಎನ್ನುವುದನ್ನು ಈ ಪತ್ರದ ಮೂಲಕ ಸ್ಪಷ್ಟಪಡಿಸುತ್ತಿದ್ದೇನೆ. ವಿಧಾನಸೌಧದಲ್ಲಿ ನಡೆಸಲು ಉದ್ದೇಶಿಸಿರುವ ಸಭೆಯಲ್ಲಿ ಬಾಧಿತ ರೈತ ವರ್ಗ, ಗ್ರಾಮಸ್ಥರು ಮತ್ತು ಪಾಲುದಾರರನ್ನು ಹೊರಗೆ ಇಟ್ಟು ಸಭೆ ನಡೆಸುವುದರಿಂದ ಸಭೆ ಫಲಪ್ರದವಾಗುವುದಿಲ್ಲ. ತಾವು ನಿಗದಿಪಡಿಸಿದ 26 ನನಗೆ ಪೂರ್ವ ನಿಯೋಜಿತ ಕಾರ್ಯಕ್ರಮಗಳು ಇರುವುದರಿಂದ ಬ್ಯುಸಿಯಾಗಿದ್ದೇನೆ. ಈ ಉದ್ದೇಶಿತ ಸಭೆಯನ್ನು 27-ರಂದು ಅಥವಾ ನಂತರ ಸೂಕ್ತದಿನ ಬಿಡದಿ ಅಥವಾ ಭೈರಮಂಗಲದ ಸೂಕ್ತ ಸ್ಥಳದಲ್ಲಿ ಆಯೋಜಿಸಿ, ಬಾಧಿತ ವರ್ಗದ ಜನರನ್ನು ಆಹ್ವಾನಿಸಿ ಸಭೆ ನಡೆಸಬೇಕೆಂದು ಕೋರುತ್ತೇನೆ' ಎಂದು ಎಚ್.ಡಿ. ಕುಮಾರಸ್ವಾಮಿ ಪತ್ರದಲ್ಲಿ ತಿಳಿಸಿದ್ದಾರೆ.

# ಬಿಡದಿ ಟೌನ್‌ಶಿಪ್: ಸಕಾರಾತ್ಮಕ ಸಲಹೆಗೆ ಸ್ವಾಗತ, ಟೀಕೆ ಯಾಕೆ?

**ಬೆಂಗಳೂರು, ಜೂ.23:** ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಸಕಾರಾತ್ಮಕ ಸಲಹೆ ಓಕೆ. ಆದರೆ ಕೇಂದ್ರ ಸಚಿವ ಕುಮಾರಸ್ವಾಮಿಯಿಂದ ಟೀಕೆ ಯಾಕೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಪ್ರಶ್ನಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಸರ್ಕಾರಕ್ಕೆ ರೈತರ ಒಕ್ಕಲೆಬ್ಬಿಸುವ ಯೋಚನೆ ಇಲ್ಲ. ರೈತರ ಅಹವಾಲುಗಳನ್ನು ಆಲಿಸಿ, ಸಮಾಧಾನ ಪಡಿಸಲು, ಸಂಧಾನದ ಮೂಲಕ ಯೋಜನೆಯನ್ನು ಜಾರಿ ಮಾಡಲು ಸರ್ಕಾರ ಪ್ರಯತ್ನ ಮಾಡುತ್ತಿದೆ ಎಂದರು.

ಕುಮಾರಸ್ವಾಮಿ ಅವರು ಕಾಂಗ್ರೆಸ್ ನಾಯಕರ ಹಳೆಯ ಹೇಳಿಕೆಗಳನ್ನು ತೋರಿಸಿ, ರಾಜಕೀಯ ಮಾಡಲು ಹೊರಟಿದ್ದಾರೆ. ಅದನ್ನು ಬಿಟ್ಟು ಬಂದು ಅವರು ಸಲಹೆ ನೀಡಲಿ. ಆಗ ನಾವು ಸಹ ಅವರ ಅನುಮಾನಗಳಿಗೆ, ಆರೋಪಗಳಿಗೆ ಸೂಕ್ತ ಉತ್ತರ ನೀಡುತ್ತೇವೆ. ಈ ತೀರ್ಮಾನ ಕೈಗೊಳ್ಳಲು ಕಾರಣವೇನು ಎಂಬುದನ್ನು ಸರ್ಕಾರ ಕೊಡಲು ಸಿದ್ಧವಿದೆ. ಆದರೆ ಕುಮಾರಸ್ವಾಮಿ ಅವರು ಬೀದಿಗಿಳಿದು ಹೋರಾಟ ಮಾಡುತ್ತೇವೆ ಎಂದರೆ ರಾಜಕೀಯ ಕಾರಣಕ್ಕಾಗಿ ಮಾಡುತ್ತೀರಿ ಎಂಬುದನ್ನು ತೋರಿಸುತ್ತದೆ.




- ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿಗೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಪ್ರಶ್ನೆ

ಬಿಡದಿ ಟೌನ್‌ಶಿಪ್ ಯೋಜನೆ ಬಗ್ಗೆ ಈಗಾಗಲೇ ಸಂಪುಟದಲ್ಲಿ ಚರ್ಚೆ ಆಗಿದೆ, ಬಿಡಿಎ, ಹುಡ್ಕೊ ಇವುಗಳಿಂದ ಯಾವ ರೀತಿ ಅನುದಾನ ಒದಗಿಸಬೇಕು ಎಂಬ ಬಗ್ಗೆ ವಿಸ್ತೃತವಾಗಿ ಚರ್ಚೆ ಆಗಿದೆ. ಆದರೆ ಈ ಯೋಜನೆ ಈಗ ರಾಜಕೀಯ ತಿರುವು ಪಡೆಯುತ್ತಿರುವುದರಿಂದ ಇದನ್ನು ರಾಜಕೀಯದಿಂದ ದೂರ ಇಟ್ಟು ಯಾವ ರೀತಿ ಯೋಜನೆಯನ್ನು ಜಾರಿ ಮಾಡಬೇಕು ಎನ್ನುವ ಬಗ್ಗೆ ಸರ್ಕಾರ, ಮುಖ್ಯಮಂತ್ರಿಗಳು ಎಲ್ಲರೂ ಸೇರಿ ತೀರ್ಮಾನ ಮಾಡುತ್ತೇವೆ ಎಂದು ಪರಮೇಶ್ವರ್ ತಿಳಿಸಿದರು.

**ರೈತರ ಒಪ್ಪಿಗೆ ಮೇಲೆ ಯೋಜನೆ ಜಾರಿಗೆ ಯತ್ನ:** ರೈತರನ್ನು ಒಕ್ಕಲೆಬ್ಬಿಸುವುದು ಬೇಡ ಎನ್ನುವುದು ನಮ್ಮ ಉದ್ದೇಶವೂ ಆಗಿದೆ. ರೈತರನ್ನು ವಿಶ್ವಾಸಕ್ಕೆ ತೆಗೆದುಕೊಂಡು, ಅವರ ಪೂರ್ಣ ಒಪ್ಪಿಗೆಯ ಮೇಲೆ ಯೋಜನೆಯನ್ನು ಮಾಡಬೇಕು ಎಂದು ಪ್ರಯತ್ನ ಮಾಡುತ್ತಿದ್ದೇವೆ. ಕೆಲವು ರೈತರು ನಮ್ಮದು ಒಣ ಭೂಮಿ ಇದೆ, ಇದರಿಂದ ಅನುಕೂಲ ಇಲ್ಲ, ಈ ಭೂಮಿಯನ್ನು ಕೊಡಲು ಸಿದ್ಧರಿದ್ದೇವೆ. ನಮಗೆ ಹೆಚ್ಚು ಹಣ ಕೊಡಿ ಎಂದು ಕೇಳುತ್ತಾರೆ, ನಾವು ಅಂಥವರಿಗೆ ಅವರ ಬೇಡಿಕೆಯನ್ನು ನೋಡಿ ಸಮಾಧಾನಕರ ಪರಿಹಾರದ ಹಣ ನೀಡಿದರೆ ಅವರು ಬೇರೆ ಕಡೆ ಜಮೀನು ತೆಗೆದುಕೊಳ್ಳುತ್ತಾರೆ. ಅವರು ಕೃಷಿಯಲ್ಲಿ ಮುಂದುವರಿಯುತ್ತಾರೆ. ನಾವು ಈ ದೃಷ್ಟಿಕೋನದಲ್ಲಿ ಮುಂದುವರಿಯುತ್ತಿದ್ದೇವೆ ಆದರೆ ಅವರು ರಾಜಕೀಯ ಮಾಡಲು ಹೊರಟರೆ ಕಷ್ಟ ಎಂದು ಪರಮೇಶ್ವರ್ ಹೇಳಿದರು.

# ಗುಣಮಟ್ಟದ ಕಾಮಗಾರಿ ನಡೆಸಿ

## ಅಧಿಕಾರಿಗಳಿಗೆ ಕೃಷ್ಣ ಬೈರೇಗೌಡ ತಾಕೀತು



- ಕಚೇರಿ ಬರುವಾಗ ಕಾರಿನಲ್ಲೇ ಅಧಿಕಾರಿಗಳ ಜತೆ ವಿಡಿಯೋ ಕಾನ್ಫರೆನ್ಸ್

**ಬೆಂಗಳೂರು, ಜೂ.23:** ನಗರದ ರಸ್ತೆಗಳು 20-30 ವರ್ಷ ಬಾಳಿಕೆ ಬರಬೇಕು. ಇನ್ನಾದರೂ ಗುಣಮಟ್ಟದಿಂದ ಕೂಡಿದ ಕಾಮಗಾರಿ ನಡೆಸಿ ಎಂದು ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ.

ಮಂಗಳವಾರ ಬೆಳಿಗ್ಗೆ ತಮ್ಮ ನಿವಾಸದಿಂದ ವಿಧಾನಸೌಧದ ಕಡೆಗೆ ಬರುವಾಗ ಮೊಬೈಲ್ ಮೂಲಕವೇ ಜಿಬಿಎ ಮುಖ್ಯ ಆಯುಕ್ತರು, ವಿಶೇಷ ಆಯುಕ್ತರು, ವಲಯ ಆಯುಕ್ತರು, ಮುಖ್ಯ ಎಂಜಿನಿಯರ್, ಕಾರ್ಯಪಾಲಕ ಎಂಜಿನಿಯರ್‌ಗಳು ಸೇರಿದಂತೆ ಇತರೆ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಕಾರಿನಲ್ಲೇ ಸಭೆ ನಡೆಸಿದ ಕೃಷ್ಣ ಭೈರೇಗೌಡರು, ನಾನು ಸಾವಿರ ಬಾರಿ ನಿಮ ಬಳಿ ರಸ್ತೆ ನಿಯಮಗಳ ಬಗ್ಗೆ ಹೇಳಿದ್ದೇನೆ. ಆದರೆ ಅದರ ಬಗ್ಗೆ ನೀವು ಗಮನವೇ ಹರಿಸಿಲ್ಲ ಎಂದು ಛೇಡಿಸಿದರು.

**ಲೇನ್ ಬರೆಸಿ, ತುರ್ತಾಗಿ ಗುಂಡಿ ಮುಚ್ಚಿ:** ರಸ್ತೆಗಳನ್ನು ನಿರ್ಮಿಸುವಾಗ ಲೇನ್‌ಗಳನ್ನು ಸರಿಯಾಗಿ ಬರೆಸಬೇಕು. ಇದರಿಂದ ವಾಹನ ಸವಾರರಿಗೂ ಅದು ಅರ್ಥವಾಗುತ್ತದೆ. ನೀವು ಕೇವಲ ಅಕ್ಕಪಕ್ಕದಲ್ಲಿ ಮಾತ್ರ ಬಿಳಿ-ಕಪ್ಪು ಬಣ್ಣ ಬಳಿಯುತ್ತೀರ. ಆದರೆ ಮಧ್ಯಭಾಗದಲ್ಲಿ ಲೇನ್‌ಗಳನ್ನು ಬರೆಯುವುದನ್ನು ಏಕೆ ಮಾಡುತ್ತಿಲ್ಲ ಎಂದು ಪ್ರಶ್ನಿಸಿದರು. ಚಿಕ್ಕರಸ್ತೆಗಳನ್ನು ಬಿಡಿ. 40 ಅಡಿ ರಸ್ತೆಗಳಲ್ಲಿ ಕಡ್ಡಾಯವಾಗಿ ಲೇನ್‌ಗಳನ್ನು ಬರೆಸಬೇಕು. ಇನ್ನು ರಸ್ತೆಗಳು ಕೆಲವೆಡೆ ಗುಂಡಿ ಬಿದ್ದಿದ್ದು, ಇದನ್ನು ತುರ್ತಾಗಿ ಮುಚ್ಚುವತ್ತ ಗಮನ ಹರಿಸಬೇಕು ಎಂದು ತಾಕೀತು ಮಾಡಿದರು. 4 ಮೀಟರ್‌ಗಿಂತ ಕಡಿಮೆ ಅಗಲವಿದ್ದರೂ ಸೆಂಟರ್ ಮಾರ್ಕಿಂಗ್ ಮಾಡಬೇಕು. ಶೀಘ್ರದಲ್ಲಿಯೇ ಗುಂಡಿಗಳನ್ನು ಮುಚ್ಚಿ ವರದಿ ನೀಡಿ ಎಂದು ಸಚಿವರು ಆದೇಶಿಸಿದರು.

ಈಗಾಗಲೇ ಮಳೆಗಾಲ ಪ್ರಾರಂಭವಾಗಿರುವ ಹಿನ್ನೆಲೆಯಲ್ಲಿ ಹಲವೆಡೆ ರಸ್ತೆಗಳಲ್ಲಿ ನೀರು ನಿಂತು ಸಮಸ್ಯೆಯಾಗುತ್ತಿದೆ. ಕೆಲವೆಡೆ ಮೋರಿಗಳಲ್ಲಿ ಹೂಳು ತುಂಬಿ ಅಥವಾ ಕೆಲ ಕಟ್ಟಡಗಳನ್ನು ನಿರ್ಮಿಸುವುದರಿಂದ ಉಂಟಾಗುವ ತ್ಯಾಜ್ಯದಿಂದ ಈ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಆಯಾ ವಾರ್ಡ್‌ನ ಎಇಗಳು ಕೂಡಲೇ ಇದರ ಬಗ್ಗೆ ಗಮನ ಹರಿಸಬೇಕು ಎಂದು ಹೇಳಿದರು.




ಬೆಂಗಳೂರಿನಲ್ಲಿರುವ ಪೋಲೆಂಡ್‌ನ ರಾಯಭಾರಿ ರಘು ರಾಜಪ್ಪ ಹಾಗೂ ಜ್ಮಾವ್ (TZmo) ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕಿ ಅಲಿನಾ ಪೋಸ್ಲಸ್ನಿ ಅವರು ಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ವಿಧಾನಸೌಧದಲ್ಲಿ ಮಂಗಳವಾರ ಭೇಟಿಮಾಡಿ ಸಮಾಲೋಚನೆ ನಡೆಸಿದರು. ಸಿಎಂ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್ ಉಪಸ್ಥಿತರಿದ್ದರು.

# ಗ್ಯಾರಂಟಿ ಮುಂದುವರಿಸಲು ಸರ್ಕಾರಕ್ಕೆ ಮನಸ್ಸಿಲ್ಲ, ಖಜಾನೆಯಲ್ಲಿ ಹಣವೂ ಇಲ್ಲ



**ಬೆಳಗಾವಿ, ಜೂ.23:** ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ಮುಂದುವರಿಸಲು ಸರ್ಕಾರಕ್ಕೆ ಮನಸ್ಸಿಲ್ಲ. ಹಣವೂ ಇಲ್ಲ. ಅದಕ್ಕಾಗಿ ವಿವಿಧ ಮಾನದಂಡ ಹೇರಿ ಫಲಾನುಭವಿಗಳನ್ನು ಅರ್ಹರು ಮತ್ತು ಅನರ್ಹರು ಎಂದು ಪಟ್ಟಿ ಮಾಡಿ, ಯೋಜನೆ ಹಿಂದಕ್ಕೆ ಪಡೆಯಲು ಪ್ರಯತ್ನಿಸುತ್ತಿದೆ ಎಂದು ಸಂಸದ ಜಗದೀಶ ಶೆಟ್ಟರ್ ದೂರಿದ್ದಾರೆ.

ನಗರದಲ್ಲಿ ಸುದ್ದಿಗಾರರ ಜತೆ ಮಂಗಳವಾರ ಮಾತನಾಡಿದ ಅವರು, ಕಳೆದ ವಿಧಾನಸಭೆ ಚುನಾವಣೆಯಲ್ಲಿ ಗ್ಯಾರಂಟಿ ಹೆಸರಿನಲ್ಲಿ ಜನರನ್ನು ಮರಳು ಮಾಡಿ ಕಾಂಗ್ರೆಸ್ನವರು ಗೆದ್ದರು. ಈಗ ನೇರವಾಗಿಯೇ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಿದರೆ, ಜನರಿಂದ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ. ಪಕ್ಷಕ್ಕೆ ಕೆಟ್ಟ ಹೆಸರು ಕೂಡ ಬರುತ್ತದೆ. ಹಾಗಾಗಿ ಅರ್ಹರು, ಅನರ್ಹರು ಎಂದು ಪಟ್ಟಿ ಮಾಡಿ ಫಲಾನುಭವಿಗಳನ್ನು ಯೋಜನೆಗಳಿಂದ ಹೊರಗಿಡುತ್ತಿದ್ದಾರೆ ಎಂದು ಆರೋಪಿಸಿದರು. ನಾವು ಗ್ಯಾರಂಟಿ ವಿರೋಧಿಗಳಲ್ಲ. ಆದರೆ, ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ರಾಜ್ಯದಲ್ಲಿ ಅಭಿವೃದ್ಧಿಯೇ ನಿಂತುಹೋಗಿದೆ. ವಿವಿಧ ಕಾಮಗಾರಿ ಕೈಗೊಂಡ ಗುತ್ತಿಗೆದಾರರಿಗೆ 40 ಸಾವಿರ ಕೋಟಿ ರೂ. ಬಿಲ್ ಪಾವತಿ ಬಾಕಿ ಇದೆ. ಇದರಿಂದ ಅವರು ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಬಂದಿದೆ' ಎಂದು ಆಪಾದಿಸಿದರು.'ಮಾತೆತ್ತಿದರೆ ಆರ್‌ಎಸ್‌ಎಸ್ ಬಗ್ಗೆ ಅಪಪ್ರಚಾರ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಸರ್ಕಾರ ನಡೆಸುವುದು ಹೇಗೆ ಎಂದು ಗೊತ್ತಿಲ್ಲ' ಎಂದು ಶೆಟ್ಟರ್ ಟೀಕಿಸಿದರು.

# ರಾಜ್ಯದ ಐವರಿಗೆ ಪದ್ಮ ಪ್ರಶಸ್ತಿ ಪ್ರದಾನ

■ ಒಂದನೇ ಪುಟದಿಂದ...

ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ಕೆಎಲ್‌ಇ ಸಂಸ್ಥೆಯ ಮೂಲಕ ಲಕ್ಷಾಂತರ ಗ್ರಾಮೀಣ ವಿದ್ಯಾರ್ಥಿಗಳಿಗೆ ಜಾಗತಿಕ ಮಟ್ಟದ ಶಿಕ್ಷಣ ಮತ್ತು ಆಸ್ಪತ್ರೆಗಳ ಮೂಲಕ ಬಡವರಿಗೆ ಅತ್ಯಾಧುನಿಕ ಉಚಿತ, ಕಡಿಮೆ ವೆಚ್ಚದ ವೈದ್ಯಕೀಯ ಸೇವೆ ನೀಡುತ್ತಿರುವ ಡಾ. ಪ್ರಭಾಕರ್ ಕೋರೆ, ಡಾ. ಸುರೇಶ್ ಹನಗವಾಡಿ, ಶಶಿ ಶೇಖರ್ ವೇಂಪಾಟಿ, ವಿಜ್ಞಾನಿ ಡಾ. ಶುಭಾ ವೆಂಕಟೇಶ್ ಅಯ್ಯಂಗಾರ್ ಮತ್ತು ಉದ್ಯಮಿ ಟಿ.ಟಿ. ಜಗನ್ನಾಥನ್ ಅವರಿಗೆ ಮರಣೋತ್ತರ ಪ್ರಶಸ್ತಿ ಪ್ರದಾನ ಮಾಡಲಾಯಿತು. ಡಾ. ಸುರೇಶ್ ಹನಗವಾಡಿ, ಸ್ವತಃ ತೀವ್ರ ಕಾಯಿಲೆಯಿಂದ ಬಳಲುತ್ತಿದ್ದರೂ ಅದನ್ನು ಮೆಟ್ಟಿ ನಿಂತು, ದೇಶದಲ್ಲೇ ಮೊದಲ ಬಾರಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಹಿಮೋಫಿಲಿಯಾ ರೋಗಿಗಳಿಗೆ ಉಚಿತ ಚಿಕಿತ್ಸೆ ಸಿಗುವಂತೆ ಮಾಡಿದ ಕ್ರಾಂತಿಕಾರಿ ವೈದ್ಯರಾಗಿದ್ದಾರೆ.

ಶಶಿಶೇಖರ್ ವೇಂಪಾಟಿ ಕೋವಿಡ್ ಸಮಯದಲ್ಲಿ ದೂರದರ್ಶನ ಮತ್ತು ಆಕಾಶವಾಣಿಯನ್ನು ಸಂಪೂರ್ಣವಾಗಿ ನವೀಕರಿಸಿ, ರಾಮಾಯಣ ಪ್ರಸಾರದ ಮೂಲಕ ಜಾಗತಿಕ ದಾಖಲೆ ಬರೆದ ಹಾಗೂ ಕೋಟ್ಯಂತರ ವಿದ್ಯಾರ್ಥಿಗಳಿಗೆ ಉಚಿತ ಟಿವಿ ಶಿಕ್ಷಣ ತಲುಪಿಸಿದ ತಂತ್ರಜ್ಞರಾಗಿದ್ದಾರೆ. ಇವರು ಸಾಹಿತ್ಯ ಮತ್ತು ಶಿಕ್ಷಣ ವಿಭಾಗದಿಂದ ಪದ್ಮಶ್ರೀ ಪ್ರಶಸ್ತಿಗೆ ಆಯ್ಕೆಯಾಗಿದ್ದರು. ಉಳಿದಂತೆ ವಿಜ್ಞಾನಿ ಡಾ. ಶುಭಾ ವೆಂಕಟೇಶ್ ಅಯ್ಯಂಗಾರ್, ಉದ್ಯಮಿ ಪ್ರೆಸ್ಟೀಜ್ ಸಂಸ್ಥೆಯ ಟಿ.ಟಿ. ಜಗನ್ನಾಥನ್ ಅವರಿಗೆ ಮರಣೋತ್ತರವಾಗಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

# ಕೃಷಿ ಕ್ಷೇತ್ರ ಸಂಕಷ್ಟದಲ್ಲಿರುವಾಗ ಸರ್ಕಾರ ಖಾತೆ ಚೌಕಾಶಿ, ಅಧಿಕಾರ ಹಂಚಿಕೆಯಲ್ಲಿ ಮುಳುಗಿದೆ

### ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ್ ತರಾಟೆ

### ರೈತರ ಹೊಲದತ್ತ ಕಣ್ಣಾಡಿಸುವಂತೆ ಸಿಎಂಗೆ ಸಲಹೆ

**ಬೆಂಗಳೂರು, ಜೂ.23:** ರಾಜ್ಯದಲ್ಲಿ ಮುಂಗಾರು ಮಳೆ ಕೊರತೆ ಆಗಿ ಬೆಳೆ ಒಣಗುತ್ತಿದೆ. ಅನ್ನದಾತ ಆಕಾಶದತ್ತ ಮುಖ ಮಾಡಿ ಮಳೆಗಾಗಿ ಕಾಯುತ್ತಿದ್ದರೆ, ಕಾಂಗ್ರೆಸ್ ಸರ್ಕಾರ ಮಾತ್ರ ಅಧಿಕಾರ ಹಂಚಿಕೆಯ ಲೆಕ್ಕಾಚಾರದಲ್ಲೇ ಮುಳುಗಿದೆ. ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಮಳೆ ಕೊರತೆ ಉಂಟಾಗಿದ್ದು, ಇಡೀ ಕೃಷಿ ವಲಯ ಸಂಕಷ್ಟದಲ್ಲಿದೆ. ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರೇ ಒಮ್ಮೆ ವಿಧಾನಸೌಧದಿಂದ ಹೊರಗೆ ಬಂದು ರೈತರ ಹೊಲಗಳತ್ತ ಕಣ್ಣಾಡಿಸಿ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಬಿತ್ತಿದ ಬೆಳೆ ಕೈಗೆ ಸಿಗುವ ಅನುಮಾನ, ಚಿಂತೆ ರೈತರಲ್ಲಿ ಕಾಡುತ್ತಿದೆ. ಕೃಷಿ ಸಚಿವರನ್ನು ನೇಮಿಸದೆ ಇಲಾಖೆಯನ್ನು ಅನಾಥವಾಗಿಸಿದೆ. ಕರ್ನಾಟಕವು ಸಂಪೂರ್ಣ ಕೃಷಿ ಬಿಕ್ಕಟ್ಟನ್ನು ಎದುರಿಸುತ್ತಿದೆ. ಮಳೆ ಸಾಮಾನ್ಯಕ್ಕಿಂತ ಶೇ.43ರಷ್ಟು ಕಡಿಮೆಯಾಗಿದೆ. ಬಿತ್ತನೆ ಋತುಮಾನದ ಗುರಿಯ ಕೇವಲ ಶೇ.30ರಷ್ಟು ತಲುಪಿದೆ. ಬೆಳೆಗಳು ಒಣಗುತ್ತಿವೆ, ರೈತರು ಸಂಕಷ್ಟದಲ್ಲಿದ್ದಾರೆ ಮತ್ತು ಖಾರಿಫ್ ಋತುವು ವಿಪತ್ತಿನತ್ತ ಜಾರುತ್ತಿದೆ. ರೈತರು ಬರ ಮತ್ತು ಅನಿಶ್ಚಿತತೆಯ ವಿರುದ್ಧ ಹೋರಾಡುತ್ತಿರುವಾಗ, ಕಾಂಗ್ರೆಸ್ ಸರ್ಕಾರವು ಅಂತ್ಯವಿಲ್ಲದ ಬಣ ಯುದ್ಧ, ಸಚಿವ ಚೌಕಾಶಿ ಮತ್ತು ಅಧಿಕಾರ ಹಂಚಿಕೆ ರಾಜಕೀಯದಲ್ಲಿ ಸಿಲುಕಿಕೊಂಡಿದೆ ಎಂದು ಕಿಡಿ ಕಾರಿದರು.

ರಾಜ್ಯದ ಬಯಲುಸೀಮೆಯ ಜೀವನಾಡಿಯಾಗಿರುವ ಭದ್ರಾ ನದಿ ಇಂದು ಮರಳುಗಾಡಿನಂತಾಗಿದೆ. ಮೂರು ದಶಕಗಳ ಬಳಿಕ ನದಿಯ ಒಡಲು ಸಂಪೂರ್ಣ ಒಣಗಿ ಹೋಗಿದೆ. ನದಿಯ ಮಧ್ಯದಲ್ಲೇ ಯುವಕರು ವಾಲಿಬಾಲ್ ಆಡುವ ಸ್ಥಿತಿ ನಿರ್ಮಾಣವಾಗಿದೆ. ಇದು ಕೇವಲ ನದಿಯ ದುಸ್ಥಿತಿ ಅಲ್ಲ, ಇದು ಕಾಂಗ್ರೆಸ್ ಸರ್ಕಾರದ ಆದ್ಯತೆಗಳ ದಿವಾಳಿತನದ ಸಂಕೇತ ಎಂದರು.



ಹಾವೇರಿ ಜಿಲ್ಲೆಯಲ್ಲಿ ಶೇ.57ರಷ್ಟು ಮಳೆ ಕೊರತೆ ಉಂಟಾಗಿದೆ. ಬಿತ್ತಿದ ಬೀಜ ಗೇಣುದ್ದದ ಸಸಿಯಾಗಿದ್ದು, ಬಿಸಿಲಿಗೆ ಕಮರಿದೆ. ಅದೇ ರೀತಿ ಕಲಬುರಗಿಯಲ್ಲಿ ಮುಂಗಾರು ಮಳೆ ಕೈಕೊಟ್ಟ ಪರಿಣಾಮ ರೈತರು ಬೀದಿಗಿಳಿದು ಜಿಲ್ಲೆಯನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸುವಂತೆ ಆಗ್ರಹಿಸುತ್ತಿದ್ದಾರೆ. ರೈತರು ಹೋರಾಟ ಮಾಡುತ್ತಿದ್ದಾರೆ. ಆದರೆ ಕಲಬುರಗಿಯ ಸಚಿವರು ಮಾತ್ರ ಅನಗತ್ಯ ವಿವಾದ ಸೃಷ್ಟಿಸಿ ಸುದ್ದಿಯಲ್ಲಿರುವ ತಂತ್ರಗಳಲ್ಲೇ ಕಾಲಹರಣ ಮಾಡುತ್ತಿದ್ದಾರೆ. ಸರ್ಕಾರಕ್ಕೆ ರೈತರ ಸಂಕಷ್ಟಗಳೇ ಕಾಣುತ್ತಿಲ್ಲ ಎಂದು ಕಿಡಿಕಾರಿದರು.

**ವರದಿ ಆಧರಿಸಿ ಕ್ರಮ:** ಅಡ್ಡ ಮತದಾನ ಮಾಡಿದವರ ಪತ್ತೆಗೆ ವಿಧಾನ ಪರಿಷತ್ ಸದಸ್ಯ ಹಾಗೂ ಹಿರಿಯ ನಾಯಕ ಸಿ.ಟಿ. ರವಿ ನೇತೃತ್ವದಲ್ಲಿ ಸತ್ಯಶೋಧನಾ ಸಮಿತಿ ರಚಿಸಿದ್ದೇವೆ. ಈ ಸಮಿತಿ ಇನ್ನೆರಡು ಮೂರು ದಿನಗಳಲ್ಲಿ ವರದಿ ನೀಡಲಿದೆ. ಈ ವರದಿಯನ್ನು ತಮಗೆ ಕಳುಹಿಸಿಕೊಡುತ್ತೇವೆ. ಅದರಂತೆ ಅಡ್ಡ ಮತದಾನ ಮಾಡಿದ ಶಾಸಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ ಎಂದು ಈ ಇಬ್ಬರು ನಾಯಕರು ಪಕ್ಷದ ರಾಷ್ಟ್ರಾಧ್ಯಕ್ಷರಿಗೆ ಮನವಿ ಮಾಡಿದರು. ಹಾಗೂ ಕಠಿಣ ಕ್ರಮದ ಮೂಲಕ ಖಡಕ್ ಎಚ್ಚರಿಕೆ ನೀಡುವ ಅಗತ್ಯವಿದೆ ಎಂದು ಈ ಇಬ್ಬರು ನಾಯಕರು ವರಿಷ್ಠರ ಮುಂದೆ ಪ್ರತಿಪಾದಿಸಿದರು.

### ನಿಮ್ಮ ಆದ್ಯತೆ ರೈತರೋ, ಕುರ್ಚಿಯೋ ಸ್ಪಷ್ಟಪಡಿಸಿ

ರಾಜ್ಯದಲ್ಲಿ ಕೃಷಿ ಸಚಿವರೇ ಇಲ್ಲದಾಗಿದೆ. ಕಳೆದ ಒಂದು ತಿಂಗಳಿಂದ ರಾಜ್ಯಕ್ಕೆ ಪೂರ್ಣಾವಧಿ ಕೃಷಿ ಸಚಿವರೇ ಇಲ್ಲದಾಗಿದ್ದು, ರೈತರ ಸಂಕಷ್ಟ ಕೇಳುವವರಿಲ್ಲ. ಹಾವೇರಿ, ಕಲಬುರಗಿ, ಗದಗ, ಚಿಕ್ಕಮಗಳೂರು, ವಿಜಯಪುರ ಸೇರಿ ರಾಜ್ಯದ ಮೂಲೆಮೂಲೆಗಳಲ್ಲಿ ರೈತರು ಆತಂಕದಲ್ಲಿದ್ದಾರೆಂದು ಕಳವಳ ವ್ಯಕ್ತಪಡಿಸಿರುವ ಅಶೋಕ್, ಇದಕ್ಕಿಂತ ದೊಡ್ಡ ಆಡಳಿತ ವೈಫಲ್ಯ ಇನ್ನೇನು ಬೇಕು ಎಂದು ಪ್ರಶ್ನಿಸಿದ್ದಾರೆ. ರಾಜ್ಯದಲ್ಲಿ ಬರಗಾಲದ ಸ್ಥಿತಿ ಇದ್ದು, ಮುಖ್ಯಮಂತ್ರಿಗಳು ಕೂಡಲೇ ಜಿಲ್ಲಾ ಪ್ರವಾಸ ಕೈಗೊಳ್ಳಬೇಕು. ಅರ್ಹ ರೈತರಿಗೆ ಪರಿಹಾರ ಘೋಷಿಸಬೇಕು. ಅದಾಗದಿದ್ದರೆ ರಾಜ್ಯ ಸರ್ಕಾರಕ್ಕೆ ರೈತರಿಗಿಂತ ಕುರ್ಚಿಯೇ ಮುಖ್ಯ ಎಂದು ಹೇಳಿ ಬಿಡಿ ಎಂದು ಲೇವಡಿ ಮಾಡಿದರು.

# ಸುಂಕ ಅನಿಶ್ಚಿತತೆಯ ನಡುವೆ 'ಏಕಪಕ್ಷೀಯ' ಭಾರತ-ಅಮೆರಿಕ ವ್ಯಾಪಾರ ಒಪ್ಪಂದ ತಿರಸ್ಕರಿಸಲು ಕೇಂದ್ರಕ್ಕೆ ಕಾಂಗ್ರೆಸ್ ಒತ್ತಾಯ

**ನವದೆಹಲಿ, ಜೂನ್ 23:** ಅಮೆರಿಕದೊಂದಿಗೆ ನಡೆಯುತ್ತಿರುವ ವ್ಯಾಪಾರ ಮಾತುಕತೆಗಳ ಕುರಿತು ನರೇಂದ್ರ ಮೋದಿ ಸರ್ಕಾರದ ವಿರುದ್ಧ ಕಾಂಗ್ರೆಸ್ ಮಂಗಳವಾರ ತನ್ನ ದಾಳಿಯನ್ನು ತೀವ್ರಗೊಳಿಸಿದೆ, ವಾಷಿಂಗ್ಟನ್‌ಗೆ ಅಸಮಾನವಾಗಿ ಪ್ರಯೋಜನವನ್ನು ನೀಡುವ ಮತ್ತು ಭಾರತೀಯ ರೈತರು ಮತ್ತು ದೇಶೀಯ ಉದ್ಯಮಕ್ಕೆ ಹಾನಿ ಮಾಡುವ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಲು ನವದೆಹಲಿಯ ಮೇಲೆ ಒತ್ತಡ ಹೇರಲಾಗುತ್ತಿದೆ ಎಂದು ಆರೋಪಿಸಿದೆ.



ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಕಾಂಗ್ರೆಸ್‌ನ ಸಂವಹನ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ಅಮೆರಿಕದ ಸುಂಕ ನೀತಿಗಳ ಮೇಲಿನ ಅನಿಶ್ಚಿತತೆ ಮತ್ತು ಭಾರತದ ವ್ಯಾಪಾರ ಪದ್ಧತಿಗಳ ಕುರಿತು ನಡೆಯುತ್ತಿರುವ ತನಿಖೆಗಳ ನಡುವೆ ಅಮೆರಿಕದೊಂದಿಗೆ ವ್ಯಾಪಾರ ಒಪ್ಪಂದವನ್ನು ಅನುಸರಿಸುವ ಹಿಂದಿನ ತಾರ್ಕಿಕತೆಯನ್ನು ಪ್ರಶ್ನಿಸಿದ್ದಾರೆ.

ಯುಎಸ್ ವ್ಯಾಪಾರ ಪ್ರತಿನಿಧಿ ಜೇಮೀಸನ್ ಗ್ರೀರ್ ನವದೆಹಲಿಗೆ ನೀಡಿದ ಭೇಟಿಯನ್ನು ಉಲ್ಲೇಖಿಸಿ ರಮೇಶ್, ಫೆಬ್ರವರಿ 6, 2026 ರಂದು ಹೊರಡಿಸಲಾದ ವ್ಯಾಪಾರದ ಕುರಿತು ಭಾರತ-ಯುಎಸ್ ಜಂಟಿ ಹೇಳಿಕೆಯು ಎರಡೂ ಕಡೆಯಿಂದ ಗಮನಾರ್ಹ ರಿಯಾಯಿತಿಗಳನ್ನು ನೀಡಿದೆ ಎಂದು ಹೇಳಿದ್ದಾರೆ.ಅವರ ಪ್ರಕಾರ, ಅಮೆರಿಕವು ಭಾರತದ ರಫ್ತಿನ ಮೇಲಿನ ಸುಂಕವನ್ನು ಶೇಕಡಾ 25 ರಿಂದ 18 ಕ್ಕೆ ಇಳಿಸಲು ಒಪ್ಪಿಕೊಂಡಿತ್ತು, ಆದರೆ ಭಾರತವು ಅಮೆರಿಕದ ಕೃಷಿ ಮತ್ತು ಕೈಗಾರಿಕಾ ಉತ್ಪನ್ನಗಳ ಮೇಲಿನ ಸುಂಕವನ್ನು ತೀವ್ರವಾಗಿ ಕಡಿಮೆ ಮಾಡಲು ಅಥವಾ ತೆಗೆದುಹಾಕಲು ಮತ್ತು ಐದು ವರ್ಷಗಳಲ್ಲಿ ಅಮೆರಿಕದಿಂದ ಖರೀದಿಗಳನ್ನು $500 ಶತಕೋಟಿಯಷ್ಟು ಹೆಚ್ಚಿಸಲು ಬದ್ಧವಾಗಿದೆ.

ಒಪ್ಪಂದದ ಸುತ್ತಲಿನ ಸಂದರ್ಭಗಳು ದೇಶೀಯ ರಾಜಕೀಯ ಬೆಳವಣಿಗೆಗಳಿಗೆ ಸಂಬಂಧಿಸಿವೆ ಎಂದು ರಮೇಶ್ ಆರೋಪಿಸಿದರು.

"ರಾಹುಲ್ ಗಾಂಧಿಯವರು ಚೀನಾದ ಮುಂದೆ ಸಂಸತ್ತಿನಲ್ಲಿ ತಮ್ಮ ಹೇಡಿತನವನ್ನು ಬಹಿರಂಗಪಡಿಸಿದ ಒತ್ತಡದಲ್ಲಿದ್ದಾಗ, ಪ್ರಧಾನಿ ಮೋದಿ ಅವರ ಕೋರಿಕೆಯ ಮೇರೆಗೆ, ಫೆಬ್ರವರಿ 6, 2026 ರಂದು ವ್ಯಾಪಾರದ ಕುರಿತು ಭಾರತ-ಯುಎಸ್ ಜಂಟಿ ಹೇಳಿಕೆಯನ್ನು ನೀಡಲಾಯಿತು" ಎಂದು ಅವರು ಹೇಳಿದರು.

ಫೆಬ್ರವರಿ 20, 2026 ರಂದು ಯುಎಸ್ ಸುಪ್ರೀಂ ಕೋರ್ಟ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪರಸ್ಪರ ಸುಂಕ ತಂತ್ರವನ್ನು ಕಾನೂನುಬಾಹಿರವೆಂದು ತೀರ್ಪು ನೀಡಿದ ನಂತರ ವ್ಯಾಪಾರ ಚೌಕಟ್ಟು ಅದರ ಪ್ರಸ್ತುತತೆಯನ್ನು ಕಳೆದುಕೊಂಡಿದೆ ಎಂದು ಕಾಂಗ್ರೆಸ್ ನಾಯಕರು ವಾದಿಸಿದರು. "ಫೆಬ್ರವರಿ 6, 2026 ರಲ್ಲಿ ಅಮೆರಿಕ ಭಾರತಕ್ಕೆ ನೀಡಿದ್ದ ಸುಂಕದ ರಿಯಾಯಿತಿಯೇ ರಾತ್ರೋರಾತ್ರಿ ಪರಿಣಾಮಕಾರಿಯಾಗಿ ಕಣ್ಮರೆಯಾಯಿತು" ಎಂದು ರಮೇಶ್ ಹೇಳಿಕೊಂಡರು.

ತರುವಾಯ ಅಮೆರಿಕವು ಭಾರತ ಸೇರಿದಂತೆ ಎಲ್ಲಾ ವ್ಯಾಪಾರ ಪಾಲುದಾರರ ಮೇಲೆ ತಾತ್ಕಾಲಿಕವಾಗಿ ಶೇಕಡಾ 10 ರಷ್ಟು ಸುಂಕವನ್ನು ವಿಧಿಸಿದೆ ಎಂದು ಅವರು ಗಮನಿಸಿದರು ಮತ್ತು ಜುಲೈ 24 ರ ನಂತರವೂ ವಾಷಿಂಗ್ಟನ್‌ನ ಸುಂಕದ ಆಡಳಿತದ ಬಗ್ಗೆ ಅನಿಶ್ಚಿತತೆ ಮುಂದುವರಿಯುತ್ತದೆ ಎಂದು ಎಚ್ಚರಿಸಿದರು, ಈ ಕ್ರಮಕ್ಕೆ ಕಾನೂನು ಆಧಾರವು ಮುಕ್ತಾಯಗೊಳ್ಳಲಿದೆ.ಭಾರತ ಮತ್ತು ಇತರ 60 ದೇಶಗಳಿಂದ ಅನ್ಯಾಯದ ವ್ಯಾಪಾರ ಪದ್ಧತಿಗಳು ಎಂದು ವಾಷಿಂಗ್ಟನ್ ವಿವರಿಸುವ ಬಗ್ಗೆ ನಡೆಯುತ್ತಿರುವ ಯುಎಸ್ ತನಿಖೆಯನ್ನು ರಮೇಶ್ ಸಹ ಸೂಚಿಸಿದರು. ಪ್ರಸ್ತಾವಿತ ವ್ಯಾಪಾರ ವ್ಯವಸ್ಥೆಯನ್ನು ಭಾರತವು ಒಪ್ಪಿಕೊಳ್ಳುವಂತೆ ಮಾಡಲು ತನಿಖೆಯನ್ನು ಹತೋಟಿಯಾಗಿ ಬಳಸಲಾಗುತ್ತಿದೆ ಎಂದು ಅವರು ಆರೋಪಿಸಿದರು."ಫೆಬ್ರವರಿ 6, 2026 ರಂದು ಘೋಷಿಸಿದಂತೆ ಒಪ್ಪಂದಕ್ಕೆ ಭಾರತವನ್ನು ಔಪಚಾರಿಕವಾಗಿ ಸಹಿ ಹಾಕುವಂತೆ ಮಾಡಲು ಅಮೆರಿಕ ಈ ತನಿಖೆಯನ್ನು ಸ್ಪಷ್ಟವಾಗಿ ಬೆದರಿಕೆಯಾಗಿ ಬಳಸುತ್ತಿದೆ. ಅಂತಹ ಒಪ್ಪಂದವು ಒಪ್ಪಂದವಲ್ಲ ಆದರೆ ಯುಎಸ್ನಿಂದ ಕಳ್ಳತನವಾಗಿದೆ" ಎಂದು ಅವರು ಹೇಳಿದರು.

ಕೃಷಿ ವಲಯಕ್ಕೆ ಸಂಭಾವ್ಯ ಪರಿಣಾಮಗಳ ಬಗ್ಗೆ ಎಚ್ಚರಿಕೆ ನೀಡಿದ ಕಾಂಗ್ರೆಸ್ ನಾಯಕರು, ಭಾರತವು ಅಮೆರಿಕದ ಕೃಷಿ ಸರಕುಗಳಿಗೆ ತನ್ನ ಮಾರುಕಟ್ಟೆಯನ್ನು ತೆರೆದರೆ ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ, ಬಿಹಾರ, ಮಧ್ಯಪ್ರದೇಶ, ರಾಜಸ್ಥಾನ ಮತ್ತು ಮಹಾರಾಷ್ಟ್ರ ಸೇರಿದಂತೆ ರಾಜ್ಯಗಳಲ್ಲಿನ ರೈತರ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ ಎಂದು ಹೇಳಿದ್ದಾರೆ. ಭಾರತವು ಗಣನೀಯ ಬದ್ಧತೆಗಳನ್ನು ಮಾಡಲು ಕೇಳಲಾಗುತ್ತಿದ್ದರೂ, ಯುನೈಟೆಡ್ ಸ್ಟೇಟ್ಸ್ ಪ್ರತಿಯಾಗಿ ಕೆಲವು ಬದ್ಧ ಖಾತರಿಗಳನ್ನು ನೀಡುತ್ತಿದೆ ಎಂದು ಅವರು ವಾದಿಸಿದರು.

ಜಪಾನ್ ಮತ್ತು ಯುರೋಪಿಯನ್ ಒಕ್ಕೂಟದ ಸದಸ್ಯರಂತಹ ದೇಶಗಳೊಂದಿಗೆ ಅಸ್ತಿತ್ವದಲ್ಲಿರುವ ಒಪ್ಪಂದಗಳ ಹೊರತಾಗಿಯೂ ವ್ಯಾಪಾರ ಪಾಲುದಾರರ ವಿರುದ್ಧ ಹೆಚ್ಚಿನ ಸುಂಕದ ಬೆದರಿಕೆಗಳನ್ನು ಅಮೆರಿಕವು ಹೊಂದಿದೆ ಎಂದು ಅವರು ವಿವರಿಸಿದ್ದಾರೆ ಎಂದು ಉಲ್ಲೇಖಿಸಿ, ಭವಿಷ್ಯದ ಯಾವುದೇ ಒಪ್ಪಂದದ ವಿಶ್ವಾಸಾರ್ಹತೆಯ ಬಗ್ಗೆ ರಮೇಶ್ ಅನುಮಾನಗಳನ್ನು ವ್ಯಕ್ತಪಡಿಸಿದರು.

"ಈಗ ಭಾರತದ ಹಿತಾಸಕ್ತಿಗಳಿಗೆ ವಿರುದ್ಧವಾಗಿರುವ ಯಾವುದೇ ವ್ಯಾಪಾರ ಒಪ್ಪಂದಕ್ಕೆ ಭಾರತ ಸಹಿ ಹಾಕುವ ಅಗತ್ಯವಿಲ್ಲ" ಎಂದು ಅವರು ಹೇಳಿದರು, ಅಮೆರಿಕದ ಸುಪ್ರೀಂಕೋರ್ಟ್ ತೀರ್ಪಿನ ನಂತರ ಅಮೆರಿಕದೊಂದಿಗೆ ತನ್ನದೇ ಆದ ವ್ಯಾಪಾರ ಮಾತುಕತೆಗಳಿಂದ ಹಿಂದೆ ಸರಿದಿದೆ ಎಂದು ಅವರು ಹೇಳಿಕೊಂಡ ಮಲೇಷ್ಯಾದಿಂದ ಸರ್ಕಾರ ಪಾಠ ಕಲಿಯಬೇಕೆಂದು ಒತ್ತಾಯಿಸಿದರು. ಕಾಂಗ್ರೆಸ್ ನಾಯಕರು ಪ್ರಧಾನಿ ಮೋದಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಸಮಾಧಾನಪಡಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು. ಆಪರೇಷನ್ ಸಿಂಧೂರ್ ಬಗ್ಗೆ ಟ್ರಂಪ್ ಅವರ ಪುನರಾವರ್ತಿತ ಹೇಳಿಕೆಗಳ ಬಗ್ಗೆ ವಿರೋಧ ಪಕ್ಷದ ಟೀಕೆಯನ್ನು ಅವರು ನವೀಕರಿಸಿದರು, ಪ್ರಧಾನಿ ಆ ಪ್ರತಿಪಾದನೆಗಳನ್ನು ಸಾರ್ವಜನಿಕವಾಗಿ ಪ್ರಶ್ನಿಸಿಲ್ಲ ಎಂದು ಹೇಳಿದರು ದ್ವಿಪಕ್ಷೀಯ ವ್ಯಾಪಾರವನ್ನು ವಿಸ್ತರಿಸುವ ಮತ್ತು ಮಾರುಕಟ್ಟೆ ಪ್ರವೇಶ ಸಮಸ್ಯೆಗಳನ್ನು ಪರಿಹರಿಸುವ ಗುರಿಯನ್ನು ಹೊಂದಿರುವ ಭಾರತ ಮತ್ತು ಅಮೆರಿಕ ನಡುವಿನ ನಿರಂತರ ಮಾತುಕತೆಗಳ ಮಧ್ಯೆ ಈ ಹೇಳಿಕೆಗಳು ಬಂದಿವೆ. ಎರಡೂ ದೇಶಗಳ ನಡುವಿನ ವ್ಯಾಪಾರ ಚರ್ಚೆಗಳು ಸುಂಕಗಳು, ಕೃಷಿ ಆಮದುಗಳು, ಕೈಗಾರಿಕಾ ಸರಕುಗಳು ಮತ್ತು ವಿಶಾಲ ಆರ್ಥಿಕ ಸಹಕಾರದ ಮೇಲೆ ಕೇಂದ್ರೀಕರಿಸಿದ್ದು, ಎರಡೂ ಕಡೆಯವರು ಮಾರುಕಟ್ಟೆ ಪ್ರವೇಶ ಮತ್ತು ನಿಯಂತ್ರಕ ಅಡೆತಡೆಗಳ ಕುರಿತು ದೀರ್ಘಕಾಲದ ಕಳವಳಗಳನ್ನು ಪರಿಹರಿಸುವಾಗ ವಾಣಿಜ್ಯ ಸಂಬಂಧಗಳನ್ನು ಗಾಢವಾಗಿಸಲು ಪ್ರಯತ್ನಿಸುತ್ತಿದ್ದಾರೆ.

# ರಾಜ್ಯದಲ್ಲಿ ಬರಗಾಲದ ಛಾಯೆ: ಕಾವೇರಿ ನೀರಿಗೆ ತಮಿಳುನಾಡು ಪಟ್ಟು

**ನವದೆಹಲಿ, ಜೂನ್ 23:** ರಾಜ್ಯದಲ್ಲಿ ಮಾನ್ಸೂನ್ ದುರ್ಬಲವಾಗುತ್ತಿದ್ದು ಈ ನಡುವೆ ಕಾವೇರಿ ನೀರಿಗಾಗಿ ತಮಿಳುನಾಡು ಮತ್ತು ಕರ್ನಾಟಕದ ಮಧ್ಯೆ ಸಂಘರ್ಷ ಏರ್ಪಡುವ ಸಾಧ್ಯತೆಗಳು ಕಂಡು ಬಂದಿದೆ. ಕರ್ನಾಟಕ ಜೂನ್ ತಿಂಗಳ 9.19 ಟಿಎಂಸಿ ನೀರು ಹರಿಸಬೇಕಿತ್ತು ಆದರೆ ಇದುವರೆಗೆ ಕರ್ನಾಟಕ ಕೇವಲ 2.6 ಟಿಎಂಸಿ ನೀರು ಮಾತ್ರ ಹರಿಸಿದೆ ಎಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ತಮಿಳುನಾಡು ಆರೋಪಿಸಿದ್ದು ಕೂಡಲೇ ನೀರು ಹರಿಸಲು ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಿದೆ. ಇದಕ್ಕೆ ಉತ್ತರಿಸಿದ ಕರ್ನಾಟಕದ ಅಧಿಕಾರಿಗಳು ರಾಜ್ಯದಲ್ಲಿ ಸಮರ್ಪಕವಾಗಿ ಮಳೆಯಾಗದ ಹಿನ್ನಲೆ ಜಲಾಯಶಗಳಿಗೆ ಒಳ ಹರಿವು ಬಂದಿಲ್ಲ ಹೀಗಾಗೀ ನೀರು ಹರಿಸಲು ಸಾಧ್ಯವಾಗಿಲ್ಲ ಎಂದು ವಿವರಿಸಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ತಮಿಳುನಾಡು ಅಧಿಕಾರಿಗಳ ?ಜಲಾಶಯಗಳಲ್ಲಿ ನೀರಿಲ್ಲ? ಎಂಬ ಕರ್ನಾಟಕದ ವಾದ ಒಪ್ಪಲು ಸಾಧ್ಯವಿಲ್ಲ. ಫೆಬ್ರವರಿ ಮತ್ತು ಮೇ ನಡುವಿನ ಅವಧಿಯಲ್ಲಿ ಕರ್ನಾಟಕ ಹೆಚ್ಚು ನೀರು ಬಳಸಿಕೊಂಡಿದ್ದರಿಂದಲೇ ಜಲಾಶಯಗಳಲ್ಲಿ ನೀರಿನ ಮಟ್ಟ ಕುಸಿದಿದೆ ಎಂದು ಆರೋಪಿಸಿದ್ದಾರೆ. ಇದೇ ವೇಳೆ ಜೂನ್ನ 9.19 ಟಿಎಂಸಿ ನೀರಿನ ಜೊತೆಗೆ ಜುಲೈನ 31.24 ಟಿಎಂಸಿ ನೀರನ್ನು ಕೂಡಲೇ ಹರಿಸಲು ಕರ್ನಾಟಕಕ್ಕೆ ನಿರ್ದೇಶನ ನೀಡಬೇಕು ಎಂದು ತಮಿಳುನಾಡು ಪ್ರಾಧಿಕಾರದಲ್ಲಿ ಒತ್ತಡ ಹಾಕಿತು. ಎರಡು ಕಡೆಯ ವಾದ ಆಲಿಸುವ ಪ್ರಾಧಿಕಾರ ಇನ್ನು ಕೆಲವು ದಿನಗಳ ಕಾಲ ಮಳೆಗಾಗಿ ಕಾಯಲು ಸೂಚಿಸಿದ್ದಾರೆ. ಮುಂದಿನ ಸಭೆಯಲ್ಲಿ ಬಾಕಿ ವಿಷಯಗಳ ಚರ್ಚೆಯ ಭರವಸೆ ನೀಡಿದೆ.



ನಟ ಆರ್ ಮಾಧವನ್ ಅವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮಂಗಳವಾರ ದೆಹಲಿಯ ರಾಷ್ಟ್ರಪತಿ ಭವನದಲ್ಲಿ ಪದ್ಮಶ್ರೀ ಪ್ರಶಸ್ತಿಯನ್ನು ಪ್ರದಾನ ಮಾಡಿದರು.

# ಕತಾರ್‌ನ ರಾಸ್ ಲಫಾನ್ ಅನಿಲ ಸ್ಥಾವರ ಸ್ಫೋಟದಲ್ಲಿ 12 ನಾಗರಿಕರ ಸಾವು: ಭಾರತದ ತೀವ್ರ ಸಂತಾಪ

**ನವದೆಹಲಿ, ಜೂನ್ 23:** ಜೂನ್ 21 ರಂದು ಕತಾರ್‌ನಲ್ಲಿರುವ ರಾಸ್ ಲಫಾನ್ ಕೈಗಾರಿಕಾ ನಗರದ ಅನಿಲ ಸ್ಥಾವರದಲ್ಲಿ ಸಂಭವಿಸಿದ ಸ್ಫೋಟದಲ್ಲಿ ಸಾವನ್ನಪ್ಪಿದ 12 ಭಾರತೀಯ ಪ್ರಜೆಗಳ ಸಾವಿಗೆ ಸಂತಾಪ ಸೂಚಿಸಿದ ಭಾರತ, ಮಂಗಳವಾರ ಅಧಿಕಾರಿಗಳು ಗುರುತಿಸುವಿಕೆಗಾಗಿ ನಿಕಟವಾಗಿ ಕೆಲಸ ಮಾಡುತ್ತಿದ್ದಾರೆ ಮತ್ತು ಮೃತರ ಶವಗಳ ಸಾಗಣೆಗಾಗಿ ಸ್ಥಳೀಯ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸುತ್ತಿದ್ದಾರೆ ಎಂದು ಹೇಳಿದೆ. ತಮ್ಮ ಸಾಪ್ತಾಹಿಕ ಮಾಧ್ಯಮಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, 12 ಭಾರತೀಯ ಪ್ರಜೆಗಳ ಸಾವುಗಳು ತುಂಬಾ ದುರದೃಷ್ಟಕರ. ಇತರ ರಾಷ್ಟ್ರೀಯತೆಗಳ ಹಲವಾರು ಜನರು ಸಹ ತಮ್ಮ ಪ್ರಾಣವನ್ನು ಕಳೆದುಕೊಂಡರು, ಆದರೆ ಸ್ಫೋಟ ಸಂಭವಿಸಿದ ರಾಸ್ ಲಫಾನ್ ಅನಿಲ ಸ್ಥಾವರದಲ್ಲಿ ಸಂಭವಿಸಿದ ದುರಂತದಲ್ಲಿ ನಾವು ನಮ್ಮ 12 ನಾಗರಿಕರನ್ನು ಕಳೆದುಕೊಂಡಿದ್ದೇವೆ. ಇನ್ನೂ ಹಲವಾರು ಜನರು ಗಾಯಗೊಂಡಿದ್ದಾರೆ. ವಿವಿಧ ರಾಷ್ಟ್ರಗಳ 66 ಜನರು ಗಾಯಗೊಂಡಿದ್ದಾರೆ ಎಂದು ನನಗೆ ತಿಳಿಸಲಾಗಿದೆ. ಅವರಲ್ಲಿ ಎಷ್ಟು ಮಂದಿ



ಭಾರತೀಯರು ಎಂದು ನಮಗೆ ಇನ್ನೂ ನಿಖರವಾಗಿ ತಿಳಿದಿಲ್ಲ, ಆದರೆ ಗಾಯಗೊಂಡವರೆಲ್ಲರೂ ಸುರಕ್ಷಿತರಾಗಿದ್ದಾರೆ. "ಮೃತರ ಅವಶೇಷಗಳನ್ನು ಗುರುತಿಸಲು ಮತ್ತು ಭಾರತಕ್ಕೆ ಸಾಗಿಸಲು ನಾವು ಸ್ಥಳೀಯ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದೇವೆ. ಈ ದುರದೃಷ್ಟಕರ ಘಟನೆಯಲ್ಲಿ ಮೃತಪಟ್ಟವರ ಕುಟುಂಬ ಸದಸ್ಯರೊಂದಿಗೆ ನಾವು ಸಂಪರ್ಕದಲ್ಲಿದ್ದೇವೆ" ಎಂದು ಅವರು ಹೇಳಿದರು. ಕತಾರ್‌ನ ರಾಸ್ ಲಫಾನ್ ಕೈಗಾರಿಕಾ ನಗರದಲ್ಲಿ ಸೋಮವಾರ ಸಂಭವಿಸಿದ ಸ್ಫೋಟದ ನಂತರ ಭಾರತೀಯ ಪ್ರಜೆಗಳು ಸೇರಿದಂತೆ ಜೀವಹಾನಿ ಮತ್ತು ಗಾಯಗಳ ಬಗ್ಗೆ ವಿದೇಶಾಂಗ ಸಚಿವ ಎಸ್. ಜೈಶಂಕರ್ ತೀವ್ರ ದುಃಖ ವ್ಯಕ್ತಪಡಿಸಿದರು.

# ಸುಪ್ರೀಂ ಮೆಟ್ಟಿಲೇರಿದ ರಾಮಮಂದಿರ ದೇಣಿಗೆ ಹಗರಣ

**ನವದೆಹಲಿ, ಜೂ. 23:** ಅಯೋಧ್ಯೆಯ ಶ್ರೀ ರಾಮ ಮಂದಿರದಲ್ಲಿ ನಡೆದ ಆರ್ಥಿಕ ಅಕ್ರಮಗಳು ಮತ್ತು ಕಣ್ಮರೆಯಾಗಿರುವ ಕಾಣಿಕೆ ಹಣದ ವಿವಾದ ಈಗ ಸುಪ್ರೀಂಕೋರ್ಟ್ ಮೆಟ್ಟಿಲೇರಿದೆ. ರಾಮಮಂದಿರದ ದೇಣಿಗೆ ದುರುಪಯೋಗದ ಬಗ್ಗೆ ಸುಪ್ರೀಂ ಕೋರ್ಟ್ ನೇರ ಮೇಲ್ವಿಚಾರಣೆಯಲ್ಲಿ ತನಿಖೆ ನಡೆಸಬೇಕು ಮತ್ತು ಕೇಂದ್ರೀಯ ತನಿಖಾ ದಳದ ಅಡಿಯಲ್ಲಿ ಹೊಸ ವಿಶೇಷ ತನಿಖಾ ತಂಡವನ್ನು ರಚಿಸಬೇಕು ಎಂದು ಕೋರಿ ಸುಪ್ರೀಂ ಕೋರ್ಟ್‌ನಲ್ಲಿ ಹೊಸ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆಯಾಗಿದೆ. ವಕೀಲರಾದ ಅಜಯ್ ಕುಮಾರ್ ರಾಯ್ ಮತ್ತು ದಿನೇಶ್ ಕುಮಾರ್ ಯಾದವ್ ಅವರು ಈ ಜಂಟಿ ಅರ್ಜಿಯನ್ನು ಸಲ್ಲಿಸಿದ್ದಾರೆ. ದೇವಸ್ಥಾನದ ದೇಣಿಗೆ ರಿಜಿಸ್ಟರ್‌ಗಳು, ಆಡಿಟ್ ವರದಿಗಳು, ಸಿಸಿಟಿವಿ ದೃಶ್ಯಾವಳಿಗಳು ಮತ್ತು ಬ್ಯಾಂಕ್ ದಾಖಲೆಗಳು ಸೇರಿದಂತೆ ಎಲ್ಲಾ ಡಿಜಿಟಲ್ ಹಾಗೂ ಭೌತಿಕ ಸಾಕ್ಷ್ಯಗಳನ್ನು ರಾಮ ಮಂದಿರ ಟ್ರಸ್ಟ್ ಮತ್ತು ಉತ್ತರ ಪ್ರದೇಶ ಸರ್ಕಾರ ತಕ್ಷಣವೇ ಸುರಕ್ಷಿತವಾಗಿ ಸಂರಕ್ಷಿಸಿಡಬೇಕು. ಪ್ರಕರಣಕ್ಕೆ ಸಂಬಂಧಿಸಿದ ಯಾವುದೇ ಆಸ್ತಿ, ಹಣ ಅಥವಾ ಎಲೆಕ್ಟ್ರಾನಿಕ್ ಡೇಟಾವನ್ನು ಯಾರೂ ನಾಶಪಡಿಸದಂತೆ ಅಥವಾ ತಿರುಚದಂತೆ ಕೋರ್ಟ್ ಕಟ್ಟುನಿಟ್ಟಿನ



ತಡೆಜ್ಞೆ ನೀಡಬೇಕು. ಜನ್ಮಭೂಮಿಯಲ್ಲಿ ರಾಮ ಮಂದಿರ ನಿರ್ಮಾಣಕ್ಕಾಗಿ ದೇಶದ ಕೋಟ್ಯಂತರ ಭಕ್ತರು ತಮ್ಮ ಕಷ್ಟದ ಹಣವನ್ನು ದಾನ ಮಾಡಿದ್ದಾರೆ. ಇಂತಹ ಪವಿತ್ರ ನಿಧಿಯ ನಿರ್ವಹಣೆಯಲ್ಲಿ ಪಾರದರ್ಶಕತೆ ತೋರದಿದ್ದರೆ ಅದು ಸಾರ್ವಜನಿಕರ ನಂಬಿಕೆ ಮತ್ತು ಭಾವನೆಗಳಿಗೆ ಧಕ್ಕೆ ತರುತ್ತದೆ.

**ಎಫ್‌ಐಆರ್ ಇಲ್ಲದೆ ತನಿಖೆ:** ಪ್ರಸ್ತುತ ಉತ್ತರ ಪ್ರದೇಶ ಸರ್ಕಾರ ರಚಿಸಿರುವ ಎಸ್‌ಐಟಿ ತನಿಖೆಯ ಬಗ್ಗೆ ಅರ್ಜಿದಾರರು ತೀವ್ರ ಅನುಮಾನ ವ್ಯಕ್ತಪಡಿಸಿದ್ದಾರೆ.

ಯುಪಿ ಸರ್ಕಾರದ ಎಸ್‌ಐಟಿ ತಂಡವು ಯಾವುದೇ ಪ್ರಥಮ ಮಾಹಿತಿ ವರದಿ ಅಥವಾ ನಿಯಮಿತ ಕ್ರಿಮಿನಲ್ ಪ್ರಕರಣ ದಾಖಲಿಸದೆಯೇ ತನ್ನ ವಿಚಾರಣೆಯನ್ನು ಪ್ರಾರಂಭಿಸಿದೆ. ಎಫ್‌ಐಆರ್ ಇಲ್ಲದೆ ಸಂಗ್ರಹಿಸುವ ಸಾಕ್ಷ್ಯಗಳಿಗೆ ಕೋರ್ಟ್‌ನಲ್ಲಿ ಕಾನೂನು ಮಾನ್ಯತೆ ಸಿಗುವುದಿಲ್ಲ, ಇದು ಭವಿಷ್ಯದಲ್ಲಿ ಆರೋಪಿಗಳು ಸುಲಭವಾಗಿ ಪಾರಾಗಲು ದಾರಿ ಮಾಡಿಕೊಡುತ್ತದೆ.

ಅಲ್ಲದೆ, ರಾಜ್ಯ ಮಟ್ಟದ ಎಸ್‌ಐಟಿಯ ಅಧಿಕಾರ ಮತ್ತು ವ್ಯಾಪ್ತಿ ಸ್ಪಷ್ಟವಾಗಿಲ್ಲದ ಕಾರಣ ಈ ಹಗರಣದ ಸಂಕೀರ್ಣತೆಯನ್ನು ಭೇದಿಸಲು ಅದಕ್ಕೆ ಸಾಧ್ಯವಿಲ್ಲ ಎಂದು ಅರ್ಜಿಯಲ್ಲಿ ವಾದಿಸಲಾಗಿದೆ. ವಿಳಂಬವಾದರೆ ಸಾಕ್ಷ್ಯ ನಾಶದ ಭೀತಿ ದೇವಸ್ಥಾನದ ಆಡಳಿತದಲ್ಲಿ ಸಾರ್ವಜನಿಕ ವಿಶ್ವಾಸವನ್ನು ಮರಳಿ ಗಳಿಸಲು ಸುಪ್ರೀಂ ಕೋರ್ಟ್ ತಕ್ಷಣವೇ ಮಧ್ಯಪ್ರವೇಶಿಸುವುದು ಅನಿವಾರ್ಯವಾಗಿದೆ.

ತನಿಖೆ ವಿಳಂಬವಾದರೆ ಹಣಕಾಸಿನ ಪ್ರಮುಖ ಸಾಕ್ಷ್ಯಗಳನ್ನು ನಾಶಪಡಿಸುವ ಸಾಧ್ಯತೆ ಇರುವುದರಿಂದ, ಸ್ವತಂತ್ರ ಮತ್ತು ನಿಷ್ಪಕ್ಷಪಾತ ತನಿಖೆಯ ಅಗತ್ಯವಿದೆ ಎಂದು ಅರ್ಜಿದಾರರು ಕೋರಿದ್ದಾರೆ.

# ಬ್ರಾಹ್ಮಣರು ಬಿಎಸ್‌ಪಿ ಆಡಳಿತದಲ್ಲಿ ಮಾತ್ರವೇ ಸುರಕ್ಷಿತ: ಮಾಯಾವತಿ

**ನವದೆಹಲಿ, ಜೂ. 23:** 2027ರ ಉತ್ತರ ಪ್ರದೇಶ ವಿಧಾನಸಭಾ ಚುನಾವಣೆಗೆ ತಮ್ಮ ಪಕ್ಷವು ಬ್ರಾಹ್ಮಣ ನಾಯಕರನ್ನು ಅಭ್ಯರ್ಥಿಗಳಾಗಿ ಕಣಕ್ಕಿಳಿಸಲು ಪ್ರಾರಂಭಿಸಿದ ನಂತರ ಪ್ರತಿಪಕ್ಷಗಳು, ವಿಶೇಷವಾಗಿ ಸಮಾಜವಾದಿ ಪಕ್ಷ ಆತಂಕಕ್ಕೊಳಗಾಗಿದೆ ಎಂದು ಬಹುಜನ ಸಮಾಜ ಪಕ್ಷದ ಅಧ್ಯಕ್ಷೆ ಮಾಯಾವತಿ ಹೇಳಿದ್ದಾರೆ. ಹಾಗೆಯೇ ಬ್ರಾಹ್ಮಣರು ಸೇರಿದಂತೆ ಮೇಲ್ಜಾತಿಯವರು ಬಿಎಸ್‌ಪಿ ಆಡಳಿತದಲ್ಲಿ ಮಾತ್ರವೇ ಸುರಕ್ಷಿತವಾಗಿರಲು ಸಾಧ್ಯ ಎಂದು ಮಾಯಾವತಿ ಹೇಳಿಕೊಂಡಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಮಾಯಾವತಿ, 2007ರ ಚುನಾವಣೆಯಲ್ಲಿ ಬಿಎಸ್‌ಪಿ ಬ್ರಾಹ್ಮಣ ಸಮುದಾಯದ ಬೆಂಬಲದೊಂದಿಗೆ ಸಂಪೂರ್ಣ ಬಹುಮತವನ್ನು ಗಳಿಸಿತು. ಈ ಬಾರಿಯೂ ಬ್ರಾಹ್ಮಣರ ಬೆಂಬಲ ದೊರೆಯುತ್ತಿದೆ. ಇದರಿಂದಾಗಿ ಪ್ರತಿಪಕ್ಷಗಳಿಗೆ ಆತಂಕವಾಗುವುದು ಸಹಜ ಎಂದು ಮಾಯಾವತಿ ಹೇಳಿದ್ದಾರೆ.

ಉತ್ತರ ಪ್ರದೇಶದಂತಹ ಜನನಿಬಿಡ ರಾಜ್ಯದಲ್ಲಿ, ಮೇಲ್ಜಾತಿಗಳ ನಿರ್ದಿಷ್ಟವಾಗಿ ಬ್ರಾಹ್ಮಣ ಸಮುದಾಯದ ಹಿತಾಸಕ್ತಿಗಳನ್ನು ಬಿಎಸ್‌ಪಿ ಆಡಳಿತ ಮಾತ್ರ ರಕ್ಷಿಸಿದೆ ಎಂಬುದನ್ನು ವ್ಯಾಪಕವಾಗಿ ಒಪ್ಪಿಕೊಳ್ಳಲಾಗುವ ವಿಷಯ.

ಪಕ್ಷವು ಸರ್ವಜನ ಹಿತ, ಸರ್ವಜನ ಸಂತೋಷ ತತ್ವ ಹೊಂದಿದೆ. ಸರ್ಕಾರವನ್ನು ರಚಿಸಿದ ನಂತರ, ಈ ಸಮುದಾಯವು ಪ್ರತಿ ಹಂತದಲ್ಲೂ ಅಪಾರ ಗೌರವ ಮತ್ತು ಪೂರ್ಣ ಭಾಗವಹಿಸುವಿಕೆ ಪಡೆಯುವಂತೆ ಬಿಎಸ್‌ಪಿ ನೋಡಿಕೊಂಡಿದೆ.

ಆದರೆ ಇತರ ಪಕ್ಷಗಳ ಸರ್ಕಾರಗಳ ಅಡಿಯಲ್ಲಿ, ಬ್ರಾಹ್ಮಣರನ್ನು ನಿರ್ಲಕ್ಷ್ಯ ಮಾಡಲಾಗಿದೆ. ಬ್ರಾಹ್ಮಣರು ಅಸುರಕ್ಷಿತ ಮತ್ತು ವಂಚಿತರಾಗಿದ್ದಾರೆ ಎಂದು ತಿಳಿಸಿದ್ದಾರೆ.



ಇದಲ್ಲದೆ ಸಾಮಾಜಿಕ ಸಹೋದರತ್ವದ ಆಧಾರದಲ್ಲಿ ಬಿಎಸ್‌ಪಿಯೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವ ಇಚ್ಛೆಯಿಂದಾಗಿ ಬ್ರಾಹ್ಮಣ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಪ್ರಕ್ರಿಯೆಯು ಮುಂದುವರಿಯುತ್ತದೆ.

ಬಿಎಸ್‌ಪಿಯ 'ಉಕ್ಕಿನ ಮಹಿಳೆ' ನಾಯಕತ್ವದಲ್ಲಿ ಬ್ರಾಹ್ಮಣರು ಅಪಾರ ನಂಬಿಕೆ ಇಟ್ಟುಕೊಂಡಿದ್ದಾರೆ. ಬಿಎಸ್‌ಪಿ ಸರ್ಕಾರವನ್ನು ರಚಿಸಿದರೆ ಬ್ರಾಹ್ಮಣರಿಗೆ ಮತ್ತೆ ಎಲ್ಲ ಹಂತಗಳಲ್ಲಿ ಸರಿಯಾದ ಗೌರವ ಸಿಗಲಿದೆ ಎಂಬ ವಿಶ್ವಾಸವನ್ನು ಅವರು ಹೊಂದಿದ್ದಾರೆ ಎಂದಿದ್ದಾರೆ.

ಹೆಚ್ಚುವರಿಯಾಗಿ, ಕ್ಷತ್ರಿಯರು ಮತ್ತು ವೈಶ್ಯರಂತಹ ಇತರ ಮೇಲ್ಜಾತಿಯ ಸಮುದಾಯಗಳ ಸದಸ್ಯರನ್ನು ಬಿಎಸ್‌ಪಿ ಕಣಕ್ಕಿಳಿಸಲಿದೆ. ಇದಕ್ಕಾಗಿ ಎಲ್ಲ ಹಂತಗಳಲ್ಲಿ ಸಿದ್ಧತೆಗಳು ಸಕ್ರಿಯವಾಗಿ ನಡೆಯುತ್ತಿವೆ. ಇತರ ಪಕ್ಷಗಳಿಗಿಂತ ಭಿನ್ನವಾಗಿ, ಬಿಎಸ್‌ಪಿ ಆಯ್ದ

ಕೆಲವರಿಗೆ 'ಲಾಲಿಪಾಪ್‌ಗಳನ್ನು' ಹಂಚುವ ಕಿರಿದಾದ, ಸ್ವಾರ್ಥಪರ ರಾಜಕೀಯದಲ್ಲಿ ತೊಡಗುವುದಿಲ್ಲ. ಬದಲಾಗಿ, ಇಡೀ ಸಮಾಜದ ಹಿತಾಸಕ್ತಿ ಮತ್ತು ಕಲ್ಯಾಣಕ್ಕಾಗಿ ಕಾಳಜಿಯನ್ನು ತನ್ನ ಸಾಂವಿಧಾನಿಕ ಕರ್ತವ್ಯವೆಂದು ಪರಿಗಣಿಸುತ್ತದೆ ಎಂದೂ ಹೇಳಿದ್ದಾರೆ.

# ಬ್ರಿಕ್ಸ್ ಎನ್‌ಎಸ್‌ಎ ಸಭೆಯಲ್ಲಿ ಜಾಗತಿಕ ಭದ್ರತಾ ಬೆದರಿಕೆಗಳ ಬಗ್ಗೆ ಅಜಿತ್ ದೋವಲ್ ಎಚ್ಚರಿಕೆ

**ನವದೆಹಲಿ, ಜೂನ್ 23 :** ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮಂಗಳವಾರ ಸಾಂಪ್ರದಾಯಿಕ ಜಾಗತಿಕ ಸಂಸ್ಥೆಗಳು "ಸಾಂಪ್ರದಾಯಿಕವಲ್ಲದ ಭದ್ರತಾ ಸವಾಲುಗಳು", ಹೆಚ್ಚುತ್ತಿರುವ ಸಂಘರ್ಷಗಳು ಮತ್ತು ಉದಯೋನ್ಮುಖ ಭದ್ರತಾ ಬೆದರಿಕೆಗಳನ್ನು ಪರಿಹರಿಸಲು ಹೆಚ್ಚು ಅಸಮರ್ಪಕವಾಗಿವೆ ಎಂದು ಎಚ್ಚರಿಸಿದ್ದಾರೆ, ಬ್ರಿಕ್ಸ್ ರಾಷ್ಟ್ರಗಳ ನಡುವೆ ಹೆಚ್ಚಿನ ಸಹಕಾರಕ್ಕಾಗಿ ಕರೆ ನೀಡಿದ್ದಾರೆ. ಅಮೆರಿಕ ಮತ್ತು ಇರಾನ್ ನಡುವಿನ ಒಪ್ಪಂದವನ್ನು ಸ್ವಾಗತಿಸಿದ ಅಜಿತ್ ದೋವಲ್, ನವದೆಹಲಿಯಲ್ಲಿ 16 ನೇ ಬ್ರಿಕ್ಸ್ ರಾಷ್ಟ್ರೀಯ ಭದ್ರತಾ ಸಲಹೆಗಾರರ ಸಭೆಯನ್ನು ಉದ್ಘಾಟಿಸಿದರು, ಈ ಅಭಿವೃದ್ಧಿಯು ಜಾಗತಿಕ ಇಂಧನ ಭದ್ರತೆಯನ್ನು ಬಲಪಡಿಸುತ್ತದೆ ಎಂದು ಹೇಳಿದರು. ಹಾರ್ಮುಜ್ ಜಲಸಂಧಿಯನ್ನು ತೆರೆಯುವುದನ್ನು ಅವರು ಸ್ವಾಗತಿಸಿದರು, ಇದು ಪೂರೈಕೆ ಸರಪಳಿಯ ಅಡಚಣೆಗಳನ್ನು ಕಡಿಮೆ ಮಾಡಲು ಮತ್ತು ರಸಗೊಬ್ಬರಗಳು ಮತ್ತು ರಾಸಾಯನಿಕಗಳಂತಹ ಪ್ರಮುಖ ಸರಕುಗಳ ಕೊರತೆಯನ್ನು ಪರಿಹರಿಸಲು ಸಹಾಯ ಮಾಡುತ್ತದೆ ಎಂದು ಗಮನಿಸಿದರು. ಈ ಪ್ರದೇಶದಲ್ಲಿ ಹೆಚ್ಚಿನ ಸಂಚರಣೆ ಸ್ವಾತಂತ್ರ್ಯವು ಜಾಗತಿಕ ಆರ್ಥಿಕ ಸ್ಥಿರತೆ ಮತ್ತು ಸಮೃದ್ಧಿಯನ್ನು ಬೆಂಬಲಿಸುತ್ತದೆ ಎಂದು ಅವರು ಹೇಳಿದರು. ಸಭೆಯನ್ನು ಉದ್ಘಾಟಿಸಿದ ದೋವಲ್, ಜಗತ್ತು ಭೌಗೋಳಿಕ ರಾಜಕೀಯ ಉದ್ವಿಗ್ನತೆ, ಆರ್ಥಿಕ ಒತ್ತಡ ಮತ್ತು ತ್ವರಿತ ತಾಂತ್ರಿಕ ಬದಲಾವಣೆಯಿಂದ ಗುರುತಿಸಲ್ಪಟ್ಟ "ಬಹಳ ಪ್ರಕ್ಷುಬ್ಧ ಸಮಯ"ದ ಮೂಲಕ ಹಾದುಹೋಗುತ್ತಿದೆ ಎಂದು ಹೇಳಿದರು.

ವೈವಿಧ್ಯಮಯ ಭೌಗೋಳಿಕತೆ ಮತ್ತು ಅನುಭವಗಳ ಹೊರತಾಗಿಯೂ, ಸಾಂಪ್ರದಾಯಿಕ ಸಂಘರ್ಷ ಪರಿಹಾರ ಕಾರ್ಯವಿಧಾನಗಳು ದುರ್ಬಲಗೊಳ್ಳುತ್ತಿರುವ ವೇಗವಾಗಿ ಬದಲಾಗುತ್ತಿರುವ ಜಾಗತಿಕ ಕ್ರಮದಲ್ಲಿ ಬ್ರಿಕ್ಸ್ ದೇಶಗಳು "ವಿಶೇಷ ಪಾತ್ರ" ಹೊಂದಿವೆ ಎಂದು ದೋವಲ್ ಒತ್ತಿ ಹೇಳಿದರು. ಬಹುಧ್ರುವೀಯ ವಿಶ್ವ ಕ್ರಮವನ್ನು ಉತ್ತೇಜಿಸುವುದು, ಆರ್ಥಿಕ ಸಹಕಾರವನ್ನು ಬಲಪಡಿಸುವುದು ಮತ್ತು ಜಾಗತಿಕ ದಕ್ಷಿಣದ ಧ್ವನಿಯನ್ನು ವರ್ಧಿಸುವ ಗುರಿಯನ್ನು ಹೊಂದಿರುವ ಉದಯೋನ್ಮುಖ ಆರ್ಥಿಕತೆಗಳ ಅನೌಪಚಾರಿಕ ವೇದಿಕೆಯಾಗಿ ಬ್ರಿಕ್ಸ್ ಅನ್ನು ಕಲ್ಪಿಸಲಾಗಿದೆ ಎಂದು ಅವರು ನೆನಪಿಸಿಕೊಂಡರು. ಜಾಗತಿಕ ಆಡಳಿತ ಸಂಸ್ಥೆಗಳಲ್ಲಿ ಸುಧಾರಣೆಗಳನ್ನು ಹುಡುಕುವುದನ್ನು ಈ ಗುಂಪು ಮುಂದುವರಿಸಿದೆ ಎಂದು ಅವರು ಹೇಳಿದರು. ಜಾಗತಿಕ ಅಸ್ಥಿರತೆಯ ಸಮಯದಲ್ಲಿ ವೈವಿಧ್ಯಮಯ ದೃಷ್ಟಿಕೋನಗಳನ್ನು ಹೊಂದಿರುವ ದೇಶಗಳನ್ನು ಬ್ರಿಕ್ಸ್ ಒಟ್ಟುಗೂಡಿಸುತ್ತದೆ ಎಂದು ದೋವಲ್ ಹೇಳಿದರು. "ನಾವು ಇಲ್ಲಿ ವಿವಿಧ ಖಂಡಗಳಿಂದ, ವಿವಿಧ ಪ್ರದೇಶಗಳಿಂದ ಬಂದಿದ್ದೇವೆ ಮತ್ತು ಇದು ನಮ್ಮೊಂದಿಗೆ ವೈವಿಧ್ಯಮಯ ಅನುಭವಗಳನ್ನು ತರುವ ಗುಂಪು" ಎಂದು ಅವರು ಹೇಳಿದರು, ಉದಯೋನ್ಮುಖ ಜಾಗತಿಕ ಸವಾಲುಗಳನ್ನು ಎದುರಿಸುವಲ್ಲಿ ಈ ಗುಂಪು ತನ್ನ ಪಾತ್ರವನ್ನು ಪ್ರತಿಬಿಂಬಿಸಬೇಕು ಎಂದು ಅವರು ಹೇಳಿದರು. ಸೈಬರ್ ಅಪಾಯಗಳು, ಭಯೋತ್ಪಾದನೆ ಮತ್ತು ತ್ವರಿತ ತಾಂತ್ರಿಕ ಪ್ರಗತಿಯಿಂದ ಉಂಟಾಗುವ ಸವಾಲುಗಳು ಸೇರಿದಂತೆ ಸಾಂಪ್ರದಾಯಿಕವಲ್ಲದ ಭದ್ರತಾ ಬೆದರಿಕೆಗಳ ಮೇಲೆ ಸಭೆ ಕೇಂದ್ರೀಕರಿಸಿದೆ.

ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಪ್ರಕಾರ, ಇರಾನ್, ಚೀನಾ ಮತ್ತು ಬ್ರೆಜಿಲ್ ಪ್ರತಿನಿಧಿಗಳು ಸೇರಿದಂತೆ ಶೃಂಗಸಭೆಯ ಬದಿಯಲ್ಲಿ ಎನ್‌ಎಸ್‌ಎ ದೋವಲ್ ಹಲವಾರು ಭೇಟಿ ನೀಡುವ ಪ್ರತಿನಿಧಿಗಳೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಿದರು. ಇರಾನ್ ಜೊತೆಗಿನ ಮಾತುಕತೆಗಳು ಪಶ್ಚಿಮ ಏಷ್ಯಾದಲ್ಲಿನ ಬೆಳವಣಿಗೆಗಳು ಮತ್ತು ದ್ವಿಪಕ್ಷೀಯ ಸಹಕಾರದ




ಮೇಲೆ ಕೇಂದ್ರೀಕರಿಸಿದವು, ಮತ್ತು ಚೀನಾದೊಂದಿಗಿನ ಮಾತುಕತೆಗಳನ್ನು ಭವಿಷ್ಯವಾಣಿಯೆಂದು ವಿವರಿಸಲಾಯಿತು, ಎರಡೂ ಕಡೆಯವರು ಸಂಬಂಧಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಿದರು ಮತ್ತು ಸಂಬಂಧಗಳಲ್ಲಿ ಸ್ಥಿರತೆ ಮತ್ತು ಭವಿಷ್ಯವಾಣಿಯನ್ನು ಒತ್ತಿ ಹೇಳಿದರು. ಬ್ರೆಜಿಲ್ ಭಾಗವಹಿಸುವಿಕೆಯು ಬಹುಪಕ್ಷೀಯ ಭದ್ರತಾ ಸಹಕಾರದ ಕುರಿತು ಸಮಾಲೋಚನೆಗಳನ್ನು ಸಹ ಒಳಗೊಂಡಿತ್ತು. ಇರಾನಿಯನ್, ಚೀನೀ ಮತ್ತು ಇತರ ನಿಯೋಗಗಳು ಸಹ ಪಕ್ಕದಲ್ಲಿ ಸಂವಹನಗಳನ್ನು ನಡೆಸಿದವು, ಪ್ರಾದೇಶಿಕ ಸ್ಥಿರತೆಯ ಮಹತ್ವವನ್ನು ಮತ್ತು ಭೌಗೋಳಿಕ ರಾಜಕೀಯ ಉದ್ವಿಗ್ನತೆಯ ಅವಧಿಯಲ್ಲಿ ನಿರಂತರ ರಾಜತಾಂತ್ರಿಕ ನಿಶ್ಚಿತಾರ್ಥವನ್ನು ಎತ್ತಿ ತೋರಿಸಿದವು.

# ಇಸ್ಲಾಮ್‌ಪುರ ಶ್ರೀರಾಮಪುರವೆಂದು ಬದಲಾವಣೆ: ಸ್ಥಳೀಯರ ವಿರೋಧ

ಜೈಪುರ, ಜೂ. 23: ರಾಜಸ್ಥಾನದ ಜುಂಜುನು ಜಿಲ್ಲೆಯ ವ್ಯಾಪ್ತಿಗೆ ಬರುವ ಇಸ್ಲಾಮ್‌ಪುರ ಗ್ರಾಮದ ಹೆಸರನ್ನು 'ಶ್ರೀರಾಮಪುರ' ಎಂದು ಮರುನಾಮಕರಣ ಮಾಡಲು ಸರ್ಕಾರ ಮುಂದಾಗಿರುವ ಕ್ರಮಕ್ಕೆ ಸ್ಥಳೀಯ ಮಟ್ಟದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಸರ್ಕಾರದ ಈ ನಿರ್ಧಾರವನ್ನು ಕೇವಲ ಮುಸ್ಲಿಂ ಸಮುದಾಯ ಮಾತ್ರವಲ್ಲದೆ, ಗ್ರಾಮದ ಬಹುಸಂಖ್ಯಾತ ಹಿಂದೂ ನಿವಾಸಿಗಳೂ ಸೇರಿ ಒಟ್ಟಾಗಿ ವಿರೋಧಿಸುತ್ತಿದ್ದಾರೆ. ಗ್ರಾಮಸ್ಥರು ಬೀದಿಗಿಳಿದು 15 ಕಿ.ಮೀ. ಪಾದಯಾತ್ರೆ ನಡೆಸಿದ್ದಾರೆ. ಇಸ್ಲಾಮ್‌ಪುರದಲ್ಲಿ ದಶಕಗಳಿಂದಲೂ ಎರಡೂ ಸಮುದಾಯಗಳು ಅತ್ಯಂತ ಸೌಹಾರ್ದತೆಯಿಂದ ಬಾಳುತ್ತಿದ್ದಾರೆ. ಇದೀಗ ಬಿಜೆಪಿಯ ರಾಜಕೀಯ ಲಾಭಕ್ಕಾಗಿ ಗ್ರಾಮದ ಹೆಸರನ್ನು ಬದಲಾಯಿಸಿ ಸೌಹಾರ್ದತೆಯನ್ನು ಕೆಡಿಸಲು ಯತ್ನಿಸಲಾಗುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಹೆಸರು ಬದಲಾಯಿಸುವ ಪ್ರಸ್ತಾಪದ ವಿರುದ್ಧ ಗ್ರಾಮಸ್ಥರು ಒಟ್ಟಾಗಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ. ಇಸ್ಲಾಮ್‌ಪುರ ಎಂಬ ಹೆಸರು ಈ ಭಾಗದ ಇತಿಹಾಸ ಮತ್ತು ಸಂಸ್ಕೃತಿಯೊಂದಿಗೆ ಬೆಸೆದುಕೊಂಡಿದೆ. ಇದನ್ನು ಬದಲಾಯಿಸುವುದರಿಂದ ಗ್ರಾಮದ ಮೂಲ ಗುರುತು ನಾಶವಾಗುತ್ತದೆ. ಗ್ರಾಮದಲ್ಲಿ ಹಿಂದೂ ಮತ್ತು ಮುಸ್ಲಿಂ ಸಮುದಾಯಗಳ ನಡುವೆ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ.

ಈ ಹೆಸರು ಬದಲಾವಣೆ ಪ್ರಕ್ರಿಯೆಯು ಅನಗತ್ಯವಾಗಿ ಕೋಮು ಧ್ರುವೀಕರಣಕ್ಕೆ ಕಾರಣವಾಗಬಹುದು ಎಂದು ಸ್ಥಳೀಯ ಹಿಂದೂಗಳು ಕಳವಳ ವ್ಯಕ್ತಪಡಿಸಿದ್ದಾರೆ.

ಇನ್ನೊಂದೆಡೆ ನಮಗೆ ಗ್ರಾಮದ ಹೆಸರು ಬದಲಾಗುವುದು ಬೇಡ, ಬದಲಿಗೆ ರಸ್ತೆ, ಕುಡಿಯುವ ನೀರು, ಶಾಲೆ ಮತ್ತು ಆಸ್ಪತ್ರೆಗಳಂತಹ ಮೂಲಸೌಕರ್ಯಗಳ ಅಭಿವೃದ್ಧಿಯಾಗಬೇಕು ಎಂದು ಸ್ಥಳೀಯ ಯುವಕರು ಆಕ್ರೋಶ ಹೊರಹಾಕಿದ್ದಾರೆ.

ಸ್ಥಳೀಯ ಮಾಧ್ಯಮಕ್ಕೆ ಪ್ರತಿಕ್ರಿಯಿಸಿರುವ ಗ್ರಾಮದ ಸರಪಂಚ್ ಅಮೀನ್ ಮಣಿಯಾರ್, ನಮ್ಮ ಊರಿನ ಹೆಸರಿನಿಂದ ನಮಗೆ ಯಾವುದೇ ಸಮಸ್ಯೆಯಿಲ್ಲ. ಶ್ರೀರಾಮನ ಹೆಸರನ್ನು ನಾವು ಗೌರವಿಸುತ್ತೇವೆ, ಆದರೆ ರಾಜಕೀಯ ಕಾರಣಗಳಿಗಾಗಿ ನಮ್ಮ ಊರಿನ ಹಳೆಯ ಹೆಸರನ್ನು ಬದಲಾಯಿಸಿ ಸೌಹಾರ್ದತೆ ಹಾಳು ಮಾಡುವುದನ್ನು ನಾವು ಒಪ್ಪುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಹಿಂದೆಯೂ ಬಿಜೆಪಿ ಸ್ಥಳೀಯವಾಗಿ ಹಿಂದೂ ಮುಸ್ಲಿಮರ ನಡುವೆ ಉದ್ವಿಗ್ನತೆ ಸೃಷ್ಟಿಸಿ, ಊರುಗಳ ಹೆಸರನ್ನು ಬದಲಾವಣೆ ಮಾಡಿದೆ.

ಅಲಹಾಬಾದ್ ಅನ್ನು ಪ್ರಯಾಗ್‌ರಾಜ್ ಎಂದು, ಫೈಜಾಬಾದ್ ಅನ್ನು ಅಯೋಧ್ಯೆ ಎಂದು ಬದಲಾಯಿಸಿದೆ. ಮೊಘಲ್‌ಸರಾಯ್ ರೈಲ್ವೆ ನಿಲ್ದಾಣವನ್ನು ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ನಗರವೆಂದು, ಔರಂಗಾಬಾದ್ ಅನ್ನು ಛತ್ರಪತಿ ಸಂಭಾಜಿನಗರ, ಉಸ್ಮಾನಾಬಾದ್ ಅನ್ನು ಧಾರಾಶಿವ್, ಹೊಸಂಗಾಬಾದ್ ಅನ್ನು ನರ್ಮದಾಪುರಂ ಹೀಗೆ ಮೊಘಲ್ ಆಡಳಿತದಿಂದಲೂ ಇದ್ದ ಹೆಸರನ್ನೂ ಬದಲಾಯಿಸಿಕೊಳ್ಳುತ್ತಾ ಬಂದಿದೆ. ಗುಜರಾತ್‌ನ ಅಹಮದಾಬಾದ್ ಅನ್ನು 'ಕರ್ಣಾವತಿ' ಎಂದೂ, ತೆಲಂಗಾಣದ ಹೈದರಾಬಾದ್ ಅನ್ನು 'ಭಾಗ್ಯನಗರ' ಎಂದೂ ಬದಲಾಯಿಸುವ ಚರ್ಚೆಯೂ ನಡೆಯುತ್ತಿದೆ.

# ಪ್ರವಾಸೋದ್ಯಮಕ್ಕೆ ನಮ್ಮ ಗೈಡ್ ಆನ್‌ಲೈನ್ ವೇದಿಕೆ ಸಜ್ಜುಗೊಳಿಸಲು ಸರ್ಕಾರ ನಿರ್ಧಾರ: ಕೆ.ಜೆ.ಜಾರ್ಜ್

**ಬೆಂಗಳೂರು, ಜೂ.23:** ರಾಜ್ಯದ ಪ್ರವಾಸೋದ್ಯಮ ಕ್ಷೇತ್ರವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೇರಿಸುವ ಮತ್ತು ಪ್ರವಾಸಿಗರಿಗೆ ವಿಶ್ವದರ್ಜೆಯ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ, ಕರ್ನಾಟಕ ಪ್ರವಾಸೋದ್ಯಮ ಇಲಾಖೆಯು ವಿನೂತನ "ನಮ್ಮ ಗೈಡ್" ಆನ್‌ಲೈನ್ ವೇದಿಕೆಯನ್ನು ಅಭಿವೃದ್ಧಿಪಡಿಸಲು ಮುಂದಾಗಿದೆ. ಈ ಸಂಬಂಧ ನೂತನ ವೆಬ್‌ಸೈಟ್ ಮತ್ತು ಆಪ್ ಸಿದ್ಧಪಡಿಸಲು ಇಲಾಖೆ ಯೋಜಿಸಿದೆ.

ಈ ಕುರಿತು ಮಾಹಿತಿ ನೀಡಿರುವ ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್, ರಾಜ್ಯದ ಪ್ರವಾಸೋದ್ಯಮವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೇರಿಸುವಲ್ಲಿ ಸ್ಥಳೀಯ ಗೈಡ್‌ಗಳ ಪಾತ್ರ ಬಹಳ ದೊಡ್ಡದು. ವಿದೇಶಗಳ ಮಾದರಿಯಲ್ಲಿ ಪಾರದರ್ಶಕವಾಗಿ ಗೈಡ್‌ಗಳ ಸೇವೆ ಪಡೆಯಲು ನಮ್ಮ ಗೈಡ್ ವೇದಿಕೆ ಅನುಕೂಲವಾಗಲಿದೆ. ಇದು ಪ್ರವಾಸಿಗರಿಗೆ ಉತ್ತಮ ಅನುಭವ ನೀಡುವುದಲ್ಲದೆ, ಐತಿಹಾಸಿಕ ತಾಣಗಳ ನಿರ್ವಹಣೆಗೂ ಬಲ ತುಂಬಲಿದೆ ಎಂದು ಮಾಹಿತಿ ನೀಡಿದ್ದಾರೆ.

ಪ್ರಸ್ತುತ ವಿದೇಶಗಳಲ್ಲಿ ಚಾಲ್ತಿಯಲ್ಲಿರುವ ಆನ್‌ಲೈನ್ ಗೈಡ್ ಬುಕಿಂಗ್ ಮಾದರಿಯನ್ನೇ ಕರ್ನಾಟಕದಲ್ಲೂ ಜಾರಿಗೆ ತರುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ರಾಜ್ಯದ ಐತಿಹಾಸಿಕ ಮತ್ತು ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ದೇಶ–ವಿದೇಶಗಳ ಪ್ರವಾಸಿಗರಿಗೆ, ಆಯಾ ಪ್ರದೇಶದ ಇತಿಹಾಸ, ಸಂಸ್ಕೃತಿ ಮತ್ತು ಮಹತ್ವದ ಬಗ್ಗೆ ನಿಖರವಾದ ಮಾಹಿತಿ ನೀಡಲು ಸ್ಥಳೀಯ ಗೈಡ್‌ಗಳ ಸೇವೆ ಅತ್ಯಗತ್ಯ. ಈ ಆನ್‌ಲೈನ್ ವೇದಿಕೆಯ ಮೂಲಕ ಪ್ರವಾಸಿಗರು ತಮಗೆ ಬೇಕಾದ ಗೈಡ್‌ಗಳನ್ನು ಮನೆಯಲ್ಲೇ ಕುಳಿತು ಸುಲಭವಾಗಿ ಕಾಯ್ದಿರಿಸ ಬಹುದಾಗಿದೆ.

ಯೋಜನೆಯು ಪ್ರವಾಸಿಗರಿಗೆ ಅನುಕೂಲ ಕಲ್ಪಿಸುವುದರ ಜೊತೆಗೆ, ಪ್ರವಾಸೋದ್ಯಮ ಇಲಾಖೆಯಲ್ಲಿ ಈಗಾಗಲೇ ನೋಂದಣಿಯಾಗಿರುವ ಗೈಡ್‌ಗಳಿಗೆ ಹೆಚ್ಚಿನ ಉದ್ಯೋಗಾವಕಾಶವನ್ನು ಸೃಷ್ಟಿಸಲಿದೆ. ಅಲ್ಲದೆ, ಪ್ರವಾಸಿ ತಾಣಗಳ ಸ್ವಚ್ಛತೆ ಮತ್ತು ನಿರ್ವಹಣೆಯಲ್ಲಿ ಗೈಡ್‌ಗಳನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳಲು ಇದು ಸಹಕಾರಿಯಾಗಲಿದೆ ಎಂದು ಇಲಾಖೆ ತಿಳಿಸಿದೆ.



ಈ ಮಹತ್ವಾಕಾಂಕ್ಷೆಯ ಯೋಜನೆಯನ್ನು ಸಾಕಾರಗೊಳಿಸಲು ರಾಜ್ಯದ ಪ್ರತಿಭಾವಂತ ನವೋದ್ಯಮಗಳು ಹಾಗೂ ತಂತ್ರಜ್ಞಾನ ಸಂಸ್ಥೆಗಳಿಗೆ ಅವಕಾಶ ನೀಡಲು ಇಲಾಖೆ ಆಹ್ವಾನ ನೀಡುತ್ತಿದೆ.



ಕರ್ನಾಟಕ ಬ್ಯಾಂಕ್ ಎಂ.ಡಿ ಹಾಗೂ ಸಿಇಓ ರಾಘವೇಂದ್ರ ಶ್ರೀನಿವಾಸ್ ಭಟ್ ನೇತೃತ್ವದ ಕರ್ನಾಟಕ ಬ್ಯಾಂಕ್ ನಿಯೋಗವು ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ವಿಧಾನಸೌಧದಲ್ಲಿ ಮಂಗಳವಾರ ಭೇಟಿಮಾಡಿ ಅಭಿನಂದಿಸಿತು.

### ಕೊಡಗು, ಮಲೆನಾಡಿನಲ್ಲಿ ನಗರೀಕರಣ ತಪ್ಪಿಸಿ

# ಪರಿಸರ ಸಂರಕ್ಷಣೆಗೆ ಆದ್ಯತೆ ಅಗತ್ಯ: ಸರ್ಕಾರಕ್ಕೆ ಕೊಡಗು–ಕಾವೇರಿ ರಕ್ಷಣಾ ವೇದಿಕೆ ಆಗ್ರಹ

**ಬೆಂಗಳೂರು, ಜೂ.23:** ಕೊಡವರ ಮೂಲ ಸಂಸ್ಕೃತಿ, ಪರಿಸರ ನಶಿಸುತ್ತಿದ್ದು, ಕೊಡಗು ಮತ್ತು ಮಲೆನಾಡು ಭಾಗದಲ್ಲಿ ನಗರೀಕರಣ ತಪ್ಪಿಸಿ ಪ್ರವಾಸೋದ್ಯಮಕ್ಕೆ ನಿಯಂತ್ರಣ ಹೇರಬೇಕು. ಪೊನ್ನಂಪೇಟೆಯನ್ನು ಪಟ್ಟ ಪಂಚಾಯತ್ ಮಾಡಿರುವ ಆದೇಶವನ್ನು ಮರುಪರಿಶೀಲಿಸಬೇಕು. ಕೆ. ನಿಡುಗಣೆ ಗ್ರಾಮ ಪಂಚಾಯತ್‌ನಲ್ಲಿ ಗೃಹ ಮಂಡಳಿಯಿಂದ 94 ಎಕರೆಯಲ್ಲಿ ಕೈಗೆತ್ತಿಕೊಂಡಿರುವ ವಸತಿ ಯೋಜನೆಯನ್ನು ಕೈಬಿಡಬೇಕು ಎಂದು ಕೊಡಗು ಹಾಗೂ ಕಾವೇರಿ ರಕ್ಷಣಾ ವೇದಿಕೆ ಆಗ್ರಹಿಸಿದೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವೇದಿಕೆ ಸಂಚಾಲಕ ನಿವೃತ್ತ ಕರ್ನಲ್ ಸಿ.ಪಿ ಮುತ್ತಣ್ಣ, ಕೊಡಗು ಹಾಗೂ ಮಲೆನಾಡು ಭಾಗದಲ್ಲಿ ಕೊಡಗು ಮತ್ತು ಸ್ಥಳೀಯ ಸಮುದಾಯಗಳನ್ನು ಹೊರತುಪಡಿಸಿ ಉಳಿದವರು ಭೂಮಿ ಖರೀದಿ ಮಾಡದಂತೆ ಬಲವಾದ ನಿರ್ಬಂಧಗಳನ್ನು ವಿಧಿಸಬೇಕು. ಜಮ್ಮಾ ಹಿಡುವಳಿದಾರರು ಮತ್ತು ಗುರುತಿಸಲಾದ ಸ್ಥಳೀಯರಿಗೆ ಮಾತ್ರ ಭೂಮಿ ಖರೀದಿಸಲು ಅವಕಾಶ ಕಲ್ಪಿಸಬೇಕು. ಮಿಜೋರಾಂ, ನಾಗಾಲ್ಯಾಂಡ್ ಮತ್ತಿತರೆ ಈಶಾನ್ಯ ರಾಜ್ಯಗಳಲ್ಲಿರುವಂತೆ ಸ್ಥಳೀಯರು ಹೊರತುಪಡಿಸಿ ಉಳಿದವರು ಭೂಮಿ ಖರೀದಿಸಲು ಅವಕಾಶವಾಗದಂತೆ ಭೂಕಂದಾಯ ಕಾಯ್ದೆಗೆ ತಿದ್ದುಪಡಿ ತರಬೇಕು ಎಂದು ಒತ್ತಾಯಿಸಿದರು.

ಕೊಡಗಿನಲ್ಲಿ ಧಾರಣಾಶಕ್ತಿ ಕ್ಷೀಣಿಸುತ್ತಿದೆ. ಕೊಡಗಿನ ಜನಸಂಖ್ಯೆ 6 ಲಕ್ಷ ಇದ್ದರೆ ಪ್ರವಾಸಿಗರ ಸಂಖ್ಯೆ 40 ಲಕ್ಷದಷ್ಟಿದ್ದು, ಅಕ್ರಮವಾಗಿ ತಲೆ ಎತ್ತಿರುವ ರೆಸಾರ್ಟ್ಸ್‌ಗಳು, ಹೋಮ್ ಸ್ಟೇಗಳಿಗೆ ಕಡಿವಾಣ ಹಾಕಬೇಕು. ಪ್ರವಾಸೋದ್ಯಮಕ್ಕೆ ಮಿತಿ ಹೇರಬೇಕು. ಕೊಡಗಿನ ಜನರಿಗೆ ಆರ್ಥಿಕ ಭದ್ರತೆ ಒದಗಿಸುವ ಜೊತೆಗೆ ಮಾನವ ಪ್ರಾಣಿ ಸಂಘರ್ಷ ತಡೆಗಟ್ಟಬೇಕು. ಕೊಡಗಿಗೆ ವಿನಾಶಕಾರಿಯಾಗಿರುವ ಮೈಸೂರು – ಕುಶಾಲನಗರ ರೈಲ್ವೆ ಯೋಜನೆಯನ್ನು ಕೈಬಿಡಬೇಕು. ಮಾಲಿನ್ಯಕಾರಕ ಕೈಗಾರಿಕೆಗಳು, ಸ್ಥಾವರಗಳ ಮೇಲೆ ನಿಷೇಧ ಹೇರಬೇಕು. ವಿದ್ಯುತ್ ಸರಬರಾಜು ಹಾಗೂ ಮೂಲ ಸೌಕರ್ಯ ಹೆಚ್ಚಿಸಬೇಕು ಎಂದು ಕರ್ನಲ್ ಸಿ.ಪಿ ಮುತ್ತಣ್ಣ ಒತ್ತಾಯಿಸಿದರು.

ಕೊಡಗು ಬುಡಕಟ್ಟು ಸಮುದಾಯಗಳ ಕಲ್ಯಾಣಕ್ಕೆ ಒತ್ತು ನೀಡಬೇಕು. ಆರೋಗ್ಯ ರಕ್ಷಣೆ ಜೊತೆಗೆ ಅರಣ್ಯ ಇಲಾಖೆಯಲ್ಲಿ ಅರಣ್ಯ ರಕ್ಷಕರು, ಅಗ್ನಿಶಾಮಕ ವೀಕ್ಷಕರು, ಮತ್ತಿತರೆ ಕೆಲಸಗಳಿಗೆ ಬುಡಕಟ್ಟು ಸಮುದಾಯದವರನ್ನು ನೇಮಿಸಬೇಕು. ಜಿಲ್ಲೆಗೆ ವಿದೇಶದಿಂದ ಬಂದಿರುವ ಅಕ್ರಮ ವಲಸಿಗರನ್ನು ಪತ್ತೆ ಮಾಡಿ ಗಡಿಪಾರು ಮಾಡಬೇಕು ಎಂದು ಆಗ್ರಹಿಸಿದರು.

# ಕರಾವಳಿ ಸೇರಿ ರಾಜ್ಯದಲ್ಲಿ 5 ದಿನ ಗುಡುಗು, ಸಿಡಿಲಿನ ಮಳೆ

**ಬೆಂಗಳೂರು, ಜೂ.23:** ಮುಂದಿನ 5 ದಿನಗಳು ರಾಜ್ಯದ ಅಲ್ಲಲ್ಲಿ ಗುಡುಗು, ಸಿಡಿಲು ಮತ್ತು ಜೋರಾದ ಗಾ ಳಿ ಯ ೊ ಂ ದಿ ಗೆ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಕರಾವಳಿ ಜಿಲ್ಲೆಗಳಲ್ಲಿ ಅಲ್ಲಲ್ಲಿ ಭಾರಿ ಮಳೆಯಾಗಲಿದ್ದು, ಜೂನ್ 26 ಮತ್ತು 27ರಂದು ಅತಿಯಾದ ಮಳೆಯಾಗುವ ನಿರೀಕ್ಷೆಯಿದೆ. ಅಂತೆಯೇ ಒಳನಾಡು ಜಿಲ್ಲೆಗಳಲ್ಲೂ ಜೂನ್ 26 ಹಾಗೂ 27ರಂದು ಕೆಲವು ಕಡೆ ಭಾರಿ ಮಳೆಯಾಗುವ ಮುನ್ಸೂಚನೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.



ಹವಾಮಾನ ಇಲಾಖೆ ಮತ್ತು ಕೆಎಸ್‌ಎನ್‌ಡಿಎಂಸಿ ನೀಡಿರುವ ಪ್ರಮುಖ ಮುನ್ಸೂಚನೆಗಳು ಹಾಗೂ ಮುಂಜಾಗ್ರತಾ ಕ್ರಮಗಳು ಪ್ರಕಾರ, ಕರಾವಳಿಯ ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಸಾಧಾರಣದಿಂದ ಭಾರೀ ಮಳೆಯಾಗುವ ಎಚ್ಚರಿಕೆ ನೀಡಲಾಗಿದ್ದು, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಸೂಚನೆ ನೀಡಲಾಗಿದೆ.

ಒಳನಾಡು ಮತ್ತು ಮಲೆನಾಡು ಹಾಗೂ ದಕ್ಷಿಣ–ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ಗಾಳಿಯ ವೇಗ ಹೆಚ್ಚಿರಲಿದ್ದು, ಸಾಧಾರಣ ಮಳೆಯಾಗಲಿದೆ. ಜೂನ್ 26 ಮತ್ತು 27 ರಂದು ಭಾರಿ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಪರಿಗಣಿಸಿ ಅಗತ್ಯ ಮುಂಜಾಗ್ರತೆ ವಹಿಸಬೇಕು.

ಬೆಂಗಳೂರು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮುಂದಿನ ಕೆಲವು ದಿನಗಳ ಕಾಲ ತಂಪಾದ ವಾತಾವರಣದೊಂದಿಗೆ ಸಂಜೆ ಅಥವಾ ರಾತ್ರಿ ವೇಳೆ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

# ನವಿಲುಗರಿಗಳಿರುವ ಉಡುವು ಧರಿಸಿ ರೀಲ್ಸ್ ಬಿಗ್‌ಬಾಸ್ ಮಾಜಿ ಸ್ಪರ್ಧಿಗಳಿಗೆ ಸಂಕಷ್ಟ

**ಬೆಂಗಳೂರು, ಜೂ.23:** ನವಿಲು ಗರಿಗಳಿರುವ ಉಡುಪು ಧರಿಸಿ ರೀಲ್ಸ್ ಮಾಡಿದ ಬಿಗ್‌ಬಾಸ್ ಮಾಜಿ ಸ್ಪರ್ಧಿಗಳಾದ ಕಿಶನ್ ಹಾಗೂ ನಿವೇದಿತಾ ಗೌಡ ಅವರಿಗೆ ಈಗ ಸಂಕಷ್ಟ ಎದುರಾಗಿದ್ದು, ಇಬ್ಬರ ವಿರುದ್ಧ ಅರಣ್ಯ ಇಲಾಖೆಗೆ ದೂರು ನೀಡಲಾಗಿದೆ.

ಸದಾ ರೀಲ್ಸ್‌ನಲ್ಲಿ ಮಿಂಚುವ ನಿವೇದಿತಾ ಗೌಡ ಅವರು ಡ್ಯಾನ್ಸರ್ ಕಿಶನ್ ಅವರ ಜೊತೆ ನೈಜ ನವಿಲು ಗರಿಗಳನ್ನು ಬಳಸಿ ತಯಾರಿಸಿದ ಉಡುಪು ಧರಿಸಿ, ಹೇ ನವಿಲೇ ನವಿಲೇ ಹಾಡಿಗೆ ಹೆಜ್ಜೆ ಹಾಕಿದ್ದಾರೆ. ಅಲ್ಲದೆ ಇದನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಹಂಚಿಕೊಂಡಿದ್ದರು.

ಈ ಸಂಬಂಧ ಸಾಮಾಜಿಕ ಹೋರಾಟಗಾರ ದಿನೇಶ್ ಕಲ್ಲಹಳ್ಳಿ ಅವರು ಅರಣ್ಯ ಇಲಾಖೆಗೆ ದೂರು ನೀಡಿದ್ದು, ದೂರಿನಲ್ಲಿ, ರೀಲ್ಸ್ ಮಾಡುವಾಗ ಯಥೇಚ್ಛವಾಗಿ



ನವಿಲುಗರಿ ಬಳಸಿದ್ದಾರೆ. ಹೀಗಾಗಿ ಇದನ್ನು ತನಿಖೆ ಮಾಡುವಂತೆ ಮನವಿ ಮಾಡಿದ್ದಾರೆ.

ನೈಜ ನವಿಲುಗರಿಗಳನ್ನು ಬಳಸಿ ಉಡುಪು ತಯಾರಿಸಿ ಸಾರ್ವಜನಿಕವಾಗಿ ಪ್ರ ದ ರ್ಶಿ ಸಿ ರು ವು ದು ವನ್ಯಜೀವಿ(ಸಂರಕ್ಷಣಾ) ಕಾಯ್ದೆ, 1972ರ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ದಿನೇಶ್ ಕಲ್ಲಹಳ್ಳಿ ತಮ್ಮ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಬೆಂಗಳೂರು ಪ್ರಾದೇಶಿಕ ನಗರ ವಿಭಾಗ ವ್ಯಾಪ್ತಿಯ ಕಗ್ಗಲಿಪುರ ಅರಣ್ಯ ವಲಯ ಅಧಿಕಾರಿಗಳಿಗೆ ದಿನೇಶ್ ಅವರು ದೂರು ನೀಡಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುವಂತೆ ಹಿರಿಯ ಅಧಿಕಾರಿಗಳು ನಿರ್ದೇಶನ ನೀಡಬೇಕು ಎಂದು ಮನವಿ ಮಾಡಿದ್ದಾರೆ. ಅಲ್ಲದೆ, ತನಿಖೆಯ ಅವಧಿಯಲ್ಲಿ ಯಾವುದೇ ರಾಜಕೀಯ ಪ್ರಭಾವ ಅಥವಾ ಹಸ್ತಕ್ಷೇಪಕ್ಕೆ ಅವಕಾಶ ನೀಡದೆ ಪಾರದರ್ಶಕವಾಗಿ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದ್ದಾರೆ.

### ಜಿಬಿಎ 5 ಪಾಲಿಕೆಗಳಿಗೆ ಆಗಸ್ಟ್ 3ನೇ ವಾರದಲ್ಲಿ ಮತದಾನ

# ಜುಲೈ 10ರೊಳಗೆ ವೇಳಾಪಟ್ಟಿ ಪ್ರಕಟ ಸಾಧ್ಯತೆ

**ಸುಪ್ರೀ ನಿರ್ದೇಶನದ ಬೆನ್ನಲ್ಲೆ ಸಿದ್ಧತೆ ಚುರುಕುಗೊಳಿಸಿದ ರಾಜ್ಯ ಚುನಾವಣಾ ಆಯೋಗ**




**ಬೆಂಗಳೂರು, ಜೂ.23:** ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರಪಾಲಿಕೆಗಳಿಗೆ ಆಗಸ್ಟ್ 31ರೊಳಗೆ ಕಡ್ಡಾಯವಾಗಿ ಚುನಾವಣೆ ನಡೆಸುವಂತೆ ಸುಪ್ರೀಂ ಕೋರ್ಟ್ ನೀಡಿರುವ ನಿರ್ದೇಶನದ ಬೆನ್ನಲ್ಲೇ ರಾಜ್ಯ ಚುನಾವಣಾ ಆಯೋಗ ಚುನಾವಣಾ ಸಿದ್ಧತೆಗಳನ್ನು ಚುರುಕುಗೊಳಿಸಿದೆ. ಜುಲೈ ಮೊದಲ ಅಥವಾ ಎರಡನೇ ವಾರದಲ್ಲಿ ಚುನಾವಣಾ ವೇಳಾಪಟ್ಟಿ ಪ್ರಕಟಿಸಿ, ಆಗಸ್ಟ್ ಮೂರನೇ ವಾರದಲ್ಲಿ ಮತದಾನ ನಡೆಸುವ ಸಾಧ್ಯತೆ ಇದೆ ಎಂಬ ಮಾಹಿತಿ ಲಭ್ಯವಾಗಿದೆ. ಚುನಾವಣಾ ಆಯೋಗದ ಉನ್ನತ ಮೂಲಗಳ ಪ್ರಕಾರ, ಜುಲೈ 10ರೊಳಗೆ ಚುನಾವಣಾ ದಿನಾಂಕ ಪ್ರಕಟಿಸುವ ಸಾಧ್ಯತೆ ಇದ್ದು, ವೇಳಾಪಟ್ಟಿ ಪ್ರಕಟವಾದ ತಕ್ಷಣವೇ ಬೆಂಗಳೂರು ನಗರದಲ್ಲಿ ಮಾದರಿ ನೀತಿ ಸಂಹಿತೆ ಜಾರಿಗೆ ಬರಲಿದೆ.

ಜಿಬಿಎ ವ್ಯಾಪ್ತಿಯ ಐದು ನಗರಪಾಲಿಕೆಗಳಿಗೆ ಚುನಾವಣೆ ನಡೆಸಲು ನೀಡಿದ್ದ ಜೂನ್ 30ರ ಗಡುವನ್ನು ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಹಾಗೂ ಸಿಬ್ಬಂದಿ ಕೊರತೆಯನ್ನು ಪರಿಗಣಿಸಿ ಸುಪ್ರೀಂ ಕೋರ್ಟ್ ಆಗಸ್ಟ್ 31ರವರೆಗೆ ವಿಸ್ತರಿಸಿದೆ. ಆದರೆ ಇದು "ಕೊನೆಯ ಅವಕಾಶ" ಎಂದು ಸ್ಪಷ್ಟಪಡಿಸಿರುವ ನ್ಯಾಯಪೀಠ, ಇನ್ನು ಮುಂದೆ ಯಾವುದೇ ಕಾರಣಕ್ಕೂ ಗಡುವು ವಿಸ್ತರಣೆ ನೀಡುವುದಿಲ್ಲ ಎಂದು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದೆ. ರಾಜ್ಯ ಸರ್ಕಾರ ಸೆಪ್ಟೆಂಬರ್ ಅಂತ್ಯದವರೆಗೆ ಕಾಲಾವಕಾಶ ಕೋರಿ ಮನವಿ ಸಲ್ಲಿಸಿದ್ದರೂ, ನ್ಯಾಯಾಲಯ ಅದನ್ನು ತಿರಸ್ಕರಿಸಿದೆ.

ಸುಪ್ರೀಂ ಕೋರ್ಟ್ ಆದೇಶದ ನಂತರ ರಾಜ್ಯ ಚುನಾವಣಾ ಆಯೋಗ ಸದ್ದಿಲ್ಲದೆ ಚುನಾವಣಾ ಸಿದ್ಧತೆ ಆರಂಭಿಸಿದೆ. ಮತದಾರರ ಪಟ್ಟಿ ಅಂತಿಮಗೊಳಿಸುವುದು, ಮತಗಟ್ಟೆಗಳ ವ್ಯವಸ್ಥೆ, ಸಿಬ್ಬಂದಿ ನಿಯೋಜನೆ ಸೇರಿದಂತೆ ವಿವಿಧ ಹಂತದ ಸಿದ್ಧತೆಗಳು ನಡೆಯುತ್ತಿವೆ. ಜುಲೈ ಮೊದಲ ಅಥವಾ ಎರಡನೇ ವಾರದಲ್ಲಿ ಸುದ್ದಿಗೋಷ್ಠಿ ನಡೆಸಿ ಚುನಾವಣಾ ವೇಳಾಪಟ್ಟಿ ಪ್ರಕಟಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

**ಕಾಂಗ್ರೆಸ್‌ನಲ್ಲೂ ಚುನಾವಣಾ ಚಟುವಟಿಕೆ:** ಇತ್ತ ಆಡಳಿತಾರೂಢ ಕಾಂಗ್ರೆಸ್ ಕೂಡ ಚುನಾವಣೆಗೆ ಸಜ್ಜಾಗಿದ್ದು, ಐದು ನಗರಪಾಲಿಕೆಗಳ ವ್ಯಾಪ್ತಿಯ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಈಗಾಗಲೇ ಸಿದ್ಧತೆ ಆರಂಭಿಸುವಂತೆ ಸೂಚನೆ ನೀಡಲಾಗಿದೆ ಎನ್ನಲಾಗಿದೆ.

ಮನೆ ಮನೆಗೆ ಭೇಟಿ ನೀಡಿ ರಾಜ್ಯ ಸರ್ಕಾರದ ಸಾಧನೆಗಳು ಹಾಗೂ ಗ್ಯಾರಂಟಿ ಯೋಜನೆಗಳ ಕುರಿತು ಮತದಾರರಿಗೆ ಮನವರಿಕೆ ಮಾಡಬೇಕು. ವಾರ್ಡ್‌ವಾರು ಮತದಾರರ ಪಟ್ಟಿಯನ್ನು ಪರಿಶೀಲಿಸಿ ಮಾಹಿತಿ ಸಂಗ್ರಹಿಸಬೇಕು. ಅಲ್ಲದೆ, ವಾರ್ಡ್ ಮಟ್ಟದಲ್ಲಿ ಜನಸಂಪರ್ಕ ಕಾರ್ಯಕ್ರಮಗಳನ್ನು ತ್ವರಿತವಾಗಿ ಆಯೋಜಿಸುವಂತೆ ಪಕ್ಷದ ನಾಯಕರು ಸೂಚಿಸಿದ್ದಾರೆ ಎಂಬ ಮಾಹಿತಿ ಪಕ್ಷದ ಹಿರಿಯ ಮುಖಂಡರಿಂದ ಲಭ್ಯವಾಗಿದೆ.

**ಪ್ರಮುಖ ಬೆಳವಣಿಗೆಗಳು**

ಜುಲೈ 10ರೊಳಗೆ ದಿನಾಂಕ ಘೋಷಣೆಯಾದರೆ ಮಾದರಿ ನೀತಿಸಂಹಿತೆ ಜಾರಿ ಸಾಧ್ಯತೆ. ಆಗಸ್ಟ್ ಮೂರನೇ ವಾರದಲ್ಲಿ ಮತದಾನ ನಡೆಸಲು ಚುನಾವಣಾ ಆಯೋಗ ಸಿದ್ಧತೆ. ಕಾಂಗ್ರೆಸ್ ಸೇರಿದಂತೆ ರಾಜಕೀಯ ಪಕ್ಷಗಳು ಈಗಾಗಲೇ ಚುನಾವಣಾ ಸಿದ್ಧತೆ ಆರಂಭಿಸಿವೆ.

ಸೂಚನೆ: ಚುನಾವಣಾ ಆಯೋಗ ಇನ್ನೂ ಅಧಿಕೃತ ವೇಳಾಪಟ್ಟಿಯನ್ನು ಪ್ರಕಟಿಸಿಲ್ಲ. ಜುಲೈ ಮೊದಲ ಅಥವಾ ಎರಡನೇ ವಾರದಲ್ಲಿ ದಿನಾಂಕ ಘೋಷಣೆ, ಆಗಸ್ಟ್ ಮೂರನೇ ವಾರದಲ್ಲಿ ಮತದಾನ ಸೇರಿದಂತೆ ಮೇಲಿನ ಮಾಹಿತಿಗಳು ಅಧಿಕೃತ ಪ್ರಕಟಣೆ ಹೊರಬರುವವರೆಗೆ ಮೂಲಗಳ ಮಾಹಿತಿ ಆಧಾರಿತ ಸಾಧ್ಯತೆಗಳಾಗಿವೆ.

# ನಮ್ಮಿಂದ ಬಿಜೆಪಿ ಹಾಳಾಗಲಿಲ್ಲ: ಈಶ್ವರಪ್ಪ ಹೇಳಿಕೆಗೆ ಬಿ.ಸಿ.ಪಾಟೀಲ್ ಕೆಂಡಾಮಂಡಲ

**ಬೆಂಗಳೂರು, ಜೂ.23:** ಈ ಹಿಂದೆ ದುಡ್ಡು ಕೊಟ್ಟು ಕರೆತಂದ 17 ಕಾಂಗ್ರೆಸ್ ಶಾಸಕರಿಂದಲೇ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿತ್ತು. ಆದರೆ ನಂತರ ಅವರಿಂದಲೇ ಪಕ್ಷ ಹಾಳಾಯಿತು ಎಂದು ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್ ಈಶ್ವರಪ್ಪ ಅವರು ಗಂಭೀರ ಆರೋಪ ಮಾಡಿದ್ದು, ಇದಕ್ಕೆ ಮಾಜಿ ಸಚಿವ ಬಿ.ಸಿ. ಪಾಟೀಲ್ ಕೆಂಡಾಮಂಡಲ ವಾಗಿದ್ದಾರೆ.




ಕೆ.ಎಸ್. ಈಶ್ವರಪ್ಪ ಅವರ ಆರೋಪಕ್ಕೆ ಎಕ್ಸ್ ಮೂಲಕ ಪ್ರತಿಕ್ರಿಯಿಸಿರುವ ಬಿ.ಸಿ. ಪಾಟೀಲ್, ಈಶ್ವರಪ್ಪ ಎಚ್ಚರಿಕೆಯಿಂದ ನಾಲಿಗೆ ಬಿಗಿ ಹಿಡಿದು ಮಾತನಾಡಿ. ನಾವೆಲ್ಲ ಬಿಜೆಪಿಗೆ ಬರುವಾಗ ನಿಮ್ಮ ಯಾವ ಶ್ರಮವೂ ಇಲ್ಲ ಎಂದು ತಿರುಗೇಟು ನೀಡಿದ್ದಾರೆ. ಅಂದು ನಮ್ಮ ಶ್ರಮದಿಂದಲೇ ನೀವು ಮಂತ್ರಿಯಾಗಿ ಲಂಚವನ್ನು ಪಡೆದು ಬೆಳಗಾವಿಯಲ್ಲಿ ಒಬ್ಬ ವ್ಯಕ್ತಿ ಆತ್ಮಹತ್ಯೆಗೆ ಕಾರಣರಾದಿರಿ. ಈಗ ಬಾಯಿಗೆ ಬಂದಂತೆ ಮಾತನಾಡುವುದನ್ನು ಬಿಡಿ. ನಮ್ಮಿಂದ ಬಿಜೆಪಿ ಹಾಳಾಗಲಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಶಿವಮೊಗ್ಗದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಈಶ್ವರಪ್ಪ, ಇತ್ತೀಚಿಗೆ ಎಂಎಲ್‌ಸಿ ಚುನಾವಣೆಯಲ್ಲಿ ನಡೆದ ಅಡ್ಡ ಮತದಾನದ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಕರ್ನಾಟಕದಲ್ಲಿ ಎಂಎಲ್‌ಸಿಗಳನ್ನು ಖರೀದಿ ಮಾಡುವ ಕೆಲಸ ನಡೆದಿದೆ. ಇದರಲ್ಲಿ ಎಷ್ಟು ಭ್ರಷ್ಟಾಚಾರ ನಡೆದಿದೆ ಅಂತ ಬಹಿರಂಗವಾಗಬೇಕು ಎಂದು ಆಗ್ರಹಿಸಿದ್ದರು.

ಅಲ್ಲದೆ ಈ ಹಿಂದೆ 17 ಜನ ಕಾಂಗ್ರೆಸ್ ಶಾಸಕರನ್ನು ದುಡ್ಡು ಕೊಟ್ಟು ನಮ್ಮ ಪಕ್ಷಕ್ಕೆ ಕರೆದುಕೊಂಡಿದ್ದೆವು. ಅದರಿಂದ ಬಿಜೆಪಿ ಅಧಿಕಾರಕ್ಕೆ ಬಂತು. ನಂತರ ಪಕ್ಷ ಅವರಿಂದ ಹಾಳಾಗಿಹೋಯ್ತು. ಸಾಕಷ್ಟು ಭ್ರಷ್ಟಾಚಾರ ನಡೆದಿದೆ. ಅದು ಹೊರಗೆ ಬರಬೇಕು ಎಂದು ಹೇಳಿದ್ದರು.

## ಹಣ ನೀಡಿದ್ದರೆ ಸಾಬೀತುಪಡಿಸಿ: ಈಶ್ವರಪ್ಪಗೆ ಶಾಸಕ ಶಿವರಾಮ ಹೆಬ್ಬಾರ್ ಸವಾಲು

ಕಾಂಗ್ರೆಸ್‌ನಲ್ಲಿದ್ದ 17 ಶಾಸಕರನ್ನು ಹಣ ನೀಡಿ ಬಿಜೆಪಿ ಖರೀದಿಸಿತ್ತು ಎಂದು ಹೇಳಿರುವ ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಹಣ ನೀಡಿದ್ದನ್ನು ಸಾಬೀತುಡಿಸಲಿ ಎಂದು ಶಾಸಕ ಶಿವರಾಮ ಹೆಬ್ಬಾರ ಸವಾಲು ಹಾಕಿದ್ದಾರೆ. ಕಾಂಗ್ರೆಸ್‌ನ 17 ಶಾಸಕರು ಬಿಜೆಪಿ ಬೆಂಬಲಿಸಿದ್ದರಿಂದ ಈಶ್ವರಪ್ಪ ಸಚಿವರಾದರು, ಅಧಿಕಾರ ಅನುಭವಿಸಿದರು. ಆದರೆ, ಲಂಚ ಪಡೆದ ಆರೋಪದಲ್ಲಿ ಈಶ್ವರಪ್ಪ ಅವರೇ ಹುದ್ದೆ ತ್ಯಜಿಸಿ ಮೂಲೆಗುಂಪಾಗಬೇಕಾಯಿತು ಎಂದು ಕುಟುಕಿದರು. ಶಾಸಕರಿಗೆ ಹಣ ನೀಡಿ ಬಿಜೆಪಿಗೆ ಕರೆತಂದಿದ್ದರೆ ಯಾರು ಹಣ ನೀಡಿದರು, ಎಲ್ಲಿ ಹಣ ನೀಡಿದರು, ಎಷ್ಟು ಹಣ ನೀಡಿದರು. ಎಂಬುದನ್ನು ಈಶ್ವರಪ್ಪ ದಾಖಲೆ ಸಹಿತ ಬಹಿರಂಗಪಡಿಸಲಿ. ಇಲ್ಲವೇ ಹತಾಶ ಮನೋಭಾವದಲ್ಲಿರುವ ಅವರು ರಾಜಕೀಯ ನಿವೃತ್ತಿ ಪಡೆದು, ಮಾನಸಿಕ ಅಸ್ವಸ್ಥತೆಗೆ ಚಿಕಿತ್ಸೆ ಪಡೆಯಲಿ' ಎಂದು ಟೀಕಿಸಿದರು.



# ಒಂದಕ್ಕಿಂತ ಹೆಚ್ಚು ವೋಟರ್ ಐಡಿ: ನಟ ಪ್ರಕಾಶ್‌ರಾಜ್ ವಿರುದ್ಧ ಜಾಮೀನುರಹಿತ ವಾರಂಟ್

**ಬೆಂಗಳೂರು, ಜೂ.23:** ನಟ ಪ್ರಕಾಶ್‌ರಾಜ್ ಅವರಿಗೆ ಬೆಂಗಳೂರಿನ ನ್ಯಾಯಾಲಯವೊಂದು ಕಾನೂನು ಸಂಕಷ್ಟ ತಂದೊಡ್ಡಿದೆ. ವಿವಿಧ ರಾಜ್ಯಗಳಲ್ಲಿ ಒಂದಕ್ಕಿಂತ ಹೆಚ್ಚು ಮತದಾರರ ಗುರುತಿನ ಚೀಟಿಗಳನ್ನು ಹೊಂದಿದ್ದಾರೆ ಎಂಬ ಗಂಭೀರ ಆರೋಪಕ್ಕೆ ಸಂಬಂಧಿಸಿದಂತೆ, ಬೆಂಗಳೂರಿನ 48ನೇ ಎಸಿಜೆಎಂ ಅಡಿಷನಲ್ ಚೀಫ್ ಜುಡೀಷಿಯಲ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ನಟನ ವಿರುದ್ಧ ಜಾಮಿ ಜಾಮೀನು ರಹಿತ ವಾರೆಂಟ್ ಜಾರಿಗೊಳಿಸಿ ಆದೇಶ ಹೊರಡಿಸಿದೆ.



ನ್ಯಾಯವಾದಿ ದಿಲೀಪ್ ಕುಮಾರ್ ಎಂಬುವವರು 2019 ರಲ್ಲಿ ಬೆಂಗಳೂರಿನ ಹಲಸೂರು ಗೇಟ್ ಪೊಲೀಸ್ ಠಾಣೆಯಲ್ಲಿ ಪ್ರಕಾಶ್ ರಾಜ್ ವಿರುದ್ಧ ಅಧಿಕೃತ ದೂರು ದಾಖಲಿಸಿದ್ದರು. ನಟ ಪ್ರಕಾಶ್‌ರಾಜ್ ಅವರು ಕರ್ನಾಟಕ, ತಮಿಳುನಾಡು ಮತ್ತು ತೆಲಂಗಾಣ ಸೇರಿದಂತೆ ದೇಶದ ಒಟ್ಟು ನಾಲ್ಕು ರಾಜ್ಯಗಳಲ್ಲಿ ಮತದಾರರ ಗುರುತಿನ ಚೀಟಿಗಳನ್ನು ಹೊಂದಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿತ್ತು.

ಕೇಂದ್ರ ಚುನಾವಣಾ ಆಯೋಗದ ನಿಯಮಾವಳಿ ಪ್ರಕಾರ, ದೇಶದ ಯಾವುದೇ ನಾಗರಿಕನಿಗೆ ಕೇವಲ ಒಂದೇ ಒಂದು ಸ್ಥಳದಲ್ಲಿ ಮಾತ್ರ ಮತದಾರರಾಗಿ ನೋಂದಾಯಿಸಿಕೊಳ್ಳಲು ಅವಕಾಶ ವಿರುತ್ತದೆ.ಈ ನಿಯಮವನ್ನು ಉಲ್ಲಂಘಿಸಿ ನಟ ಕಾನೂನುಬಾಹಿರವಾಗಿ ನಡೆದುಕೊಂಡಿದ್ದಾರೆ ಎಂಬುದು ದೂರುದಾರರ ವಾದವಾಗಿದೆ.

ದೂರು ದಾಖಲಾದ ಆರಂಭದಲ್ಲಿ ಪೊಲೀಸರು ಯಾವುದೇ ಕ್ರಮ ಕೈಗೊಳ್ಳದಿದ್ದಾಗ, ದೂರುದಾರರು ಬೆಂಗಳೂರು ನಗರ ಪೊಲೀಸ್ ಕಮಿಷನರ್ ಹಾಗೂ ಚುನಾವಣಾ ಆಯೋಗದ ಕದ ತಟ್ಟಿದ್ದರು.ಅಲ್ಲಿಯೂ ಸೂಕ್ತ ಪ್ರತಿಕ್ರಿಯೆ ಸಿಗದ ಕಾರಣ ಅವರು ನ್ಯಾಯಾಲಯದ ಮೊರೆ ಹೋಗಿದ್ದರು.

ಈ ಪ್ರಕರಣದ ವಿಚಾರಣೆ ನಡೆಸುತ್ತಿದ್ದ 48ನೇ ಎಸಿಜೆಎಂ ನ್ಯಾಯಾಲಯವು ಈ ಹಿಂದೆ ಪ್ರಕಾಶ್ ರಾಜ್ ಅವರಿಗೆ ನ್ಯಾಯಾಲಯಕ್ಕೆ ಹಾಜರಾಗುವಂತೆ ಎರಡು ಬಾರಿ ಸಮನ್ಸ್ ಜಾರಿಗೊಳಿಸಿತ್ತು.ಆದರೆ, ನಟ ಎರಡೂ ಬಾರಿ ನ್ಯಾಯಾಲಯದ ಮುಂದೆ ಹಾಜರಾಗಲು ವಿಫಲ ರಾಗಿದ್ದರು.ಸಮನ್ಸ್ ನೀಡಿದರೂ ಸತತವಾಗಿ ಗೈರುಹಾಜರಾದ ನಟನ ನಡೆಯನ್ನು ಗಂಭೀರವಾಗಿ ಪರಿಗಣಿಸಿ ರುವ ಕೋರ್ಟ್, ಇದೀಗ ಅವರ ಬಂಧನಕ್ಕೆ ದಾರಿ ಮಾಡಿಕೊಡಬಲ್ಲ ವಾರೆಂಟ್ ಜಾರಿಗೊಳಿಸಿದೆ.


# ದರ್ಶನ್ ಪತ್ನಿ ವಿಜಯಲಕ್ಷ್ಮಿ ವಿರುದ್ಧ ಅಶ್ಲೀಲ ವಿಮರ್ಶೆ ನಾಲ್ವರಿಗೆ ಜಾಮೀನು ನಿರಾಕರಿಸಿದ ಹೈಕೋರ್ಟ್

**ಬೆಂಗಳೂರು, ಜೂ.23:** ದಿ ಡೆವಿಲ್ ಸಿನಿಮಾ ಪ್ರಚಾರ ಸಂದರ್ಭದಲ್ಲಿ ನಟ ದರ್ಶನ್ ಪತ್ನಿ ವಿಜಯಲಕ್ಷ್ಮಿ ಅವರ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಅಶ್ಲೀಲ ವಿಮರ್ಶೆ ಮಾಡಿದ ಆರೋಪ ಮೇಲೆ ಬಂಧನಕ್ಕೆ ಒಳಗಾಗಿರುವ ನಾಲ್ವರು ಆರೋಪಿಗಳ ಜಾಮೀನು ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ.

ಪ್ರಕರಣ ಸಂಬಂಧದ ವಿಚಾರಣಾ ನ್ಯಾಯಾಲಯ ಜಾಮೀನು ನಿರಾಕರಿಸಿದ ಹಿನ್ನೆಲೆಯಲ್ಲಿ ಜಾಮೀನು ಕೋರಿ ಬಿ ಚಂದ್ರಶೇಖರ್, ಪ್ರಶಾಂತ್ ತಳವಾರ್, ನಿಂಗರಾಜ್ ತಳವಾರ್ ಮತ್ತು ಜಿ.ಬಿ. ನಿತಿನ್ ಸಲ್ಲಿಸಿದ್ದ ಜಾಮೀನು ಅರ್ಜಿಗಳನ್ನು ನ್ಯಾಯಮೂರ್ತಿ ಎಸ್. ರಾಚಯ್ಯ ಅವರ ಏಕಸದಸ್ಯ ಪೀಠ ವಜಾ ಗೊಳಿಸಿದೆ.

ದೂರುದಾರೆ ವಿಜಯಲಕ್ಷ್ಮಿ ಅವರು 2025ರ ಡಿಸೆಂಬರ್‌ನಲ್ಲಿ ದರ್ಶನ್ ನಟನೆಯ ಡೆವಿಲ್ ಸಿನಿಮಾ ಪ್ರಚಾರದಲ್ಲಿ ಭಾಗವಹಿಸಿದ್ದ ಸಂದರ್ಭದಲ್ಲಿ ಆರೋಪಿಗಳು ಸಾಮಾಜಿಕ ಜಾಲತಾಣದಲ್ಲಿ ಅಶ್ಲೀಲ ಪದಗಳಿಂದ ನಿಂದಿಸಿ ಪೋಸ್ಟ್ ಹಾಕಿದ್ದರು. ಮಹಿಳೆಯ ವಿರುದ್ಧ ಇಂತಹ ಕಾಮೆಂಟ್‌ಗಳು ಹಾಕುವು ದನ್ನು ಕ್ಷಮಿಸಲಾಗದು. ಪ್ರಕರಣದಲ್ಲಿ ದೂರುದಾರಾದ ವಿಜಯಲಕ್ಷ್ಮಿ ವಿರುದ್ಧ ಅರ್ಜಿದಾರರು ಮಾಡಿರುವ ವಿಮರ್ಶೆಗಳು, ದೇಶದ ಮಹಿಳೆಯ ಬಗ್ಗೆ ಅವರ ಮನಸ್ಥಿತಿಯನ್ನು ಸೂಚಿಸುತ್ತದೆ ಎಂದು ಪೀಠ ಗಂಭೀರವಾಗಿ ನುಡಿದಿದೆ.

ಅಭಿವ್ಯಕ್ತಿ ಸ್ವಾತಂತ್ರ್ಯ ಸಂವಿಧಾನವು ಕಲ್ಪಿಸಿರುವ ಮೂಲಭೂತ ಹಕ್ಕು ಎಂಬುದರಲ್ಲಿ ಯಾವುದೇ ಸಂದೇಹವಿಲ್ಲ. ಅದಾಗ್ಯೂ, ಅಂತಹ ಪ್ರತಿಯೊಂದು ಹಕ್ಕಿಗೂ ಅದರದ್ದೇ ಆದ ಸಮಂಜಸವಾದ ನಿರ್ಬಂಧಗಳಿವೆ. ಅಂತಹ ನಿರ್ಬಂಧಗಳನ್ನು ಮೀರುವುದು ಅಥವಾ ಇನ್ನೊಬ್ಬ ವ್ಯಕ್ತಿಯ ವೈಯಕ್ತಿಕ ಸ್ವಾತಂತ್ರ್ಯವನ್ನು ಅತಿಕ್ರಮಿಸುವುದು ಖಂಡಿತವಾಗಿಯೂ ಅಪರಾಧವಾಗುತ್ತದೆ. ಅ ಅಪರಾಧವನ್ನು ಕಾನೂನಿನ ಪ್ರಕಾರ ವ್ಯವಹರಿಸಲಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದೆ.




ಅಲ್ಲದೇ, ಸಾಮಾಜಿಕ ಮಾಧ್ಯಮವು ಸಭ್ಯತೆ ಕಾಪಾಡಿಕೊಳ್ಳುವ ಮತ್ತು ಈ ದೇಶದ ನಾಗರಿಕರ ಮನಸ್ಸಿನಲ್ಲಿ ವಿಶ್ವಾಸ ತುಂಬುವ ಜವಾಬ್ದಾರಿಯನ್ನು ಹೊಂದಿದೆ ಎಂದು ಪ್ರತ್ಯೇಕವಾಗಿ ಹೇಳಬೇಕಾಗಿಲ್ಲ. ಸಾಮಾಜಿಕ ಜಾಲತಾಣದಲ್ಲಿ ಯಾವುದೇ ವಿಷಯಗಳ ಬಗ್ಗೆ ವಿಮರ್ಶೆ ಮಾಡುವ ವ್ಯಕ್ತಿಗಳು ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಬೇಕು ಎಂದು ಪೀಠ ಸಲಹೆ ನೀಡಿದೆ.

ಆಧಾರರಹಿತ, ಸುಳ್ಳು, ಕ್ಷುಲ್ಲಕ ಮತ್ತು ಬೆದರಿಸುವ ಸಂದೇಶಗಳನ್ನು ಕಳಿಸುವುದನ್ನು ಆ ಸಾಮಾಜಿಕ ಜಾಲತಾಣದ ಕಂಪನಿಯೇ ನಿಯಂತ್ರಿಸಬೇಕಾಗುತ್ತದೆ, ಇಲ್ಲದಿದ್ದರೆ, ನ್ಯಾಯಾಲಯಗಳು ಸಾಮಾಜಿಕ ಮಾಧ್ಯಮದಲ್ಲಿ (ಸಾಮಾಜಿಕ ಜಾಲತಾಣ) ಈ ದೇಶದ ಯಾವುದೇ ನಾಗರಿಕರ ಮೂಲಭೂತ ಹಕ್ಕುಗಳನ್ನು ಉಲ್ಲಂಘಿಸುವಂತಹ ಕಾಮೆಂಟ್‌ಗಳಲ್ಲಿ ಮಾಡಿದಾಗ ಮಧ್ಯಪ್ರವೇಶಿಸುವ ಮೂಲಕ ಈ ದೇಶದ ನಾಗರಿಕರ ವಿಶ್ವಾಸವನ್ನು ಭದ್ರಪಡಿಸಬೇಕಾಗುತ್ತದೆ.

ನ್ಯಾಯಾಲಯಗಳು ಮೂಕ ಪ್ರೇಕ್ಷಕನಲ್ಲ. ಹಸ್ತಕ್ಷೇಪ ಅಗತ್ಯವಿದ್ದಾಗಲೆಲ್ಲಾ ಹಿಂಜರಿಕೆಯಿಲ್ಲದೆ, ಭಾರತದ ಸಂವಿಧಾನದ ಅಡಿಯಲ್ಲಿ ಖಾತರಿ ಪಡಿಸಲಾದ ವ್ಯಕ್ತಿಗಳು ಅಥವಾ ಸಾರ್ವಜನಿಕರ ಹಕ್ಕುಗಳು ಮತ್ತು ಹಿತಾಸಕ್ತಿಗಳನ್ನು ರಕ್ಷಿಸಲು ನ್ಯಾಯಾಲಯಗಳು ಹೆಜ್ಜೆ ಹಾಕುತ್ತವೆ ಎಂದು ಆರೋಪಿಗಳ ಅರ್ಜಿಗಳನ್ನು ತಿರಸ್ಕರಿಸಿದೆ.

# ಸಮಗ್ರ ಅಭಿವೃದ್ಧಿಗೆ ಯೋಜನೆ ರೂಪಿಸಿ ಜಾರಿಮಾಡಿ: ಸಚಿವ ಕೃಷ್ಣ ಬೈರೇಗೌಡರಿಗೆ ಸಂಸದ ತೇಜಸ್ವಿ ಸೂರ್ಯ ಪತ್ರ

**ಬೆಂಗಳೂರು:ಜೂ. 23** ಬೆಂಗಳೂರು ನಗರದ ಸಮಗ್ರ ಅಭಿವೃದ್ಧಿಗೆ ಯೋಜನೆ ರೂಪಿಸಿ ಜಾರಿ ಮಾಡುವಂತೆ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರಿಗೆ ಪತ್ರ ಬರೆದಿರುವುದಾಗಿ ಬಿಜೆಪಿ ಯುವಮೋರ್ಚಾ ರಾಷ್ಟ್ರೀಯ ಅಧ್ಯಕ್ಷ ಮತ್ತು ಸಂಸದ ತೇಜಸ್ವಿ ಸೂರ್ಯ ತಿಳಿಸಿದ್ದಾರೆ.




ಮಾ ಧ್ಯ ಮ ಗ ಳೊಂ ದಿ ಗೆ, ಕೃಷ್ಣಭೈರೇಗೌಡ ಅವರನ್ನು ಭೇಟಿ ಮಾಡಿ ನಗರದ ಅಭಿವೃದ್ಧಿ ಮತ್ತು ನಾಗರಿಕರಿಗೆ ಅನುಕೂಲವಾಗುವ 15 ಅಂಶಗಳ ಬಗ್ಗೆ ವಿಸ್ತಾರವಾಗಿ ಚರ್ಚೆ ನಡೆಸಿರುವುದಾಗಿ ತಿಳಿಸಿದರು. ನಗರದ ಜನರ ಜೀವನ ಮಟ್ಟ ಸುಧಾರಿಸುವ ಕ್ರಮಗಳಿಗೆ ಶೇ.100ರಷ್ಟು ಬೆಂಬಲವನ್ನು ಕೇಂದ್ರ ಸರ್ಕಾರದ ಮಟ್ಟದಲ್ಲಿ ನೀಡಲಾಗುವುದು. ಸಚಿವರಿಗೆ ಅಭಿವೃದ್ಧಿ ಸಂಬಂಧ ವಿವರವನ್ನು ಅಂಕಿ ಅಂಶಗಳ ಸಮೇತ ನೀಡಿದ್ದೇನೆ. ರಾಜ್ಯ ಸರ್ಕಾರದ ಮೂವತ್ತಕ್ಕೂ ಹೆಚ್ಚು ಯೋಜನೆಗಳು ಬಾಕಿ ಇವೆ. ಹೊಸ ಯೋಜನೆ ಜಾರಿ ಮಾಡುವ ಮೊದಲು ಹಳೆಯ ಯೋಜನೆಗಳನ್ನು ಶೀಘ್ರ ಮುಗಿಸಬೇಕು ಎಂದು ತಿಳಿಸಿರುವುದಾಗಿ ಹೇಳಿದರು.




ಬೀದಿಬದಿ ವ್ಯಾಪಾರಿಗಳ ರಕ್ಷಣೆಗೆ ಒತ್ತಾಯಿಸಿ ಮಂಗಳವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಿಐಟಿಯು ನಡೆಸುತ್ತಿರುವ ಹೋರಾಟಕ್ಕೆ ಬೆಂಬಲ ಸೂಚಿಸಿ ಕರ್ನಾಟಕ ರಾಜ್ಯ ಬೀದಿಬದಿ ವ್ಯಾಪಾರಿಗಳ ಒಕ್ಕೂಟದ ಸದಸ್ಯರು.

# ನಿಲ್ಲದ ಏಮ್ಸ್ ಹೋರಾಟದ ಕಿಚ್ಚು: 1500 ದಿನ ಪೂರೈಸಿದ ಸುದೀರ್ಘ ಚಳವಳಿ



**ರಾಯಚೂರು, ಜೂ. 23:** ಗಡಿ ಜಿಲ್ಲೆ ರಾಯಚೂರಿನಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಏಮ್ಸ್) ಸ್ಥಾಪನೆಗಾಗಿ ನಡೆಯುತ್ತಿರುವ ಬೃಹತ್ ಚಳವಳಿ ಈಗ ಬರೋಬ್ಬರಿ 1,500 ದಿನಗಳನ್ನು ಪೂರೈಸುವ ಮೂಲಕ ಇತಿಹಾಸ ಸೃಷ್ಟಿಸಿದೆ. ಶತಾಯ ಗತಾಯ ರಾಯಚೂರಿಗೆ ಏಮ್ಸ್ ಮಂಜೂರಾಗಲೇಬೇಕು ಎಂದು ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳು ಹಾಗೂ ಏಮ್ಸ್ ಹೋರಾಟ ಸಮಿತಿ ನಡೆಸುತ್ತಿರುವ ಅನಿರ್ದಿಷ್ಟಾವಧಿ ಧರಣಿ ಈಗ ಮತ್ತಷ್ಟು ತೀವ್ರಗೊಂಡಿದೆ.

ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆಗಾಗಿ ಪ್ರೊ.ಡಿ.ಎಂ. ನಂಜುಂಡಪ್ಪ ಅವರು ತಮ್ಮ ಪ್ರಾದೇಶಿಕ ಅಸಮಾನತೆ ನಿವಾರಣೆಯ ವರದಿ ಅನ್ವಯ ಜಿಲ್ಲೆಗೆ ಏಮ್ಸ್ ನೀಡುವಂತೆ ಹೋರಾಟಗಾರರ ತೀವ್ರ ಒತ್ತಾಯ. ಲಿಂಗಸುಗೂರು, ಸಿಂಧನೂರು ಸೇರಿದಂತೆ ಜಿಲ್ಲಾದ್ಯಂತ ಚುರುಕುಗೊಂಡ ಬೃಹತ್ ಏಮ್ಸ್ ಚಳವಳಿ ನಡೆಯುತ್ತಿದ್ದು, ಈ ಹೋರಾಟ ರಾಜಕೀಯ ಹುನ್ನಾರಕ್ಕೆ ಬಲಿಯಾಗ್ತಿದೆಯಾ? ಎಂಬ ಅನುಮಾನ ಬರುತ್ತಿದೆ. ಹಿಂದೆ ನಂಜುಂಡಪ್ಪ ವರದಿಯ ಆಧಾರದ ಮೇಲೆ ರಾಯಚೂರು ಜಿಲ್ಲೆಗೆ ಐಐಟಿ ಮಂಜೂರಾಗಬೇಕಿತ್ತು. ಆದರೆ ರಾಜಕೀಯ ಹುನ್ನಾರ ಮತ್ತು ಪ್ರಭಾವಿ ನಾಯಕರ ಒತ್ತಡದಿಂದಾಗಿ ಅದು ಧಾರವಾಡದ ಪಾಲಾಯಿತು.

ರಾಯಚೂರಿಗೆ ಆದ ಈ ಅನ್ಯಾಯಕ್ಕೆ ಪ್ರಾಯಶ್ಚಿತ್ತವಾಗಿ ಜಿಲ್ಲೆಯಲ್ಲಿ 'ಏಮ್ಸ್' ಆದರೂ ಸ್ಥಾಪನೆಯಾಗಲಿ ಎಂಬುದು ಇಡೀ ಜಿಲ್ಲೆಯ ಜನರ ಕರಳುಬಳ್ಳಿಯ ಕೂಗಾಗಿದೆ. ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳನ್ನು ಕೇಂದ್ರ ಸರ್ಕಾರವೇ 'ಮಹತ್ವಾಕಾಂಕ್ಷಿ ಜಿಲ್ಲೆಗಳು' ಎಂದು ಗುರುತಿಸಿದ್ದರೂ, ಇಲ್ಲಿನ ಆರೋಗ್ಯ ರಂಗದ ಸುಧಾರಣೆಗೆ ಯಾವುದೇ ದೊಡ್ಡ ಯೋಜನೆಗಳು ಜಾರಿಯಾಗಿಲ್ಲ ಎಂಬುದು ಹೋರಾಟಗಾರರ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಕೇಂದ್ರದ ಮೌನ: ಈ ಹಿಂದೆ ರಾಜ್ಯದಲ್ಲಿ ಬಿಜೆಪಿ ಸರ್ಕಾರವಿದ್ದಾಗ ಸ್ಯಾಂಡಲ್‌ವುಡ್ ನಟ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ರಾಯಚೂರಿಗೆ ಭೇಟಿ ನೀಡಿ ಈ ಹೋರಾಟಕ್ಕೆ ಬಹಿರಂಗ ಬೆಂಬಲ ಘೋಷಿಸಿದ್ದರು. ಅಂದಿನ ಸಿಎಂ ಬಸವರಾಜ್ ಬೊಮ್ಮಾಯಿ ಅವರೊಂದಿಗೆ ಮಾತನಾಡುವ ಭರವಸೆಯನ್ನೂ ನೀಡಿದ್ದರು. ಇವರೊಂದಿಗೆ ಮಂತ್ರಾಲಯ ರಾಘವೇಂದ್ರ ಸ್ವಾಮಿ ಮಠದ ಪೀಠಾಧಿಪತಿಗಳಾದ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದರು ಕೂಡ ಹೋರಾಟಕ್ಕೆ ಕೈಜೋಡಿಸಿದ್ದರು.

ಹಾಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಹ ರಾಯಚೂರಿಗೆ ಏಮ್ಸ್ ಮಂಜೂರು ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಅಧಿಕೃತ ಪತ್ರ ಬರೆದಿದ್ದಾರೆ. ಆದರೆ, ಈವರೆಗೆ ಕೇಂದ್ರದಿಂದ ಯಾವುದೇ ಸ್ಪಷ್ಟ ನಿಲುವು ಬಾರದಿರುವುದು ದುರದೃಷ್ಟಕರ. ಸದ್ಯ ರಾಯಚೂರು ನಗರ ಸೇರಿದಂತೆ ಜಿಲ್ಲೆಯ ಲಿಂಗಸುಗೂರು, ಸಿಂಧನೂರು ಭಾಗಗಳಲ್ಲೂ ಹೋರಾಟದ ಕಿಚ್ಚು ಮತ್ತೆ ಜೋರಾಗಿದೆ.

# ಮಳೆ ಅಭಾವ, ಸಮಸ್ಯೆ ಎದುರಿಸಲು ಸಜ್ಜಾಗಿ ಅಧಿಕಾರಿಗಳಿಗೆ ಎಂ.ಬಿ.ಪಾಟೀಲ ಸೂಚನೆ



**ವಿಜಯಪುರ, ಜೂ.23**–ಜಿಲ್ಲೆಯಲ್ಲಿ ಈ ವರ್ಷ ಮಳೆ ಕಡಿಮೆಯಾಗಿರುವುದರಿಂದ ಮುಂದೆ ಉಲ್ಬಣಿಸಬಹುದಾದ ಸಮಸ್ಯೆಗಳನ್ನು ಪರಿಹರಿಸಲು ಅಧಿಕಾರಿಗಳು ಯುದ್ಧೋಪಾದಿಯಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲ ಸೌಕರ್ಯ ಅಭಿವೃದ್ಧಿ ಸಚಿವರಾದ ಡಾ.ಎಂ.ಬಿ. ಪಾಟೀಲ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾಗಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಜನಜಾನುವಾರುಗಳಿಗೆ ಕುಡಿಯುವ ನೀರು, ಬಿತ್ತನೆ ಬೀಜ, ರಸಗೊಬ್ಬರ ಮೇವು ಎಲ್ಲ ವಿಚಾರ ಬಗ್ಗೆ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಲಾಗಿದ್ದು, ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾಗಿ ಸಚಿವರು ತಿಳಿಸಿದರು. ಜುಲೈ ಎರಡನೇ ವಾರ ಮಳೆ ಬರಬಹುದೆಂದು ಹವಾಮಾನ ಇಲಾಖೆ ಹೇಳಿದೆ. ಕುಡಿಯುವ ನೀರಿನ ಸಮಸ್ಯೆಯಾದ ಸಂದರ್ಭದಲ್ಲಿ ಆದಾಗ್ಯೂ ಬೋರ್‌ವೆಲ್ ಕೊರೆಸಿ, ವಿದ್ಯುತ್ ಅಳವಡಿಸಿ ನೀರು ಪೂರೈಸಲು ಸಮಯ ಬೇಕಾಗುತ್ತದೆ. ಆದರೆ, ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿಕೊಟ್ಟುಕೊಳ್ಳಲು ಸೂಚಿಸಿದ್ದಾಗಿ ಸಚಿವರು ತಿಳಿಸಿದರು.

ತಾಜ್ ಬಾವಡಿ ನೀರನ್ನು ಅನ್ಯ ಉದ್ದೇಶಕ್ಕೆ ಬಳಸಿಕೊಳ್ಳಲು ಸೂಚಿಸಲಾಗಿದೆ. ಗ್ರಾಪಂ ಮಟ್ಟದಲ್ಲಿ ಅನಿವಾರ್ಯ ಸಂದರ್ಭದಲ್ಲಿ ಖಾಸಗಿ ಬೋರವೆಲ್‌ಗಳಿಂದ ಟ್ಯಾಂಕರ್ ಮೂಲಕ ನೀರು ಪೂರೈಸಲು ಸಿದ್ಧತೆ ಮಾಡಿಕೊಳ್ಳಬೇಕು ಎಂದೂ ಸೂಚಿಸಿದ್ದಾಗಿ ಸಚಿವರು ತಿಳಿಸಿದರು.

ವಿದ್ಯುತ್ ಸಮಸ್ಯೆ ಏನಿಲ್ಲ. ಬೀಜ ರಸಗೊಬ್ಬರ ಸಾಕಷ್ಟು ದಾಸ್ತಾನು ಇದೆ. ಜೋಳಕ್ಕೆ ಜಿಐ ಟ್ಯಾಗ್ ಪಡೆದುಕೊಳ್ಳಲು ಸೂಚಿಸಿದೆ. ಇದರಿಂದ ರೈತರಿಗೆ ಅನುಕೂಲ ವಾಗಲಿದೆ ಎಂದ ಅವರು, ಈ ವಿಷಯದಲ್ಲಿ ಜಿಲ್ಲಾಧಿಕಾರಿ ಕೆಲಸ ನಿರ್ವಹಿಸುತ್ತಿದ್ದಾರೆ. ಒಣದ್ರಾಕ್ಷಿ ಹಾಗೂ ದ್ರಾಕ್ಷಿಗೂ ಟ್ಯಾಗ್ ನೀಡಲು ಸೂಚಿಸಿದ್ದಾಗಿ ತಿಳಿಸಿದರು. ಕೃಷ್ಣಾ ನದಿಯಿಂದ ನಗರಕ್ಕೆ ಇನ್ನೊಂದು ನೀರು ಸ್ಟೋರೇಜ್ ನಿರ್ಮಾಣಕ್ಕೆ ಡಿಪಿಆರ್ ಸಿದ್ಧಪಡಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು. ಕುಡಿವ ನೀರಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಹಾಗೂ ಜಿಪಂ ಸಿಇಓ ಅವರು ಪ್ರತಿವಾರ ಸಭೆ ನಡೆಸಲು ತಿಳಿಸಿದ್ದೇನೆ. 15 ದಿನಗಳಿಗೊಮ್ಮೆ ನಾನು ಸಭೆ ನಡೆಸಿ ಪರಿಶೀಲನೆ ನಡೆಸುತ್ತೇನೆ ಎಂದರು.

# ಕಾಂಗ್ರೆಸ್‌ಗೆ ಮತ ಹಾಕಿದವರು, ದುಡಿದವರು ಮಾತ್ರ ಪಕ್ಷದ ಬಗ್ಗೆ ಮಾತನಾಡಲಿ: ಸಚಿವ ಯು.ಟಿ.ಖಾದರ್




**ಮಂಗಳೂರು, ಜೂ.23:** ಕಾಂಗ್ರೆಸ್ ಪಕ್ಷಕ್ಕಾಗಿ ಕೆಲಸ ಮಾಡದವರು ಪಕ್ಷದ ಬಗ್ಗೆ ಮಾತನಾಡುವುದು ಬೇಡ. ಪಕ್ಷಕ್ಕೆ ಮತ ಹಾಕಿದವರು, ಪಕ್ಷಕ್ಕೆ ದುಡಿದವರು ಮಾತ್ರ ಪಕ್ಷದ ಬಗ್ಗೆ ಮಾತನಾಡಲಿ ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ಹೇಳಿದ್ದಾರೆ.

ಮುಸ್ಲಿಮರಿಗೆ ಸಚಿವ ಸ್ಥಾನ ನೀಡಲು ಆಗ್ರಹಿಸಿ ಮಂಗಳೂರಿನಲ್ಲಿ ಮುಸ್ಲಿಮ್ ನಾಯಕರ ಸುದ್ದಿಗೋಷ್ಠಿಗೆ ಸಂಬಂಧಿಸಿ ಸುದ್ದಿಗಾರರ ಪ್ರಶ್ನೆಗೆ ಮಂಗಳವಾರ ಮಂಗಳೂರಿನಲ್ಲಿ ಉತ್ತರಿಸಿದರು. ಸಮಾನಮನಸ್ಕ ಮುಸ್ಲಿಮ್ ಮುಖಂಡರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಅವರು, ಬೇರೆ ಬೇರೆ ಹೆಸರು ಇಟ್ಟುಕೊಂಡು, ಸಮಾನಮನಸ್ಕರು ಅಂತ ಹೇಳಿಕೊಂಡು ಬರುವುದು ಬೇಡ. ಕಾಂಗ್ರೆಸ್‌ಗೆ ಇವರು ಬುದ್ಧಿವಾದ ಹೇಳುವ ಅವಶ್ಯಕತೆ ಇಲ್ಲ. ಇವರ ಬುದ್ಧಿವಾದ ಪಕ್ಷ ತೆಗೆದುಕೊಳ್ಳುವುದಿಲ್ಲ. ಪಕ್ಷವನ್ನು ವಿರೋಧ ಮಾಡಿದವರು ಇವತ್ತು ಕೂತು ಪಕ್ಷಕ್ಕೆ ನಿರ್ದೇಶನ ಕೊಡುವ ಅಗತ್ಯ ಇಲ್ಲ ಎಂದರು.

ಕಾಂಗ್ರೆಸ್ ಪಕ್ಷ ಅಲ್ಪಸಂಖ್ಯಾತರಿಗೆ ಸಚಿವ ಸ್ಥಾನ ಮಾತ್ರ ಅಲ್ಲ, ಎಲ್ಲವೂ ಕೊಟ್ಟಿದೆ. ಜಮೀರ್ ಅಹ್ಮದ್, ನಾವು ಹಾಗೂ ಎಲ್ಲ ಮುಸ್ಲಿಮರು ಒಟ್ಟಿಗೆ ಇದ್ದೇವೆ. ಪಕ್ಷದ ಅಧ್ಯಕ್ಷರು, ಸಿಎಂ ಎಲ್ಲ ಸೇರಿ ಅಲ್ಪಸಂಖ್ಯಾತರಿಗೆ ಅವಕಾಶ ಕೊಡುತ್ತಾರೆ. ರಾಜಕೀಯವಾಗಿ ಇನ್ನಷ್ಟು ಇದನ್ನು ಬಿಗಡಾಯಿಸುವ ಕಾಂಗ್ರೆಸ್‌ಗೆ ಮತ ಹಾಕದವರನ್ನು ನಾವು ಗಣನೆಗೆ ತೆಗೆದುಕೊಳ್ಳುವುದಿಲ್ಲ ಎಂದವರು ಹೇಳಿದರು.

# ಉತ್ತಮ ನಾಗರಿಕರಾಗುವುದೂ ಮುಖ್ಯ: ಸಾಹಿತ್ಯ ಆಲದಕಟ್ಟಿ




**ಕಲಬುರಗಿ, ಜೂ. 23:** ಶಿಕ್ಷಣವೆಂದರೆ ಉತ್ತಮ ಅಂಕ ಗಳಿಸುವುದರ ಜತೆಗೆ ಉತ್ತಮ ನಾಗರಿಕರಾಗುವುದು ಅಷ್ಟೇ ಮುಖ್ಯ. ಉತ್ತಮ ನಾಗರಿಕರಾಗದಿದ್ದರೆ ಅಂಥ ಶಿಕ್ಷಣಕ್ಕೆ ಅರ್ಥವಿಲ್ಲ ಎಂದು ಕಲಬುರಗಿ ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ ಹೇಳಿದರು.

ವಿದ್ಯಾರ್ಥಿಗಳಲ್ಲಿ ನಾಯಕತ್ವ, ಜವಾಬ್ದಾರಿ ಹಾಗೂ ಸೇವಾ ಮನೋಭಾವ ಬೆಳೆಸುವ ಉದ್ದೇಶದಿಂದ ನಗರದ ಅಪ್ಪಾ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ್ದ 2026–27ನೇ ಶೈಕ್ಷಣಿಕ ಸಾಲಿನ ಶಾಲಾ ಸಂಸತ್ತಿನ ಪದಗ್ರಹಣ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿ, ತಮ್ಮ ಜೀವನಾನುಭವ ಹಂಚಿಕೊಂಡ ಅವರು, ಒಳ್ಳೆಯ ನಾಯಕನಾಗಲು ತಂಡದ ಸದಸ್ಯರ ಮೇಲೆ ದೃಢ ನಂಬಿಕೆ, ನಿರಂತರ ಅಭ್ಯಾಸ ಹಾಗೂ ಪ್ರಾಮಾಣಿಕ ಪ್ರಯತ್ನ ಅಗತ್ಯ. ಬ್ಯಾಡ್ಜ್ ಎನ್ನುವುದು ಕೇವಲ ಅಲಂಕಾರವಲ್ಲ, ಶಾಲೆಯು ನಿಮ್ಮ ಮೇಲೆ ಇಟ್ಟಿರುವ ನಂಬಿಕೆ ಮತ್ತು ಜವಾಬ್ದಾರಿಯ ಸಂಕೇತ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಾಂಶುಪಾಲ ಶಂಕರಗೌಡ ಹೊಸಮನಿ, ವಿದ್ಯಾರ್ಥಿಗಳಿಗೆ ಜವಾಬ್ದಾರಿಯ ಮಹತ್ವ ತಿಳಿಸಿ, ನಿಮಗೆ ನೀಡಿರುವ ಜವಾಬ್ದಾರಿ ನಿರ್ವಹಿಸುವುದು ಮಾತ್ರವಲ್ಲ, ಸವಾಲಿನ ಸಂದರ್ಭಗಳಲ್ಲಿಯೂ ಅದನ್ನು ಸಮರ್ಥವಾಗಿ ನಿಭಾಯಿಸುವುದೇ ನಿಜವಾದ ನಾಯಕತ್ವ ಎಂದು ಹೇಳಿದರು.

ಉಪಪ್ರಾಂಶುಪಾಲ ವಿಜು ಕಲ್ಲರ್ ಜೋಸ್ ಸ್ವಾಗತಿಸಿದರು. ವಿಭಾಗ ಸಂಯೋಜಕಿ ಆಶಾರಾಣಿ ಪಾಟೀಲ್, ಜೋಸೆಫ್ ವರ್ಗೀಸ್ ಇತರರಿದ್ದರು. ನಾಗವೇಣಿ ನರೋಣಿ ಅತಿಥಿ ಪರಿಚಯ ಮಾಡಿದರು. ಆಯುಷ್ ಸೂಗುರ್, ಭೂಮಿಕಾ ರಡ್ಡಿ ನಿರೂಪಿಸಿದರು.

ವರ್ಷಾ ಹಣಮಶೆಟ್ಟಿ ಹಾಗೂ ಆರ್ಶೀಮಾ ಪ್ರಸಾದ್ ನಿರ್ವಹಿಸಿದರು. ಶಾಲಾ ಸಂಸತ್ತಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪದಗ್ರಹಣ ಮಾಡಿಸಿದ ಪ್ರಾಂಶುಪಾಲರು ಪ್ರಮಾಣ ವಚನ ಬೋಧಿಸಿದರು.

ಸಮರ್ಥ ಎಂ.ದೇಸಾಯಿ ಶಾಲಾ ನಾಯಕನಾಗಿ ಹಾಗೂ ಆತ್ರಿತಾ ವಾಲಿ ಶಾಲಾ ನಾಯಕಿಯಾಗಿ ಆಯ್ಕೆಯಾದರು.

ವಿಷಯವಾರು ಹಾಗೂ ಪಠ್ಯೇತರ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಒಟ್ಟು 96 ವಿದ್ಯಾರ್ಥಿಗಳು ಶಾಲಾ ಸಂಸತ್ತಿಗೆ ಆಯ್ಕೆಯಾಗಿದ್ದಾರೆ. ಶರಣಬಸವೇಶ್ವರ ವಿದ್ಯಾವರ್ಧಕ ಸಂಘ ಅಧ್ಯಕ್ಷೆ ಮಾತೋಶ್ರೀ ಡಾ.ದಾಕ್ಷಾಯಣಿ ಅವ್ವಾಜಿ ಅವರು, ವಿದ್ಯಾರ್ಥಿಗಳ ಪ್ರತಿಭೆ ಮತ್ತು ಸಾಧನೆಗೆ ಹರ್ಷ ವ್ಯಕ್ತಪಡಿಸಿದರು.

## ರಾಜ್ಯ ಕಾಂಗ್ರೆಸ್ ನಾಯಕರ ನಡೆಯ ಬಗ್ಗೆಯೂ ಕಿಡಿ

# ಅಡ್ಡಮತದಾನದಿಂದ ಬಿಜೆಪಿ ಆಂತರಿಕ ಭಿನ್ನಾಭಿಪ್ರಾಯ ಬಹಿರಂಗ: ಮಾಜಿ ಶಾಸಕಿ ಅಂಜಲಿ ನಿಂಬಾಳ್ಕರ್



**ಬೆಳಗಾವಿ, ಜೂ.23:** ರಾಜ್ಯ ಬಿಜೆಪಿ ಪಾಳಯದಲ್ಲಿ ಸದ್ಯ ಪಕ್ಷ ದ್ರೋಹದ ವಿಚಾರ ಮುನ್ನೆಲೆಗೆ ಬಂದಿದ್ದು, ಕಳೆದ ವಿಧಾನಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನ ಮಾಡಿರುವ ಶಾಸಕರು ಯಾರು ಎಂಬ ಪ್ರಶ್ನೆ ಪಕ್ಷದ ನಾಯಕತ್ವಕ್ಕೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ.

ಈ ನಡುವೆಯೇ ಅಡ್ಡ ಮತದಾನದ ಲಾಭ ಪಡೆದಿರುವ ಕಾಂಗ್ರೆಸ್ ಪಕ್ಷದಲ್ಲೇ ಅಸಮಾಧಾನ ಸ್ಫೋಟವಾಗಿದ್ದು, ಮಾಜಿ ಶಾಸಕಿ ಹಾಗೂ ಎಐಸಿಸಿ ಜಂಟಿ ಕಾರ್ಯದರ್ಶಿ ಡಾ. ಅಂಜಲಿ ನಿಂಬಾಳ್ಕರ್ ಮಾಡಿರುವ ಪೋಸ್ಟ್ ಕೈ, ಕಮಲದಲ್ಲಿ ತಳಮಳಕ್ಕೆ ಕಾರಣವಾಗಿದೆ. ಸದ್ಯ ಖಾನಾಪುರದ ಬಿಜೆಪಿ ಶಾಸಕ ವಿಠ್ಠಲ ಹಲಗೇಕರ ವಿರುದ್ಧ ಅಡ್ಡ ಮತದಾನದ ಗಂಭೀರ ಆರೋಪ ಮಾಡಿರುವುದು ಚರ್ಚೆಗೆ ಗ್ರಾಸವಾಗಿದೆ. ಈ ಕುರಿತು ತಮ್ಮ ಸಾಮಾಜಿಕ ಜಾಲತಾಣದಲ್ಲಿ ಹಲಗೇಕರ್ ಫೋಟೋ ಹಂಚಿಕೊಂಡು ಸತ್ಯ ಎಲ್ಲರಿಗೂ ಕಾಣುವಂತಿದೆ! ಇತ್ತೀಚಿನ ವಿಧಾನ ಪರಿಷತ್ ಚುನಾವಣೆಯ ಫಲಿತಾಂಶಗಳು ಎಲ್ಲವನ್ನೂ ಹೇಳುತ್ತವೆ. ನಮ್ಮ ಎಲ್ಲಾ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಗೆದ್ದಿದ್ದಕ್ಕೆ ನನಗೆ ಸಂತೋಷವಾಗಿದೆ, ಆದರೆ ಖಾನಾಪುರ ಬಿಜೆಪಿ ಶಾಸಕರ ಮತ ಚಲಾಯಿಸುವ ಹೆಸರನ್ನು ಓದಿದಾಗ ನನಗೆ ಆಶ್ಚರ್ಯ ವಾಗುತ್ತದೆ. ವಿರೋಧ ಪಕ್ಷದಲ್ಲಾಗಿರುವ ಅಡ್ಡ ಮತದಾನವು ಬಿಜೆಪಿ ಒಳಗಿರುವ ತೀವ್ರ ವಿಭಜನೆ ಹಾಗೂ ಭಿನ್ನಾಭಿಪ್ರಾಯವನ್ನು ಎತ್ತಿ ತೋರಿಸುತ್ತದೆ ಎಂದು ಆರಂಭದಲ್ಲಿ ಉಲ್ಲೇಖಿಸಿದ್ದಾರೆ.

ನೇರವಾಗಿ ಹಲಗೇಕರ ಅವರನ್ನು ಗುರಿಯಾಗಿಸಿಕೊಂಡು ಕಳೆದ 2023ರ ಕರ್ನಾಟಕ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲೂ ಬಿಜೆಪಿ ಶಾಸಕ ಕಾಂಗ್ರೆಸ್ ನಾಯಕರ ಜೊತೆ ನಿರಂತರ ಸಂಪರ್ಕದಲ್ಲಿದ್ದರು. ಅಂದು ಖಾನಾಪುರ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸೋಲಲು ಇವರೇ ಪ್ರಮುಖವಾಗಿದ್ದರು. ಅಂದರೆ ಅವತ್ತು ಕೂಡ ಕಾಂಗ್ರೆಸ್ ನಾಯಕರು ಇವರ ಜೊತೆ ಕೈಜೋಡಿಸಿದ್ದರು ಎಂದರ್ಥವೇ, ಈಗ ಆ ದೊಡ್ಡ ಪಿತೂರಿ ಸಂಪೂರ್ಣವಾಗಿ ಬಯಲಾಗಿದೆ ಎಂದು ಗಂಭೀರ ಆಂತರಿಕ ಒಪ್ಪಂದ ಹಾಗೂ ಹೊಂದಾಣಿಕೆ ರಾಜಕೀಯದ ಕಡೆಗೆ ಬೊಟ್ಟು ಮಾಡಿದ್ದಾರೆ.

ಇಷ್ಟೇ ಅಲ್ಲದೆ ರಾಜಕೀಯದಲ್ಲಿ ಕಾಂಗ್ರೆಸ್ ಪಕ್ಷದಲ್ಲಿನ ನಾಯಕರ ನಡೆಯ ಬಗ್ಗೆಯೂ ಬಹಿರಂಗವಾಗಿ ಕಿಡಿಕಾರಿರುವ ನಿಂಬಾಳ್ಕರ್, ನಾನು ರಾಜಕೀಯದಲ್ಲಿ ಹಿನ್ನಡೆ ಅನುಭವಿಸಲು ಪಕ್ಷದ ಕೆಲವರ ವೈಯಕ್ತಿಕ ಲಾಭದ ಮನೋಭಾವ ಕಾರಣ ಎನ್ನುವಂತೆ ಕುಟುಕಿದ್ದಾರೆ. ತಮ್ಮ ರಾಜಕೀಯ ಹಿನ್ನಡೆಗೆ ಸ್ವಪಕ್ಷದ ನಾಯಕರೇ ಕಾರಣ ಎಂದು ಪರೋಕ್ಷವಾಗಿ ಕಿಡಿ ಕಾರಿರುವ ಅಂಜಲಿ, ಕೆಲವು ನಾಯಕರ ವೈಯಕ್ತಿಕ ಲಾಭಕ್ಕಾಗಿ ಅಂದು ನನ್ನನ್ನು ಬಲಿಪಶು ಮಾಡಲಾಯಿತು. ಮಂತ್ರಿ ಸ್ಥಾನ ಗಿಟ್ಟಿಸಿಕೊಳ್ಳುವ ಆಸೆಗೆ ಬಿದ್ದು ಸ್ವಂತ ಪಕ್ಷದ ಅಭ್ಯರ್ಥಿಯನ್ನೇ ಸೋಲಿಸಲು ಸಂಚು ರೂಪಿಸಿದ ಈ ನಾಯಕರಿಗೆ ಪಕ್ಷದ ಸಿದ್ಧಾಂತದ ಅರಿವಾದರೂ ಇದೆಯೇ, ಇಂತಹ ಹಲವು ಗಂಭೀರ ಪ್ರಶ್ನೆಗಳಿಗೆ ಆ ನಾಯಕರು ಉತ್ತರಿಸಬೇಕಿದೆ ಎಂದು ಮಾಜಿ ಶಾಸಕಿ ತಮ್ಮ ಪೋಸ್ಟ್‌ನಲ್ಲಿ ಉಲ್ಲೇಖಿಸಿ ಕಾಂಗ್ರೆಸ್ ನಾಯಕರಿಗೆ ಚಾಟಿ ಬೀಸಿರುವುದು ಸಂಚಲನಕ್ಕೆ ಕಾರಣವಾಗಿದೆ.

# ಅಡ್ಡಮತದಾನ ಮಾಡಿದವರ ವಿರುದ್ಧ ಶಿಸ್ತುಕ್ರಮವಾಗಲಿ: ಎಂಎಲ್‌ಸಿ ಡಾ.ಬಿ.ಜಿ. ಪಾಟೀಲ್ ಒತ್ತಾಯ



**ಕಲಬುರಗಿ, ಜೂ.23:** ವಿಧಾನ ಪರಿಷತ್ ಸದಸ್ಯರ ಆಯ್ಕೆ ಚುನಾವಣೆಯಲ್ಲಿ ಅಡ್ಡ ಮತದಾನ ಮಾಡಿ ಬಿಜೆಪಿ ಪಕ್ಷಕ್ಕೆ ಮುಜುಗರ ಆಗುವಂತೆ ಮಾಡಿ ಅಡ್ಡದಾರಿ ಹಿಡಿದವರ ವಿರುದ್ಧ ಅತ್ಯಂತ ಕಠಿಣವಾಗಿರುವ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ವಿಧಾನ ಪರಿಷತ್ ಸದಸ್ಯ ಡಾ.ಬಿ.ಜಿ.ಪಾಟೀಲ್ ಒತ್ತಾಯಿಸಿದ್ದಾರೆ.


ಬಿಜೆಪಿ ಪಕ್ಷದ ಟಿಕೆಟ್ ಪಡೆದುಕೊಂಡು ವಿಧಾನಸಭೆ ಸದಸ್ಯರಾಗಿ ಎಂಎಲ್ಸಿ ಚುನಾವಣೆಯಲ್ಲಿ ಅಡ್ಡ ಮತದಾನ ಮಾಡಿರುವುದು ಸರಿಯಲ್ಲ. ಶಿಸ್ತಿನ ಪಕ್ಷ ಎಂದು ಹೆಸರು ಮಾಡಿರುವ ಬಿಜೆಪಿಗೆ ಈ ಘಟನೆ ಮುಜುಗರ ಉಂಟು ಮಾಡಿದೆ. ಹೀಗಾಗಿ ಇಂತಹ ಕೃತ್ಯ ನಡೆಸಿದವರು ಯಾರೇ ಆಗಿರಲಿ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ.

ಪಕ್ಷದ ಅಧಿಕೃತ ಅಭ್ಯರ್ಥಿಗೆ ಮತ ಹಾಕದೆ, ಬೇರೆಯವ ರಿಗೆ ಮತದಾನ ಮಾಡಿರುವುದನ್ನು ಪತ್ತೆ ಮಾಡಲು ಸತ್ಯ ಶೋಧನಾ ಸಮಿತಿ ರಚನೆ ಮಾಡಿದ್ದು, ಆ ಸಮಿತಿಯವರು ಆದಷ್ಟು ಬೇಗನೆ ಪತ್ತೆ ಮಾಡುವ ಕೆಲಸ ಮಾಡಿದರೆ, ವರಿಷ್ಠರು ಶಿಸ್ತು ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತದೆ. ಇದು ತಾಯಿಗೆ ದ್ರೋಹ ಮಾಡಿದಂತೆ ಎಂದು ಬಿ.ಜಿ.ಪಾಟೀಲ್ ಅಭಿಪ್ರಾಯಿಸಿದ್ದಾರೆ.

ಆಮಿಷಕ್ಕೆ ಒಳಗಾಗಿ ಪಕ್ಷಕ್ಕೆ ದ್ರೋಹ ಮಾಡಿದವರು ಮುಂದಿನ ದಿನಗಳಲ್ಲಿ ಚುನಾವಣೆಗೆ ಸ್ಪರ್ಧಿಸದಂತೆ ಮಾಡಬೇಕು. ಆ ತೆರನಾದ ಕಠಿಣ ಹೆಜ್ಜೆ ಪಕ್ಷದ ವರಿಷ್ಠ ನಾಯಕರು ಇಟ್ಟರೆ ಮಾತ್ರ,ಮುಂದಿನ ದಿನಗಳಲ್ಲಿ ಇಂತಹ ಘಟನೆ ಮರುಕಳಿಸುವುದಿಲ್ಲ. ಅಲ್ಲದೆ ಉಳಿದವರಿಗೆ ಎಚ್ಚರಿಕೆ ಗಂಟೆಯಾಗಲಿದೆ ಎಂದು ಹೇಳಿದ್ದಾರೆ.

## ಧಾರವಾಡ ವಿಧಾನಸಭಾ ಕ್ಷೇತ್ರ ಉಪಚುನಾವಣೆ

# ವಿನಯ್ ಕುಲಕರ್ಣಿ ಕುಟುಂಬ ಸದಸ್ಯರಿಗೆ ಮಣೆ ಸಾಧ್ಯತೆ



**ಧಾರವಾಡ, ಜೂ.23:** ಬಿಜೆಪಿ ಮುಖಂಡ ಯೋಗೀಶಗೌಡ ಕೊಲೆ ಪ್ರಕರಣದಲ್ಲಿ ದೋಷಿ ಎಂದು ಸಾಬೀತಾದ ಹಿನ್ನೆಲೆಯಲ್ಲಿ ಅನರ್ಹರಾದ ಧಾರವಾಡದ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಅವರ ಸ್ಥಾನಕ್ಕೆ ಉಪಚುನಾವಣೆಗೆ ವೇದಿಕೆ ಸಿದ್ಧವಾಗಿದೆ.

ವಿನಯ್ ಕುಲಕರ್ಣಿ ತಮ್ಮ ಶಿಕ್ಷೆಯನ್ನು ತಡೆಹಿಡಿಯುವಂತೆ ಕೋರಿ ಹೈಕೋರ್ಟ್ ಮೊರೆ ಹೋಗಿದ್ದರೂ, ಇಲ್ಲಿಯವರೆಗೆ ಯಾವುದೇ ಮಧ್ಯಂತರ ಪರಿಹಾರ ಸಿಕ್ಕಿಲ್ಲ. ಒಂದು ವೇಳೆ ಅವರ ಶಿಕ್ಷೆ ಮುಂದುವರಿದರೆ, ಕೆಲವೇ ತಿಂಗಳುಗಳಲ್ಲಿ ಉಪಚುನಾವಣೆ ಘೋಷಣೆ ಯಾಗುವ ಸಾಧ್ಯತೆಯಿದೆ. ಈ ಉಪಚುನಾವಣೆಯು ಪ್ರಮುಖವಾಗಿ ವಿನಯ್ ಕುಲಕರ್ಣಿ ಅವರ ಮೇಲಿನ ಸಹಾನುಭೂತಿ, ಇನ್ನೊಂದು ಅವರು ದೋಷಿ ಎಂದು ಸಾಬೀತಾದ ನಂತರ ಉಂಟಾಗಿರುವ ಜವಾಬ್ದಾರಿಯ ಪ್ರಶ್ನೆಯ ಸುತ್ತ ತಿರುಗಲಿದೆ. ಸದ್ಯ ಕಾಂಗ್ರೆಸ್ ನಾಯಕರು ಸಂಭಾವ್ಯ ಅಭ್ಯರ್ಥಿಗಳ ಬಗ್ಗೆ ಅನೌಪಚಾರಿಕ ಚರ್ಚೆಗಳನ್ನು ಆರಂಭಿಸಿದ್ದಾರೆ. ವಿನಯ್ ಕುಲಕರ್ಣಿ ಅವರ ಆಪ್ತ ಅರವಿಂದ್ ಎಗನಗೌಡರ ಪ್ರಕಾರ, ಕಾಂಗ್ರೆಸ್ ಹೈಕಮಾಂಡ್ ಕುಲಕರ್ಣಿ ಅವರ ಕುಟುಂಬದ ಸದಸ್ಯರೊಬ್ಬರಿಗೆ ಟಿಕೆಟ್ ನೀಡುವ ಸಾಧ್ಯತೆ ಹೆಚ್ಚಾಗಿದೆ.

ಕಳೆದ 2023ರ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ವಿನಯ್ ಕುಲಕರ್ಣಿಗೆ ಜಿಲ್ಲೆಗೆ ಪ್ರವೇಶಿಸಲು ನ್ಯಾಯಾಲಯ ನಿರ್ಬಂಧ ವಿಧಿಸಿದ್ದಾಗ, ಅವರ ಪತ್ನಿ ಶಿವಲೀಲಾ ಕುಲಕರ್ಣಿ ಅವರು ಕಾಂಗ್ರೆಸ್ ಪ್ರಚಾರದ ಮುಖವಾಗಿ ಹೊರ ಹೊಮ್ಮಿದ್ದರು. ಗೆಲುವಿನ ನಂತರವೂ ಅವರು ಕ್ಷೇತ್ರದ ವ್ಯವಹಾರಗಳನ್ನು ನೋಡಿಕೊಳ್ಳುತ್ತಾ, ಕಾರ್ಯಕರ್ತ ರೊಂದಿಗೆ ಸಮನ್ವಯ ಸಾಧಿಸುತ್ತಾ ರಾಜಕೀಯವಾಗಿ ಸಕ್ರಿಯರಾಗಿದ್ದಾರೆ.

**ಪುತ್ರಿ ವೈಶಾಲಿ ಹೆಸರು ಮುಂಚೂಣಿಯಲ್ಲಿ:** ಕುಲಕರ್ಣಿ ಅವರ ಪುತ್ರಿ ವೈಶಾಲಿ ಕೂಡ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯೆಯಾಗಿ ಸಕ್ರಿಯರಾ ಗಿದ್ದಾರೆ. ರಾಹುಲ್ ಗಾಂಧಿಯವರ ನಾಯಕತ್ವದ ಬದಲಾವಣೆಯ ಚಿಂತನೆಯ ಹಿನ್ನೆಲೆಯಲ್ಲಿ ವೈಶಾಲಿ ಅವರ ಹೆಸರು ಮುಂಚೂಣಿಗೆ ಬರುವ ಸಾಧ್ಯತೆಯಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ವೈಶಾಲಿ, ತಮ್ಮ ತಂದೆಗೆ ನ್ಯಾಯ ಸಿಗುತ್ತದೆ ಎಂದು ನಮಗೆ 99% ನಂಬಿಕೆ ಇದೆ, ಅವರನ್ನು ಬಲಿಪಶು ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಉಪಚುನಾವಣೆ ಘೋಷಣೆಯಾದರೆ ಕುಟುಂಬ ಸ್ಪರ್ಧಿಸಲು ಸಿದ್ಧವಿದ್ದು, ಪಕ್ಷವು ತಮ್ಮ ತಾಯಿಗೆ ಟಿಕೆಟ್ ನೀಡಲಿ ಅಥವಾ ತನಗೆ ನೀಡಲಿ, ಜನರು ಮತ್ತು ಕಾರ್ಯಕರ್ತರು ಬೆಂಬಲಿಸುತ್ತಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**ಬಿಜೆಪಿಯಿಂದಲೂ ಸಿದ್ಧತೆ:** ಮತ್ತೊಂದೆಡೆ, ಬಿಜೆಪಿಯೂ ಆಂತರಿಕ ಸಿದ್ಧತೆಗಳನ್ನು ಆರಂಭಿಸಿದೆ. ಸವಿತಾ ಅಮರಶೆಟ್ಟಿ ಅವರು ಪ್ರಬಲ ಆಕಾಂಕ್ಷಿಯಾಗಿ ಹೊರಹೊಮ್ಮುತ್ತಿದ್ದಾರೆ. ಕಾಂಗ್ರೆಸ್‌ನಿಂದ ಶಿವಲೀಲಾ ಅಥವಾ ವೈಶಾಲಿ ಕಣಕ್ಕಿಳಿದರೆ, ಅವರನ್ನು ಎದುರಿಸಲು ಬಿಜೆಪಿ ಮಹಿಳಾ ಅಭ್ಯರ್ಥಿಯನ್ನೇ ಕಣಕ್ಕಿಳಿಸುವ ಸಾಧ್ಯತೆಯಿದೆ. ಕಳೆದ ಬಾರಿ ಅಮೃತ್ ದೇಸಾಯಿ ಅವರು ಎದುರಿಸಿದ ಆಡಳಿತ ವಿರೋಧಿ ಅಲೆಯ ಬಿಸಿ ಈ ಬಾರಿ ಸವಿತಾ ಅವರಿಗೆ ಇಲ್ಲದಿರುವುದು ಬಿಜೆಪಿಗೆ ಪ್ಲಸ್ ಪಾಯಿಂಟ್ ಆಗಬಹುದು. ಧಾರವಾಡ ದಲ್ಲಿನ ಗೆಲುವು ಕಾಂಗ್ರೆಸ್‌ಗೆ ಉತ್ತರ ಕರ್ನಾಟಕದಲ್ಲಿ ತನ್ನ ಹಿಡಿತವನ್ನು ಬಲಪಡಿಸಲು ನೆರವಾದರೆ, ಬಿಜೆಪಿಗೆ ಈ ಕ್ಷೇತ್ರವನ್ನು ಮರಳಿ ವಶಪಡಿಸಿ ಕೊಳ್ಳಲು ಸಿಕ್ಕಿದ ಮಹತ್ವದ ಅವಕಾಶವಾಗಲಿದೆ.

# ಎಂ.ಎಸ್.ಪಿ ದುರ್ಬಳಕೆ ಯತ್ನ ಬಹಿರಂಗಪಡಿಸಿದ ದಿಟ್ಟ ಸರ್ಕಾರಿ ಅಧಿಕಾರಿ ಎಚ್.ಡಿ.ರಾಜೇಶ್



**ಬಳ್ಳಾರಿ,ಜೂ.23:** ಆಂಧ್ರಪ್ರದೇಶ'ದಲ್ಲಿ ಕಡಿಮೆ ದರಕ್ಕೆ ಖರೀದಿಸಿದ ಜೋಳವನ್ನು ಕರ್ನಾಟಕದ ರೈತರ ಹೆಸರಲ್ಲಿ ಮಾರಾಟ ಮಾಡಿ ಸರ್ಕಾರದ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಸೌಲಭ್ಯ ದುರುಪಯೋಗಪಡಿಸಿಕೊಳ್ಳಲು ಯತ್ನಿಸಿದ್ದ ಆರೋಪದಡಿ ಅಧಿಕಾರಿಗಳು ದಾಳಿ ನಡೆಸಿ ನೂರಾರು ಚೀಲ ಜೋಳವನ್ನು ವಶಪಡಿಸಿಕೊಂಡಿದ್ದಾರೆ.

ಆಂಧ್ರಪ್ರದೇಶದ ಗುಂಟೂರು ಭಾಗದಲ್ಲಿ ಪ್ರತಿ ಕ್ವಿಂಟಾಲ್‌ಗೆ ಸುಮಾರು 2,000ಕ್ಕಿಂತ ಕಡಿಮೆ ದರದಲ್ಲಿ ಖರೀದಿಸಿದ್ದ ಜೋಳವನ್ನು ಬಳ್ಳಾರಿ ಜಿಲ್ಲೆಯ ರೈತರ ಹೆಸರಲ್ಲಿ ಮಾರಾಟ ಮಾಡಿ, ರಾಜ್ಯದಲ್ಲಿ ಜಾರಿಯಲ್ಲಿರುವ 3,700ಕ್ಕೂ ಅಧಿಕ ಎಂಎಸ್‌ಪಿ ದರದ ಲಾಭ ಪಡೆಯಲು ಕೆಲವು ವ್ಯಾಪಾರಿಗಳು ಸಂಚು ರೂಪಿಸಿದ್ದರು ಎಂಬ ಆರೋಪ ಕೇಳಿಬಂದಿದೆ.

ಈ ಕುರಿತು ದೊರೆತ ಖಚಿತ ಮಾಹಿತಿಯ ಮೇರೆಗೆ ಬಳ್ಳಾರಿ ಎಸಿ ರಾಜೇಶ್ ಅವರ ನೇತೃತ್ವದಲ್ಲಿ ಅಧಿಕಾರಿಗಳ ತಂಡ ದಾಳಿ ನಡೆಸಿತು. ದಾಳಿಯ ವೇಳೆ ತಾಲೂಕಿನ ಅಸುಂಡಿ ಗ್ರಾಮದ ಖಾಸಗಿ ಗೋದಾಮಿನಲ್ಲಿ ಅಕ್ರಮವಾಗಿ ಸಂಗ್ರಹಿಸಿಡಲಾಗಿದ್ದ 480 ಚೀಲ ಜೋಳ ಪತ್ತೆಯಾಯಿತು.

ಇದೇ ವೇಳೆ ಬಳ್ಳಾರಿ ಎಪಿಎಂಸಿ ವ್ಯಾಪ್ತಿಯ ಗೋದಾಮಿನಲ್ಲಿಯೂ 410 ಚೀಲ ಜೋಳವನ್ನು ದಾಸ್ತಾನು ಮಾಡಿರುವುದು ಬೆಳಕಿಗೆ ಬಂದಿದ್ದು, ಅಧಿಕಾರಿಗಳು ಪರಿಶೀಲನೆ ನಡೆಸಿ ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ. ಪ್ರಾಥಮಿಕ ತನಿಖೆಯಲ್ಲಿ ಜೋಳವನ್ನು ಆಂಧ್ರಪ್ರದೇಶದಿಂದ ತರಲಾಗಿದ್ದು, ರಾಜ್ಯದ ರೈತರ ಹೆಸರಲ್ಲಿ ಮಾರಾಟ ಮಾಡಲು ಸಿದ್ಧತೆ ನಡೆಸಲಾಗುತ್ತಿತ್ತು ಎಂಬ ಮಾಹಿತಿ ಲಭ್ಯವಾಗಿದೆ.

# ವೀ.ವಿ ಸಂಘದ ಎನ್.ಎಂ. ಸ್ವತಂತ್ರ ಪಿಯು ಕಾಲೇಜಿನಲ್ಲಿ ಎಸ್‌ಐಆರ್ ಜಾಗೃತಿ ಕಾರ್ಯಕ್ರಮ

**ಬಳ್ಳಾರಿ, ಜೂನ್ 23:** ಭಾರತದ ಚುನಾವಣಾ ಆಯೋಗದ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಅಭಿಯಾನದ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ನಗರದ ಎನ್.ಎಂ. ಸ್ವತಂತ್ರ ಪದವಿ ಪೂರ್ವ ಕಾಲೇಜಿನಲ್ಲಿ ವಿಶೇಷ ಜಾಗೃತಿ ಕಾರ್ಯಕ್ರಮ ನಡೆಯಿತು.

ಜಿಲ್ಲಾ ಎಸ್‌ಐಆರ್ ವಿಶೇಷ ತರಬೇತುದಾರ ಹಾಗೂ ಮಾಜಿ ಮುನ್ಸಿಪಲ್ ಕಾಲೇಜಿನ ಭೌತಶಾಸ್ತ್ರ ಉಪನ್ಯಾಸಕ ಮಲ್ಲಿಕಾರ್ಜುನ ಅವರು ಮತದಾರರ ಪಟ್ಟಿಯ ಪರಿಷ್ಕರಣೆ, ಮತದಾನದ ಮಹತ್ವ ಹಾಗೂ ಯುವಜನರ ಪ್ರಜಾಪ್ರಭುತ್ವದ ಜವಾಬ್ದಾರಿಗಳ ಕುರಿತು ಉಪನ್ಯಾಸ ನೀಡಿದರು.

ಕಾಲೇಜಿನ ಆಡಳಿತ ಮಂಡಳಿ ಅಧ್ಯಕ್ಷರಾದ ಮುಂಡಾಸದ ಚೆನ್ನಬಸವ ರಾಜ್ ಅವರು ಗಿಡಕ್ಕೆ ನೀರೆರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ, ವಿದ್ಯಾರ್ಥಿಗಳು ಸಾಮಾಜಿಕ ಜಾಗೃತಿ ಮತ್ತು ರಾಷ್ಟ್ರೀಯ ಹೊಣೆಗಾರಿಕೆಯನ್ನು ಬೆಳೆಸಿಕೊಳ್ಳಬೇಕೆಂದು ಕರೆ ನೀಡಿದರು.

ವಿದ್ಯಾರ್ಥಿಗಳು ಹಾಗೂ ಕಾಲೇಜಿನ ಸಿಬ್ಬಂದಿ ವರ್ಗದವರು ಉತ್ಸಾಹದಿಂದ ಭಾಗವಹಿಸಿ ಮತದಾರರ ಹಕ್ಕುಗಳು ಹಾಗೂ ಚುನಾವಣಾ ಪ್ರಕ್ರಿಯೆಯ ಕುರಿತು ಮಾಹಿತಿ ಪಡೆದುಕೊಂಡರು. ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ನಾಗರಿಕ ಪ್ರಜ್ಞೆ ಮತ್ತು ಮತದಾರರ ಜಾಗೃತಿ ಮೂಡಿಸುವಲ್ಲಿ ಯಶಸ್ವಿಯಾಯಿತು.



# ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ: ಬೃಹತ್ ಜಾಗೃತಿ ಜಾಥಾ




**ಕಲಬುರಗಿ, ಜೂ. 23:** ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) – 2026ರ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಈ ಜಾಗೃತಿ ಜಾಥಾ ಆಯೋಜಿಸಿದ್ದು, ಮೊದಲು ಮತದಾರರು ಪರಿಷ್ಕರಣೆಯ ಉದ್ದೇಶ ಅರಿತುಕೊಳ್ಳಬೇಕು ಮತ್ತು ಎರಡು ಕಡೆಗಳಲ್ಲಿ ತಮ್ಮ ಹೆಸರಿರುವುದನ್ನು ಹಾಗೂ ಮೃತಪಟ್ಟವರನ್ನು ವರ್ಗಾವಣೆಯಾಗಿ ಅಥವಾ ಮನೆ ಬದಲಾಯಿಸಿ ಹೋದವರ ಹೆಸರುಗಳನ್ನು ತೆಗೆಸಬೇಕು. ಮತದಾರರ ಹೆಸರುಗಳನ್ನು ಸರಿಯಾದ ರೀತಿಯಲ್ಲಿ ತಿದ್ದುಪಡಿ ಮಾಡಿಕೊಳ್ಳಬೇಕು. ಹೊಸದಾಗಿ ನೋಂದಣಿ ಮಾಡಿಕೊಳ್ಳುವುದೂ ಸೇರಿದಮತೆ ಪರಿಷರ್ಕರಣೆಯಲ್ಲಿ ಇವೆಲ್ಲ ಸೇರಿವೆ ಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಾಹುಲ್ ಸಂಕನೂರ ಅವರು ಹೇಳಿದರು.

ಕೇಂದ್ರ ಚುನಾವಣಾ ಆಯೋಗದ ನಿರ್ದೇಶನ ದಂತೆ, 2026ರ ಜೂನ್ 30ರಿಂದ ಜುಲೈ 30ರವರೆಗೆ ನಡೆಯಲಿರುವ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣಾ ಕಾರ್ಯಕ್ರಮದ ಬಗ್ಗೆ ಜನಸಾಮಾನ್ಯರಿಗೆ ಅರಿವು ಮೂಡಿಸುವುದು ಮತ್ತು ಅರ್ಹರಾದ ಪ್ರತಿಯೊಬ್ಬ ವ್ಯಕ್ತಿಯ ಹೆಸರು ಮತದಾರರ ಪಟ್ಟಿಯಲ್ಲಿರುವುದನ್ನು ಖಚಿತಪಡಿಸಿಕೊಳ್ಳುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ.

ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ ಹಾಗೂ ಅಧ್ಯಕ್ಷರು ಜಿಲ್ಲಾ ಸ್ವೀಪ್ ಸಮಿತಿ ಕಲಬುರಗಿ ರವರು ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ, ದಿ:30–06–2026 ರಿಂದ 29–07–2026 ರವರೆಗೆ ಮತಗಟ್ಟೆ ಮಟ್ಟದ ಅಧಿಕಾರಿಗಳಿಂದ ಮನೆ ಮನೆ ಭೇಟಿನೀಡಿ ಗಣತಿದಾರರ ನಮೂನೆಯನ್ನು ದ್ವಿಪ್ರತಿಯಲ್ಲಿ ನೀಡಲು ತಿಳಿಸಿದರು ದೋಷರಹಿತ ಮತದಾರರ ಪಟ್ಟಿಗಳು ಪ್ರಜಾಪ್ರಭುತ್ವವನ್ನು ಬಲಪಡಿಸುತ್ತದೆ, ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು ಎಂದು ಹೇಳಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ತಪ್ಪು ಮಾಹಿತಿಗಳ ಬಗ್ಗೆ ಎಚ್ಚರಿಕೆ ಅಗತ್ಯ. ಈ ಪ್ರಕ್ರಿಯೆಯಲ್ಲಿ ಎಲ್ಲರೂ ಸಕ್ರಿಯವಾಗಿ ಭಾಗವಹಿಸಿ, ತಮ್ಮ ಹೆಸರುಗಳನ್ನು ಪಟ್ಟಿಯಲ್ಲಿ ಸೇರಿಸಿಕೊಳ್ಳಲು ಹಾಗೂ ಅಗತ್ಯವಿದ್ದಲ್ಲಿ ತಿದ್ದುಪಡಿ ಮಾಡಿಕೊಳ್ಳಲು ತಿಳಿಸಿದರು. ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ಕುರಿತು ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಪ್ರಾದೇಶಿಕ ಜಂಟಿ ನಿರ್ದೇಶಕರು ಕಾಲೇಜು ಶಿಕ್ಷಣ ಇಲಾಖೆ, ಉಪ ನಿರ್ದೇಶಕರು ಪದವಿಪೂರ್ವ ಶಿಕ್ಷಣ ಇಲಾಖೆ, ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯತ ಕಲಬುರಗಿ ಸಹಯೋಗದೊಂದಿಗೆ ಜಿಲ್ಲೆಯ ಜನರಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಅರಿವು ಮೂಡಿಸಲು ಜಗತ್ ವೃತ್ತದಿಂದ ಅನ್ನಪೂರ್ಣ ಕ್ರಾಸ್, ಲಾಹೋಟಿ ಪೆಟ್ರೋಲ್ ಬಂಕ್‌ನಿದ ಜಿಲ್ಲಾಧಿಕಾರಿಯವರ ಕಚೇರಿ ವರೆಗೆ ಕಾಲ್ನಡಿಗೆ ಜಾಥಾ ಹಮ್ಮಿಕೊಳ್ಳಲಾಯಿತು.

ದೇಶದಲ್ಲಿ ಇದು ಮೂರನೇ ಹಂತದ ಮತದಾರರ ಪರಿಷ್ಕರಣೆಯಾಗಿದ್ದು, ಮತದಾರರ ಪಟ್ಟಿ ಪರಿಷ್ಕರಣೆ ಮತ್ತು ಅದರ ಕುರಿತಾದ ಜಾಗೃತಿ ಅಭಿಯಾನದ ಕುರಿತು ವಿದ್ಯಾರ್ಥಿಗಳು ತಮ್ಮ ಕೈಯಲ್ಲಿ ಜಾಗೃತಿ ಫಲಕಗಳನ್ನು ಹಿಡಿದು ಪ್ರದರ್ಶಿಸಿ ಘೋಷಣೆಗಳನ್ನು ಕೂಗಿದರು.



ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅಖಿಲ ಕರ್ನಾಟಕ ಸರ್ಕಾರಿ ಪರವಾನಗಿ ಭೂಮಾಪಕರ ಸಂಘದ ಸದಸ್ಯರು ಮಂಗಳವಾರ ತಮ್ಮ ಸೇವೆಯನ್ನು ಕಾಯಂಗೊಳಿಸಬೇಕು ಮತ್ತು ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು ಎಂದು ಒತ್ತಾಯಿಸಿ ಧರಣಿ ನಡೆಸಿದರು.

### ಮಾಧ್ಯಮಿಕ ಶಿಕ್ಷಕರಿಗೆ ಟಿಇಟಿ ಕಡ್ಡಾಯ

## ರಾಜ್ಯ ಸರ್ಕಾರ ಮಧ್ಯಸ್ಥಿಕೆ ವಹಿಸುವಂತೆ ಶಿಕ್ಷಕರ ಸಂಘದ ಒತ್ತಾಯ

**ಬೀದರ್, ಜೂ. 23:** ಶಿಕ್ಷಕರಿಗೆ 'ಶಿಕ್ಷಕರ ಅರ್ಹತಾ ಪರೀಕ್ಷೆ'(ಟಿಇಟಿ) ಅನ್ವಯಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ತೀರ್ಪಿನ ಮರು ಪರಿಶೀಲನೆ ಕುರಿತು ರಾಜ್ಯ ಸರ್ಕಾರ ಮಧ್ಯಸ್ಥಿಕೆ ವಹಿಸಬೇಕು ಎಂದು ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕ ಸಂಘ ಒತ್ತಾಯಿಸಿದೆ.



ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು ನಗರದಲ್ಲಿ ನಿಯೋಗದಲ್ಲಿ ಈ ಕುರಿತು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹಾಗೂ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರಿಗೆ ಬರೆದ ಮನವಿ ಪತ್ರವನ್ನು ಹೆಚ್ಚುವರಿ ಜಿಲ್ಲಾಧಿಕಾರಿಗಳ ಮೂಲಕ ಸಲ್ಲಿಸಿದರು.

ಶಿಕ್ಷಕರ ಅರ್ಹತಾ ಪರೀಕ್ಷೆ ಕುರಿತು 2026 ರ ಮೇ 29 ರಂದು ಸುಪ್ರೀಂಕೋರ್ಟ್ ನೀಡಿದ ತೀರ್ಪಿನ ಹಿನ್ನೆಲೆಯಲ್ಲಿ ರಾಷ್ಟ್ರೀಯ ಶಿಕ್ಷಕ ಪರಿಷತ್ 2010ಕ್ಕೆ ಮುಂಚೆ ಶಿಕ್ಷಕರಾಗಿ ನೇಮಕಗೊಂಡವರಿಗೆ ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವುದು ಕಡ್ಡಾಯಗೊಳಿಸಿದೆ. ಇದರಿಂದ ದೇಶದಾದ್ಯಂತ 17 ಲಕ್ಷ ಶಿಕ್ಷಕರಲ್ಲಿ ಸೇವಾ ಭದ್ರತೆ ಹಾಗೂ ಭವಿಷ್ಯದ ಕುರಿತು ಅಭದ್ರತೆ ಕಾಡುತ್ತಿದೆ ಎಂದು ಸಂಘದ ಪದಾಧಿಕಾರಿಗಳು ತಿಳಿಸಿದರು.

2010ಕ್ಕೆ ಮುಂಚೆ ದೇಶದ ಎಲ್ಲ ರಾಜ್ಯಗಳಲ್ಲಿ ಆಯಾ ಸಮಯದಲ್ಲಿ ಚಾಲ್ತಿಯಲ್ಲಿದ್ದ ನಿಯಮ ಹಾಗೂ ಆಯ್ಕೆ ವಿಧಾನದ ಅನುಸಾರ ಲಕ್ಷಾಂತರ ಶಿಕ್ಷಕರ ನೇಮಕಾತಿ ಆಗಿದೆ. ನೇಮಕಗೊಂಡ ಶಿಕ್ಷಕರು ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಹೇಳಿದರು.

ನ್ಯಾಯಾಲಯದ ತೀರ್ಪನ್ನು ಗೌರವಿಸುವುದು ಪ್ರತಿಯೊಬ್ಬ ನಾಗರಿಕ ಮತ್ತು ಸಂಸ್ಥೆಯ ಸಾಂವಿಧಾನಿಕ ಕರ್ತವ್ಯವಾಗಿದೆ. ನ್ಯಾಯಾಂಗ ಕಾನೂನು ವ್ಯಾಖ್ಯಾನಿಸುವಾಗ ವ್ಯತ್ಯಾಸವಾದಲ್ಲಿ ಸಾರ್ವಜನಿಕ ಹಿತಾಸಕ್ತಿಯಲ್ಲಿ ನೀತಿ ಹಾಗೂ ಶಾಸಕಾಂಗ ಪರಿಹಾರಗಳನ್ನು ಒದಗಿಸುವ ಅಧಿಕಾರ ಸಂಸತ್ತು, ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಇದೆ ಎಂದು ತಿಳಿಸಿದರು.

ರಾಷ್ಟ್ರೀಯ ಶಿಕ್ಷಕ ಪರಿಷತ್ ಆದೇಶದನ್ವಯ ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಶಿಕ್ಷಕರನ್ನು ಸೇವೆಯಿಂದ ವಜಾಗೊಳಿಸಿದ್ದಲ್ಲಿ ಲಕ್ಷಾಂತರ ಕುಟುಂಬಗಳು ಬೀದಿ ಪಾಲಾಗಲಿವೆ. ಹೀಗಾಗಿ ಶಿಕ್ಷಕರಿಗೆ ನ್ಯಾಯ ದೊರಕಿಸಿಕೊಡಲು, ಶಿಕ್ಷಕರ ಸೇವಾ ಹಕ್ಕು, ಹಿರಿತನ, ಬಡ್ತಿ ನಿರೀಕ್ಷೆ ಹಾಗೂ ಇತರ ಕಾನೂನು ಬದ್ಧ ಪ್ರಯೋಜನಗಳನ್ನು ರಕ್ಷಿಸಲು ಅಗತ್ಯ ಆಡಳಿತಾತ್ಮಕ ಕ್ರಮ ತೆಗೆದುಕೊಳ್ಳಬೇಕು ಎಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಪರಮೇಶ್ವರ ಬಿರಾದಾರ ನಿಯೋಗದ ನೇತೃತ್ವ ವಹಿಸಿದ್ದರು. ಕರ್ನಾಟಕ ರಾಜ್ಯ ಮುಖ್ಯೋಪಾಧ್ಯಾಯರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಪ್ರಶಾಂತ ರಾಗಾ, ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕ ಸಂಘದ ಜಿಲ್ಲಾ ಘಟಕದ ಗೌರವಾಧ್ಯಕ್ಷ ವಿಜಯಕುಮಾರ ಪಾಟೀಲ ಯರನಳ್ಳಿ, ಕಾರ್ಯದರ್ಶಿ ರಮೇಶ ಪಾಟೀಲ, ಖಜಾಂಚಿ ಸಂತೋಷ್ ಮಂಗಳೂರೆ, ಲಕ್ಷ್ಮಣ ಪೂಜಾರಿ, ಸಂತೋಷ್ ಸೋಲಪುರೆ, ನರಸಾರೆಡ್ಡಿ, ಸಂಗಮೇಶ ನೇಳಗೆ, ಸತೀಶ್ ಬಿರಾದಾರ, ನಾಗನಾಥ ಪಾಟೀಲ, ಗೋಪಾಲರಾವ್ ಕುಲಕರ್ಣಿ ಮತ್ತಿತರರು ಇದ್ದರು.

### ಸದನದೊಳಗೆ ಸಂಘದ ಗೀತೆ ಹಾಡಿದ ಡಿಕೆಶಿ ಬಗ್ಗೆ ಪ್ರಶ್ನೆಮಾಡಿ

## ಸಚಿವ ಪ್ರಿಯಾಂಕ್ ಖರ್ಗೆ ಆರ್‌ಎಸ್‌ಎಸ್ ನೋಂದಣಿ ಹೇಳಿಕೆಗೆ ನಳಿನ್‌ಕುಮಾರ್ ಕಟೀಲು ಸವಾಲು

**ಮಂಗಳೂರು, ಜೂ.23:** ಆರ್‌ಎಸ್‌ಎಸ್ ನೋಂದಣಿ ಬಗ್ಗೆ ಮಾತನಾಡುವ ಗೃಹ ಸಚಿವ ಪ್ರಿಯಾಂಕ್ ಖರ್ಗೆಯವರಿಗೆ ಶಕ್ತಿಯಿದ್ದರೆ ವಿಧಾನಸಭೆಯ ಒಳಗಡೆಯೇ ಆರ್‌ಎಸ್‌ಎಸ್ ಪ್ರಾರ್ಥನೆ ಹಾಡಿರುವ ಈಗಿನ ಸಿಎಂ ಬಗ್ಗೆ ಪ್ರಶ್ನೆ ಮಾಡಲಿ ಎಂದು ಬಿಜೆಪಿ ಮಾಜಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲು ಸವಾಲೆಸೆದಿದ್ದಾರೆ.

ಮಂಗಳೂರಿನಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲಿ ಈಗಿರುವ ಅನೇಕ ಮಂದಿ ಆರ್‌ಎಸ್‌ಎಸ್ ಶಿಕ್ಷಣ ಪಡೆದವರಾಗಿದ್ದಾರೆ. ಅವರನ್ನೂ ಪ್ರಶ್ನಿಸಲಿ. ಈ ರಾಜ್ಯದಲ್ಲಿರುವ ಸಮಸ್ಯೆಗಳ ಬಗ್ಗೆ ಪ್ರಶ್ನೆ ಮಾಡಲಿ. ಅದು ಬಿಟ್ಟು ಆರ್‌ಎಸ್‌ಎಸ್ ನೋಂದಣಿಯಾಗಿದೆಯಾ, ನೋಂದಣಿ ಮಾಡಿಸುತ್ತೇನೆ ಎನ್ನುವುದು ಪ್ರಚಾರ ಪ್ರಿಯತೆಯಾಗಿದೆ. ಅವರಿಗೆ ರಾಜ್ಯದಲ್ಲಿ ಜವಾಬ್ದಾರಿಯುತವಾಗಿ ಕೆಲಸ ಮಾಡಲು ಆಗುತ್ತಿಲ್ಲ. ಅಥವಾ ಅವರಿಗೆ ಗೃಹ ಇಲಾಖೆಯ ಬಗ್ಗೆ ಒಲವಿಲ್ಲ. ಬೇರಾವುದೋ ಆರ್ಥಿಕವಾಗಿ ಸಂಪನ್ಮೂಲ ಕ್ರೋಢೀಕರಣ ಮಾಡುವ ಇಲಾಖೆಯ ಬಗ್ಗೆ ಒಲವಿದೆ. ಅದಕ್ಕಾಗಿ ಈ ಚರ್ಚೆ ಎಬ್ಬಿಸಿರಬಹುದು ಎಂದು ಹೇಳಿದರು.

ಪ್ರಿಯಾಂಕ್ ಖರ್ಗೆಯವರು ತಮ್ಮ ಜವಾಬ್ದಾರಿ ಮರೆತು ಪ್ರಚಾರದ ಹಿಂದೆ ಬಿದ್ದಿದ್ದಾರೆ. ಅವರಿಗೆ ರಾಷ್ಟ್ರಮಟ್ಟದಲ್ಲಿ ಪ್ರಚಾರ ಗಟ್ಟಿಸಿಕೊಳ್ಳುವ ಹುಚ್ಚು ಹೆಚ್ಚಿದೆ. ಗೃಹ ಸಚಿವರಾಗಿ ಅವರ ಜವಾಬ್ದಾರಿಯನ್ನು ಗಮನಿಸುವುದು ಬಿಟ್ಟು ಆರ್‌ಎಸ್‌ಎಸ್ ನೋಂದಣಿ ವಿಚಾರವನ್ನು ಎತ್ತುವ ಪ್ರಯತ್ನ ಮಾಡುತ್ತಿದ್ದಾರೆ. ಆದ್ದರಿಂದ ಅವರು ಕಾರ್ಯಪ್ರಿಯರಲ್ಲ ಪ್ರಚಾರ ಪ್ರಿಯ ಎಂದು ತಿಳಿದು ಬರುತ್ತದೆ ಎಂದು ಲೇವಡಿ ಮಾಡಿದರು.

ಗೃಹ ಇಲಾಖೆಗೆ ಸಂಬಂಧಿಸಿದ ಹತ್ತಾರು ವಿಚಾರಗಳಿವೆ. ಆ ವಿಷಯಗಳ ಬಗ್ಗೆ ಅವರು ಗಮನ ಹರಿಸಿದ್ದಾರೆಯೇ? ರಾಜ್ಯದಲ್ಲಿ ಮಾದಕದ್ರವ್ಯಗಳ ಬಗ್ಗೆ ದೊಡ್ಡ ಚರ್ಚೆ ನಡೆಯುತ್ತಿದೆ. ಶಾಲಾ–ಕಾಲೇಜು ವಿದ್ಯಾರ್ಥಿಗಳು ಮಾದಕ ವ್ಯಸನಕ್ಕೆ ಬಲಿಯಾಗುತ್ತಿದ್ದಾರೆ. ಡ್ರಗ್ಸ್ ಮಾಫಿಯಾದ ಬಗ್ಗೆ ಅವರೇನು ಮಾಡಿದ್ದಾರೆ, ಪ್ರಿಯಾಂಕ್ ಖರ್ಗೆಯವರು ಗೃಹ ಸಚಿವರಾದ ಬಳಿಕ ಡ್ರಗ್ಸ್ ಮಾಫಿಯಾದ ಬಗ್ಗೆ ಚರ್ಚೆಯೇ ನಡೆದಿಲ್ಲ. ಓರ್ವ ಗೃಹ ಸಚಿವರಾಗಿ ರಾಜ್ಯದ ಆಂತರಿಕ ಸುರಕ್ಷತೆಯ ಬಗ್ಗೆ ವಿಷಯವನ್ನು ಎತ್ತದೆ ಅವರು ವಿಷಯಾಂತರ ಮಾಡುತ್ತಿದ್ದಾರೆ. ಆರ್‌ಎಸ್‌ಎಸ್ ಸ್ವಾತಂತ್ರ್ಯ ಪೂರ್ವದಿಂದಲೇ ಈ ದೇಶದಲ್ಲಿ ಕೆಲಸ ಮಾಡುತ್ತ ರಾಷ್ಟ್ರಭಕ್ತರನ್ನು ನಿರ್ಮಾಣ ಮಾಡುವ ಕಾಯಕವನ್ನು ಮಾಡುತ್ತಿದೆ. ಪ್ರಿಯಾಂಕ್ ಖರ್ಗೆ ಯವರು ಹುಟ್ಟುವ ಮೊದಲೇ ಆರ್‌ಎಸ್‌ಎಸ್ ಇದೆ. ಬ್ರಿಟಿಷರ ಕಾಲದಿಂದಲೂ ದೇಶದಲ್ಲಿ ಸ್ವಾತಂತ್ರ್ಯ ಹೋರಾಟದ ಕಾರ್ಯವನ್ನು ಮಾಡುತ್ತಾ ಬಂದಿದೆ. ಆರ್‌ಎಸ್‌ಎಸ್‌ಗೆ ನೆಹರೂ, ಲಾಲ್‌ಬಹದ್ದೂರ್ ಅವರೇ ಸಹಮತವನ್ನು ತೋರಿದ್ದರು. ಎಲ್ಲರೂ ಆರ್‌ಎಸ್‌ಎಸ್ ಅನ್ನು ಹೊಗಳಿದ್ದರು ಎಂದರು.

ಹಿಂದೆ ಮಲ್ಲಿಕಾರ್ಜುನ ಖರ್ಗೆಯವರು ತಮ್ಮ ಬಾಲ್ಯದಲ್ಲಿ ಪಟ್ಟ ಕಷ್ಟಗಳ ಬಗ್ಗೆ ನನ್ನಲ್ಲಿ ಹೇಳಿಕೊಂಡಿದ್ದರು. ಅವರ ಮನೆಸುಟ್ಟು ಹೋಗಿ, ಅವರ



ಅಜ್ಜಿ ಸುಟ್ಟು ಕರಕಲಾಗಿರುವ ಕಥೆಗಳನ್ನು ಹೇಳಿದ್ದರು. ಅದೆಲ್ಲಾ ಯಾರಿಂದ ಆಗಿರಬಹುದು ಅನ್ನುವುದಕ್ಕೆ ಮೊದಲು ಗೃಹ ಸಚಿವರಾಗಿರುವ ಪ್ರಿಯಾಂಕ್ ಖರ್ಗೆಯವರು ಉತ್ತರ ಹುಡುಕಲಿ. ಆಮೇಲೆ ಆರ್‌ಎಸ್‌ಎಸ್ ನೋಂದಣಿ ಬಗ್ಗೆ ಮಾತನಾಡಲಿ ಎಂದರು.ಸಂಘ ನೋಂದಣಿಯಾಗಿದೆಯೇ, ನೋಂದಣಿ ಆಗಿಲ್ಲವೋ ಅದು ಬೇರೆ ಪ್ರಶ್ನೆ. ಆದರೆ ರಾಷ್ಟ್ರಭಕ್ತರನ್ನು ನಿರ್ಮಾಣ ಮಾಡಿದೆ. ರಾಷ್ಟ್ರಭಕ್ತಿ ಉದ್ದೀಪನ ಮಾಡಿದೆ. ಪ್ರತಿಯೊಬ್ಬರಿಗೂ ರಾಷ್ಟ್ರ ಧರ್ಮದ ಬಗ್ಗೆ ಹೇಳಿದೆ.

ವ್ಯಕ್ತಿ ನಿರ್ಮಾಣದ ಕಾರ್ಯ ಮಾಡಿದೆ. ಸಂಘದಲ್ಲಿ ಬೆಳೆದು ಬಂದ ವಾಜಪೇಯಿ, ಮೋದಿಯವರು ದೇಶದ ಪ್ರಧಾನಮಂತ್ರಿಗಳಾಗಿದ್ದಾರೆ. ಅಡ್ವಾಣಿಯಂಥವರಿಂದ ದೇಶದ ಹಿತದ ಕೆಲಸ ಆಗಿದೆ. ಆರ್‌ಎಸ್‌ಎಸ್‌ನಿಂದ ಶಿಕ್ಷಣ ಪಡೆದವರು ಕಳಂಕ ರಹಿತ ಪ್ರಧಾನಿಗಳಾಗಿದ್ದಾರೆ. ಆದ್ದರಿಂದ ಪ್ರಿಯಾಂಕ್ ಖರ್ಗೆಯವರಿಗೆ ಆರ್‌ಎಸ್‌ಎಸ್ ನೋಂದಣಿ ವಿಚಾರ ಬಿಟ್ಟು ಗೃಹ ಇಲಾಖೆಯ ಕಡೆಗೆ ಗಮನಹರಿಸಲು ನಳಿನ್ ಕುಮಾರ್ ಕಟೀಲು ತಾಕೀತು ಮಾಡಿದರು.

## ಎನ್.ಎಂ. ಸ್ವತಂತ್ರ ಪದವಿಪೂರ್ವ ಕಾಲೇಜಿನಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ

**ಬಳ್ಳಾರಿ ಜೂ 23.** ಪ್ರತಿಷ್ಠಿತ ವೀರಶೈವ ವಿದ್ಯಾವರ್ಧಕ ಸಂಘದ ಎನ್.ಎಂ. ಸ್ವತಂತ್ರ ಪದವಿಪೂರ್ವ ಕಾಲೇಜಿನಲ್ಲಿ ಪತಂಜಲಿ ಯೋಗ ಸಮಿತಿ, ಬಳ್ಳಾರಿ ಇವರ ಸಹಯೋಗದೊಂದಿಗೆ ಅಂತರ



ರಾಷ್ಟ್ರೀಯ ಯೋಗದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.ಬಳಿಕ ಮಾತನಾಡಿದ ಅವರು, ಯೋಗವೆಂದರೆ ಕೇವಲ ದೈಹಿಕ ಕಸರತ್ತು ಮಾತ್ರವಲ್ಲ; ಅದು ದೇಹ, ಮನಸ್ಸು ಹಾಗೂ ಆತ್ಮದ ಪರಿಶುದ್ಧಿಗೆ ದಾರಿಯಾಗಿದೆ. ಇಂದಿನ ಯುವ ಪೀಳಿಗೆಗೆ ಯೋಗದ ಅವಶ್ಯಕತೆ ಹೆಚ್ಚಿದ್ದು, ವಿದ್ಯಾರ್ಥಿಗಳು ಪ್ರತಿದಿನ ಯೋಗಾಭ್ಯಾಸ ಮಾಡುವುದರಿಂದ ಏಕಾಗ್ರತೆ ವೃದ್ಧಿ ಯಾಗುವುದರ ಜೊತೆಗೆ ಜ್ಞಾಪಕಶಕ್ತಿಯೂ ಹೆಚ್ಚುತ್ತದೆ ಎಂದು ಹೇಳಿದರು. ವೇದಿಕೆ ಕಾರ್ಯಕ್ರಮದ ಬಳಿಕ ಪತಂಜಲಿ ಯೋಗ ಸಮಿತಿಯ ತಜ್ಞರಿಂದ ವಿದ್ಯಾರ್ಥಿಗಳಿಗೆ ಯೋಗಾಭ್ಯಾಸ ಮತ್ತು ವಿವಿಧ ಆಸನಗಳ ಪ್ರಾತ್ಯಕ್ಷಿಕೆ ಹಾಗೂ ತರಬೇತಿ ಕಾರ್ಯಕ್ರಮ ನಡೆಸಿಕೊಡಲಾಯಿತು. ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರು ಉತ್ಸಾಹದಿಂದ ಭಾಗವಹಿಸಿ ಯೋಗದ ಮಹತ್ವವನ್ನು ಅರಿತುಕೊಂಡರು.

## ಎಸ್‌ಐಆರ್‌ನಿಂದ ಮತಪಟ್ಟಿ ಶುದ್ಧೀಕರಣ ಸೂರ್ಯಕಾಂತ ನಾಗಮಾರಪಳ್ಳಿ ಸಮರ್ಥನೆ



ಬೀದರ ನಗರದಲ್ಲಿ ಜೆಡಿಎಸ್ ಹಮ್ಮಿಕೊಂಡಿದ್ದ ಬೀದರ್ ಉತ್ತರ ವಿಧಾನಸಭಾ ಕ್ಷೇತ್ರದ ಬೂತ್ ಮಟ್ಟದ ಕಾರ್ಯಕರ್ತರ ಎಸ್‌ಐಆರ್ ಕಾರ್ಯಾಗಾರದಲ್ಲಿ ಜೆಡಿಎಸ್ ಮುಖಂಡ, ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ ಮಾತನಾಡಿದರು.

ಬೀದರ್, ಜೂ. 23: ಕೇಂದ್ರ ಚುನಾವಣಾ ಆಯೋಗವು ನಡೆಸುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಬಹಳ ಮಹತ್ವದ ಅಭಿಯಾನವಾಗಿದೆ. ಹಿಂದೆ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿರುವಗ 11 ಬಾರಿ ಈ ರೀತಿ ಪರಿಷ್ಕರಣೆ ನಡೆಸಿದ್ದು, ಇದು 12ನೇ ಬಾರಿಗೆ ನಡೆಯುತ್ತಿದೆ. ಇದು ಮತದಾರರ ಪಟ್ಟಿ ಶುದ್ಧೀಕರಣ ಮಾಡುವ ದೊಡ್ಡ ಕೆಲಸವಾಗಿದೆ.

ಯಾರೂ ಸಹ ಇದನ್ನು ಲಘುವಾಗಿ ಪರಿಗಣಿಸಬಾರದು. ಮತದಾರರ ಪರಿಷ್ಕರಣೆ ಎಂದರೆ ಶುದ್ಧೀಕರಣ ಎಂದರ್ಥ ಎಂದು ಜೆಡಿಎಸ್ ಮುಖಂಡರೂ ಆದ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ ಹೇಳಿದರು.

ನಗರದಲ್ಲಿ ಜೆಡಿಎಸ್ ಹಮ್ಮಿಕೊಂಡಿದ್ದ ಬೀದರ್ ಉತ್ತರ ವಿಧಾನಸಭಾ ಕ್ಷೇತ್ರದ ಬೂತ್ ಮಟ್ಟದ ಕಾರ್ಯಕರ್ತರ ಎಸ್‌ಐಆರ್ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆಯು ನಮ್ಮ ಪ್ರಜಾಪ್ರಭುತ್ವ ಹಾಗೂ ಸಂವಿಧಾನಕ್ಕೆ ಇನ್ನಷ್ಟು ಶಕ್ತಿ ತುಂಬುವ ಅಭಿಯಾನವಾಗಿದೆ. ಮತದಾರರ ಪಟ್ಟಿ ಶುದ್ಧವಿದ್ದರೆ ಮಾತ್ರ ಪ್ರಜಾತಂತ್ರ ವ್ಯವಸ್ಥೆ ಸರಿಯಾಗಿರಲು ಸಾಧ್ಯ ಎಂದರು. ಮತದಾರರ ಪಟ್ಟಿಯಲ್ಲಿ ದೋಷ, ನಕಲಿ ಹೆಸರು, ಡಬಲ್ ನೋಂದಣಿಗಳು ಇದ್ದರೆ ಚುನಾವಣೆ ಪಾರದರ್ಶಕವಾಗಿ ನಡೆಯಲು ಸಾಧ್ಯವೇ ಇಲ್ಲ. ಅನರ್ಹರು ಮತ ಚಲಾವಣೆ ಮಾಡಿದರೆ ಅರ್ಹರ ಹಕ್ಕು ದಮನವಾಗುತ್ತವೆ.

ಹೀಗಾಗದಂತೆ ನೋಡಿಕೊಳ್ಳಲು ಎಸ್‌ಐಆರ್ ಪ್ರಕ್ರಿಯೆ ಅತ್ಯಂತ ಅಗತ್ಯವಿದೆ. ಮತದಾರರ ಪಟ್ಟಿ ಶುದ್ಧವಾಗಿದ್ದರೆ ಮಾತ್ರ ಸರಿಯಾದ ಜನಪ್ರತಿನಿಧಿಗಳು ಆಯ್ಕೆಯಾಗುತ್ತಾರೆ ಎಂಬುದು ಎಲ್ಲರೂ ಅರಿಯಬೇಕು ಎಂದು ಹೇಳಿದರು.

## ರಾಯಚೂರಿನಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ವಿತರಣೆ



**ರಾಯಚೂರು, ಜೂ. 23:** ಶಿಕ್ಷಣದ ಅಭಿವೃದ್ಧಿಗೆ ರಾಜ್ಯ ಸರ್ಕಾರ ಹಲವು ಜನಪರ ಯೋಜನೆಗಳನ್ನು ಜಾರಿಗೆ ತರುತ್ತಿದ್ದು, ವಿದ್ಯಾರ್ಥಿಗಳು ಅವುಗಳ ಸದುಪಯೋಗ ಪಡೆದು ತಮ್ಮ ಭವಿಷ್ಯವನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು ಎಂದು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಹೇಳಿದರು.

ಉಚಿತ ಬಸ್ ಪಾಸ್ ಯೋಜನೆಯು ಗ್ರಾಮೀಣ ಮತ್ತು ನಗರ ಪ್ರದೇಶದ ವಿದ್ಯಾರ್ಥಿಗಳಿಗೆ ಶಿಕ್ಷಣ ಪಡೆಯಲು ಅಗತ್ಯವಾದ ಸಾರಿಗೆ ಸೌಲಭ್ಯ ಒದಗಿಸುವುದರ ಜೊತೆಗೆ, ಪೋಷಕರ ಮೇಲಿನ ಆರ್ಥಿಕ ಹೊರೆ ಕಡಿಮೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ. ಶಾಲೆ ಮತ್ತು ಕಾಲೇಜುಗಳಿಗೆ ಪ್ರತಿನಿತ್ಯ ಸಂಚರಿಸುವ ವಿದ್ಯಾರ್ಥಿಗಳಿಗೆ ಈ ಯೋಜನೆ ಹೆಚ್ಚಿನ ಅನುಕೂಲ ಕಲ್ಪಿಸಲಿದೆ. ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿರುವ ರಾಜ್ಯ ಸರ್ಕಾರವು ವಿದ್ಯಾರ್ಥಿಗಳ ಕಲ್ಯಾಣಕ್ಕಾಗಿ ವಿವಿಧ ಯೋಜನೆಗಳನ್ನು ಜಾರಿಗೊಳಿಸಿದೆ. ಮುಖ್ಯಮಂತ್ರಿ ಹಾಗೂ ಸಾರಿಗೆ ಸಚಿವರ ಮಾರ್ಗದರ್ಶನದಲ್ಲಿ ರಾಜ್ಯದಾದ್ಯಂತ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿ (ಪಿಜಿ)ವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ಸೌಲಭ್ಯ ನೀಡಲಾಗುತ್ತಿದೆ. ಇದರಿಂದ ಬಡ, ರೈತಾಪಿ ಹಾಗೂ ಮಧ್ಯಮ ವರ್ಗದ ಕುಟುಂಬಗಳ ವಿದ್ಯಾರ್ಥಿಗಳಿಗೆ ಶಿಕ್ಷಣ ಮುಂದುವರಿಸಲು ಹೆಚ್ಚಿನ ನೆರವಾಗಲಿದೆ ಎಂದು ಹೇಳಿದರು.

ನಂತರ ಸಾಂಕೇತಿಕವಾಗಿ ವಿದ್ಯಾರ್ಥಿಗಳಿಗೆ ಬಸ್ ಪಾಸ್ ವಿತರಿಸಲಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ, ಕೆಕೆಆರ್‌ಟಿಸಿ ವಿಭಾಗೀಯ ಅಧಿಕಾರಿಗಳು, ಸಿಬ್ಬಂದಿಗಳು, ವಿವಿಧ ಸಂಘಟನೆಗಳ ಮುಖಂಡರು ಹಾಗೂ ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಕಲಬುರಗಿ ವಿವಿ ಸಸ್ಯಶಾಸ್ತ್ರ ವಿಭಾಗದ ಬೆಳ್ಳಿಹಬ್ಬ

## ಸುಸ್ಥಿರ ಸಾಧನೆಗೆ ಜೈವಿಕ ತಂತ್ರಜ್ಞಾನ ಕೊಡುಗೆ ಅಪಾರ: ಪ್ರೊ.ರಾಜಾಸಾಬ್

**ಕಲಬುರಗಿ, ಜೂ. 23:** ಮಾನವ ಜೀವಿಯ ಸುರಕ್ಷತೆ ಮತ್ತು ಸುಸ್ಥಿರ ಸಾಧನೆಗೆ ಜೈವಿಕ ತಂತ್ರಜ್ಞಾನದ ಕೊಡುಗೆ ಅಪಾರ ಎಂದು ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಅಧ್ಯಕ್ಷ ಪ್ರೊ.ಎ.ಎಚ್. ರಾಜಾಸಾಬ್ ಹೇಳಿದರು.




ಕಲಬುರಗಿ ವಿಶ್ವವಿದ್ಯಾಲಯದ ಜೈವಿಕ ತಂತ್ರಜ್ಞಾನ ವಿಭಾಗದ ಬೆಳ್ಳಿ ಮಹೋತ್ಸವ ನಿಮಿತ್ತ ಸಸ್ಯಶಾಸ ವಿಭಾಗದ ಬೋಸ್ ಹಾಲ್‌ನಲ್ಲಿ ಆಯೋಜಿಸಿದ್ದ ಜೈವಿಕ ತಂತ್ರಜ್ಞಾನ ಸುಸ್ಥಿರ ಅಭಿವೃದ್ಧಿ ಗುರಿ ರಾಷ್ಟ್ರೀಯ ವಿಚಾರ ಸಂಕಿರಣವನ್ನು ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಅಧ್ಯಕ್ಷ ಪ್ರೊ.ಎ.ಎಚ್.ರಾಜಾಸಾಬ್ ಅವರು ಉದ್ಘಾಟಿಸಿ ಮಾತನಾಡಿದರು. ಹಳೆಯ ವಿದ್ಯಾರ್ಥಿಗಳೊಂದಿಗೆ ಕುಲಪತಿ ಪ್ರೊ.ಶಶಿಕಾಂತ ಉಡಿಕೇರಿ ಮತ್ತಿತರರಿದ್ದರು.

ಕಲಬುರಗಿ ವಿಶ್ವವಿದ್ಯಾಲಯದ ಜೈವಿಕ ತಂತ್ರಜ್ಞಾನ ವಿಭಾಗದ ಬೆಳ್ಳಿ ಮಹೋತ್ಸವ ನಿಮಿತ್ತ ಸಸ್ಯಶಾಸ್ತ್ರ ವಿಭಾಗ ಆಯೋಜಿಸಿದ್ದ ಜೈವಿಕ ತಂತ್ರಜ್ಞಾನ ಸುಸ್ಥಿರ ಅಭಿವೃದ್ಧಿ ಗುರಿ ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿ ತಲುಪಲು ಸಸ್ಯ ಮತ್ತು ಪ್ರಾಣಿ ಸಂಪತ್ತು ಪುನಶ್ಚೇತನಗೊಳಿಸುವುದು ನಮ್ಮ ಆದ್ಯತೆಯಾಗಬೇಕು ಎಂದರು.

ತಂತ್ರಜ್ಞಾನದ ಹೊಸ ನಾವೀನ್ಯತೆ ಒಳಗೊಂಡ ಕ್ರಿಸ್ಪರ್ ಅಂಡ್ ಡಿಎನ್‌ಎ ಟೆಕ್ನಾಲಜಿ ಮತ್ತು ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಯಶಸ್ವಿಯಾಗಿ ಬಳಸಿಕೊಂಡರೆ ಜೈವಿಕ ವಿಜ್ಞಾನ ?ತ್ರದಲ್ಲಿ ಮತ್ತಷ್ಟು ಏಳಿಗೆ ಸಾಧ್ಯ. ಜೀವ ವಿಜ್ಞಾನ ವಿವಿಧ ಆಯಾಮಗಳ ವೈಜ್ಞಾನಿಕ ಚಿಂತನೆ ಮತ್ತು ತಂತ್ರಜ್ಞಾನದ ಬಳಕೆ ಮೂಲಕ ಅಸಾಧ್ಯವನ್ನೂ ಸಾಧಿಸಬಹುದು. ವಿಶ್ವಸಂಸ್ಥೆ ಯೋಜಿಸಿರುವ 17 ಗುರಿಗಳ ಪಾಲನೆಯಿಂದ ಶಿಕ್ಷಣ, ಆರೋಗ್ಯ, ಕೃಷಿ, ಕೈಗಾರಿಕೆ, ನೀರು, ಪರಿಸರ ಸಂರಕ್ಷಣೆ ಜತೆ ಸುಸ್ಥಿರ ಅಭಿವೃದ್ಧಿಗಾಗಿ ಜ ವಾ ಬ್ದಾ ರಿ ೦ ು ು ತ' ನಾಗರಿಕರನ್ನು ರೂಪಿಸುವ ಮೂಲಕ ದೇಶದ ಹಿತ ಕಾಪಾಡಬಹುದು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕುಲಪತಿ ಪ್ರೊ.ಶಶಿಕಾಂತ ಎಸ್. ಉಡಿಕೇರಿ ಮಾತನಾಡಿ, ಜೈವಿಕ ತಂತ್ರಜ್ಞಾನ ವಿಭಾಗದ ಬೆಳ್ಳಿ

ಹಬ್ಬ, ವಿದ್ವಾಂಸರ ಉಪನ್ಯಾಸ ಮತ್ತು ಹಳೆಯ ವಿದ್ಯಾರ್ಥಿಗಳ ಆಗಮನ ಸಂತಸ ಮೂಡಿಸಿದೆ. ವಿಜ್ಞಾನ ಬೆಳೆದಂತೆ ಜೈವಿಕ ತಂತ್ರಜ್ಞಾನ ಪಾತ್ರವೂ ವ್ಯಾಪಕವಾಗಿ ಬೆಳೆದಿದೆ. ಕೃಷಿ ಕ್ರಾಂತಿ ನಂತರ ಕೃಷಿ, ಬೇಸಾಯ ಕ್ರಮಗಳಲ್ಲಿ ವೈಜ್ಞಾನಿಕತೆ ಬಂದಿದೆ. ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳ ಬಳಕೆಯಲ್ಲಿ ಸುಧಾರಣೆ ಆಗಿದೆ ಎಂದು ಹೇಳಿದರು.

ವಿಚಾರ ಸಂಕಿರಣದ ಸ್ಮರಣಿಕೆಯನ್ನು ಗಣ್ಯರು ಬಿಡುಗಡೆ ಮಾಡಿದರು.

ರಾಷ್ಟ್ರೀಯ ವಿಚಾರ ಸಂಕಿರಣಕ್ಕೆ ಆಹ್ವಾನಿಸಿರುವುದು ತವರು ಮನೆಗೆ ಬಂದಷ್ಟೇ ಸಂತಸವಾಗಿದೆ. ಇದೇ ವಿಭಾಗದ ಉಪನ್ಯಾಸಕ ವೃತ್ತಿ ಕುಲಪತಿ ಹಾಗೂ ಕೆಎಸ್?ಟಿಎ ಮುಖ್ಯಸ್ಥ ಸ್ಥಾನದವರೆಗೆ ನನ್ನನ್ನು ಬೆಳೆಸಿದೆ. ನೂರಾರು ಕಾರ್ಯಕ್ರಮ, ವಿಚಾರ ಸಂಕಿರಣ ಆಯೋಜಿಸಿರುವ ನೆನಪುಗಳು ಇಂದಿಗೂ ಹಸಿರಾಗಿವೆ. – **ಪ್ರೊ.ಎ.ಎಚ್. ರಾಜಾಸಾಬ್, ಅಧ್ಯಕ್ಷರು, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ.**

### ನಿರುದ್ಯೋಗ ಯುವಕರಿಗೆ ಸುವರ್ಣ ಅವಕಾಶ

## ಬಿಎಸ್‌ಎನ್‌ಎಲ್ ಜಾಲತಾಣ ಸಂಪರ್ಕವನ್ನು ಗ್ರಾಮೀಣ ಪ್ರದೇಶಗಳಲ್ಲಿ ಒದಗಿಸಲು ಫ್ರಾಂಚೈಸಿಗಳಿಗೆ ಆಹ್ವಾನ

**ಬಳ್ಳಾರಿ, ಜೂ.23.** ಭಾರತ ಸರ್ಕಾರವು ಡಿಜಿಟಲ್ ಭಾರತ್ ನಿಧಿ ಹೆಸರಿನಲ್ಲಿ ಗ್ರಾಮ ಪಂಚಾಯಿತಿಗಳು ಮತ್ತು ಹಳ್ಳಿಗಳಲ್ಲಿ ಎಫ್‌ಟಿಟಿಹೆಚ್ ಹೈಸ್ಪೀಡ್ ಬ್ರಾಡ್‌ಬ್ಯಾಂಡ್ ಸಂಪರ್ಕ ಗಳನ್ನು ಒದಗಿಸುವ ಯೋಜನೆಯನ್ನು ರೂಪಿಸಿದೆ.

ಗ್ರಾಮೀಣ ಮತ್ತು ನಗರ ಪ್ರದೇಶಗಳ ನಡುವಿನ ಡಿಜಿಟಲ್ ಅಂತರವನ್ನು ಕಡಿಮೆ ಮಾಡಲು ಮತ್ತು ಸಮಗ್ರ ಸಾಮಾಜಿಕ–ಆರ್ಥಿಕ ಅಭಿವೃದ್ಧಿಯನ್ನು ಉತ್ತೇಜಿಸಲು ಈ ಯೋಜನೆಯನ್ನು ಜಾರಿಗೆ ತರಲಾಗಿದೆ. ಬಳ್ಳಾರಿ, ವಿಜಯನಗರ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳು ಮತ್ತು ಹಳ್ಳಿಗಳು ಈ ಯೋಜನೆಯ ಲಾಭ ಪಡೆಯಬಹುದು.

ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಗ್ರಾಮೀಣ ನಿರುದ್ಯೋಗಿ ಯುವಕರು ಗ್ರಾಮ ಪಂಚಾಯಿತಿಗಳು ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಹೈಸ್ಪೀಡ್ ಇಂಟರ್ನೆಟ್ ಸಂಪರ್ಕಗಳನ್ನು ಒದಗಿಸುವ ಮೂಲಕ ಬಿಎಸ್‌ಎನ್‌ಎಲ್‌ನಲ್ಲಿ ಫ್ರಾಂಚೈಸಿ ಆಗಲು ಮತ್ತು ರೂ.3200 – ರೂ.6400 ಮುಂಗಡ ಪ್ರೋತ್ಸಾಹದ ಜೊತೆಗೆ ಕಮೀಷನ್ ರೂಪದಲ್ಲಿ ಉತ್ತಮ ಮಾಸಿಕ ಆದಾಯವನ್ನು ಗಳಿಸಲು ಇದು ಒಂದು ಸುವರ್ಣ ಅವಕಾಶವಾಗಿದೆ. ಹೆಚ್ಚಿನ ವಿವರಗಳಿಗಾಗಿ ದಯವಿಟ್ಟು ಎಸ್‌ಡಿಇ ಎಫ್‌ಟಿಟಿಎಚ್ 9482073020 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

# ಸಂಪೂರ್ಣ ಪರಮಾಣು ತಪಾಸಣೆಗೆ ಇರಾನ್ ಒಪ್ಪಿಗೆ: ಟ್ರಂಪ್

**ವಾಸಿಂಗ್ಟನ್, ಜೂ.23:** ಇರಾನ್ "ಭವಿಷ್ಯದಲ್ಲಿ ಅತ್ಯುನ್ನತ ಮಟ್ಟದ ಪರಮಾಣು ತಪಾಸಣೆಗೆ ಸಂಪೂರ್ಣವಾಗಿ ಮತ್ತು ಸಂಪೂರ್ಣವಾಗಿ ಒಪ್ಪಿಕೊಂಡಿದೆ" ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಹೇಳಿದ್ದಾರೆ, ಇರಾನ್ ಅಧಿಕಾರಿಗಳು ಅಂತಹ ಪದಗಳು ನಡೆಯುತ್ತಿರುವ ಚರ್ಚೆಗಳ ಭಾಗವಾಗಿದೆ ಎಂದು ಬಲವಾಗಿ ನಿರಾಕರಿಸಿದರೂ ಸಹ. ಅವರ ಪ್ರತಿಭಟನೆಗಳು ಮತ್ತು ಸುಳ್ಳು ಹೇಳಿಕೆಗಳ ಹೊರತಾಗಿಯೂ, ಅಮೆರಿಕದ ವಿಜಯವನ್ನು ಸಾಧ್ಯವಾದಷ್ಟು ಚಿಕ್ಕದಾಗಿ ಮತ್ತು ಅತ್ಯಲ್ಪವಾಗಿಸಲು ಸಾಧ್ಯವಿರುವ ಎಲ್ಲವನ್ನೂ ಮಾಡುತ್ತಿರುವ ನಕಲಿ ಸುದ್ದಿಗಳ ಡ್ರಮ್ ಬೀಟ್ ಜೊತೆಗೆ, ಇರಾನ್ ಭವಿಷ್ಯದಲ್ಲಿ ಅತ್ಯುನ್ನತ ಮಟ್ಟದ ಪರಮಾಣು ತಪಾಸಣೆಗೆ ಸಂಪೂರ್ಣವಾಗಿ ಮತ್ತು ಸಂಪೂರ್ಣವಾಗಿ ಒಪ್ಪಿಕೊಂಡಿದೆ ." ಟ್ರಂಪ್ ಹೇಳಿದರು, "ಇದು 'ಪರಮಾಣು ಪ್ರಾಮಾಣಿಕತೆಯನ್ನು' ಖಚಿತಪಡಿಸುತ್ತದೆ. ಅವರು ಇದಕ್ಕೆ ಒಪ್ಪದಿದ್ದರೆ, ಯಾವುದೇ ಮಾತುಕತೆಗಳು ಇರುವುದಿಲ್ಲ." ಇರಾನ್‌ನಿಂದ "ಪ್ರಮುಖ ರಿಯಾಯಿತಿಗಳು" ಎಂದು ಅವರು ವಿವರಿಸಿದ ಆಧಾರದ ಮೇಲೆ, ಹಾರ್ಮುಜ್ ಜಲಸಂಧಿಯನ್ನು



ಯಾವುದೇ ನೌಕಾ ದಿಗ್ಬಂಧನವಿಲ್ಲದೆ ಮುಕ್ತವಾಗಿಡಲು ಒಪ್ಪಿಕೊಂಡಿದ್ದೇನೆ, ಆದರೂ ಯುಎಸ್ ನೌಕಾ ಪಡೆಗಳು ನಿಯೋಜಿಸಲ್ಪಡುತ್ತವೆ ಮತ್ತು ಅಗತ್ಯವಿದ್ದರೆ ಕಾರ್ಯನಿರ್ವಹಿಸಲು ಸಿದ್ಧವಾಗಿರುತ್ತವೆ. "ಆದಾಗ್ಯೂ, ದಿಗ್ಬಂಧನವನ್ನು ಪುನಃಸ್ಥಾಪಿಸುವುದು ಅಗತ್ಯವಾಗಿದ್ದರೆ ಎಲ್ಲಾ ಹಡಗುಗಳು ಸ್ಥಳದಲ್ಲಿಯೇ ಇರುತ್ತವೆ, ಇದು ಈ ಹಂತದಲ್ಲಿ ತುಂಬಾ ಅಸಂಭವವೆಂದು ತೋರುತ್ತದೆ."

**ನಿಧಿಗಳ ಬಿಡುಗಡೆ:** ಯುಎಸ್ ಖಜಾನೆ ಬಿಡುಗಡೆ ಮಾಡುತ್ತಿರುವ ಹಣ ಮತ್ತು ನಿರ್ಬಂಧಗಳು ಯುಎಸ್‌ಎ ನಿಯಂತ್ರಿಸುವ ಎಸ್ಕ್ರೊಗೆ ಹೋಗುತ್ತವೆ ಮತ್ತು ನಮ್ಮ ಮಹಾನ್ ಅಮೆರಿಕನ್ ರೈತರಿಂದ ಕಾರ್ನ್, ಗೋದಿ ಮತ್ತು ಸೋಯಾಬೀನ್ ಸೇರಿದಂತೆ ಅಮೆರಿಕದಿಂದ ಪ್ರತ್ಯೇಕವಾಗಿ ಆಹಾರ ಮತ್ತು ವೈದ್ಯಕೀಯ ಸರಬರಾಜುಗಳನ್ನು ಖರೀದಿಸಲು ಬಳಸಲಾಗುವುದು ಎಂದು ಟ್ರಂಪ್ ಹೇಳಿದರು, ಪರಿಸ್ಥಿತಿಯನ್ನು ಮಾನವೀಯ ಅಗತ್ಯವೆಂದು ವಿವರಿಸಿದರು. "ಇವು ಇರಾನ್ಗೆ ತೀರಾ ಅಗತ್ಯವಿರುವ ವಿಷಯಗಳಾಗಿವೆ. ಇದು ಮಾನವೀಯ ಬಿಕ್ಕಟ್ಟು, ಮತ್ತು ತಡವಾಗುವ ಮೊದಲು ಈಗ ಸಹಾಯ ಮಾಡುವುದು ಅಗತ್ಯವೆಂದು ನಾನು ಭಾವಿಸುತ್ತೇನೆ. ಮಾತುಕತೆಗಳು ಚೆನ್ನಾಗಿ ನಡೆಯುತ್ತಿವೆ" ಎಂದು ಟ್ರಂಪ್ ಹೇಳಿದರು.

ಅಮೆರಿಕದೊಂದಿಗೆ ನಡೆಯುತ್ತಿರುವ ಒಡಂಡಿಕೆಗೆಯ ಆರ್ಥಿಕ ಅಂಶಗಳನ್ನು ಉಲ್ಲೇಖಿಸುತ್ತಾ, ಇರಾನ್ ಯಾವುದೇ ಬಿಡುಗಡೆಯಾದ ಹೆಪ್ಪುಗಟ್ಟಿದ ಸ್ವತ್ತುಗಳ ಬಳಕೆಯ ಮೇಲೆ ನಿರ್ಬಂಧಗಳನ್ನು ಎದುರಿಸುವುದಿಲ್ಲ ಎಂದು ಬಕ್ಕೈ ಹೇಳಿದರು, ಟೆಹ್ರಾನ್ ಆ ಹಣವನ್ನು ಬಳಸಲು ಮುಕ್ತವಾಗಿದೆ ಎಂದು ಹೇಳಿದರು.

ಅಂತರರಾಷ್ಟ್ರೀಯ ಕಾನೂನು ಮತ್ತು ರಾಷ್ಟ್ರೀಯ ಹಕ್ಕುಗಳ ಚೌಕಟ್ಟಿನೊಳಗೆ ಯಾವುದೇ ಒಪ್ಪಂದಗಳ ಸಂಪೂರ್ಣ ಅನುಷ್ಠಾನವನ್ನು ಇರಾನ್ ಬಯಸುತ್ತದೆ ಎಂದು ಅವರು ಹೇಳಿದರು, ಈ ದಿಕ್ಕಿನಲ್ಲಿ ಪ್ರಗತಿಯು ಪ್ರಾದೇಶಿಕ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಮತ್ತು ಮತ್ತಷ್ಟು ಸಂಘರ್ಷವನ್ನು ತಡೆಯಲು ಸಹಾಯ ಮಾಡುತ್ತದೆ ಎಂದು ಹೇಳಿದರು.

# ಹಾರ್ಮುಜ್ ಜಲಸಂಧಿಯಿಂದ ದಾಖಲೆಯ 19 ದಶಲಕ್ಷ ಬ್ಯಾರಲ್ ತೈಲ ಹೊರಕ್ಕೆ: ಡೊನಾಲ್ಡ್ ಟ್ರಂಪ್

**ವಾಷಿಂಗ್ಟನ್, ಜೂ.23:** ಜೂನ್ 22 ರಂದು ಹಾರ್ಮುಜ್ ಜಲಸಂಧಿಯ ಮೂಲಕ ದಾಖಲೆಯ 19 ದಶಲಕ್ಷ ಬ್ಯಾರಲ್ ತೈಲ ಹೊರ ಹರಿದಿದ್ದು, ಬೆಲೆಗಳು ಕುಸಿದಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಹೇಳಿದ್ದಾರೆ. "ಸೋಮವಾರ ಹಾರ್ಮುಜ್ ಜಲಸಂಧಿಯಿಂದ 19 ದಶಲಕ್ಷ ಬ್ಯಾರಲ್ ತೈಲ ಹೊರ ಹರಿದಿದೆ, ಇದು ಸಾರ್ವಕಾಲಿಕ ದಾಖಲೆಯಾಗಿದೆ. ತೈಲ ಬೆಲೆಗಳು ಕುಸಿಯುತ್ತಿವೆ ಮತ್ತು ಜಗತ್ತು ಹೆಚ್ಚು ಸುರಕ್ಷಿತ ಸ್ಥಳವಾಗಿದೆ" ಎಂದು ಟ್ರಂಪ್ ಟ್ರುತ್ ಸೋಷಿಯಲ್‌ನಲ್ಲಿ ಬರೆದಿದ್ದಾರೆ. ಸೋಮವಾರ, ಹಾರ್ಮುಜ್ ಜಲಸಂಧಿಯು ನೌಕಾಯಾನಕ್ಕೆ ಸಂಪೂರ್ಣವಾಗಿ ಮುಕ್ತವಾಗಿದೆ ಎಂದು ಟ್ರಂಪ್ ಹೇಳಿಕೊಂಡಿದ್ದಾರೆ. ಕಳೆದ ವಾರ, ಇರಾನ್ ಮತ್ತು ಅಮೆರಿಕ ಫೆಬ್ರವರಿ 28 ರಂದು ಪ್ರಾರಂಭವಾದ ಮಿಲಿಟರಿ ಸಂಘರ್ಷವನ್ನು ಕೊನೆಗೊಳಿಸಲು ಒದಗಿಸುವ ಒಡಂಬಡಿಕೆಗೆ ಸಹಿ ಹಾಕಿದವು.

ಈ ದಾಖಲೆಯು ಇರಾನಿನ ಬಂದರುಗಳ ಮೇಲಿನ ತನ್ನ ನೌಕಾ ದಿಗ್ಬಂಧನವನ್ನು ತೆಗೆದುಹಾಕಲು ಮತ್ತು ಹಾರ್ಮುಜ್ ಜಲಸಂಧಿಯಲ್ಲಿ ಇರಾನ್ ಹಡಗು ಸಾಗಣೆಯನ್ನು ಪುನಃಸ್ಥಾಪಿಸಲು ಸಮಯಸೂಚಿಗಳನ್ನು ಸಹ ನಿಗದಿಪಡಿಸುತ್ತದೆ.

ಇರಾನ್ "ಭವಿಷ್ಯದಲ್ಲಿ ಅತ್ಯುನ್ನತ ಮಟ್ಟದ ಪರಮಾಣು ತಪಾಸಣೆಗಳಿಗೆ ಸಂಪೂರ್ಣವಾಗಿ ಮತ್ತು ಸಂಪೂರ್ಣವಾಗಿ



ಒಪ್ಪಿಕೊಂಡಿದೆ" ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಹೇಳಿದ್ದಾರೆ, ಇರಾನ್ ಅಧಿಕಾರಿಗಳು ಅಂತಹ ಪದಗಳು ನಡೆಯುತ್ತಿರುವ ಚರ್ಚೆಗಳ ಭಾಗವಾಗಿಲ್ಲ ಎಂದು ಬಲವಾಗಿ ನಿರಾಕರಿಸಿದರೂ ಸಹ. "ಅವರ ಪ್ರತಿಭಟನೆಗಳು ಮತ್ತು ಸುಳ್ಳು ಹೇಳಿಕೆಗಳ ಹೊರತಾಗಿಯೂ, ಅಮೆರಿಕದ ವಿಜಯವನ್ನು ಸಾಧ್ಯವಾದಷ್ಟು ಚಿಕ್ಕದಾಗಿ ಮತ್ತು ಅತ್ಯಲ್ಪವಾಗಿಸಲು ಸಾಧ್ಯವಿರುವ ಎಲ್ಲವನ್ನೂ ಮಾಡುತ್ತಿರುವ ನಕಲಿ ಸುದ್ದಿಗಳ ಡ್ರಮ್ ಬೀಟ್ ಜೊತೆಗೆ, ಇರಾನ್ ಭವಿಷ್ಯದಲ್ಲಿ ಅತ್ಯುನ್ನತ ಮಟ್ಟದ ಪರಮಾಣು ತಪಾಸಣೆಗಳಿಗೆ ಸಂಪೂರ್ಣವಾಗಿ ಮತ್ತು ಸಂಪೂರ್ಣವಾಗಿ ಒಪ್ಪಿಕೊಂಡಿದೆ." ಟ್ರಂಪ್ ಹೇಳಿದರು, "ಇದು 'ಪರಮಾಣು ಪ್ರಾಮಾಣಿಕತೆಯನ್ನು' ಖಚಿತಪಡಿಸುತ್ತದೆ. ಅವರು ಇದಕ್ಕೆ ಒಪ್ಪದಿದ್ದರೆ, ಯಾವುದೇ ಮಾತುಕತೆಗಳು ಇರುವುದಿಲ್ಲ."

ಇರಾನ್‌ನಿಂದ "ಪ್ರಮುಖ ರಿಯಾಯಿತಿಗಳು" ಎಂದು ಅವರು ವಿವರಿಸಿದ ಆಧಾರದ ಮೇಲೆ, ಯಾವುದೇ ನೌಕಾ ದಿಗ್ಬಂಧನವಿಲ್ಲದೆ ಹಾರ್ಮುಜ್ ಜಲಸಂಧಿಯನ್ನು ಮುಕ್ತವಾಗಿಡಲು ಒಪ್ಪಿಕೊಂಡಿದ್ದೇನೆ, ಆದರೂ ಯುಎಸ್ ನೌಕಾ ಪಡೆಗಳು ನಿಯೋಜಿಸಲ್ಪಡುತ್ತವೆ ಮತ್ತು ಅಗತ್ಯವಿದ್ದರೆ ಕಾರ್ಯನಿರ್ವಹಿಸಲು ಸಿದ್ಧವಾಗಿರುತ್ತವೆ ಎಂದು ಅವರು ಹೇಳಿದರು. "ಆದಾಗ್ಯೂ, ದಿಗ್ಬಂಧನವನ್ನು ಮರುಸ್ಥಾಪಿಸುವ ಅಗತ್ಯವಿದ್ದರೆ ಎಲ್ಲಾ ಹಡಗುಗಳು ಸ್ಥಳದಲ್ಲಿಯೇ ಉಳಿದಿವೆ, ಅದು ಈ ಹಂತದಲ್ಲಿ ಹೆಚ್ಚು ಅಸಂಭವವೆಂದು ತೋರುತ್ತದೆ." ಅಮೆರಿಕದ ಖಜಾನೆ ಬಿಡುಗಡೆ ಮಾಡುತ್ತಿರುವ ಹಣ ಮತ್ತು ನಿರ್ಬಂಧಗಳು ಅಮೆರಿಕದ ನಿಯಂತ್ರಣದಲ್ಲಿರುವ ಎಸ್ಕ್ರೊಗೆ ಹೋಗುತ್ತವೆ ಮತ್ತು ನಮ್ಮ ಶ್ರೇಷ್ಠ ಅಮೇರಿಕನ್ ರೈತರಿಂದ ಜೋಳ, ಗೋದಿ ಮತ್ತು ಸೋಯಾಬೀನ್ ಸೇರಿದಂತೆ ಅಮೆರಿಕದಿಂದ ಪ್ರತ್ಯೇಕವಾಗಿ ಆಹಾರ ಮತ್ತು ವೈದ್ಯಕೀಯ ಸರಬರಾಜುಗಳನ್ನು ಖರೀದಿಸಲು ಬಳಸಲಾಗುವುದು ಎಂದು ಟ್ರಂಪ್ ಹೇಳಿದರು, ಈ ಪರಿಸ್ಥಿತಿಯನ್ನು ಮಾನವೀಯ ಅವಶ್ಯಕತೆ ಎಂದು ವಿವರಿಸಿದರು.

# ಕೀರ್ ಸ್ಟಾರ್ಮರ್ ಯುಕೆ ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿದ ನಂತರ ಆಂಡಿ ಬರ್ನ್ಹ್ಯಾಮ್ ನಾಯಕತ್ವದ ಪ್ರಯತ್ನ ಆರಂಭ

**ಲಂಡನ್, ಜನವರಿ 22:** ಕೀರ್ ಸ್ಟಾರ್ಮರ್ ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿದ ನಂತರ, ಗ್ರೇಟರ್ ಮ್ಯಾಂಚೆಸ್ಟರ್‌ನ ಮಾಜಿ ಮೇಯರ್ ಆಂಡಿ ಬರ್ನ್‌ಹ್ಯಾಮ್ ಅವರು ಬ್ರಿಟನ್ನ ಮುಂದಿನ ಪ್ರಧಾನಿಯಾಗಲು ತಮ್ಮ ಉಮೇದುವಾರಿಕೆಯನ್ನು ಅಧಿಕೃತವಾಗಿ ದೃಢಪಡಿಸಿದ್ದಾರೆ. ಕೀರ್ ಸ್ಟಾರ್ಮರ್ ಸೋಮವಾರ ತಮ್ಮ ಭಾವನಾತ್ಮಕ ರಾಜೀನಾಮೆಯನ್ನು ಘೋಷಿಸಿದ ಕೆಲವೇ ಗಂಟೆಗಳ ನಂತರ ಬರ್ನ್‌ಹ್ಯಾಮ್ ತಮ್ಮ ನಾಯಕತ್ವದ ಪ್ರಯತ್ನವನ್ನು ಪ್ರಾರಂಭಿಸಿದರು. ಕಳೆದ ವಾರ ಮೇಕರ್‌ಫೀಲ್ಡ್‌ನಲ್ಲಿ ನಡೆದ ನಿರ್ಣಾಯಕ ಉಪಚುನಾವಣೆಯ ಗೆಲುವಿನ ನಂತರ ಬರ್ನ್‌ಹ್ಯಾಮ್ 10 ಡೌನಿಂಗ್ ಸ್ಟ್ರೀಟ್ ಅನ್ನು ವಹಿಸಿಕೊಳ್ಳಲು ಅಗಾಧವಾದ ಮುಂಚೂಣಿಯಲ್ಲಿ ಹೊರಹೊಮ್ಮಿದ್ದಾರೆ, ಇದು ವೆಸ್ಟ್ ಮಿನಿಸ್ಟರ್‌ಗೆ ಔಪಚಾರಿಕ ಮರಳುವಿಕೆಯನ್ನು ಖಚಿತಪಡಿಸಿತು. ಸ್ಟಾರ್ಮರ್ ತಮ್ಮ ಔಪಚಾರಿಕ ರಾಜೀನಾಮೆಯನ್ನು ಘೋಷಿಸಿದ ಕೆಲವೇ ಗಂಟೆಗಳ ನಂತರ, ಬರ್ನ್ಹ್ಯಾಮ್ ಅಧಿಕೃತವಾಗಿ ಮೇಕರ್ಫೀಲ್ಡ್‌ನ ಹೊಸ ಸಂಸತ್ ಸದಸ್ಯರಾಗಿ ಪ್ರಮಾಣವಚನ ಸ್ವೀಕರಿಸಿದರು. ಮ್ಯಾಂಚೆಸ್ಟರ್‌ನಿಂದ ಲಂಡನ್‌ಗೆ ರೈಲಿನಲ್ಲಿ ಪ್ರಯಾಣಿಸುವಾಗ, ಬರ್ನ್‌ಹ್ಯಾಮ್ ತಮ್ಮ ಉಮೇದುವಾರಿಕೆಯನ್ನು ದೃಢೀಕರಿಸುವ ಅಧಿಕೃತ ಹೇಳಿಕೆಯನ್ನು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ: "ಈ ಪ್ರಕ್ರಿಯೆಯ ಭಾಗವಾಗಿ ನಾನು ನನ್ನನ್ನು ಮುಂದಿಡುತ್ತೇನೆ" ಎಂದು ಅವರು ಹೇಳಿದರು ಎಂದು ಬಿಬಿಸಿ ವರದಿ ಮಾಡಿದೆ. ಬರ್ನ್ಹ್ಯಾಮ್ ಆರ್ಥಿಕ ಬೆಳವಣಿಗೆ, ಜೀವನ ವೆಚ್ಚದ ಬಿಕ್ಕಟ್ಟು, ಸಾರ್ವಜನಿಕ ಸೇವೆಗಳು, ವಸತಿ ಮತ್ತು ಯುವ ಪೀಳಿಗೆಗೆ ಅವಕಾಶಗಳ ಮೇಲೆ ಗಮನಹರಿಸುವುದಾಗಿ ಪ್ರತಿಜ್ಞೆ ಮಾಡಿದ್ದಾರೆ. "ಈ ಪರಿವರ್ತನೆಯು ನಮ್ಮ ಪಕ್ಷ ಮತ್ತು ನಮ್ಮ ದೇಶಕ್ಕೆ ನವೀಕರಣದ ಸಕಾರಾತ್ಮಕ ಪ್ರಕ್ರಿಯೆಯಾಗಬೇಕು" ಎಂದು ಅವರು ಹೇಳಿದರು. ಮತ್ತೊಂದು ಮಹತ್ವದ ಬೆಳವಣಿಗೆಯಲ್ಲಿ, ಬರ್ನ್ಹ್ಯಾಮ್ನ ಪ್ರಾಥಮಿಕ



ಎದುರಾಳಿ ಎಂದು ಪರಿಗಣಿಸಲಾಗಿದ್ದ ಮಾಜಿ ಆರೋಗ್ಯ ಕಾರ್ಯದರ್ಶಿ ವೆಸ್ ಸ್ಟ್ರೀಟಿಂಗ್, ಸ್ಪರ್ಧೆಯಿಂದ ಹಿಂದೆ ಸರಿದರು ಮತ್ತು ಬರ್ನ್‌ಹ್ಯಾಮ್‌ಗೆ ಬೆಂಬಲ ನೀಡಿದರು. "ಲೇಬರ್ ಏನಾಗಬಹುದು ಎಂಬುದನ್ನು ಆಂಡಿ ತೋರಿಸಿದ್ದಾರೆ" ಎಂದು ಸ್ಟ್ರೀಟಿಂಗ್ ಹೇಳಿದರು ಮತ್ತು ಆಂತರಿಕ ವ್ಯತ್ಯಾಸಗಳನ್ನು ಎತ್ತಿ ತೋರಿಸುವ ಮೂಲಕ ಬೇಸಿಗೆಯನ್ನು ವ್ಯರ್ಥ ಮಾಡುವ ಬದಲು "ನಮ್ಮ ತೋಳುಗಳನ್ನು ಸುತ್ತಿಕೊಳ್ಳಿ" ಮತ್ತು ಬರ್ನ್‌ಹ್ಯಾಮ್ ಅಡಿಯಲ್ಲಿ ಒಗ್ಗೂಡುವಂತೆ ಪಕ್ಷವನ್ನು ಒತ್ತಾಯಿಸಿದರು. ಅಭ್ಯರ್ಥಿಗಳು 81 ಲೇಬರ್ ಸಂಸದರ ನಾಮನಿರ್ದೇಶನಗಳನ್ನು ಪಡೆದುಕೊಳ್ಳಬೇಕು, ಸ್ಟ್ರೀಟಿಂಗ್‌ನ ನಿರ್ಗಮನ ಎಂದರೆ ಬರ್ನ್‌ಹ್ಯಾಮ್ ಸಂಪೂರ್ಣವಾಗಿ ಅವಿರೋಧವಾಗಿ ಸ್ಪರ್ಧಿಸುವ ಸಾಧ್ಯತೆಯಿದೆ, ಇದು ಜುಲೈ 2026 ರ ಮಧ್ಯಭಾಗದಲ್ಲಿ 10 ಡೌನಿಂಗ್ ಸ್ಟ್ರೀಟ್‌ಗೆ ನೇರವಾಗಿ ತ್ವರಿತ ಪರಿವರ್ತನೆಯನ್ನು ಬಹುತೇಕ ಖಚಿತಗೊಳಿಸುತ್ತದೆ. ಜುಲೈ 9 ರಂದು ಸ್ಪರ್ಧೆಗೆ ನಾಮನಿರ್ದೇಶನಗಳು ಪ್ರಾರಂಭವಾಗುತ್ತವೆ ಮತ್ತು ಜುಲೈ 16 ರಂದು ಸಂಸತ್ತಿನ ಬೇಸಿಗೆಯ ಬಿಡುವಿನ ಮೊದಲು ಮುಕ್ತಾಯಗೊಳ್ಳುತ್ತವೆ. "ಲೇಬರ್ ಸಂಸದರು ನಾನು ಅವರನ್ನು ಮುಂದಿನ ಸಾರ್ವತ್ರಿಕ ಚುನಾವಣೆಗೆ ಮುನ್ನಡೆಸಬೇಕೆಂದು ನಾನು ಬಯಸುವುದಿಲ್ಲ ಎಂದು ನಾನು ಒಳ್ಳೆಯ ಕೃಪೆಯಿಂದ ಒಪ್ಪಿಕೊಳ್ಳುತ್ತೇನೆ" ಎಂದು ಸ್ಟಾರ್ಮರ್ ಹೇಳಿದರು, ಎರಡು ವರ್ಷಗಳಿಗಿಂತ ಕಡಿಮೆ ಅವಧಿಯ ನಂತರ ಅಧಿಕಾರದಿಂದ ಕೆಳಗಿಳಿಯುವ ನಿರ್ಧಾರವನ್ನು ದೃಢಪಡಿಸಿದರು. ಈ ವರ್ಷದ ಆರಂಭದಲ್ಲಿ ಸ್ಥಳೀಯ ಚುನಾವಣೆಗಳಲ್ಲಿ ಭಾರಿ ಸೋಲು ಸೇರಿದಂತೆ ರಾಜಕೀಯ ಹಿನ್ನಡೆಗಳ ಸರಣಿಯ ನಂತರ ಲೇಬರ್ ಶ್ರೇಣಿಯಲ್ಲಿ ಹೆಚ್ಚುತ್ತಿರುವ ಅಶಾಂತಿಯ ನಂತರ ಈ ರಾಜೀನಾಮೆ ಬಂದಿದೆ.

ಸ್ಟಾರ್ಮರ್ 2024 ರಲ್ಲಿ ಲೇಬರ್ ಪಕ್ಷವನ್ನು ಭರ್ಜರಿ ಸಾರ್ವತ್ರಿಕ ಚುನಾವಣೆಯ ಗೆಲುವಿಗೆ ಕಾರಣರಾದರು, 14 ವರ್ಷಗಳ ಕನ್ಸರ್ವೇಟಿವ್ ಆಡಳಿತವನ್ನು ಕೊನೆಗೊಳಿಸಿದರು, ಆದರೆ ಆಂತರಿಕ ಟೀಕೆಗಳು ಮತ್ತು ಸಾರ್ವಜನಿಕ ಬೆಂಬಲ ಕುಸಿಯುತ್ತಿರುವ ಕಾರಣ ಅವರ ಅಧಿಕಾರವು ಸ್ಥಿರವಾಗಿ ದುರ್ಬಲಗೊಂಡಿತು.

ಶಿಕ್ಷೆಗೊಳಗಾದ ಲೈಂಗಿಕ ಅಪರಾಧಿ ಜೆಫ್ರಿ ಎಫ್‌ಸ್ಟೀನ್ ಜೊತೆ ಮ್ಯಾಂಡೆಲ್ಸನ್ ಅವರ ಹಿಂದಿನ ಸಂಬಂಧದ ಬಗ್ಗೆ ಪರಿಶೀಲನೆಯ ಹೊರತಾಗಿಯೂ, ಪೀಟರ್ ಮ್ಯಾಂಡೆಲ್ಸನ್ ಅವರನ್ನು ಅಮೆರಿಕಕ್ಕೆ ರಾಯಭಾರಿಯಾಗಿ ನೇಮಿಸಿದ ವಿವಾದದಿಂದ ಸ್ಟಾರ್ಮರ್ ಅವರ ಸ್ಥಾನವು ಮತ್ತಷ್ಟು ದುರ್ಬಲಗೊಂಡಿತು. ಆದಾಗ್ಯೂ, ಅನೇಕ ಲೇಬರ್ ಸಂಸದರಿಗೆ, ಸ್ಥಳೀಯ ಚುನಾವಣೆಗಳಲ್ಲಿ ಪಕ್ಷದ ಕಳಪೆ ಪ್ರದರ್ಶನದ ನಂತರ ನಿರ್ಣಾಯಕ ಕ್ಷಣ ಬಂದಿತು, ಇದು ಮುಂದಿನ ಸಾರ್ವತ್ರಿಕ ಚುನಾವಣೆಗೆ ಲೇಬರ್ ಪಕ್ಷವನ್ನು ಮುನ್ನಡೆಸುವ ಸ್ಟಾರ್ಮರ್ ಸಾಮರ್ಥ್ಯದ ಬಗ್ಗೆ ಕಳವಳಗಳನ್ನು ತೀವ್ರಗೊಳಿಸಿತು.

ಅವರ ರಾಜೀನಾಮೆಯಿಂದಾಗಿ ಬ್ರಿಟನ್ ಒಂದು ದಶಕದಲ್ಲಿ ಏಳನೇ ಪ್ರಧಾನಿಯಾಗಲಿದ್ದಾರೆ, ಇದು 2016 ರಲ್ಲಿ ಬ್ರೆಕ್ಸಿಟ್ ಜನಾಭಿಪ್ರಾಯ ಸಂಗ್ರಹಣೆಯ ನಂತರ ದೇಶವನ್ನು ನಿರೂಪಿಸುತ್ತಿರುವ ರಾಜಕೀಯ ಅಸ್ಥಿರತೆಯನ್ನು ಎತ್ತಿ ತೋರಿಸುತ್ತದೆ.

ಬರ್ನ್‌ಹ್ಯಾಮ್ ಯಶಸ್ವಿಯಾದರೆ, ಅವರು ಗಣನೀಯ ಸಂಸದೀಯ ಬಹುಮತವನ್ನು ಪಡೆಯುತ್ತಾರೆ, ಆದರೆ ಸಾರ್ವಜನಿಕ ವಿಶ್ವಾಸವನ್ನು ಪುನರುಜ್ಜೀವನಗೊಳಿಸಲು, ಆರ್ಥಿಕ ಸವಾಲುಗಳನ್ನು ಪರಿಹರಿಸಲು ಮತ್ತು ವರ್ಷಗಳ ರಾಜಕೀಯ ಕ್ರಾಂತಿಯ ನಂತರ ಬದಲಾವಣೆಯ ಭರವಸೆ ನೀಡಿದ ಸರ್ಕಾರವನ್ನು ಸ್ಥಿರಗೊಳಿಸಲು ಹೆಚ್ಚುತ್ತಿರುವ ಒತ್ತಡವನ್ನು ಸಹ ಪಡೆಯುತ್ತಾರೆ.

ಬರ್ನ್‌ಹ್ಯಾಮ್ ಮೇಕರ್‌ಫೀಲ್ಡ್ ಉಪಚುನಾವಣೆಯ ಗೆಲುವಿನ ನಂತರ ಅಧಿಕೃತವಾಗಿ ಸಂಸದರಾಗಿ ಪ್ರಮಾಣವಚನ ಸ್ವೀಕರಿಸಿದಾಗ, ಅವರನ್ನು ವೆಸ್ಟ್‌ಮಿನಿಸ್ಟರ್‌ನಲ್ಲಿ ಲೇಬರ್ ಸಹೋದ್ಯೋಗಿಗಳು ಚಪ್ಪಾಳೆಯೊಂದಿಗೆ ಸ್ವಾಗತಿಸಿದರು. ಉಪ ಪ್ರಧಾನ ಮಂತ್ರಿ ಏಂಜೆಲಾ ರೇನರ್ ಮತ್ತು ಲೇಬರ್ ಅಧ್ಯಕ್ಷೆ ಲೂಸಿ ಪೊವೆಲ್ ಸೇರಿದಂತೆ ಹಿರಿಯ ವ್ಯಕ್ತಿಗಳು ಸಮಾರಂಭದ ನಂತರ ಛಾಯಾಚಿತ್ರಗಳಿಗಾಗಿ ಅವರೊಂದಿಗೆ ಸೇರಿಕೊಂಡರು. ಸಂಸತ್ತಿಗೆ ಅವರ ಆಗಮನವು ಸಂಭ್ರಮಾಚರಣೆಯ ವಾತಾವರಣದಿಂದ ಗುರುತಿಸಲ್ಪಟ್ಟಿತು, ಸಂಸದರು ನಾಯಕತ್ವದ ಮುಂಚೂಣಿಯಲ್ಲಿರುವವರೊಂದಿಗೆ ಛಾಯಾಚಿತ್ರಗಳು ಮತ್ತು ಸಂಭಾಷಣೆಗಳಿಗಾಗಿ ಸಾಲುಗಟ್ಟಿ ನಿಂತಿದ್ದರು.

# FIH ಪ್ರೊ ಲೀಗ್ ಲಂಡನ್-ಲೆಗ್ ಆರಂಭಿಕ ಪಂದ್ಯ: ಪಾಕಿಸ್ತಾನಕ್ಕೆ ಸೋಲುಣಿಸಿದ ಭಾರತೀಯ ಪುರುಷರ ಹಾಕಿ ತಂಡ

**ಲಂಡನ್, ಜೂನ್ 23:** ಮಂಗಳವಾರ ಲೀ ವ್ಯಾಲಿ ಹಾಕಿ ಮತ್ತು ಟೆನಿಸ್ ಸೆಂಟರ್‌ನಲ್ಲಿ ನಡೆದ ಪಂದ್ಯದಲ್ಲಿ ಭಾರತೀಯ ಪುರುಷರ ಹಾಕಿ ತಂಡವು ತಮ್ಮ ಈಖಊ ಪ್ರೊ ಲೀಗ್ ಯುರೋಪಿಯನ್ ಪ್ರವಾಸದ ಲಂಡನ್ ಲೆಗ್ ಅನ್ನು ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನದ ವಿರುದ್ಧ 4-3 ಅಂತರದಿಂದ ರೋಮಾಂಚಕ ಜಯದೊಂದಿಗೆ ಆರಂಭಿಸಿತು. ಆರಂಭಿಕ ಕ್ವಾರ್ಟರ್‌ನಲ್ಲಿ ನಿಧಾನಗತಿಯ ಆರಂಭದ ನಂತರ, ಭಾರತ ತನ್ನ ಲಯ ಕಂಡುಕೊಂಡಿತು ಮತ್ತು ಈ ಪ್ರೊ ಲೀಗ್ ಋತುವಿನ ಮೂರನೇ ಸಂಪೂರ್ಣ ಜಯವನ್ನು ಸಾಧಿಸಿತು, ಪಾಕಿಸ್ತಾನದ ಕೊನೆಯ ಹಂತದ ಬೆದರಿಕೆಯನ್ನು ಹಿಮ್ಮೆಟ್ಟಿಸಿತು. ಈ ಗೆಲುವು ಭಾರತವನ್ನು ಪಾಯಿಂಟ್ ಪಟ್ಟಿಯಲ್ಲಿ ಏಳನೇ ಸ್ಥಾನಕ್ಕೆ ಏರಿಸಿತು. ಅಭಿಷೇಕ್ (22), ನೀಲಕಂಠ ಶರ್ಮಾ (24), ಸುಖ್‌ಜೀತ್ ಸಿಂಗ್ (40), ಮತ್ತು ರಾಜಿಂದರ್ ಸಿಂಗ್ (52) ಅವರ ಗೋಲುಗಳು ಹೈವೋಲ್ಟೇಜ್ ಮುಖಾಮುಖಿಯಲ್ಲಿ ಭಾರತವನ್ನು ಮುನ್ನಡೆಸಲು ಸಹಾಯ ಮಾಡಿದವು.





ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಮತ್ತು ಮಂಗೋಲಿಯ ಸಚಿವ ಬ್ಯಾಟ್ಸೆಟ್ಸೆಗ್ ಬಟ್ಮುಂಖ್ ಮತ್ತು ಗೊಂಗೋರ್ ದಮ್ದಿನ್ಯಮ್ ಅವರು ಮಂಗಳವಾರ ಮಂಗೋಲಿಯನ್ ಸಂಸ್ಕರಣಾಗಾರ ಯೋಜನೆಯ ನಿರ್ಮಾಣ ಸ್ಥಳಕ್ಕೆ ಭೇಟಿ ನೀಡಿದ್ದರು.

# ಬಾಂಬ್ ದಾಳಿಗೊಳಗಾದ ಪರಮಾಣು ತಾಣಗಳಿಗೆ IAEA ಪ್ರವೇಶ ತಳ್ಳಿಹಾಕಿದ ಇರಾನ್

**ಟೆಹ್ರಾನ್, ಜೂ.23: ಟೆಹ್ರಾನ್, ಜೂ.23:** ಸ್ವಿಜರ್ಲೆಂಡ್‌ನಲ್ಲಿ ನಡೆದ ಅಮೆರಿಕದೊಂದಿಗಿನ ಮಾತುಕತೆಗಳಲ್ಲಿ ದೇಶದ ಕ್ಷಿಪಣಿ ಕಾರ್ಯಕ್ರಮದ ಬಗ್ಗೆ ಚರ್ಚಿಸಲಾಗಿಲ್ಲ ಎಂದು ಇರಾನ್ ವಿದೇಶಾಂಗ ಸಚಿವಾಲಯ ಮಂಗಳವಾರ ಹೇಳಿದೆ ಮತ್ತು ಇತ್ತೀಚೆಗೆ ಇರಾನ್-ಇಸ್ರೇಲ್ ಸಂಘರ್ಷದ ಸಮಯದಲ್ಲಿ ಅಮೆರಿಕದ ಬೆಂಬಲದೊಂದಿಗೆ ದಾಳಿಗೊಳಗಾದ ಪರಮಾಣು ಸೌಲಭ್ಯಗಳಲ್ಲಿ ಅಂತರರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆ ತಪಾಸಣೆ ನಡೆಸುವ ಯಾವುದೇ ಸಾಧ್ಯತೆಯನ್ನು ತಿರಸ್ಕರಿಸಿದೆ. ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಕ್ಕೈ ಇರಾನ್ನ ಕ್ಷಿಪಣಿ ಸಾಮರ್ಥ್ಯಗಳು ಎಂದಿಗೂ ವಾಷಿಂಗ್ಟನ್ ಜೊತೆಗಿನ ಮಾತುಕತೆಗಳ ಭಾಗವಾಗಿರಲಿಲ್ಲ ಎಂದು ಹೇಳಿದರು. ಇರಾನಿನ ಮಾಧ್ಯಮ ವರದಿ ಮಾಡಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, "ಇರಾನ್ನ ಕ್ಷಿಪಣಿ ಸಾಮರ್ಥ್ಯಗಳು ಯುನೈಟೆಡ್ ಸ್ಟೇಟ್ಸ್ನೊಂದಿಗಿನ ಮಾತುಕತೆಗಳ ಭಾಗವಾಗಿರಲಿಲ್ಲ" ಎಂದು ಒತ್ತಿ ಹೇಳಿದರು. ದಾಳಿಯಲ್ಲಿ ಹಾನಿಗೊಳಗಾದ ಪರಮಾಣು ತಾಣಗಳಿಗೆ IAEA ನಿರೀಕ್ಷಕರಿಗೆ ಪ್ರವೇಶವನ್ನು ನೀಡುವುದನ್ನು ಬಕ್ಕೈ ತಳ್ಳಿಹಾಕಿದರು, "ಸಂಘರ್ಷದ ಸಮಯದಲ್ಲಿ




ಗುರಿಯಾಗಿಸಿಕೊಂಡ ಪರಮಾಣು ತಾಣಗಳಿಗೆ ಅಂತರರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆಯ ನಿರೀಕ್ಷಕರು ಭೇಟಿ ನೀಡಲು ನಾವು ಉದ್ದೇಶಿಸಿಲ್ಲ" ಎಂದು ಹೇಳಿದರು. ಇರಾನಿನ ಅಧಿಕಾರಿಗಳು ಮತ್ತು IAEA ಮಹಾನಿರ್ದೇಶಕ ರಾಫೆಲ್ ಗ್ರೋಸಿ ನಡುವೆ ಸ್ವಿಜರ್ಲೆಂಡ್‌ನಲ್ಲಿ ಯಾವುದೇ ಸಭೆ ನಡೆದಿದೆ ಎಂಬ ವರದಿಗಳನ್ನು ಅವರು ತಿರಸ್ಕರಿಸಿದರು, ಅಂತಹ ಯಾವುದೇ ಸಂಪರ್ಕವಿರಲಿಲ್ಲ ಮತ್ತು ಬಾಂಬ್ ದಾಳಿಗೊಳಗಾದ ಸೌಲಭ್ಯಗಳ ಪರಿಶೀಲನೆಗೆ ಯಾವುದೇ ಯೋಜನೆಗಳಿಲ್ಲ ಎಂದು ಹೇಳಿದರು.

# ರೋಹಿತ್ ಶರ್ಮಾ, ವಿಜಯ್ ಅಮೃತರಾಜ್ ಸೇರಿದಂತೆ 65 ಮಂದಿಗೆ ಪದ್ಮ ಪ್ರಶಸ್ತಿ ಪ್ರದಾನ

**ನವದೆಹಲಿ, ಜೂನ್ 23:** 2024 ರ ಟಿ20 ವಿಶ್ವಕಪ್ ಮತ್ತು 2025 ರ ಚಾಂಪಿಯನ್ಸ್ ಟ್ರೋಫಿಯಲ್ಲಿ ತಂಡವನ್ನು ಗೆಲುವಿನತ್ತ ಮುನ್ನಡೆಸಿದ ಮತ್ತು ತಮ್ಮ ಪೀಳಿಗೆಯ ಶ್ರೇಷ್ಠ ವೈಟ್‌ಬಾಲ್ ಬ್ಯಾಟ್ಸ್‌ಮನ್‌ಗಳಲ್ಲಿ ಒಬ್ಬರೆಂದು ವ್ಯಾಪಕವಾಗಿ ಪರಿಗಣಿಸಲ್ಪಟ್ಟ ಭಾರತದ ಮಾಜಿ ನಾಯಕ ರೋಹಿತ್ ಶರ್ಮಾ ಅವರಿಗೆ ಮಂಗಳವಾರ ರಾಷ್ಟ್ರಪತಿ ಭವನದಲ್ಲಿ ನಡೆದ ಎರಡನೇ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಭಾರತದ ನಾಲ್ಕನೇ ಅತ್ಯುನ್ನತ ನಾಗರಿಕ ಗೌರವವಾದ ಪದ್ಮಶ್ರೀ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಅವರ ಅಂತರರಾಷ್ಟ್ರೀಯ ವೃತ್ತಿಜೀವನದ ಅವಧಿಯಲ್ಲಿ, ಅವರು 20,000 ಕ್ಕೂ ಹೆಚ್ಚು ರನ್ ಗಳಿಸಿದ್ದಾರೆ ಮತ್ತು ಭಾರತಕ್ಕಾಗಿ 50 ಶತಕಗಳನ್ನು ದಾಖಲಿಸಿದ್ದಾರೆ. ಭಾರತೀಯ ಮಹಿಳಾ ಹಾಕಿ ಪಟು ಸವಿತಾ ಪುನಿಯಾ ಅವರಿಗೆ ಪದ್ಮಶ್ರೀ ಪ್ರಶಸ್ತಿಯನ್ನು ನೀಡಲಾಯಿತು, ಆದರೆ ಟೆನಿಸ್ ದಂತಕಥೆ ವಿಜಯ್ ಅಮೃತರಾಜ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ನೀಡಲಾಯಿತು.

ಭಾರತದ ಅತ್ಯಂತ ಯಶಸ್ವಿ ಕ್ರಿಕೆಟಿಗರಲ್ಲಿ ಒಬ್ಬರಾದ ರೋಹಿತ್ ಅವರನ್ನು ಕ್ರೀಡೆಗೆ ನೀಡಿದ ಅತ್ಯುತ್ತಮ ಕೊಡುಗೆಗಾಗಿ ಗುರುತಿಸಲಾಯಿತು. ಭಾರತದ ಅತ್ಯಂತ ಪ್ರಸಿದ್ಧ ಟೆನಿಸ್ ಆಟಗಾರರಲ್ಲಿ ಒಬ್ಬರಾದ ಅವರು ವೃತ್ತಿಜೀವನದ ಉನ್ನತ ಶ್ರೇಯಾಂಕದಲ್ಲಿ ವಿಶ್ವದ 16 ನೇ ಸ್ಥಾನವನ್ನು ತಲುಪಿದರು, 15 ಎಟಿಪಿ ಸಿಂಗಲ್ಸ್ ಪ್ರಶಸ್ತಿಗಳು ಮತ್ತು 14 ಡಬಲ್ಸ್ ಪ್ರಶಸ್ತಿಗಳನ್ನು ಗೆದ್ದರು ಮತ್ತು ವಿಂಬಲ್ಡನ್ ಮತ್ತು ಯುಎಸ್ ಓಪನ್ ಎರಡರಲ್ಲೂ ಕ್ವಾರ್ಟರ್ ಫೈನಲ್ ತಲುಪಿದರು. ಅವರ ಸಮಾರಂಭದಲ್ಲಿ ರಾಷ್ಟ್ರಪತಿ ಮುರ್ಮು ಒಟ್ಟು 65 ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು, ಇದರಲ್ಲಿ ಎರಡು ಪದ್ಮವಿಭೂಷಣ ಪ್ರಶಸ್ತಿಗಳು, ಏಳು ಪದ್ಮಭೂಷಣ ಪ್ರಶಸ್ತಿಗಳು ಮತ್ತು 56 ಪದ್ಮಶ್ರೀ ಪ್ರಶಸ್ತಿಗಳು ಸೇರಿವೆ. ಇತರ ಗಮನಾರ್ಹ ಪುರಸ್ಕೃತರಲ್ಲಿ ಹಿರಿಯ ನಟ ಮಮ್ಮುಟ್ಟಿ ಮತ್ತು ಹಿನ್ನೆಲೆ ಗಾಯಕಿ ಅಲ್ಕಾ ಯಾಜ್ಞಿಕ್ ಸೇರಿದ್ದಾರೆ. ಈ ಪ್ರಶಸ್ತಿಗಳು 2026 ರ ಗಣರಾಜ್ಯೋತ್ಸವದ ಮುನ್ನಾದಿನದಂದು ಸರ್ಕಾರ ಘೋಷಿಸಿದ 131 ಪದ್ಮ





ಗೌರವಗಳ ಭಾಗವಾಗಿದ್ದು, ಇದರಲ್ಲಿ ಐದು ಪದ್ಮವಿಭೂಷಣ, 13 ಪದ್ಮಭೂಷಣ ಮತ್ತು 113 ಪದ್ಮಶ್ರೀ ಪ್ರಶಸ್ತಿಗಳು ಸೇರಿವೆ. ಪದ್ಮ ಪ್ರಶಸ್ತಿಗಳು ಭಾರತದ ಅತ್ಯುನ್ನತ ನಾಗರಿಕ ಗೌರವಗಳಲ್ಲಿ ಸೇರಿವೆ ಮತ್ತು ಅವುಗಳನ್ನು ಮೂರು ವಿಭಾಗಗಳಲ್ಲಿ ನೀಡಲಾಗುತ್ತದೆ – ಪದ್ಮವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ. ಕ್ರೀಡೆ, ಕಲೆ, ಸಾಹಿತ್ಯ, ಶಿಕ್ಷಣ, ವೈದ್ಯಕೀಯ, ವಿಜ್ಞಾನ, ಸಾಮಾಜಿಕ ಕಾರ್ಯ, ಸಾರ್ವಜನಿಕ ವ್ಯವಹಾರಗಳು, ವ್ಯಾಪಾರ ಮತ್ತು ಕೈಗಾರಿಕೆ ಮತ್ತು ನಾಗರಿಕ ಸೇವೆಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆಗಳು ಮತ್ತು ವಿಶಿಷ್ಟ ಸೇವೆಯನ್ನು ಅವು ಗುರುತಿಸುತ್ತವೆ. 1954 ರಲ್ಲಿ ಸ್ಥಾಪಿಸಲಾದ ಈ ಪ್ರಶಸ್ತಿಗಳನ್ನು ಪ್ರತಿ ವರ್ಷ ಗಣರಾಜ್ಯೋತ್ಸವದ ಮುನ್ನಾದಿನದಂದು ಘೋಷಿಸಲಾಗುತ್ತದೆ ಮತ್ತು ಸಮಾಜಕ್ಕೆ ಮತ್ತು ಅವರ ವೃತ್ತಿಗಳಿಗೆ ನೀಡಿದ ಅತ್ಯುತ್ತಮ ಕೊಡುಗೆಗಳಿಗಾಗಿ ವ್ಯಕ್ತಿಗಳನ್ನು ಗೌರವಿಸಲಾಗುತ್ತದೆ.




ನವದೆಹಲಿಯಲ್ಲಿ ಮಂಗಳವಾರ ಅಂತರರಾಷ್ಟ್ರೀಯ ಫೆನ್ಸಿಂಗ್ ಫೆಡರೇಶನ್ (ಎಫ್‌ಐಇ) ನ ಮಧ್ಯಂತರ ಅಧ್ಯಕ್ಷ ಅಬ್ದುಲ್‌ಮೋನಿಯಮ್ ಎಲ್ ಹುಸೇನಿ ಮತ್ತು ಭಾರತೀಯ ಫೆನ್ಸಿಂಗ್ ಅಸೋಸಿಯೇಷನ್ (ಎಫ್‌ಎಐ)ನ ಪ್ರಧಾನ ಕಾರ್ಯದರ್ಶಿ ರಾಜೀವ್ ಮೆಹ್ತಾ ಅವರು ತಿಳುವಳಿಕೆ ಪತ್ರವನ್ನು ವಿನಿಮಯ ಮಾಡಿಕೊಳ್ಳುತ್ತಿದ್ದಾರೆ.